22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 81 | ನವದೆಹಲಿ | ಬೆಲೆ ₹10 | ಸೆಪ್ಟೆಂಬರ್ 21 2024 ಶನಿವಾರ

## ಒಳಪುಟಗಳಲ್ಲಿ

ಹೈಕೋರ್ಟ್ ನ್ಯಾಯಮೂರ್ತಿಗಳ ಕುರಿತು ಟೀಕೆ ಬಿಜೆಪಿ ಸಂಸದರ ವಿರುದ್ಧ ಸುಮೋಟೋ ಕೇಸ್ - ಪು.4

ಮೋದಿ, ಅಮಿತ್ ಶಾರಿಂದ ಕನ್ನಡಿಗರ ಅಪಮಾನ- ನಾಗಮಂಗಲ ಸಂಘರ್ಷ ವಿಚಾರಕ್ಕೆ ಪ್ರಿಯಾಂಕ್ ಖರ್ಗೆ ತಿರುಗೇಟು - ಪು.5

ನೆರೆ ಹಾನಿ: ಬೆಳೆ ಪರಿಹಾರ ವಿತರಣೆಗೆ ವಿಳಂಬ ಬೇಡ; ರಸ್ತೆ, ಸೇತುವೆ ದುರಸ್ತಿಗೆ ಕ್ರಮವಹಿಸಿ: ಸಂಸದ ಜಗದೀಶ ಶೆಟ್ಟರ್ - ಪು.6

ರೇಷ್ಮೆ ಇಲಾಖೆ ವಿಭಾಗ ಮಟ್ಟದ ಪರಿಶೀಲನಾ ಸಭೆ ಕಲ್ಯಾಣ ಕರ್ನಾಟಕದಲ್ಲಿ ರೇಷ್ಮೆ ಬೆಳೆ ಕುರಿತು ಹೆಚ್ಚಿನ ಪ್ರಚಾರ ಅಗತ್ಯ - ಪು.7

## ತಿರುಪತಿ ಲಡ್ಡು ವಿವಾದ: ಧಾರ್ಮಿಕ ಹಕ್ಕುಗಳ ರಕ್ಷಣೆಗಾಗಿ ಸುಪ್ರೀಂಗೆ ಮೊರೆ

**ನವದೆಹಲಿ, ಸೆ.20: ಪ್ರಸಿದ್ಧ ತಿರುಪತಿ ಲಡ್ಡುಗಳನ್ನು ತಯಾರಿಸಲು ಪ್ರಾಣಿಗಳ ಕೊಬ್ಬನ್ನು ಬಳಸಲಾಗಿದೆ ಎಂಬ ಆರೋಪ ಶುಕ್ರವಾರ ಸುಪ್ರೀಂ ಕೋರ್ಟ್ ತಲುಪಿದ್ದು, ಇದು ಮೂಲಭೂತ ಹಿಂದೂ ಧಾರ್ಮಿಕ ಪದ್ಧತಿಗಳನ್ನು ಉಲ್ಲಂಘಿಸುತ್ತದೆ ಮತ್ತು ಪ್ರಸಾದವನ್ನು ಪರಿಗಣಿಸುವ ಅಸಂಖ್ಯಾತ ಭಕ್ತರ ಭಾವನೆಗಳನ್ನು ತೀವ್ರವಾಗಿ ಘಾಸಿಗೊಳಿಸುತ್ತದೆ ಎಂದು ಆರೋಪಿಸಿ ವಕೀಲರೊಬ್ಬರು ಅರ್ಜಿ ಸಲ್ಲಿಸಿದ್ದಾರೆ.**



ಲಡ್ಡೂಗಳಲ್ಲಿ ಪ್ರಾಣಿಗಳ ಕೊಬ್ಬು ಪತ್ತೆಯಾಗಿದ್ದರಿಂದ ದೇವಾಲಯದ ಆಡಳಿತದಲ್ಲಿನ ದೊಡ್ಡ ವ್ಯವಸ್ಥಿತ ಸಮಸ್ಯೆಗಳ ಲಕ್ಷಣವಾಗಿದೆ ಎಂದು ಹೇಳಿರುವ ಅರ್ಜಿದಾರರು, ಹಿಂದೂ ಧಾರ್ಮಿಕ ಆಚರಣೆಗಳ ಪಾವಿತ್ರ್ಯವನ್ನು ರಕ್ಷಿಸುವಂತೆ ಮನವಿ ಮಾಡಿದ್ದಾರೆ.

ಹಿಂದಿನ ವೈಎಸ್ಆರ್ ಕಾಂಗ್ರೆಸ್ ಸರ್ಕಾರದಲ್ಲಿ ತಿರುಪತಿಯ ದೇವಸ್ಥಾನದಿಂದ ಪ್ರಸಾದವಾಗಿ ನೀಡಲಾದ ಲಡ್ಡೂಗಳನ್ನು ತಯಾರಿಸಲು ಪ್ರಾಣಿಗಳ ಕೊಬ್ಬನ್ನು ಬಳಸಲಾಗಿದೆ ಎಂದು ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಬುಧವಾರ ಹೇಳಿದ ನಂತರ ವಿವಾದ ಪ್ರಾರಂಭವಾಯಿತು. ಆಂಧ್ರಪ್ರದೇಶ ಸರ್ಕಾರವು ಗುಜರಾತ್ ಪ್ರಯೋಗಾಲಯದ ವರದಿಯನ್ನು ಉಲ್ಲೇಖಿಸಿ, ಲಡ್ಡೂಗಳಲ್ಲಿ ಬಳಸುವ ತುಪ್ಪದಲ್ಲಿ ಗೋಮಾಂಸ ಕೊಬ್ಬು, ಮೀನಿನ ಎಣ್ಣೆ ಮತ್ತು ಹಂದಿ ಕೊಬ್ಬಿನ ಕುರುಹುಗಳಿವೆ ಎಂದು ಹೇಳಿದೆ.

ತಿರುಮಲ ತಿರುಪತಿ ದೇವಸ್ಥಾನಗಳು (ಟಿಟಿಡಿ) ನಿರ್ವಹಿಸುತ್ತಿರುವ ದೇವಸ್ಥಾನದಲ್ಲಿನ ಪ್ರಸಾದದ ಮೇಲಿನ ಆರೋಪಗಳು ಭಕ್ತರ ಭಾವನೆಗಳಿಗೆ ಮತ್ತು ಪ್ರಾಣಿಗಳನ್ನು ಬಳಸಿದ ಆರೋಪಕ್ಕೆ ಧಕ್ಕೆ ತಂದಿವೆ ಎಂದು ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್ ಅವರಿಗೆ ಪತ್ರ ಬರೆದಿರುವ ವಕೀಲ ಸತ್ಯಂ ಸಿಂಗ್ ಹೇಳಿದ್ದಾರೆ. ಲಡ್ಡೂಗಳಲ್ಲಿನ ಕೊಬ್ಬು ಸಂವಿಧಾನದ 25 ನೇ ವಿಧಿಯನ್ನು ಉಲ್ಲಂಘಿಸುತ್ತದೆ, ಇದು ಧಾರ್ಮಿಕ ಸಂಪ್ರದಾಯಗಳನ್ನು ಅಭ್ಯಾಸ ಮಾಡುವ ಹಕ್ಕು ಸೇರಿದಂತೆ ಧಾರ್ಮಿಕ ಸ್ವಾತಂತ್ರ್ಯದ ಹಕ್ಕನ್ನು ಖಾತರಿಪಡಿಸುತ್ತದೆ ಎಂದು ಹೇಳಿದ್ದಾರೆ.

ಈ ಬಗ್ಗೆ ಪತ್ರ ಕಳುಹಿಸಿರುವ ವಕೀಲರು, ಹಿಂದೂ ಧಾರ್ಮಿಕ ಆಚರಣೆಗಳ ರಕ್ಷಣೆ ಮತ್ತು ಪವಿತ್ರ ಸಂಸ್ಥೆಗಳ ಸರಿಯಾದ ನಿರ್ವಹಣೆಯನ್ನು ಖಾತ್ರಿಪಡಿಸುವಂತೆ ಕೋರಿದ್ದಾರೆ. ಈ ವಿಷಯದಲ್ಲಿ ಸುಪ್ರೀಂ ಕೋರ್ಟ್ ಮಧ್ಯಸ್ಥಿಕೆಗೆ ಒತ್ತಾಯಿಸಿದ್ದಾರೆ. ಇದಕ್ಕೂ ಮುನ್ನ ಶುಕ್ರವಾರ ಕೇಂದ್ರ ಆರೋಗ್ಯ ಸಚಿವ ಜೆಪಿ ನಡ್ಡಾ ಅವರು ನಾಯ್ಡು ಅವರ ಆರೋಪಗಳ ಕುರಿತು ವಿವರವಾದ ವರದಿಯನ್ನು ಕೇಳಿದರು.

ನಾಯ್ಡು ಅವರ ತೆಲುಗು ದೇಶಂ ಪಕ್ಷ (ಟಿಡಿಪಿ) ಮತ್ತು ಜನಸೇನೆಯ ಮಿತ್ರಪಕ್ಷವಾಗಿರುವ ಬಿಜೆಪಿ, ಪ್ರಾಣಿಗಳ ಕೊಬ್ಬನ್ನು ಬಳಸಿರುವುದು ಅಕ್ಷಮ್ಯ ಪಾಪ ಎಂದು ಹೇಳಿದೆ. ಹಿರಿಯ ನಾಯಕ ಬಂಡಿ ಸಂಜಯ್ ಅವರು ಕೆಲವು ಜನರ ಕಾರಣದಿಂದಾಗಿ ಇದು ಸಂಭವಿಸಿರಬಹುದು ಎಂದು ಸುಳಿವು ನೀಡಿದ್ದಾರೆ. ಹಿಂದೂಯೇತರ ಧರ್ಮಗಳ ಪ್ರತಿನಿಧಿಗಳನ್ನು ಟಿಟಿಡಿ ಮಂಡಳಿಗೆ ಸೇರಿಸಲಾಗಿತ್ತು.

ವೈಎಸ್ಆರ್ ಕಾಂಗ್ರೆಸ್ ಮತ್ತು ಆಂಧ್ರಪ್ರದೇಶದ ಮಾಜಿ ಮುಖ್ಯಮಂತ್ರಿ ಜಗನ್ ಮೋಹನ್ ರೆಡ್ಡಿ ಆರೋಪಗಳನ್ನು ತಳ್ಳಿಹಾಕಿದ್ದಾರೆ. ಶುಕ್ರವಾರದ ವಿವಾದದ ಕುರಿತು ತಮ್ಮ ಮೊದಲ ಹೇಳಿಕೆಯಲ್ಲಿ, ಆರೋಪಗಳು ಸುಳ್ಳು ಮತ್ತು ಟಿಡಿಪಿಯ ದಿಕ್ಕು ತಪ್ಪಿಸುವ ತಂತ್ರ ಎಂದು ಹೇಳಿದರು.

ನಾಲ್ಕು ವರ್ಷಗಳ ಕಾಲ ಟಿಟಿಡಿ ಅಧ್ಯಕ್ಷರಾಗಿದ್ದ ವೈಎಸ್ಆರ್ ಕಾಂಗ್ರೆಸ್ ಹಿರಿಯ ನಾಯಕ ಮತ್ತು ರಾಜ್ಯಸಭಾ ಸಂಸದ ವೈವಿ ಸುಬ್ಬಾ ರೆಡ್ಡಿ, ನಾಯ್ಡು ಅವರು ತಿರುಮಲ ದೇಗುಲದ ಪಾವಿತ್ರ್ಯಕ್ಕೆ ಹಾನಿ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ.

ಚಂದ್ರಬಾಬು ನಾಯ್ಡು ಅವರು ತಿರುಮಲದ ಪಾವಿತ್ರ್ಯ ಮತ್ತು ಕೋಟ್ಯಂತರ ಹಿಂದೂಗಳ ನಂಬಿಕೆಯನ್ನು ತೀವ್ರವಾಗಿ ಹಾಳು ಮಾಡಿದ್ದಾರೆ. ತಿರುಮಲ ಪ್ರಸಾದದ ಬಗ್ಗೆ ಅವರ ಹೇಳಿಕೆಗಳು ಅತ್ಯಂತ ದುರುದ್ದೇಶಪೂರಿತವಾಗಿವೆ. ಯಾವುದೇ ವ್ಯಕ್ತಿ ಇಂತಹ ಮಾತುಗಳನ್ನು ಮಾತನಾಡುವುದಿಲ್ಲ ಅಥವಾ ಅಂತಹ ಆರೋಪಗಳನ್ನು ಮಾಡುವುದಿಲ್ಲ? ಎಂದು ರೆಡ್ಡಿ ಹೇಳಿದ್ದಾರೆ.

ರಾಜಕೀಯ ಲಾಭಕ್ಕಾಗಿ ಚಂದ್ರಬಾಬು ನಾಯ್ಡು ಯಾವ ಮಟ್ಟಕ್ಕೂ ಬಗ್ಗುತ್ತಾರೆ ಎಂಬುದು ಮತ್ತೆ ಸಾಬೀತಾಗಿದೆ. ಭಕ್ತರ ನಂಬಿಕೆ ಗಟ್ಟಿಗೊಳಿಸಲು ನಾನು ಕುಟುಂಬ ಸಮೇತ ತಿರುಮಲ ಪ್ರಸಾದದ ವಿಚಾರವಾಗಿ ಪರಮಾತ್ಮನ ಮುಂದೆ ಪ್ರಮಾಣ ವಚನ ಸ್ವೀಕರಿಸಲು ಸಿದ್ಧ. ಚಂದ್ರಬಾಬು ನಾಯ್ಡು ತಮ್ಮ ಕುಟುಂಬದೊಂದಿಗೆ ಅದೇ ರೀತಿ ಮಾಡಲು ಸಿದ್ಧರಿದ್ದಾರೆಯೇ? ಎಂದು ಅವರು ಗುರುವಾರ ಪ್ರಶ್ನಿಸಿದ್ದರು.

## ಈ ಬಾರಿಯ ದಸರಾ ಉದ್ಘಾಟಕರಾಗಿ ಹಂಪ ನಾಗರಾಜಯ್ಯಗೆ ಆಹ್ವಾನ: ಸಿಎಂ

**ಮೈಸೂರು, ಸೆ.20:** ಹೆಸರಾಂತ ಸಾಹಿತಿ ಹಂಪ ನಾಗರಾಜಯ್ಯ ಅವರನ್ನು ಈ ಬಾರಿಯ ದಸರಾ ಮಹೋತ್ಸವ 2024 ರ ಉದ್ಘಾಟನೆಗೆ ಆಹ್ವಾನಿಸುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.



ಇಂದು ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣಕ್ಕೆ ಆಗಮಿಸಿ ವಿವಿಧ ಕಾರ್ಯಕ್ರಮಗಳಿಗೆ ತೆರಳುವ ಮುನ್ನ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಈ ಬಾರಿಯ 2024ರ ದಸರಾ ಮಹೋತ್ಸವದ ಉದ್ಘಾಟನೆಗೆ ಹೆಸರಾಂತ ಸಾಹಿತಿ ಹಂಪಾ ನಾಗರಾಜಯ್ಯ ಅವರನ್ನು ಆಹ್ವಾನಿಸುತ್ತಿದ್ದೇವೆ ಎಂದು ಅವರು ತಿಳಿಸಿದರು.

ರಾಜ್ಯದಲ್ಲಿ ಗಣೇಶ ಮೂರ್ತಿ ಗಲಾಟೆ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ರಾಜ್ಯದಲ್ಲಿ ಇದುವರೆಗೆ ಎರಡು ಪ್ರಕರಣಗಳು ಜರುಗಿವೆ. ಈಗಾಗಲೇ ಘಟನೆಯ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ತಿಳಿಸಿದ್ದೇನೆ ಹಾಗೂ ಮುಂಜಾಗೃತ ಕ್ರಮಗಳನ್ನ ಕೈಗೊಳ್ಳಲು ಗೃಹ ಇಲಾಖೆಗೆ ತಿಳಿಸಿದ್ದೇನೆ. ನಾಗಮಂಗಲ ಗಲಾಟೆ ಪ್ರಕರಣದಲ್ಲಿ ಈಗಾಗಲೇ ಡಿವೈಎಸ್ಪಿ, ಇನ್ಸ್ಪೆಕ್ಟರ್ ಅಮಾನತು ಮಾಡಿದ್ದೇವೆ.

ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಅವರಿಂದ ಡಿನೋಟಿಫಿಕೇಷನ್ ಆಗಿದೆ ಎನ್ನುವ ವಿಚಾರವಾಗಿ ದಾಖಲೆಗಳನ್ನ ನಿನ್ನೆ ಸಚಿವರು ಬಿಡುಗಡೆ ಮಾಡಿದ್ದಾರೆ. ನಾನು ಆ ದಾಖಲೆಗಳನ್ನು ಪರಿಶೀಲಿಸುತ್ತೇನೆ. ಆ ಭೂಮಿಯನ್ನ ಸಚಿವ ಎಚ್.ಡಿ.ಕುಮಾರಸ್ವಾಮಿಯವರ ಭಾಮೈದನಿಗೆ ರಿಜಿಸ್ಟರ್ ಆಗಿದೆ. ಅತ್ತೆಗೆ ಹಲವಾರು ಜಿಪಿಎ ಮಾಡಿಕೊಟ್ಟಿದ್ದಾರೆ, ಇದು ಬಹಳ ಗಂಭೀರವಾದ ಪ್ರಕರಣವಾಗಿದೆ. ಸದ್ಯ ಆ ಕಡತವನ್ನು ತರಿಸಿ ಪರಿಶೀಲನೆ ಮಾಡುತ್ತೇನೆ.

ಶಾಸಕ ಮುನಿರತ್ನ ವಿರುದ್ಧ ಎಸ್ಐಟಿ ತನಿಖೆ ಮಾಡಲು ಸಚಿವರು ಶಾಸಕರು ಪತ್ರ ಕೊಟ್ಟಿದ್ದಾರೆ. ಅವರ ಮೇಲೆ ಬಹಳಷ್ಟು ಗಂಭೀರ ಪ್ರಕರಣಗಳು ಇದೆ. ಹೀಗಾಗಿ ವಿಶೇಷ ತನಿಖಾ ತಂಡದ ಅಗತ್ಯ ಇದೆ ಎಂದು ಕೇಳಿದ್ದಾರೆ. ಸಚಿವರು ಹಾಗೂ ಶಾಸಕರು ಬರೆದಿರುವ ಪತ್ರದ ಮೇಲೆ ಮುಂದಿನ ಕ್ರಮ ಕೈಗೊಳ್ಳಿ ಎಂದು ಗೃಹ ಸಚಿವರಿಗೆ ಸೂಚನೆ ನೀಡಿದ್ದೇನೆ. ಈ ಬಗ್ಗೆ ಗೃಹ ಸಚಿವರು ಪರಿಶೀಲಿಸಿ ಕ್ರಮ ಕೈಗೊಳ್ಳುತ್ತಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.




ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಶುಕ್ರವಾರ ಜಾರ್ಖಂಡ್‌ನ ರಾಂಚಿಯಲ್ಲಿ ಐಸಿಎಆರ್–ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಸೆಕೆಂಡರಿ ಅಗ್ರಿಕಲ್ಚರ್ (ಎನ್ಐಎಸ್ಎ) ಯ ಶತಮಾನೋತ್ಸವ ಆಚರಣೆಯಲ್ಲಿ ಪಾಲ್ಗೊಂಡಿದ್ದರು.

## ಕಾವೇರಿ ಆರತಿ: ಹರಿದ್ವಾರಕ್ಕೆ ಕರ್ನಾಟಕದ ನಿಯೋಗ

**ಹರಿದ್ವಾರ, ಸೆ.20:** ಗಂಗೆಯಷ್ಟೇ ಪವಿತ್ರ ನದಿ ಕಾವೇರಿ ಎಂಬ ನಿಟ್ಟಿನಲ್ಲಿ ಕಾವೇರಿ ಆರತಿ ಮಾಡಲು ರಾಜ್ಯ ಸರ್ಕಾರ ಮುಂದಾಗಿದೆ. ಹಾಗಾಗಿ ಸಚಿವ ಚಲುವರಾಯಸ್ವಾಮಿ ನೇತೃತ್ವದ ನಿಯೋಗ ಕಾವೇರಿ ಆರತಿಯ ರೂಪುರೇಷೆ ತಯಾರಿಸಲಿದೆ. ಇದಕ್ಕಾಗಿ ನಿಯೋಗ ಹರಿದ್ವಾರ ಹಾಗೂ ವಾರಣಾಸಿಯಲ್ಲಿ ಅಧ್ಯಯನ ನಡೆಸಿ ವರದಿ ತಯಾರಿಸಲಿದ್ದು ಇದರ ಭಾಗವಾಗಿ ಮೊದಲು ಹರಿದ್ವಾರಕ್ಕೆ ಭೇಟಿ ನೀಡಿದೆ.



ವಾಯ್ಸ್: ಹರಿದ್ವಾರಕ್ಕೆ ಆಗಮಿಸಿದ ನಿಯೋಗ ಹರ್ ಕೀ ಪೌಡಿ ಘಾಟ್‌ನಲ್ಲಿ ನಡೆಯುವ ಆರತಿ ಕಾರ್ಯಕ್ರಮದಲ್ಲಿ ಭಾಗಿಯಾಯಿತು. ಸಚಿವ ಚಲುವರಾಯಸ್ವಾಮಿ ಆದಿಯಾಗಿ ಎಲ್ಲ ಸದಸ್ಯರು ವಿಶೇಷ ಆರತಿ ಮಾಡಿ, ಧಾರ್ಮಿಕ ವಿಧಿ ವಿಧಾನಗಳನ್ನು ಪೂರೈಸಿದರು. ಬಳಿಕ ಆರತಿ ನಡೆಯುವ ರೀತಿ ರಿವಾಜುಗಳನ್ನು ಪರಿಶೀಲಿಸಿದರು.

ಬಳಿಕ ಆರತಿ ಮೇಲಸ್ತುವಾರಿ ನೋಡಿಕೊಳ್ಳುವ ಹಿಂದೂ ಸಭಾ ಆಡಳಿತ ಸಮಿತಿ ಜೊತೆಗೆ ಮಾತುಕತೆ ನಡೆಸಿದ ನಿಯೋಗ ಕರ್ನಾಟಕ ಸರ್ಕಾರದ ಪ್ರಸ್ತಾವನೆ ಬಗ್ಗೆ ತಿಳಿಸಿದರು. ಇದಕ್ಕೆ ಖುಷಿ ವ್ಯಕ್ತಪಡಿಸಿದ ಆಡಳಿತ ಸಮಿತಿ ಕಾರ್ಯದರ್ಶಿ ತನ್ಮಯ ವಶಿಷ್ಠ, ಗಂಗಾರತಿ ರೀತಿಯಲ್ಲಿ ಕಾವೇರಿ ಆರತಿ ಮಾಡುವುದು ಖುಷಿಯ ಸಂಗತಿ, ವಿಶ್ವದಲ್ಲಿ ಮೊದಲು ಗಂಗಾರತಿ ಮಾಡಿದ್ದು ಹರಿದ್ವಾರದಲ್ಲಿ, ಅಂದಿನಿಂದ ಇಂದಿನಿಂದವರೆಗೂ ಟ್ರಸ್ಟ್ ಮೂಲಕ ಧಾರ್ಮಿಕ ಶ್ರದ್ಧೆ ಭಾವನೆಯಿಂದ ನಡೆಸಿಕೊಂಡು ಬರಲಾಗುತ್ತಿದೆ. ಆಧುನಿಕತೆಗೆ ಆದ್ಯತೆ ನೀಡುವ ಜೊತೆಗೆ ನಮ್ಮ ಮೂಲ ಸಂಸ್ಕೃತಿಯನ್ನು ಅಳವಡಿಸಿಕೊಂಡು ಆರತಿಗೆ ವ್ಯವಸ್ಥೆ ಮಾಡಿದರೆ ಜನರ ಹೃದಯವನ್ನು ತಲುಪಲಿದೆ ಎಂದು ಹೇಳಿದರು.

ಇನ್ನು ಗಂಗಾರತಿ ಬಳಿಕ ಮಾತನಾಡಿದ ಸಚಿವ ಚೆಲುವರಾಯಸ್ವಾಮಿ, ಗಂಗಾನದಿಯಂತೆ ಕಾವೇರಿ ನದಿ ಕೂಡಾ ಜೀವ ನದಿಯಾಗಿದ್ದು ಅದಕ್ಕಾಗಿ ಇಲ್ಲೂ ಆರತಿ ಮಾಡಲು ನಿರ್ಧರಿಸಿದ್ದು ಡಿಸಿಎಂ ಡಿ.ಕೆ.ಶಿವಕುಮಾರ್ ನಿರ್ದೇಶನದ ಮೇರೆಗೆ ಈ ಬಗ್ಗೆ ನಮ್ಮ ಅಧಿಕಾರಿಗಳು ಜನಪ್ರತಿನಿಧಿಗಳೊಂದಿಗೆ ಅಧ್ಯಯನಕ್ಕೆ ಬಂದಿದ್ದೇವೆ. ಸಾಧ್ಯವಾದಷ್ಟು ಬೇಗ ಆರತಿ ಶುರು ಮಾಡಬೇಕು ಅಂದುಕೊಂಡಿದ್ದು ದಸರಾದೊಳಗೆ ನಾವು ಶುರು ಮಾಡುವ ಪ್ರಯತ್ನ ಮಾಡಲಾಗುತ್ತಿದೆ. ಒಮ್ಮೆ ಆರತಿಯನ್ನು ಶುರು ಮಾಡಿದರೆ ನಿಲ್ಲಿಸುವ ಮಾತಿಲ್ಲ ಎಂದರು. ಇನ್ನು ಚಲುವರಾಯಸ್ವಾಮಿ ಹೇಳಿಕೆಗೆ ಧ್ವನಿಗೂಡಿಸಿದ ಶಾಸಕ ಬಾಲಕೃಷ್ಣ, ದಸರಾ ನವರಾತ್ರಿ ವೇಳೆಗೆ ಕಾವೇರಿ ಆರತಿ ಆರಂಭಿಸುವ ಚಿಂತನೆ ಇದೆ ಎಂದರು. ಜೊತೆಯಲ್ಲಿ ಶಾಸಕ ಗೂಳಿಗೌಡ ಧ್ವನಿಗೂಡಿಸಿದರು. ಹರಿದ್ವಾರದಲ್ಲಿ ಗಂಗಾರತಿ ನೋಡಿದ ನಿಯೋಗದ ಸದಸ್ಯರು ಹರ್ಷ ವ್ಯಕ್ತಪಡಿಸಿದರು, ಗಂಗಾರತಿ ನೋಡಲು ಲಕ್ಷಾಂತರ ಜನರು ಭಾಗಿಯಾಗಿತ್ತಾರೆ, ಇಲ್ಲಿ ದೈವತ್ವದ ಭಾವನೆ ಮೂಡುತ್ತದೆ, ಇದೇ ಮಾದರಿಯಲ್ಲಿ ಸಾಧ್ಯವಾದಷ್ಟು ಬೇಗ ಕಾವೇರಿ ತಟದಲ್ಲಿ ಆರಂಭಿಸಲಿದ್ದೇವೆ ಎಂದರು.

### ದಸರಾ ವೇಳೆಯೇ ಕಾವೇರಿ ಆರತಿ ಪ್ರಾರಂಭಿಸಲು ಚಿಂತನೆ:

ಹರಿದ್ವಾರದಲ್ಲಿ ಕಾವೇರಿ ಆರತಿ ಅಧ್ಯಯನ ಸಮಿತಿ ಅಧ್ಯಕ್ಷ ಚಲುವರಾಯಸ್ವಾಮಿ ಹೇಳಿಕೆ. ಕೆಆರ್‌ಎಸ್‌ಗೆ ಬಾಗಿನ ಅರ್ಪಿಸಿದಾಗ ಡಿಸಿಎಂ ಕಾವೇರಿ ಆರತಿ ಸಲ್ಲಿಸಬೇಕು. ಗಂಗಾರತಿ ಮಾದರಿಯಲ್ಲಿ ಕಾವೇರಿ ಆರತಿಗೆ ಆಲೋಚನೆ ತಿಳಿಸಿದರುಎಷ್ಟೇ ನದಿಯಿದ್ರು ಕಾವೇರಿ ನಮಗೆ ಪ್ರಸಿದ್ಧವಾದುದು. ಕಾವೇರಿಗೆ ಆರತಿ ಅಧ್ಯಯನ ಸಮಿತಿ ರಚನೆ ಮಾಡಿದ್ದಾರೆ. ಹಳೇ ಮೈಸೂರು ಭಾಗದ ಎಲ್ಲ ಶಾಸಕರು ಬಂದಿದ್ದೇವೆ. ದಸರಾ ಆರಂಭಕ್ಕೂ ಮುನ್ನವೇ ಕಾವೇರಿ ಆರತಿಗೆ ಚಿಂತನೆ ನಡೆದಿದೆ. ತಲಕಾವೇರಿಯಲ್ಲಿ ಹುಟ್ಟುವ ಕಾವೇರಿ ತಮಿಳುನಾಡಿನಲ್ಲಿಯೂ ಹರಿಯುತ್ತೆ. ಕಾವೇರಿ ನಮ್ಮ ಜೀವನದಿಯಾಗಿದೆ. ಎಂಟು ಜಿಲ್ಲೆಯ ಜನಪ್ರತಿನಿಧಿಗಳು ಡಿಸಿ ಇಂದು ಹರಿದ್ವಾರಕ್ಕೆ ಬಂದಿದ್ದೇವೆ. ಹರಿದ್ವಾರ ಗಂಗಾರತಿ ಪುರಾತನವಾದುದು. ನಾಳೆ ವಾರಾಣಸಿಯಲ್ಲಿ ಗಂಗಾರತಿ ನೋಡಲಿದ್ದೇವೆ. ಎಲ್ಲರೂ ಸೇರಿ ಚರ್ಚೆ ಮಾಡಿ ಸರ್ಕಾರಕ್ಕೆ ವರದಿ ಸಲ್ಲಿಸುತ್ತೇವೆ. ಆದಷ್ಟು ಬೇಗ ಕಾವೇರಿ ಆರತಿ ಮಾಡುವ ಸ್ಥಳ ಗುರುತು ಮಾಡುತ್ತೇವೆ. ಪ್ರಾರಂಭವಾಗುವುದು 4 ದಿನ ತಡವಾಗಬಹುದು. ಆದ್ರೆ ಕಾವೇರಿ ಆರತಿಯನ್ನು ನಿಲ್ಲಿಸಲ್ಲ. ದಸರಾ ವೇಳೆಗೆ ಕಾವೇರಿ ಆರತಿ ಪ್ರಾರಂಭ ಮಾಡಲು ಪ್ರಯತ್ನ.

### ಕಾವೇರಿ ಆರತಿಗೆ ಹಾಡು ರಚನೆ: ಸಾಧುಕೋಕಿಲ ತೆಕ್ಕೆಗೆ

ತಂಡದ ಜೊತೆ ಆಗಮಿಸಿರುವ ಚಿತ್ರನಟ ಸಾಧುಕೋಕಿಲ. ಕಾವೇರಿ ಆರತಿ ಸಮಿತಿಯಲ್ಲಿರುವ ಸಾಧುಕೋಕಿಲ. ಕಾವೇರಿ ಆರತಿ ಬಗ್ಗೆ ಸಾಧುಕೋಕಿಲಗೆ ಹಾಡು ಬರೆಯುವ ಜವಾಬ್ದಾರಿ. ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ನಿರ್ದೇಶನದಂತೆ ವಿಶೇಷ ಹಾಡು ರಚಿಸಲಿರುವ ಸಾಧುಕೋಕಿಲ.

## ಮುಂಬಡ್ತಿಯಲ್ಲಿ ವಂಚನೆ ವಿರುದ್ಧ ದೂರು- ಡಿ.ಚಂದ್ರಶೇಖರಯ್ಯ

* ಮುಂಬಡ್ತಿಯಲ್ಲಿ ವಂಚನೆ ನಡೆದರೆ ಅದಕ್ಕೆ ಕಾರಣವಾಗುವ ಅಧಿಕಾರಿಗಳ ಮೇಲೆ ದೌರ್ಜನ್ಯ ತಡೆ ಕಾಯ್ದೆಯಡಿ ದೂರು ದಾಖಲಿಸಲಾಗುವುದು ಎಂದು ರಾಜ್ಯ ಎಸ್‌ಸಿ, ಎಸ್‌ಟಿ ನೌಕರರ ಸಂಘದ ರಾಜ್ಯಧ್ಯಕ್ಷ ಡಿ.ಚಂದ್ರಶೇಖರಯ್ಯ ಎಚ್ಚರಿಕೆ ನೀಡಿದ್ದಾರೆ.



* ಮುಂಬಡ್ತಿಗೆ ಪರಿಗಣಿಸುವ ಸಂದರ್ಭದಲ್ಲಿ ಪರಿಶಿಷ್ಟ ಜಾತಿ ಪಂಗಡದವರ ಪ್ರಾತಿನಿಧ್ಯ ಪೂರ್ಣಗೊಂಡಿದೆ ಎಂಬ ಕಾರಣಕ್ಕೆ ಮುಂಬಡ್ತಿಗೆ ಅರ್ಹರಾದ ಎಸ್‌ಸಿ ಎಸ್‌ಟಿ ನೌಕರರನ್ನು ಕೈಬಿಡುವಂತಿಲ್ಲ ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಡಿಪಿಎಆರ್) ಸ್ಪಷ್ಟಪಡಿಸಿದೆ.

* ಮುಂಬಡ್ತಿ ನೀಡುವ ವೃಂದದಲ್ಲಿನ ಕಾರ್ಯನಿರತ ವೃಂದ ಬಲದಲ್ಲಿ ಎಸ್‌ಸಿ, ಎಸ್‌ಟಿ ನೌಕರರ ಕೊರತೆ ಇಲ್ಲದೆ ಇದ್ದರೆ, ಮುಂಬಡ್ತಿ ನೀಡಲಾಗುವ ಹುದ್ದೆಗಳನ್ನೂ ಸೇರಿಸಿ ಮತ್ತೊಮ್ಮೆ ಪ್ರಾತಿನಿಧ್ಯ ಲೆಕ್ಕಹಾಕಬೇಕು. ಆಗಲೂ ಎಸ್‌ಸಿ, ಎಸ್‌ಟಿ ಪ್ರಾತಿನಿಧ್ಯದಲ್ಲಿ ಕೊರತೆ ಆಗದಂತೆ ನೋಡಿಕೊಳ್ಳಬೇಕು. ಮೀಸಲಾತಿ ರೋಸ್ಟರ್ ಪಟ್ಟಿ ನಿರ್ವಹಿಸುವ ಸಂದರ್ಭದಲ್ಲಿ ಎಷ್ಟು ಹುದ್ದೆಗಳಿಗೆ ಮುಂಬಡ್ತಿ ನೀಡಲಾಗುತ್ತಿದೆಯೋ ಅಷ್ಟೂ ಹುದ್ದೆಗಳಿಗೆ ರೋಸ್ಟರ್ ಅನ್ವಯಿಸಬೇಕು. ಪ್ರಾತಿನಿಧ್ಯ ಪೂರ್ಣಗೊಂಡಿದೆ ಎಂಬ ಕಾರಣಕ್ಕೆ ರೋಸ್ಟರ್ ನಿರ್ವಹಣೆಯನ್ನು ಮಧ್ಯದಲ್ಲಿಯೇ ನಿಲ್ಲಿಸಬಾರದು ಎಂದೂ ಇಲಾಖೆ ತಿಳಿಸಿದೆ.

* ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲ ಹುದ್ದೆಗಳಿಗೆ ಬಡ್ತಿ ನೀಡುವ ಸಂದರ್ಭದಲ್ಲಿ ಮೀಸಲಾತಿ ನೀಡಿಲ್ಲ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಶಾಲಾ ಶಿಕ್ಷಣ ಇಲಾಖೆಗೆ ಡಿಪಿಎಆರ್ ಈ ಸ್ಪಷ್ಟನೆ ನೀಡಿದೆ. ಈ ಸೂಚನೆ ಎಲ್ಲ ಆಡಳಿತ ಇಲಾಖೆಗಳಿಗೂ ಅನ್ವಯ ಆಗಲಿದೆ.

* ಪದವಿಪೂರ್ವ ಶಿಕ್ಷಣ ಇಲಾಖೆ ಉಪನ್ಯಾಸಕರ ಹುದ್ದೆಯಿಂದ ಪ್ರಾಂಶುಪಾಲ ಹುದ್ದೆಗೆ 2016 ರಿಂದ ಈ ವರೆಗೆ ಮುಂಬಡ್ತಿ ನೀಡುವ ಸಂದರ್ಭದಲ್ಲಿ ಮೀಸಲಾತಿ ನಿಯಮ ಪಾಲಿಸಿಲ್ಲ ಎಂದು ಆರೋಪಿಸಿ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಗೆ ರಾಜ್ಯ ಎಸ್‌ಸಿ, ಎಸ್‌ಟಿ ನೌಕರರ ಸಂಘ ದೂರು ನೀಡಿತ್ತು. ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿದ್ದ ಸಮಿತಿಯು, ಸಮಾಜ ಕಲ್ಯಾಣ ಇಲಾಖೆಗೆ, ಡಿಪಿಎಆರ್ ಮತ್ತು ಶಾಲಾ ಶಿಕ್ಷಣ ಇಲಖೆ ಜಂಟಿಯಾಗಿ ಪರಿಶೀಲಿಸಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಗುರುತಿಸುವವರೆಗೆ ಪ್ರಾಂಶುಪಾಲ ಹುದ್ದೆಗಳಿಗೆ ಬಡ್ತಿ ನೀಡಬಾರದು ಎಂದು ಸೂಚಿಸಿತ್ತು.

* ಈ ಹಿನ್ನೆಲೆಯಲ್ಲಿ ಡಿಪಿಎಆರ್ ಕಾರ್ಯದರ್ಶಿ ಮತ್ತು ಸಮಾಜ ಕಲ್ಯಾಣ ಇಲಾಖೆಯ ಆಯುಕ್ತರು ಸಭೆ ನಡೆಸಿದ್ದರು. ಈ ಸಭೆಯಲ್ಲಿ ಪ್ರಾಂಶುಪಾಲ ಹುದ್ದೆಗಳಿಗೆ ಬಡ್ತಿ ನೀಡುವಾಗ ಎಸ್‌ಸಿ, ಎಸ್‌ಟಿ ನೌಕರರಿಗೆ ಮೀಸಲಿರಿಸಿದ ರೋಸ್ಟರ್ ಬಿಂದುಗಳನ್ನು ಸರಿಯಾಗಿ ನಿರ್ವಹಿಸುತ್ತಿಲ್ಲ. ಸ್ವಂತ ಜ್ಯೇಷ್ಠತೆಯಲ್ಲಿ ಅರ್ಹರಾಗುವ ಎಸ್‌ಸಿ, ಎಸ್‌ಟಿ ಉಪನ್ಯಾಸಕರನ್ನು ಮುಂಬಡ್ತಿಗೆ ಪರಿಗಣಿಸಿಲ್ಲ ಎಂದು ಆಯುಕ್ತರು ವಿವರಿಸಿದ್ದರು.

**ಕೈತಪ್ಪಿದ ಮುಂಬಡ್ತಿ ತನಿಖೆಯಲ್ಲಿ ಪತ್ತೆ:**

* ಉಪನ್ಯಾಸಕ ವೃಂದದಿಂದ ಪ್ರಾಂಶುಪಾಲ ಹುದ್ದೆಗೆ 2016ರ ಆ.13ರಿಂದ 2022ರ ವರೆಗೆ ಮುಂಬಡ್ತಿ ನೀಡುವಾಗ ರೋಸ್ಟರ್ ಬಿಂದುಗಳನ್ನು ಪಾಲಿಸಿಲ್ಲ ಎಂದು ಎಸ್‌ಸಿ, ಎಸ್‌ಟಿ ನೌಕರರ ಸಂಘವು ಸಮಾಜ ಕಲ್ಯಾಣ ಇಲಾಖೆಗೆ ದೂರು ನೀಡಿತ್ತು. ಈ ಬಗ್ಗೆ ತನಿಖೆ ನಡೆಸಿದ ಇಲಾಖೆ, ಹೈದರಾಬಾದ್ ಕರ್ನಾಟಕ ಭಾಗದಲ್ಲಿ ಎಸ್‌ಸಿ 7, ಎಸ್‌ಟಿ 2 ಉಳಿಕೆ ವೃಂದದಲ್ಲಿ ಎಸ್‌ಸಿ 68, ಎಸ್‌ಟಿ 11 ಪ್ರಾಂಶುಪಾಲ ಹುದ್ದೆಗಳನ್ನು ನೀಡದಿರುವುದನ್ನು ಗುರುತಿಸಿತ್ತು. ಈ ತನಿಖಾ ವರದಿಯ ಆಧಾರದಲ್ಲಿ ಎಸ್‌ಸಿ, ಎಸ್‌ಟಿ ಸಂಘವು ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಗೆ ದೂರು ನೀಡಿದ್ದನ್ನು ಡಿ.ಚಂದ್ರಶೇಖರಯ್ಯ ಅವರು ಈ ಸಂದರ್ಭದಲ್ಲಿ ನೆನಪಿಸಿದ್ದಾರೆ.

## ರಾಜ್ಯದ ಪವಿತ್ರ ಕ್ಷೇತ್ರಗಳ ಪ್ರಸಾದವನ್ನೂ ಪರೀಕ್ಷೆಗೊಳಪಡಿಸಿ ಸರ್ಕಾರಕ್ಕೆ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಆಗ್ರಹ

**ನವದೆಹಲಿ, ಸೆ.20:** ತಿರುಪತಿ ಪ್ರಕರಣದ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಪವಿತ್ರ ಕ್ಷೇತ್ರಗಳ ಪ್ರಸಾದವನ್ನೂ ಪರೀಕ್ಷೆಗೆ ಒಳಪಡಿಸಲು ರಾಜ್ಯ ಸರ್ಕಾರ ತ್ವರಿತ ಕ್ರಮ ಕೈಗೊಳ್ಳಬೇಕು ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಆಗ್ರಹಿಸಿದ್ದಾರೆ. ನವದೆಹಲಿಯಲ್ಲಿ ಇಂದು ಮಾಧ್ಯಮದವರೊಂದಿಗೆ ಮಾತನಾಡಿ, ತಿರುಪತಿ ಪ್ರಸಾದದ ವಿಚಾರವಾಗಿ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರನ್ನು ಶಿಕ್ಷೆಗೆ ಗುರಿಪಡಿಸುವಂತೆ ಆಗ್ರಹಿಸಿದರು. ತಿರುಮಲ ತಿರುಪತಿಯಲ್ಲಿ ಪ್ರಸಾದಕ್ಕೆ ಪ್ರಾಣಿಗಳ ಕೊಬ್ಬು ಮತ್ತು ಮೀನಿನ ಎಣ್ಣೆ ಬಳಸಿದ ಕಾರಣ ರಾಜ್ಯದಲ್ಲಿನ ಪವಿತ್ರ ಕ್ಷೇತ್ರಗಳ ಪ್ರಸಾದವನ್ನು ತಕ್ಷಣ ಪರೀಕ್ಷೆಗೆ ಒಳಪಡಿಸುವುದು ಒಳಿತು ಎಂದು ಸಚಿವರು ಅಭಿಪ್ರಾಯಿಸಿದರು. ಹಿಂದೂಗಳ ಪವಿತ್ರ ಕ್ಷೇತ್ರವಾದ ತಿರುಮಲ ತಿರುಪತಿಯಲ್ಲಿ ಪ್ರಸಾದಕ್ಕೆ ಜಾನುವಾರುಗಳ ಕೊಬ್ಬು ಮತ್ತು ಮೀನಿನ ಎಣ್ಣೆ ಬಳಸುತ್ತಿದ್ದರು ಎಂಬ ಸಂಗತಿ ಹಿಂದೂ ಸಮಾಜವನ್ನು ಚಿಂತೆಗೀಡು ಮಾಡಿದೆ ಎಂದು ಜೋಶಿ ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ. ಆಂಧ್ರಪ್ರದೇಶದ ಮಾಜಿ ಮುಖ್ಯಮಂತ್ರಿ ಜಗನ್ ಮೋಹನ್ ರೆಡ್ಡಿ ಅವರು ಅಧಿಕಾರ ಅವಧಿಯಲ್ಲಿ ಈ ರೀತಿ ಹಲವು ಹಿಂದೂ ವಿರೋಧಿ ಕ್ರಮಗಳಿಗೆ ಬೆಂಬಲವಾಗಿ ನಿಂತಿರುವುದು ಅಕ್ಷಮ್ಯ ಎಂದು ಪ್ರತಿಕ್ರಿಯಿಸಿದ್ದಾರೆ ಸಚಿವ ಜೋಶಿ. ಅಷ್ಟೇ ಅಲ್ಲ, ತಿರುಮಲ ತಿರುಪತಿಯ ಟ್ರಸ್ಟ್‌ನಲ್ಲಿ ಜಗನ್ ರೆಡ್ಡಿ ಅವರು ಹಿಂದೂಯೇತರರನ್ನೂ ಟ್ರಸ್ಟ್ ಸದಸ್ಯರನ್ನಾಗಿ ಮಾಡಿದ್ದರು ಎಂದು ಜೋಶಿ ಆರೋಪಿಸಿದ್ದಾರೆ. ಆಂಧ್ರಪ್ರದೇಶದಲ್ಲಿ ಮತ್ತೆ ಈ ರೀತಿಯ ವಿಚಾರಗಳು ಮರುಕಳಿಸಬಾರದು. ಆ ನಿಟ್ಟಿನಲ್ಲಿ ನೂತನ ಸರ್ಕಾರ ಕಠಿಣ ಕ್ರಮ ಕೈಗೊಳ್ಳಬೇಕು ಹಾಗೂ ಸದಾ ಎಚ್ಚರಿಕೆ ವಹಿಸಬೇಕು ಎಂದು ಸಲಹೆ ನೀಡಿದ್ದಾರೆ.

**ಕರ್ನಾಟಕದಲ್ಲೂ ಎಚ್ಚರ ವಹಿಸಿ:** ಆಂಧ್ರಪ್ರದೇಶ ಪ್ರಕರಣದಿಂದ ಕರ್ನಾಟಕ ಸಹ ಎಚ್ಚೆತ್ತುಕೊಳ್ಳಬೇಕು. ಎಲ್ಲಾ ಪವಿತ್ರ ಕ್ಷೇತ್ರಗಳ ಪ್ರಸಾದಗಳನ್ನ ತ್ವರಿತವಾಗಿ ಪರೀಕ್ಷೆಗೆ ಒಳಪಡಿಸಬೇಕು ಎಂದು ಸಚಿವ ಜೋಶಿ ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಧಾರ್ಮಿಕ ಟ್ರಸ್ಟ್‌ಗೆ ಬೇಡ ಹಿಂದೂಯೇತರರ ನೇಮಕ: ಹಿಂದೂ ಧಾರ್ಮಿಕ ಟ್ರಸ್ಟ್‌ಗಳಲ್ಲಿ ಹಿಂದೂಯೇತರರನ್ನು ನೇಮಕ ಮಾಡಬಾರದು ಎಂದೂ ಸಚಿವ ಪ್ರಲ್ಹಾದ ಜೋಶಿ ಸರ್ಕಾರಕ್ಕೆ ಆಗ್ರಹಿದ್ದಾರೆ.

# ಪತ್ರಕರ್ತರ ಸಹಕಾರ ಸಂಘಕ್ಕೆ ಆರ್ಥಿಕ ನೆರವು: ಸಿಎಂ ಭರವಸೆ



**ಬೆಂಗಳೂರು, ಸೆ.20–** ಪತ್ರಕರ್ತರ ಸಹಕಾರ ಸಂಘಕ್ಕೆ ಆರ್ಥಿಕ ನೆರವು ನೀಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು. ಪತ್ರಕರ್ತರ ಸಹಕಾರ ಸಂಘದ ಅಧ್ಯಕ್ಷ ರಮೇಶ್ ಪಾಳ್ಯ ನೇತೃತ್ವದ ನಿಯೋಗವು ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಭೇಟಿ ಮಾಡಿದ ವೇಳೆ ಭರವಸೆ ನೀಡಿದ್ದಾರೆ.

1949ರಲ್ಲಿ ಆರಂಭವಾದ ಪತ್ರಕರ್ತರ ಸಹಕಾರ ಸಂಘ ರಾಜ್ಯದ ಪತ್ರಕರ್ತರ ಏಕೈಕ ಹಣಕಾಸಿನ ಪ್ರಾತಿನಿಧಿಕ ಸಂಸ್ಥೆ. ಈ ಸಂಸ್ಥೆ ರಾಜ್ಯ ಹಾಗೂ ರಾಷ್ಟ್ರಮಟ್ಟದ ಮುದ್ರಣ ಮತ್ತು ವಿದ್ಯುನ್ಮಾನ ಮಾಧ್ಯಮಗಳ ಪತ್ರಕರ್ತರನ್ನು ಸದಸ್ಯರನ್ನಾಗಿ ಹೊಂದಿದೆ. ಆಡಿಟ್ ವರ್ಗೀಕರಣದಲ್ಲಿ ನಮ್ಮ ಸಂಸ್ಥೆ 'ಎ' ಶ್ರೇಣಿ ಪಡೆದಿರುವ ಸಂಸ್ಥೆ. ಅತ್ಯುತ್ತಮ ಸಹಕಾರ ಸಂಘ ಎಂಬ ಪ್ರಶಸ್ತಿಗೂ ಪಾತ್ರವಾಗಿದೆ. ನಿರಂತರ ಏಳು ದಶಕಗಳಿಂದ ನಮ್ಮ ಪತ್ರಕರ್ತರ ಸಹಕಾರ ಸಂಘ ಸೇವೆ ಸಲ್ಲಿಸುತ್ತಿದೆ.

ಪತ್ರಕರ್ತರ ಸಂಘದ ಸದಸ್ಯರಿಂದ ಆರೋಗ್ಯದ ನೆರವಿನ ಬೇಡಿಕೆ ದಿನೇದಿನೆ ಹೆಚ್ಚಾಗುತ್ತಿದೆ. ಹೀಗಾಗಿ ಪತ್ರಕರ್ತರ ಆರೋಗ್ಯದ ಅನುಕೂಲಕ್ಕಾಗಿ ಆರ್ಥಿಕ ನೆರವು ಬೇಕಿದೆ. ವೈದ್ಯಕೀಯ ನೆರವಿಗೆ ರಾಜ್ಯ ಸರ್ಕಾರದಿಂದ ಸುಮಾರು 5 ಕೋಟಿ ರೂ. ಅನುದಾನ ನೀಡಬೇಕು ಎಂದು ಸಂಘದ ಅಧ್ಯಕ್ಷ ರಮೇಶ್ ಪಾಳ್ಯ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಮನವಿ ಮಾಡಿದರು. ಇದಕ್ಕೆ ಸ್ಪಂದಿಸಿದ ಸಿಎಂ ಸಿದ್ದರಾಮಯ್ಯ ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಸಂಘದ ಶ್ರೇಯೋಭಿವೃದ್ಧಿಗೆ ಆರ್ಥಿಕ ನೆರವು ನೀಡಲಾಗುವುದು ಎಂದು ಭರವಸೆ ನೀಡಿದರು. ಇದರ ಜೊತೆಗೆ ಕೆಲವು ಹಿರಿಯ ಪತ್ರಕರ್ತರು ಸಂಘದಲ್ಲಿ ಸಾಲ ಪಡೆದಿದ್ದು, ಕೊರೋನಾ ಸಮಯದಲ್ಲಿ ಹಾಗೂ ಆನಂತರ ಅನಾರೋಗ್ಯ ಕಾರಣದಿಂದ ನಿಧನರಾಗಿದ್ದಾರೆ.

ಕೊರೋನಾ ಆರ್ಥಿಕ ಸಂಕಷ್ಟದಿಂದ ನಿಗಧಿತ ಸಮಯಕ್ಕೆ ಸಾಲ ಮರು ಪಾವತಿ ಮಾಡದೆ ಸುಸ್ತಿದಾರರಾಗಿದ್ದಾರೆ. ಹೀಗಾಗಿ ಸಂಸ್ಥೆಗೆ ಆರ್ಥಿಕ ನೆರವು ತೀರಾ ಅಗತ್ಯವಾಗಿದೆ.

ಹೀಗಾಗಿ ರಾಜ್ಯ ಸರ್ಕಾರ ಪತ್ರಕರ್ತರ ಸಹಕಾರ ಸಂಘಕ್ಕೆ ಅನುದಾನವನ್ನು ಬಿಡುಗಡೆ ಮಾಡಬೇಕು ಎಂದು ನಿಯೋಗವು ಮುಖ್ಯಮಂತ್ರಿಗಳನ್ನು ಮನವಿ ಮಾಡಿ ಕೊಂಡಿತು. ಇದಕ್ಕೆ ಸ್ಪಂದಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪತ್ರಕರ್ತರ ಸಹಕಾರ ಸಂಘಕ್ಕೆ ನೆರವು ನೀಡುವ ಭರವಸೆ ನೀಡಿದರು.

**ನಿಗಮಗಳ ನೇಮಕದಲ್ಲಿ ಸಂಸ್ಥೆಯನ್ನೂ ಪರಿಗಣಿಸಿ:** ಮಾಧ್ಯಮಕ್ಕೆ ಸಂಬಂಧಿಸಿದ ಮಿಗಮ ಮಂಡಳಿ ಅಥವಾ ಅಕಾಡೆಮಿಗಳಿಗೆ ನೇಮಕ ಮಾಡುವ ಸಂದರ್ಭದಲ್ಲಿ ಪತ್ರಕರ್ತರ ಸಹಕಾರ ಸಂಘವನ್ನೂ ಪರಿಗಣಿಸ ಬೇಕು. ಸಹಕಾರ ಸಂಘದ ಪ್ರತಿನಿಧಿಗಳನ್ನು ನಿರ್ದೇಶಕರು ಹಾಗೂ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ನಿಯೋಗದ ಸದಸ್ಯರು ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ವಿನಂತಿಸಿ ಕೊಳ್ಳಲಾಯಿತು.

## ನಿತ್ಯ ಪಂಚಾಂಗ 21.09.2024 ಶನಿವಾರ



ಶ್ರೀ ಕ್ರೋಧಿ ನಾಮ ಸಂವತ್ಸರ, ಉತ್ತರಾಯಣ–ವಸಂತ ಋತು, ಚಾಂದ್ರಮಾನ, ಭಾದ್ರಪದ ಬಹುಳ

ಚೌತಿ, ಅಶ್ವಿನಿ ನಕ್ಷತ್ರ, ಸಂಕಷ್ಟ ಚತುರ್ಥಿ, ಅಂತರರಾಷ್ಟ್ರೀಯ ಶಾಂತಿ ದಿನ, ಮದಗುಣಕಿ ಆಜ್ಜೇಶ್ವರ ಪುಣ್ಯರಾಧನೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 –12.00 | 1.30 – 3.00 |
| ಮಂಗಳ | 3.00 – 4.30 | 9.00 –10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 –12.00 |
| ಗುರು | 1.30 – 3.00 | 6.00 – 7.30 | 9.00 –10.30 |
| ಶುಕ್ರ | 10.30 –12.00 | 3.00 – 4.30 | 7.30 – 9.00 |
| ಶನಿ | 9.00 –10.30 | 1.30 – 3.00 | 6.00 – 7.30 |

## ಆರ್‌ಟಿಸಿ ಪಹಣಿಗೆ ಆಧಾರ್ ಜೋಡಣೆ ಶೇ.80ರಷ್ಟು ಪ್ರಗತಿ: ಕೃಷ್ಣ ಬೈರೇಗೌಡ



**ಚಿಕ್ಕಬಳ್ಳಾಪುರ, ಸೆ.20–** ರಾಜ್ಯದಲ್ಲಿ ರೈತರ ಜಮೀನುಗಳ ಆರ್‌ಟಿಸಿ ಪಹಣಿಗಳೊಂದಿಗೆ ಆಧಾರ್ ಜೋಡಣೆ ಮಾಡುವ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಶೇ.80ರಷ್ಟು ಗುರಿ ಸಾಧನೆ ಆಗಿದೆ ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ತಿಳಿಸಿದ್ದಾರೆ.

ಅವರು ಇಂದು ಚಿಕ್ಕಬಳ್ಳಾಪುರದ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಜಿಲ್ಲಾಡಳಿತ ಮತ್ತು ಕಂದಾಯ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಜೋಡಿ ಗ್ರಾಮಗಳ ಪಹಣಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ದಶಕಗಳಿಂದ ಬಾಕಿ ಉಳಿದಿದ್ದ ಜೋಡಿ ಗ್ರಾಮಗಳ ಪಹಣಿಯ ಸಮಸ್ಯೆಗೆ ಇಂದು ಪರಿಹಾರ ದೊರೆತಿದೆ. ಜಿಲ್ಲೆಯ 28 ಜೋಡಿ ಗ್ರಾಮಗಳ ರೈತರಿಗೆ ಅನುಕೂಲವಾಗಲಿದೆ ಎಂದರು.

ರಾಜ್ಯದಲ್ಲಿ ಒಂದು ಸಾವಿರ ಗ್ರಾಮ ಲೆಕ್ಕಿಗರ ನೇರ ನೇಮಕಾತಿಗೆ ಮುಖ್ಯಮಂತ್ರಿಗಳು ಅನುಮತಿ ನೀಡಿದ್ದು, ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿದೆ. ಈ ವರ್ಷದ ಕೊನೆಯಲ್ಲಿ ನೇಮಕ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದರು.

ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್, ಶಾಸಕರಾದ ಪ್ರದೀಪ್ ಈಶ್ವರ್,ಎಸ್.ಎನ್. ಸುಬ್ಬಾರೆಡ್ಡಿ, ಅನಿಲ್ ಕುಮಾರ್ ಹಾಗೂ ಕಂದಾಯ ಆಯುಕ್ತ ಸುನಿಲ್ ಕುಮಾರ್ ಹಾಜರಿದ್ದರು.

## ಕ್ರೀಡಾಪಟುಗಳಿಗೆ ರಾಜ್ಯ ಸರ್ಕಾರ ಶುಭ ಸುದ್ದಿ

**ಬೆಂಗಳೂರು, ಸೆ.20–** ರಾಷ್ಟ್ರೀಯ, ಅಂತಾರಾಷ್ಟ್ರೀಯ ಕ್ರೀಡೆಗಳಲ್ಲಿ ಭಾಗವಹಿಸಿದ ಕರ್ನಾಟಕದ ಕ್ರೀಡಾಪಟುಗಳಿಗೆ ರಾಜ್ಯ ಸರ್ಕಾರ ಶುಭ ಸುದ್ದಿ ನೀಡಿದೆ. ರಾಜ್ಯ ಸಿವಿಲ್ ಸೇವೆಗಳ ಹುದ್ದೆಗಳಲ್ಲಿ ಶೇ.2ರಷ್ಟು ಮಂಜೂರಾದ ಮೀಸಲಾತಿಯನ್ನು ವೃಂದಬಲದಲ್ಲಿ ರಾಜ್ಯದ ಕ್ರೀಡಾಪಟುಗಳಿಗೆ ನಿಗದಿಪಡಿಸುವ ಬಗ್ಗೆ ಸರ್ಕಾರ ಶುಕ್ರವಾರ ಅಧಿಸೂಚನೆ ಹೊರಡಿಸಿದೆ.

ಇತ್ತೀಚೆಗೆ ಈ ಬಗ್ಗೆ ಸಿಎಂ ಸಿದ್ದರಾಮಯ್ಯ ಮಾತನಾಡಿ, ಪೊಲೀಸ್ ಮತ್ತು ಅರಣ್ಯ ಇಲಾಖೆಗಳಲ್ಲಿ ಕ್ರೀಡಾಪಟುಗಳಿಗೆ ಶೇಕಡಾ 3ರಷ್ಟು ಮತ್ತು ಇತರೆ ಎಲ್ಲಾ ಇಲಾಖೆಗಳಲ್ಲಿ ಶೇ.2ರಷ್ಟು ಮೀಸಲಾತಿ ನೀಡುವ ಕರಡು ಅಧಿಸೂಚನೆಯನ್ನು ಈಗಾಗಲೇ ಹೊರಡಿಸಲಾಗಿದೆ. ಶೀಘ್ರದಲ್ಲೇ ಅಂತಿಮ ಅಧಿಸೂಚನೆ ಹೊರಡಿಸುವುದಾಗಿ ತಿಳಿಸಿದ್ದರು. ಅದರಂತೆಯೇ ಇದೀಗ ಸರ್ಕಾರ ಅಧಿಸೂಚನೆ ಹೊರಡಿಸಿದೆ.

## ಒಕ್ಕಲಿಗ ಸಮುದಾಯದಿಂದ ಸಿದ್ದರಾಮಯ್ಯಗೆ ಮನವಿ



**ಬೆಂಗಳೂರು, ಸೆ. 20–** ಬಿಜೆಪಿ ಶಾಸಕ ಮುನಿರತ್ನ ಮಾಡಿರುವ ಜಾತಿ ನಿಂದನೆ, ಜೀವ ಬೆದರಿಕೆ ಪ್ರಕರಣ ಹಾಗೂ ಅತ್ಯಾಚಾರ, ಹನಿಟ್ರ್ಯಾಪ್ ಕೇಸ್ ತನಿಖೆಗೆ ಎಸ್‌ಐಟಿ ರಚನೆ ಮಾಡುವಂತೆ ಒತ್ತಾಯಿಸಿ ಒಕ್ಕಲಿಗ ಸಮುದಾಯದ ಸಚಿವರು, ಶಾಸಕರು, ನಾಯಕರು ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಮನವಿ ಮಾಡಿದರು.

ಸಿಎಂ ಸಿದ್ದರಾಮಯ್ಯ ಅವರ ಕಾವೇರಿ ನಿವಾಸದಲ್ಲಿ ಸಿಎಂ ಭೇಟಿಯಾದ ಸಚಿವ ಕೃಷ್ಣ ಬೈರೇಗೌಡ ನೇತೃತ್ವದ ನಿಯೋಗ, ಮುನಿರತ್ನ ವಿರುದ್ಧ ತನಿಖೆಗೆ ಎಸ್‌ಐಟಿ ರಚಿಸುವಂತೆ ಮನವಿ ಮಾಡಿದರು.ಮುನಿರತ್ನ ವಿರುದ್ಧ ದಾಖಲಾಗಿರುವ ಎಲ್ಲಾ ಪ್ರಕರಣಗಳ ಬಗ್ಗೆಯೂ ಎಸ್‌ಐಟಿ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದ್ದಾರೆ. ಇದಕ್ಕೆ ಸ್ಪಂದಿಸಿದ ಸಿಎಂ ಸಿದ್ದರಾಮಯ್ಯ, ಗೃಹ ಸಚಿವರ ಜೊತೆ ಚರ್ಚಿಸಿ ನಿರ್ಧಾರ ಕೈಗೊಳ್ಳುವುದಾಗಿ ತಿಳಿಸಿದ್ದಾರೆ.

### ಸೇವಾ ಸಾಮರ್ಥ್ಯದೊಂದಿಗೆ ಮಾಡೆಲ್ ಬ್ಯಾಂಕ್ ಗ್ರಾಹಕರ ವಿಶ್ವಾಸಕ್ಕೆ ಪಾತ್ರ

# ಮಾಡೆಲ್ ಬ್ಯಾಂಕ್‌ನ 107ನೇ ಮಹಾಸಭೆಯಲ್ಲಿ ಆಲ್ಬರ್ಟ್ ಡಬ್ಲ್ಯೂಡಿ'ಸೋಜಾ






**ಮುಂಬಯಿ, ಸೆ.20–** ಬ್ಯಾಂಕ್ ಅತ್ಯಂತ ಅಪೇಕ್ಷಣೀಯ ಗುಣಮಟ್ಟದ ವಹಿವಾಟು, ವ್ಯವಹಾರ ಸಾಧಿಸಿದ್ದು, ಆ ಮೂಲಕ ಬ್ಯಾಂಕ್‌ನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲು ಸಾಧ್ಯವಾಗಿದೆ. ಗ್ರಾಹಕರ, ಷೇರುದಾರರ ನಿರಂತರ ಪ್ರೋತ್ಸಾಹ ಮತ್ತು ಬೆಂಬಲದೊಂದಿಗೆ ಬ್ಯಾಂಕ್‌ನ್ನು ಹೊಸ ದಿಗಂತಗಳಿಗೆ ಕೊಂಡೊಯ್ಯಲು ಪ್ರಯತ್ನ ಸಾಗುತ್ತಿದೆ ಎಂದೇಳಲು ಅಭಿಮಾನವಾಗುತ್ತದೆ. ಮುಂದುವರಿದ ನಿಮ್ಮ ನಂಬಿಕೆ ಮತ್ತು ಬೆಂಬಲದಿಂದ ಬ್ಯಾಂಕ್ ಪ್ರಗತಿಯನ್ನು ಹೆಚ್ಚಿಸಲಿದೆ. ಜಾಗತಿಕ ಹಣಕಾಸು ಸವಾಲಿನ ವಾತಾವರಣದ ಹೊರತಾಗಿಯೂ ಬ್ಯಾಂಕ್ ಸೇವೆಯೊಂದಿಗೆ ಹೊಂದಿಕೊಂಡು ಮುನ್ನಡೆದಿದ್ದು, ಕಳೆದ ಆರ್ಥಿಕ ವರ್ಷದಲ್ಲಿ ಮೊಡೇಲ್ ಬ್ಯಾಂಕ್ ಸೇವಾ ಸಾಮರ್ಥ್ಯ ತೋರಿಸಿ ಗ್ರಾಹಕರ ವಿಶ್ವಾಸಕ್ಕೆ ಪಾತ್ರವಾಗಿದೆ ಎಂದು ಮೊಡೇಲ್ ಕೋ.ಅಪರೇಟಿವ್ ಬ್ಯಾಂಕ್ ಲಿಮಿಟೆಡ್‌ನ ಕಾರ್ಯಾಧ್ಯಕ್ಷ ಆಲ್ಬರ್ಟ್ ಡಬ್ಲ್ಯೂ.ಡಿ'ಸೋಜಾ ತಿಳಿಸಿದರು. ಇಂದಿಲ್ಲಿ ಗುರುವಾರ ಅಪರಾಹ್ನ ಬಾಂದ್ರಾ ಪಶ್ಚಿಮದಲ್ಲಿನ ಸೈಂಟ್ ಆ್ಯಂಡ್ರೂ'ಸ್ ಸಭಾಗೃಹದಲ್ಲಿ ಮೊಡೇಲ್ ಬ್ಯಾಂಕ್ ತನ್ನ107ನೇ ವಾರ್ಷಿಕ ಮಹಾಸಭೆ ನಡೆಸಿದ್ದು ಆಲ್ಬರ್ಟ್ ಡಿ'ಸೋಜಾ ಅಧ್ಯಕ್ಷೀಯ ಭಾಷಣವನ್ನುದ್ದೇಶಿಸಿ ಮಾತನಾಡಿ ಬ್ಯಾಂಕ್‌ನ ಗತ ಆಯವ್ಯಯ ಪಟ್ಟಿ (ಬ್ಯಾಲೆನ್ಸ್ ಶೀಟ್) ಮತ್ತು ವಾರ್ಷಿಕ ಲಾಭನಷ್ಟದ ಲೆಕ್ಕಾಚಾರ ಸೇರಿದಂತೆ ವಾರ್ಷಿಕ ಲೆಕ್ಕಪರಿಶೋಧಕ ಮಾಹಿತಿಯಿತ್ತರು. ಈ ಬಾರಿಯೂ ಆರ್‌ಬಿಐ ಲೆಕ್ಕಶೋಧನಾ ಶ್ರೇಣೀಕರಣ ಪ್ರಕಾರ (ಆಡಿಟ್ ಕ್ಲಾಸಿಫೀಕೇಶನ್) 'ಎ' ದರ್ಜೆಯೊಂದಿಗೆ ಧೃಡೀಕೃತಗೊಂಡಿದೆ ಎಂದು ಬ್ಯಾಂಕ್ ಮಂಡಳಿ ಈ ಬಾರಿ ಷೇರುದಾರರಿಗೆ 10% ಹಿಶೆಭಾಗ (ಡಿವಿಡೆಂಡ್) ಘೋಷಿಸುತ್ತಿದೆ ಎಂದೇಳಿ ಬ್ಯಾಂಕ್‌ನ ಸರ್ವೋನ್ನತಿಗೆ ಶ್ರಮಿಸಿದ ಸರ್ವರಿಗೂ ವಂದಿಸುವೆ ಎಂದರು.

ಬ್ಯಾಂಕ್‌ನ ಕಾರ್ಯಕ್ಷಮತೆಯನ್ನು ತಿಳಿಸುತ್ತಾ ಪ್ರಸ್ತುತ ಸ್ಥೂಲ ಆರ್ಥಿಕ ಮತ್ತು ಬ್ಯಾಂಕಿಂಗ್ ಸನ್ನಿವೇಶಗಳನ್ನು ಸಂಕ್ಷಿಪ್ತ ವಾಗಿ ಹಂಚಿಕೊಂಡ ಡಿ'ಸೋಜಾ, ಬ್ಯಾಂಕ್‌ನ ಷೇರುದಾರ ಸದಸ್ಯರಿಗೆ ಗತ ಕ್ಯಾಲೆಂಡರ್ ಸಾಲಿನ ಕಾರ್ಯ ಸಾಧನೆಗಳ ಮಾಹಿತಿಯನ್ನೀಡಿ ಬ್ಯಾಂಕ್ ರೂಪಾಯಿ 1216.04 ಕೋಟಿಗಳ ಠೇವಣಿ ಸಾಧಿಸಿದ್ದು, ರೂ.63.58 ಕೋಟಿಗಳ ಬೆಳವಣಿಗೆ ಕಂಡಿದೆ ಎಂದರು. ರೂ.11.63 ಕೋಟಿಗಳಷ್ಟು ಮುಂಗಡವು ಕಡಿಮೆಯಾಗಿದ್ದು ಹಿಂದಿನ ಹಣಕಾಸು ವರ್ಷಕ್ಕೆ ಹೋಲಿಸಿದರೆ ನಿವ್ವಳ ಎನ್‌ಪಿಎ ಶೂನ್ಯವಾಗಿದೆ. ನಿವ್ವಳ ಲಾಭ (ತೆರಿಗೆ ನಂತರ) ರೂ.10.22 ಕೋಟಿಗಳಷ್ಟಿದ್ದು ಬ್ಯಾಂಕ್ ಆರ್ಥಿಕವಾಗಿ ಉತ್ತಮವಾಗಿ ನಿರ್ವಹಿಸಲ್ಪಟ್ಟಿದೆ.

ಮೊಬೈಲ್ ಬ್ಯಾಂಕಿಂಗ್, ಇಂಟರ್‌ನೆಟ್ ಸ್ಟೇಟ್‌ಮೆಂಟ್ ವೀಕ್ಷಣೆ ಸೌಲಭ್ಯ, ಯುಪಿಐ ಪಾವತಿ ಇಂಟರ್‌ಫೇಸ್, ಕಾರ್ಡ್ ಸ್ವೈಪ್ ಯಂತ್ರಗಳಿಗೆ ಟೈ ಅಪ್, ಸಂಪರ್ಕರಹಿತ ಟ್ಯಾಪ್–ಎಟಿಎಂ ಡೆಬಿಟ್ ಕಾರ್ಡ್‌ಗಳು, ರುಪೇ ಎಟಿಎಂ ಕಮ್ ಡೆಬಿಟ್ ಕಾರ್ಡ್‌ಗಳು ಮತ್ತು ಪ್ಲಾಟಿನಂ ರುಪೇ ಡೆಬಿಟ್ ಕಾರ್ಡ್‌ಗಳಂತಹ ಹೆಚ್ಚಿನ ಡಿಜಿಟಲ್ ಸೇವೆಗಳನ್ನು ಬ್ಯಾಂಕ್ ಒದಗಿಸುತ್ತದೆ. ಬ್ಯಾಂಕ್‌ನ 40% ಸಕ್ರಿಯ ಗ್ರಾಹಕರು ಡಿಜಿಟಲ್ ಸೇವೆಗಳನ್ನು ಬಳಸುತ್ತಿದ್ದಾರೆ.

ಬ್ಯಾಂಕ್ ತನ್ನ ಡಿಜಿಟಲ್ ಕೊಡುಗೆಗಳನ್ನು ವಿಸ್ತರಿಸುವುದನ್ನು ಇನ್ನಷ್ಟು ಮುಂದುವರಿಸುತ್ತಿದ್ದು ಮುನ್ನಡೆಯ ಬೆಳವಣಿಗೆ ಕಾಯ್ದಿರಿಸಿದೆ. ಬ್ಯಾಂಕ್ ವಿದೇಶಿ ವಿನಿಮಯಕ್ಕಾಗಿ ಪೂರ್ಣ ಪ್ರಮಾಣದ ಹಣವನ್ನು ಬದಲಾಯಿಸುವ ಕಾರ್ಯಾಚರಣೆ ಗಳಿಗೆ ಅಧಿಕೃತ ಡೀಲರ್ ದ್ವಿತೀಯ ವರ್ಗದ ಪರವಾನಗಿ ಮತ್ತು ಅನಿವಾಸಿ ಭಾರತೀಯರಿಗೆ ಎನ್‌ಆರ್‌ಐ ವಿದೇಶಿ ವಿನಿಮಯ ಹಾಗೂ ಭಾರತೀಯ ರೂಪಾಯಿ ಮೌಲ್ಯದ ಎನ್‌ಆರ್‌ಇ ಖಾತೆಗಳು ಹೆಚ್ಚು ಪರಿಣಾಮಕಾರಿ ಸೇವೆಯಾಗಿಸಿದ ತೃಪ್ತಿ ನಮಗಿದೆ ಎಂದರು.

# ಶಾಂತಿ ಕದಡುವವರ ವಿರುದ್ಧ ಕ್ರಮಕ್ಕೆ ಸಿಎಂಗೆ ಪತ್ರ: ಬಸವರಾಜ ಹೊರಟ್ಟಿ



**ಧಾರವಾಡ, ಸೆ.20–** ಸಮಾಜದ ಶಾಂತಿ ಕದಡುವವರಿಗೆ ಶಿಕ್ಷೆಯ ಗ್ಯಾರಂಟಿಯಾದರೆ ಖಂಡಿತ ವಾಗಿಯೂ ಶಾಂತಿ ಕಾಪಾಡಲು ಸಾಧ್ಯವಿದ್ದು, ಈ ಕುರಿತಂತೆ ಸಿಎಂಗೆ ಪತ್ರ ಬರೆಯು ವುದಾಗಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಮಾಜದಲ್ಲಿ ಕೆಲವರು ಬೆಂಕಿ ಹಚ್ಚುವವರು ಇರುತ್ತಾರೆ. ಗಲಾಟೆ ಮಾಡುವ ಉದ್ದೇಶವನ್ನು ಇಟ್ಟುಕೊಂಡಿದ್ದಾರೆ. ಹೀಗಾಗಿ ಎಲ್ಲಿಯವರೆಗೆ ಸಮಾಜಘಾತುಕ ಶಕ್ತಿಗಳು ಇರುತ್ತವೆಯೋ ಅಲ್ಲಿಯವರೆಗೆ ಎಲ್ಲರೂ ಒಂದಾಗಲು ಸಾಧ್ಯವಿಲ್ಲ ಎಂದರು.

ಉತ್ತರ ಪ್ರದೇಶದಲ್ಲಿ ಮಾಡಿದಂತೆ ಬಂದೋಬಸ್ತ್ ಮಾಡಬೇಕು. ಶಿಕ್ಷೆ ಆಗುವಂತಹ ಕೆಲಸ ಆಗಬೇಕು. ಆದರೆ ನಮ್ಮಲ್ಲಿ ಶಿಕ್ಷೆ ಆಗುತ್ತದೆ ಎಂಬ ಗ್ಯಾರಂಟಿಯೇ ಉಳಿದಿಲ್ಲ. ನಾಲ್ಕೈದು ದಿನ ಜೈಲಿನಟ್ಟಿದ್ದು, ಆ ಬಳಿಕ ಬಿಡುತ್ತಾರೆ ಎಂಬ ಅಸಡ್ಡೆ. ಇದು ತಪ್ಪಬೇಕು. ಹೀಗಾಗಿ ಈ ನಿಟ್ಟಿನಲ್ಲಿ ಸರಕಾರ ಕಠಿಣ ಕ್ರಮ ಕೈಗೊಳ್ಳಬೇಕಿದೆ. ಈ ಸಂಬಂಧ ನಾನೊಂದು ಪತ್ರ ಬರೆಯುತ್ತಿರುವೆ. ಈಗಾಗಲೇ ಅರ್ಧ ಪತ್ರ ಬರೆದಿದ್ದು, ಆ ಬಳಿಕ ಸರಕಾರಕ್ಕೆ ಕಳುಹಿಸುವೆ. ಸಭಾಪತಿಯಾಗಿ ನನಗೂ ಜವಾಬ್ದಾರಿ ಇದೆ. ಹೀಗಾಗಿ ಸಿಎಂಗೆ ಪತ್ರ ಬರೆದು ಗಮನ ಸೆಳೆಯುತ್ತೇನೆ ಎಂದರು.

ಈದ್ಗಾ ಮೈದಾನದಲ್ಲಿ ಗಣೇಶ ಪ್ರತಿಷ್ಠಾಪನೆ ಒಪ್ಪಿ ದೊಡ್ಡವರಾದರಿಗೆ ಅಷ್ಟೇ ಗೌರವ ಕೂಡ ಸಿಕ್ಕಿದೆ. ಹೀಗಾಗಿ ಸೌಹಾರ್ದತೆಯಿಂದ ಹೋಗುವ ಕೆಲಸ ಮಾಡಬೇಕು. ಎಲ್ಲರೂ ಕೂಡಿ ಇರಬೇಕಾಗುತ್ತದೆ. ಎಲ್ಲರೂ ಹೊಂದಿಕೊಂಡು ಹೋಗುವ ಕೆಲಸ ಆಗಬೇಕು ಎಂದರು.

ಇಂದಿನ ರಾಜಕಾರಣದಲ್ಲಿ ಮೌಲ್ಯ ಕಡಿಮೆಯಾಗಿದೆ. ದುಡ್ಡು ಕೊಟ್ಟು ಮತ ಹಾಕಿಸಿಕೊಳ್ಳುತ್ತಾರೆ. ದುಡ್ಡು ತಗೊಂಡು ಮತ ಹಾಕುತ್ತಾರೆ. ಇದು ಇರುವವರೆಗೂ ಏನಾದರೂ ಆಗಬಹುದು. ಹೀಗಾಗಿ ನಾನು ಬಹಳ ವಿಚಾರ ಮಾಡುತ್ತಿದ್ದೇವೆ. ಶಾಸಕರಿಗೆ ತರಬೇತಿ ಕೊಡುವ ವಿಚಾರವೂ ಮಾಡುತ್ತಿದ್ದೇವೆ ಎಂದರು.

**ಇವತ್ತಿಗೂ ಒಕ್ಕುಲತನ ಬಿಟ್ಟಿಲ್ಲ :** ವಿಶ್ವಕರ್ಮ ಜಯಂತಿ ಕಾರ್ಯಕ್ರಮದಲ್ಲಿ ವಿಶ್ವಕರ್ಮರ ಮೂಲ ವೃತ್ತಿ ಪ್ರಸ್ತಾಪಿಸುತ್ತಾ ತಮ್ಮ ಮೂಲ ವೃತ್ತಿ ಬಗ್ಗೆ ಹೇಳಿಕೊಂಡ ಸಭಾಪತಿ ಬಸವರಾಜ ಹೊರಟ್ಟಿ, ನಮ್ಮದು ಕೃಷಿ ಮೂಲ ವೃತ್ತಿ. ಇಂದಿಗೂ ನಾನು ಕೃಷಿ ಮಾಡುವೆ. ಹೀಗಾಗಿ ರಾಜಕಾರಣದ ಈ ಸ್ಥಾನ ಹೋದರೆ ಪೂರ್ಣ ಪ್ರಮಾಣದಲ್ಲಿಯೇ ಕೃಷಿ ಮಾಡುವೆ. ಹೀಗಾಗಿ ನಾನು ಇವತ್ತಿಗೂ ಒಕ್ಕುಲತನ ಬಿಟ್ಟಿಲ್ಲ ಎಂದರು.

ರಾಜಕಾರಣದ ಸ್ಥಾನ ಯಾವಾಗ ಹೋಗುತ್ತೋ ಬಿಡುತ್ತದೆಯೋ ಗೊತ್ತಿಲ್ಲ. ಇವತ್ತಿನ ರಾಜಕಾರಣವೇ ಬಹಳ ವಿಚಿತ್ರವಿದೆ. ನಮ್ಮ ಮೂಲ ಉದ್ಯೋಗವೇ ಸ್ಥಿರ. ರಾಜಕಾರಣ ಹೋದರೆ ನಾನು ಕೃಷಿ ಮಾಡುವೆ. ನಾವೀಗ ವಿಚಿತ್ರವಾದ ಕಾಲದಲ್ಲಿಯೇ ಬದುಕುತ್ತಿದ್ದೇವೆ. ರಾಜಕಾರಣದಲ್ಲಿ ಯಾವುದೂ ಶಾಶ್ವತವಲ್ಲ, ಇವತ್ತು ಇರುವ ಸ್ಥಾನ ನಾಳೆಗೆ ಹೋಗಬಹುದು. ಹೀಗಾಗಿ ನಮ್ಮ ಮೂಲ ಉದ್ಯೋಗ ಬಿಡಬಾರದು ಎಂದು ಸಲಹೆ ನೀಡಿದರು.

# ಡಿನೋಟಿಫಿಕೇಷನ್ ಪ್ರಕರಣ ಹೊಸದಲ್ಲ, ಸಚಿವರ ವಿಷಯ ಕೋರ್ಟ್‌ನಲ್ಲಿ: ಬಿ.ವೈ.ವಿಜಯೇಂದ್ರ ಕಿಡಿ



**ಬೆಂಗಳೂರು, ಸೆ.20–** ಪ್ರತಿಪಕ್ಷದ ನಾಯಕರನ್ನೇ ಕಾಂಗ್ರೆಸ್ ಸರ್ಕಾರ ಗುರಿ ಮಾಡಿದೆ. ಸಿಎಂ ಸಿದ್ದರಾಮಯ್ಯ ಅಭದ್ರತೆಗೆ ಸಿಲುಕಿ ಸಹನೆ ಕಳೆದು ಕೊಂಡಿದ್ದಾರೆ. ಡಿನೋಟಿಫಿಕೇಷನ್ ಪ್ರಕರಣ ಹೊಸದಲ್ಲ. ಮೂವರು ಸಚಿವರು ಹೇಳಿದ ವಿಷಯ ಸದ್ಯಕ್ಕೆ ಕೋರ್ಟ್‌ನಲ್ಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು.

ಪಕ್ಷದ ರಾಜ್ಯ ಕಚೇರಿಯಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಾಲ್ಮೀಕಿ ನಿಗಮದ ಹಗರಣದ ವಿಚಾರದಲ್ಲಿ ಹಿಂದೆಯೂ ಐದು ಜನ ಸಚಿವರು ಜಂಟಿ ಸುದ್ದಿಗೋಷ್ಠಿ ಮಾಡಿದ್ದರು. ನಂತರ ಏನಾಯಿತು ಎಂದು ರಾಜ್ಯದ ಜನರಿಗೆ ಗೊತ್ತಿದೆ. ಪ್ರತಿಪಕ್ಷಗಳ ಮೇಲೆ ಇನ್ನೂ ಬ್ರಹ್ಮಾಸ್ತ್ರ ಬಿಡುತ್ತಾರೋ ಕಾದು ನೋಡುತ್ತೇವೆ ಎಂದು ನಿಗೂಢವಾಗಿ ಹೇಳಿದರು.ಭ್ರಷ್ಟಾಚಾರ ಮುಕ್ತ, ಜನಪರ ಆಡಳಿತ ಕೊಡುತ್ತೇವೆ ಎಂಬ ಭರವಸೆ ನೀಡಿ ಅಧಿಕಾರಕ್ಕೆ ಬಂದರು. ಕೇವಲ 15 ತಿಂಗಳಲ್ಲಿ ಭ್ರಷ್ಟಾಚಾರ ಸರಣಿ ರೂಪದಲ್ಲಿ ಹೊರಬರುತ್ತಿವೆ., ಅಭಿವೃದ್ಧಿ ಸ್ಥಗಿತ, ಕಾನೂನು ಮತ್ತು ಸುವ್ಯವಸ್ಥೆ ಕುಸಿತದ ಸ್ಥಿತಿಯಿಂದ ಜನರ ಗಮನ ಬೇರೆಡೆ ಸೆಳೆಯಲು ಕಾಂಗ್ರೆಸ್ ಸರ್ಕಾರ ತಂತ್ರ ಹೂಡಿ, ಪ್ರತಿಪಕ್ಷದವರ ಮೇಲೆ ಕೇಸ್ ದಾಖಲಿಸುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಲೋಕಸಭೆ ಚುನಾವಣೆಯಲ್ಲಾದ ಸೋಲಿನ ಪ್ರಭಾವ ಶಾಸಕ ಮುನಿರತ್ನ ವಿರುದ್ಧ ದಾಖಲಾದ ಪ್ರಕರಣಗಳಲ್ಲಿ ಎದ್ದು ಕಾಣುತ್ತಿದೆ. ಜಾತಿ ನಿಂದನೆ, ಬೆದರಿಕೆ ಕುರಿತು ಆಡಿಯೋದ ಬಗ್ಗೆ ಎಫ್‌ಎಸ್‌ಎಲ್ ವರದಿ ಬರುವ ತನಕ ಏನನ್ನೂ ಹೇಳಲು ಬಯಸು ವುದಿಲ್ಲ. ನಾಲ್ಕು ವರ್ಷಗಳ ಹಿಂದೆ ನಡೆದಿದೆ ಎನ್ನಲಾದ ಅತ್ಯಾಚಾರ ಪ್ರಕರಣ ಈಗ ಹೊರಗೆ ಬಂದಿದ್ದೇಗೆ. ಡಿ.ಕೆ.ಸುರೇಶ್ ಅಧ್ಯಕ್ಷತೆಯಲ್ಲಿ ಸರ್ಕಾರ ಎಸ್ ಐಟಿ ರಚಿಸುವುದು ಸೂಕ್ತ ಎನಿಸುತ್ತದೆ. ಮುನಿರತ್ನ ಪರ, ವಿರೋಧ ಎನ್ನುವುದಲ್ಲ. ತನಿಖೆ ನಡೆಯುತ್ತಿದ್ದು, ನಿಷ್ಪಕ್ಷಪಾತವಾಗಿ ಆಗಬೇಕು ಎನ್ನುವುದಷ್ಟೇ ನಮ್ಮ ಒತ್ತಾಯ ಎಂದು ವಿಜಯೇಂದ್ರ ಹೇಳಿದರು.

ಕೋಟ್ಯಂತರ ಭಕ್ತರ ಆರಾಧ್ಯ ದೈವ ತಿರುಪತಿ ತಿರುಮಲ ವೆಂಕಟೇಶ್ವರ ಸ್ವಾಮಿ ಸನ್ನಿಧಿಯಲ್ಲಿ ಪಡೆಯವ ಲಡ್ಡು ಪ್ರಸಾದ ಪವಿತ್ರವಾಗಿದೆ. ಇಂತಹ ಪ್ರಸಾದವನ್ನೇ ಕಲಬೆರಕೆ ಮಾಡಿರುವ ವರದಿ ಕಳವಳಕಾರಿ ಯಾಗಿದ್ದು, ಆಂಧ್ರಪ್ರದೇಶ ಸರ್ಕಾರ ಅಗತ್ಯ ಕ್ರಮಕೈಗೊಳ್ಳಬೇಕು ಎಂದರು.

ನಾಗಮಂಗಲ ಗಲಭೆಗೆ ಸಂಬಂ ಧಿಸಿದಂತೆ ಮಾಜಿ ಡಿಸಿಎಂ ಡಾ.ಸಿ.ಎನ್.ಅಶ್ವತ್ಥ ನಾರಾಯಣ ನೇತೃತ್ವದ ಸತ್ಯ ಶೋಧನಾ ಸಮಿತಿ ವರದಿಯನ್ನು ವಿಜಯೇಂದ್ರ ಸ್ವೀಕರಿಸಿ, ಈ ಘಟನೆಯನ್ನು ಎನ್‌ಐಎ ತನಿಖೆಗೆ ಒಪ್ಪಿಸಬೇಕು ಎಂದು ಆಗ್ರಹಿಸಿ, ನಾಗಮಂಗಲದಲ್ಲಿ ದೇಶ ದ್ರೋಹಿಗಳು ದುಷ್ಕೃತ್ಯ ಎಸಗಿದ್ದಾರೆ ಎಂದು ಆರೋಪಿಸಿದರು. ಗಣೇಶ ವಿಸರ್ಜನಾ ಮೆರವಣಿಗೆ ಮೇಲೆ ದಾವಣಗೆರೆಯಲ್ಲಿ ಕಲ್ಲು ತೂರಾಟವಾಗಿದೆ. ಈ ಘಟನಾವಳಿ ಗಳನ್ನು ಗಮನಿಸಿದರೆ, ಸರ್ಕಾರದ ನಿಷ್ಕ್ರಿಯತೆ, ತುಷ್ಟೀಕರಣವು ಅಲ್ಪಸಂಖ್ಯಾತ ದುಷ್ಕರ್ಮಿಗಳಿಗೆ ಸಲುಗೆ ಸಿಕ್ಕು, ಸುರಕ್ಷತೆ ಭಾವನೆಯಿಂದ ದುರುಳತನ ಮೆರೆಯುತ್ತಿದ್ದಾರೆ ಎಂದು ಬಿ.ವೈ.ವಿಜಯೇಂದ್ರ ಕಿಡಿ ಕಾರಿದರು.

### ಅಮೆರಿಕ-ಕರ್ನಾಟಕ ನಡುವೆ ಸಿಸ್ಟರ್ ಸಿಟಿ ರೂಪಿಸುವ ಕುರಿತು ಪ್ರಸ್ತಾಪ

# ಕರ್ನಾಟಕ–ಅಮೆರಿಕ ವಾಣಿಜ್ಯೋದ್ಯಮ ಸಂಬಂಧ ವೃದ್ಧಿಗೆ ಕ್ರಮ: ಅಮೆರಿಕ ರಾಯಭಾರಿ–ಖರ್ಗೆ ಚರ್ಚೆ



**ನವದೆಹಲಿ, ಸೆ.20–** ಕರ್ನಾಟಕ ಮತ್ತು ಅಮೆರಿಕ ನಡುವೆ ವಾಣಿಜ್ಯೋದ್ಯಮ ಸಂಬಂಧಗಳನ್ನು ಬಲ ಪಡಿಸುವ ನಿಟ್ಟಿನಲ್ಲಿ ನವದೆಹಲಿಯಲ್ಲಿರುವ ಅಮೆರಿಕ ರಾಯಭಾರಿ ಎರಿಕ್ ಗಾರ್ಸೆಟಿ ಅವರೊಂದಿಗೆ ಚರ್ಚೆ ನಡೆಸಲಾಯಿತು ಎಂದು ಕರ್ನಾಟಕದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು. ನವದೆಹಲಿಯ ಕರ್ನಾಟಕ ಭವನದಲ್ಲಿ ಇಂದು ಏರ್ಪಡಿಸಿದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ಪ್ರಮುಖವಾಗಿ ಕೆಲವು ಸಿಸ್ಟರ್ ಸಿಟಿ ಕಾರಿಡಾರ್ ರೂಪಿಸುವ ಬಗ್ಗೆ ಪ್ರಸ್ತಾವನೆಯನ್ನು ಅವರ ಮುಂದೆ ಇರಿಸಿದ್ದೇನೆ. ಬಹಳ ಪ್ರಮುಖವಾಗಿ ಬೆಂಗಳೂರು ಮತ್ತು ಸ್ಯಾನ್ ಫ್ರಾನ್ಸಿಸ್ಕೊ ನಡುವೆ ನವೋದ್ಯಮಗಳು ಹಾಗೂ ಆವಿಷ್ಕಾರಗಳಲ್ಲಿ ಸಮಾನ ಸಂಗತಿ ಇದೆ. ಅಲ್ಲಿನ ಪರಿಸರ, ವಾತಾವರಣ, ಎಕೋಸಿಸ್ಟಂಗಳಲ್ಲಿನ ಆವಿಷ್ಕಾರಗಳನ್ನು ಕರ್ನಾಟಕದಲ್ಲಿ ಅಳವಡಿಸುವುದು, ಇಲ್ಲಿನ ಕಲಿಕೆಗಳನ್ನು ಅಲ್ಲಿ ಬಳಸುವುದು, ವಿಶೇಷವಾಗಿ ಕರ್ನಾಟಕದಲ್ಲಿ ಬೆಳೆಯುತ್ತಿರುವ ನವೋದ್ಯಮಗಳಿಗೆ ಅಮೆರಿಕದಲ್ಲಿ ಮಾರುಕಟ್ಟೆ ಕಲಿಸುವ ಸಾಧ್ಯತೆಗಳನ್ನು ಪರಿಶೀಲಿಸುವ ಬಗ್ಗೆ ಸಹ ಚರ್ಚೆ ನಡೆಯಿತು ಎಂದು ಸಚಿವರು ಹೇಳಿದರು. ವಾಷಿಂಗ್ಟನ್ ಜೊತೆ ಫಿಂಟೆಕ್ಸ್ ಹಾಗೂ ಎಐ, ಆಸ್ಟಿನ್ ಜೊತೆ ಸೆಮಿಕಂಡಕ್ಟರ್ ಉತ್ಪಾದನೆ ಸೇರಿದಂತೆ ಮಾರುಕಟ್ಟೆ ಜೊತೆಗೆ ಸ್ಕಿಲ್ ಕಾರಿಡಾರ್ ಮಾಡುವ ಬಗ್ಗೆ ಮಾತುಕತೆ ನಡೆಯಿತು ಎಂದು ಪ್ರಿಯಾಂಕ್ ಖರ್ಗೆ ವರದಿಗಾರರಿಗೆ ವಿವರಿಸಿದರು.

ಬೆಂಗಳೂರಿನಲ್ಲಿ ಯು.ಎಸ್ ರಾಯಭಾರಿ ಕಚೇರಿಯನ್ನು ಆದ್ಯತೆ ಮೇರೆಗೆ ಆರಂಭಿಸಲು ಎಲ್ಲ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ನವದೆಹಲಿಯಲ್ಲಿರುವ ಭಾರತದಲ್ಲಿನ ಅಮೆರಿಕ ಸಂಯುಕ್ತ ಸಂಸ್ಥಾನಗಳ ರಾಯಭಾರಿ ಎರಿಕ್ ಗಾರ್ಸೆಟಿ ಅವರು ಈ ಸಂದರ್ಭದಲ್ಲಿ ಭರವಸೆ ನೀಡಿದರು ಎಂದೂ ತಿಳಿಸಿದ ಸಚಿವ ಪ್ರಿಯಾಂಕ್ ಖರ್ಗೆ ಅವರು ಬೆಂಗಳೂರಿನಲ್ಲಿ ರಾಯಭಾರಿ ಕಚೇರಿ ಮಾಡುವುದರಿಂದ ಕನ್ನಡಿಗರಿಗೆ ಉದ್ಯೋಗಾವಕಾಶಗಳು ಹೆಚ್ಚುತ್ತವೆ, ಕನ್ನಡಿಗ ವಿದ್ಯಾರ್ಥಿಗಳಿಗೆ ಹಾಗೂ ದಕ್ಷಿಣ ಭಾರತದ ವಿದ್ಯಾರ್ಥಿಗಳಿಗೆ ವಿಸಾ ಲಭ್ಯತೆ ಹೆಚ್ಚುತ್ತದೆ ಎಂಬ ರಾಜ್ಯದ ಅಭಿಪ್ರಾಯವನ್ನು ರಾಯಭಾರಿಗಳು ಸಮ್ಮತಿಸಿದರು ಎಂದು ಹೇಳಿದರು.

ಅಮೆರಿಕ ರಾಯಭಾರ ಕಚೇರಿ ತೆರೆಯಲು ಕರ್ನಾಟಕ ಹಾಗೂ ಬೆಂಗಳೂರು ನಮಗೆ ನೈಸರ್ಗಿಕ ಆಯ್ಕೆ ಎಂದೂ ಅಮೆರಿಕ ರಾಯಭಾರಿಗಳು ಹೇಳಿದರು, ಕರ್ನಾಟಕ ಈಗ ವಿಶ್ವದ ನಾಲ್ಕನೆ ಅತಿ ದೊಡ್ಡ ತಂತ್ರಜ್ಞಾನ ಕೇಂದ್ರವಾಗಿರುವುದರಿಂದ ಹಾಗೂ ಅಮೆರಿಕ ಹಾಗೂ ಕರ್ನಾಟಕದ ನಡುವೆ ತಂತ್ರಜ್ಞಾನ ಕ್ಷೇತ್ರದಲ್ಲಿ ಸಾಮ್ಯತೆ ಇರುವುದರಿಂದ ಬೆಂಗಳೂರು ನಮಗೆ ಸ್ವಾಭಾವಿಕ ಆಯ್ಕೆ ಎಂಬ ಅಭಿಪ್ರಾಯವೂ ಅವರದಾಗಿತ್ತು, ಎಐ ಕ್ಷೇತ್ರದಲ್ಲಿ ಬೆಂಗಳೂರು ಈಗ ಜಗತ್ತಿನ ಐದನೆ ಒಂದು ನಗರವಾಗಿದೆ, ಕೌಶಲ್ಯ ಅಭಿವೃದ್ಧಿ ಹಾಗೂ ಎಐ ಕೌಶಲ್ಯದಲ್ಲಿ ಪ್ರಪಂಚದಲ್ಲಿ ಮೂರನೇ ಸ್ಥಾನದಲ್ಲಿದ್ದೇವೆ, ಜೈವಿಕ ತಂತ್ರಜ್ಞಾನ, ಬಾಹ್ಯಾಕಾಶ, ರಕ್ಷಣೆ ಮುಂತಾದ ಕ್ಷೇತ್ರಗಳಲ್ಲಿ ಕರ್ನಾಟಕ ಮುಂಚೂಣಿಯಲ್ಲಿರುವುದರಿಂದ ಬಂಡವಾಳ ಹಾಗೂ ವ್ಯಾಪಾರೋದ್ಯಮಕ್ಕೆ ಭಾರತದಲ್ಲಿ ಕರ್ನಾಟಕ ಸೂಕ್ತವಾಗಿದೆ ಎಂದು ರಾಯಭಾರಿ ಎರಿಕ್ ಗಾರ್ಸೆಟಿ ಅಭಿಪ್ರಾಯ ಹೊಂದಿದ್ದಾರೆ ಎಂದು ಪ್ರಿಯಾಂಕ್ ಖರ್ಗೆ ತಿಳಿಸಿದರು. ನಮ್ಮ ಮಾನವ ಸಂಪನ್ಮೂಲ ಇಡೀ ಜಗತ್ತಿಗೆ ಮಾದರಿಯಾಗಿದೆ ಎಂದೂ ರಾಯಭಾರಿಗಳು ಮೆಚ್ಚಿಕೊಂಡಿದ್ದಾರೆ, ಕರ್ನಾಟಕದಲ್ಲಿ ರಾಯಭಾರಿ ಕಚೇರಿ ತೆರೆಯುವದರಿಂದ ಅಮೆರಿಕ ಹಾಗೂ ಭಾರತಕ್ಕೆ ನೆರವಾಗುವುದು ಎಂದೂ ಅವರು ಹೇಳಿದ್ದಾರೆ. ಬೆಂಗಳೂರಿನಲ್ಲಿ ರಾಯಭಾರಿ ಕಚೇರಿ ತೆರೆಯಲು ಮಾನ್ಯ ಮುಖ್ಯಮಂತ್ರಿಗಳು ಮತ್ತು ಉಪ ಮುಖ್ಯಮಂತ್ರಿಗಳು ನೀಡಿದ್ದ ಸಂದೇಶವನ್ನು ನಾನು ಅಮೆರಿಕ ರಾಯಭಾರಿಗಳಿಗೆ ತಲುಪಿಸಿದ್ದೇನೆ ಎಂದೂ ಸಚಿವರು ಹೇಳಿದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

**ಕನ್ನಡದ ವಾತಾವರಣವನ್ನು ವಿಸ್ತರಿಸಲು, ಗಟ್ಟಿಗೊಳಿಸಲು ನಾವೆಲ್ಲಾ ಹೆಚ್ಚು ಶ್ರಮಿಸೋಣ | ಬಹುತ್ವದ ನಾಡು ಕಟ್ಟುವ ವಿಚಾರದಲ್ಲಿ ರಾಜಿಯೇ ಇಲ್ಲ**

# ಕರ್ನಾಟಕ ಏಳು ಕೋಟಿ ಜನರ ಉಸಿರಾಗಲಿ: ಸಿಎಂ ಸಿದ್ದರಾಮಯ್ಯ

**ಮೈಸೂರು,ಸೆ.20:** ಕನ್ನಡದ ವಾತಾವರಣವನ್ನು ವಿಸ್ತರಿಸಲು, ಗಟ್ಟಿಗೊಳಿಸಲು ನಾವೆಲ್ಲಾ ಹೆಚ್ಚೆಚ್ಚು ಶ್ರಮಿಸೋಣ. ಕರ್ನಾಟಕ ಬಹುತ್ವದ ಬೀಡು. ಬಹುತ್ವದ ನಾಡು ಕಟ್ಟುವ ವಿಚಾರದಲ್ಲಿ ರಾಜಿಯೇ ಇಲ್ಲ ಎಂದು ಸಿ.ಎಂ.ಸಿದ್ದರಾಮಯ್ಯ ಅವರು ಸ್ಪಷ್ಟವಾಗಿ ನುಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ರಾಷ್ಟ್ರೀಯ ಸಂತಕವಿ ಕನಕದಾಸ ಅಧ್ಯಯನ ಮತ್ತು ಸಂಶೋಧನಾ ಕೇಂದ್ರ ಜಂಟಿಯಾಗಿ ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ಆಯೋಜಿಸಿದ್ದ "ಕರ್ನಾಟಕ ಸಾಂಸ್ಕೃತಿಕ ಮುನ್ನೋಟ: ಚಿಂತನಾ ಸಮಾವೇಶ" ವನ್ನು ಉದ್ಘಾಟಿಸಿ ಮಾತನಾಡಿದರು. ದೇವರಾಜ ಅರಸರು 1973ರಲ್ಲಿ ಕರ್ನಾಟಕ ಎಂದು ನಾಮಕರಣ ಮಾಡಿದರು. ನಾಮಕರಣಗೊಂಡು 50 ವರ್ಷದ ಸುವರ್ಣ ಸಂಭ್ರಮವನ್ನು ಬಿಜೆಪಿ ಸರ್ಕಾರ ಮಾಡಬೇಕಿತ್ತು. ಅವರು ಮಾಡಲಿಲ್ಲ. ಹೀಗಾಗಿ ನಾನು ಸುವರ್ಣ ಸಂಭ್ರಮವನ್ನು ಬಜೆಟ್ ನಲ್ಲೇ ಘೋಷಿಸಿ ಇದನ್ನು ಕನ್ನಡ ಜನೋತ್ಸವವನ್ನಾಗಿ ಆಚರಿಸಲಾಗುತ್ತಿದೆ ಎಂದರು.

ಕರ್ನಾಟಕ ಮತ್ತು ಕನ್ನಡ ಏಳು ಕೋಟಿ ಜನರ ಉಸಿರಾಗಲಿ. ಇಲ್ಲಿ ಬದುಕನ್ನು ಕಟ್ಟಿಕೊಂಡಿರುವ ಇತರೆ ಭಾಷಿಕರು ಕನ್ನಡ ಮಾತಾಡುವಂತಾದರೆ ಒಳ್ಳೆಯದು. ನಾವು ಯಾವ ಭಾಷೆಗೂ ದ್ವೇಷಿಗಳಲ್ಲ. ಸಾಧ್ಯವಿರುವಷ್ಟು ಭಾಷೆಗಳನ್ನೆಲ್ಲಾ ಕಲಿತರೆ ಒಳ್ಳೆಯದೆ. ಆದರೆ ಕರ್ನಾಟಕದಲ್ಲಿ ಕನ್ನಡದ ವಾತಾವರಣ ನಿರ್ಮಿಸಿ ಕನ್ನಡವನ್ನು ಪೂರ್ತಿಯಾಗಿ ಬಳಸಬೇಕು. ಇದು ಪ್ರತಿಯೊಬ್ಬ ಕನ್ನಡಿಗರ ಜವಾಬ್ದಾರಿ ಎಂದರು. ತಮಿಳುನಾಡಿನಲ್ಲಿ ತಮಿಳಿನಲ್ಲಿ, ಕೇರಳದಲ್ಲಿ ಮಲಯಾಳಂನಲ್ಲಿ, ಆಂಧ್ರದಲ್ಲಿ ತೆಲುಗಿನಲ್ಲಿ, ಮಹಾರಾಷ್ಟ್ರದಲ್ಲಿ ಮರಾಠಿಯಲ್ಲೇ ವ್ಯವಹರಿಸುತ್ತಾರೆ. ಆದರೆ ನಮ್ಮಲ್ಲಿ ಕನ್ನಡ ಬಿಟ್ಟು ಅವರವರ ಭಾಷೆಯಲ್ಲೇ ಹೆಚ್ಚು ವ್ಯವಹರಿಸಲು ಉತ್ಸುಕರಾಗಿ ಉದಾರಿ ಅನ್ನಿಸಿಕೊಂಡಿದ್ದೇವೆ. ಇದು ಅಷ್ಟು ಸರಿಯಲ್ಲ. ಕನ್ನಡದ ವಾತಾವರಣವನ್ನು ಗಟ್ಟಿಗೊಳಿಸಬೇಕು ಎಂದು ಸಿಎಂ ಕರೆ ನೀಡಿದರು.



ಬಸವಣ್ಣನವರನ್ನು ನಾವು ಸಾಂಸ್ಕೃತಿಕ ನಾಯಕನನ್ನಾಗಿ ಘೋಷಿಸಿದ್ದು ಬಸವಣ್ಣನವರ ವೈಚಾರಿಕ ನಿಲುವುಗಳನ್ನು ನಾವು ಪಾಲಿಸಬೇಕು ಎನ್ನುವ ಉದ್ದೇಶದಿಂದ. ಸರ್ಕಾರಕ್ಕೆ ಕಿರೀಟ ಸಿಗುತ್ತದೆ ಎನ್ನುವ ಕಾರಣಕ್ಕೆ ಘೋಷಣೆ ಮಾಡಿದ್ದಲ್ಲ. ಬಸವಣ್ಣನ ಆಶಯಗಳು, ವಿಚಾರಗಳು, ವೈಚಾರಿಕತೆ ಯುವ ಪೀಳಿಗೆಗೆ ಹೆಚ್ಚೆಚ್ಚು ಗೊತ್ತಾಗಬೇಕು.

ಈ ಮಣ್ಣಿನ ಕನ್ನಡ-ಕರ್ನಾಟಕ-ಬಹುತ್ವ-ವೈಚಾರಿಕತೆ ಎಲ್ಲವೂ ಸೇರಿ ಆಗಿರುವ ಕನ್ನಡತನ ರೂಪುಗೊಂಡಿದೆ. ಈ ಕನ್ನಡತನವನ್ನು, ಇದು ರೂಪುಗೊಂಡ ಚರಿತ್ರೆಯನ್ನು ನಾವು ಈ ತಲೆಮಾರಿಗೆ ದಾಟಿಸುವ ಕೆಲಸವನ್ನು ಪರಿಣಾಮಕಾರಿಯಾಗಿ ತಲುಪಿಸುವ ಉದ್ದೇಶದಿಂದ ಈ ಚಿಂತನಾ ಸಮಾವೇಶವನ್ನು ಆಯೋಜಿಸಲಾಗಿದೆ. ನಿಮ್ಮಂಥಾ ವಿಚಾರವಾದಿಗಳು ಒಟ್ಟಾಗಿ ಸೂಕ್ತವಾದ ಸಾಂಸ್ಕೃತಿಕ ಮುನ್ನೋಟವನ್ನು ನೀಡುತ್ತೀರಿ ಎನ್ನುವ ವಿಶ್ವಾಸವಿದೆ ಎಂದರು.

## ಕರ್ನಾಟಕ ಬಹುತ್ವದ ಬೀಡು

**ಕರ್ನಾಟಕ ಸರ್ವ ಜನಾಂಗದ ಶಾಂತಿಯ ತೋಟ. ಕನ್ನಡ ನಾಡು ಬಹುತ್ವದ ಬೀಡು. ಇಲ್ಲಿ ಮನುಷ್ಯ ಪ್ರೀತಿಯ ಬಹುತ್ವ ಆಚರಿಸಲ್ಪಡುತ್ತದೆ. ಆದರೆ ವಿದ್ಯಾವಂತರೇ ಬಹುತ್ವ, ಜಾತ್ಯತೀತತೆ ಕೈಬಿಟ್ಟು ತಾರತಮ್ಯ , ಕಂದಾಚಾರವನ್ನು ಆಚರಿಸುತ್ತಿರುವುದು ದುರಂತ ಎಂದು ವಿಷಾದ ವ್ಯಕ್ತಪಡಿಸಿದರು.**

"ಸುವರ್ಣ ಸಂಭ್ರಮ ಕರ್ನಾಟಕ-50: ಹೆಸರಾಯಿತು ಕರ್ನಾಟಕ, ಉಸಿರಾಗಲಿ ಕನ್ನಡ" ದ ಅಂಗವಾಗಿ ಚಿಂತನಾ ಸಮಾವೇಶ ಆಯೋಜಿಸಲಾಗಿತ್ತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ್ ತಂಗಡಗಿ, ಸಮಾಜ ಕಲ್ಯಾಣ ಸಚಿವರಾದ ಎಚ್.ಸಿ.ಮಹದೇವಪ್ಪ, ಕನಕದಾಸ ಅಧ್ಯಯನ ಕೇಂದ್ರದ ಅಧ್ಯಕ್ಷರಾದ ಕಾ.ತ.ಚಿಕ್ಕಣ್ಣ, ಗ್ಯಾರಂಟಿ ಅನುಷ್ಠಾನ ಸಮಿತಿ ಉಪಾಧ್ಯಕ್ಷರಾದ ಪುಷ್ಪ ಅಮರನಾಥ್, ಮುಕ್ತ ವಿವಿ ಕುಲಪತಿಗಳಾದ ಪ್ರೊ.ಶರಣಪ್ಪ ವಿ.ಹಲ್ಸೆ, ಸಂಸ್ಕೃತಿ ಇಲಾಖೆ ನಿರ್ದೇಶಕರಾದ ಧರಣೀದೇವಿ ಮಾಲಗತ್ತಿ, ವಿಧಾನ ಪರಿಷತ್ ಸದಸದಯರಾದ ಡಾ.ತಿಮ್ಮಯ್ಯ ಸೇರಿ ಹಲವು ಗಣ್ಯರು ಉಪಸ್ಥಿತರಿದ್ದರು.

ಅರ್ಧ ಶತಮಾನದಿಂದ ಕನ್ನಡದ ವಿವೇಕವನ್ನು ವಿಸ್ತರಿಸುತ್ತಿರುವ ಹಿರಿಯ ಸಾಹಿತಿಗಳು, ಬರಹಗಾರರು, ಲೇಖಕರು, ಪತ್ರಕರ್ತರು, ಸಾಮಾಜಿಕ ಕಾರ್ಯಕರ್ತರು, ನಾನಾ ಚಳವಳಿಗಳ ಕಾರ್ಯಕರ್ತರು, ಮುಖಂಡರು ಚಿಂತನಾ ಸಮಾವೇಶದಲ್ಲಿ ಭಾಗವಹಿಸಿದ್ದರು.

ರೈತ-ದಲಿತ-ಕಾರ್ಮಿಕ-ಮಹಿಳಾ ಮತ್ತು ಕೋಮುಸೌಹಾರ್ದ ಹಾಗೂ ಸಂವಿಧಾನ ಉಳಿಸಿ ಚಳವಳಿಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಹಲವು ಮಹನೀಯರುಗಳು ಚಿಂತನಾ ಸಮಾವೇಶದಲ್ಲಿ ಉಪಸ್ಥಿತರಿದ್ದು ತಮ್ಮ ತಮ್ಮ ವಿಚಾರಗಳನ್ನು ಮಂಡಿಸಿದರು.

# ಮುಜರಾಯಿ ದೇವಾಲಯಗಳಲ್ಲಿ ಪ್ರಸಾದ ತಯಾರಿಕೆಗೆ ಕೆಎಂಎಫ್ ನಂದಿನಿ ತುಪ್ಪ ಕಡ್ಡಾಯ

**ಬೆಂಗಳೂರು,ಸೆ.20;** ತಿರುಪತಿ ಲಡ್ಡು ಪ್ರಸಾದದಲ್ಲಿ ಹಂದಿ ಮತ್ತು ದನದ ಕೊಬ್ಬಿನ ಅಂಶವಿದೆ ಎಂಬ ವರದಿಗಳಿಂದ ಎಚ್ಚೆತ್ತುಕೊಂಡಿರುವ ರಾಜ್ಯ ಸರ್ಕಾರ ಮುಜರಾಯಿ ವ್ಯಾಪ್ತಿಗೆ ಬರುವ ಎಲ್ಲಾ ದೇವಾಲಯಗಳಲ್ಲಿ ಪ್ರಸಾದ ತಯಾರಿಕೆಯಲ್ಲಿ ಇನ್ನು ಮುಂದೆ ಕಡ್ಡಾಯವಾಗಿ ಕೆಎಂಎಫ್ ನಂದಿನಿ ತುಪ್ಪವನ್ನು ಬಳಸುವಂತೆ ಆದೇಶಿಸಿದೆ.




ರಾಜ್ಯದಲ್ಲಿ 34 ಸಾವಿರ ಮುಜರಾಯಿ ದೇವಾಲಯಗಳಿದ್ದು ಅವುಗಳಲ್ಲಿ 205 ಎ ವರ್ಗದಡಿ, 193 ಬಿ ವರ್ಗದಲ್ಲಿವೆ, ಉಳಿದವು ಸಿ ವರ್ಗದಲ್ಲಿದ್ದು ಈ ದೇವಾಲಯಗಳಲ್ಲಿ ಪೂಜೆ ನಂತರ ಭಕ್ತರಿಗೆ ಪ್ರಸಾದ ನೀಡಲಾಗುತ್ತದೆ. ಪ್ರಸಾದದಲ್ಲಿ ನಂದಿನಿ ತುಪ್ಪದ ಘಮಲು ಇರುವಂತೆ ನೋಡಿಕೊಳ್ಳಬೇಕೆಂದು ಸೂಚಿಸಿದೆ.

ತಿರುಪತಿ ಹೊರತುಪಡಿಸಿದರೆ ಕರ್ನಾಟಕದ ದೇವಾಲಯಗಳಲ್ಲಿ ದನದ ಕೊಬ್ಬು, ಮೀನಿನ ಎಣ್ಣೆ ಮಿಶ್ರಿತ ಪ್ರಸಾದ ಹಂಚಿದ ಘಟನೆಗಳು ನಡೆದಿಲ್ಲ. ಆದರೂ, ಸಾರ್ವಜನಿಕ ಹಿತದೃಷ್ಟಿಯಿಂದ ನಮ್ಮ ದೇವಾಲಯಗಳ ಪ್ರಸಾದದಲ್ಲಿ ನಂದಿನಿ ಬ್ರ್ಯಾಂಡ್‌ಗೆ ಆದ್ಯತೆ ನೀಡಲು ಉದ್ದೇಶಿಸಿದೆ.

ರಾಜ್ಯದ ಮಜುರಾಯಿ ದೇವಾಲಯಗಳಲ್ಲಿನ ಪ್ರಸಾದವನ್ನು ಪ್ರಯೋಗಾಲಯದಲ್ಲಿ ಪರೀಕ್ಷೆಗೆ ಒಳಪಡಿಸಲು ಇಲಾಖೆ ತೀರ್ಮಾನಿಸಿದೆ. ಕೇಂದ್ರ ಸಚಿವ ಪ್ರಲ್ಹಾದ್ ಜೋಷಿ, ರಾಜ್ಯದ ಮುಜರಾಯಿ ದೇವಾಲಯಗಳಲ್ಲಿ ನೀಡುವ ಪ್ರಸಾದದ ಬಗ್ಗೆಯೂ ಎಚ್ಚರ ವಹಿಸುವಂತೆ ಸಲಹೆ ಮಾಡಿದ್ದರು. ಅಷ್ಟೇ ಅಲ್ಲ, ಈ ಬಗ್ಗೆ ಪ್ರಯೋಗಾಲಯಕ್ಕೆ ಕಳುಹಿಸಿ ತಪಾಸಣೆಗೆ ಒಳಪಡಿಸುವಂತೆಯೂ ಸೂಚಿಸಿದ್ದರು. ಲಡ್ಡು ಪ್ರಸಾದದ ಬಗ್ಗೆ ಸಾರ್ವಜನಿಕರಲ್ಲಿ ವ್ಯಾಪಕ ಚರ್ಚೆ ಆರಂಭಗೊಂಡ ನಂತರ, ಮುಜರಾಯಿ ಸಚಿವ ರಾಮಲಿಂಗಾ ರೆಡ್ಡಿ ಅಧಿಕಾರಿಗಳ ಜೊತೆ ಸಭೆ ನಡೆಸಿ ಪ್ರಸಾದ ತಯಾರಿಕೆ ಬಗ್ಗೆ ಮಾಹಿತಿ ಪಡೆದರು. ಯಾವ ದೇವಸ್ಥಾನಗಳಲ್ಲಿ ಪೂಜೆ ನಂತರ ಪ್ರಸಾದ ನೀಡುತ್ತಾರೋ, ಅಂತಹ ಎಲ್ಲಾ ಕಡೆಗಳಲ್ಲಿ ಕಡ್ಡಾಯವಾಗಿ ನಂದಿನಿ ತುಪ್ಪವನ್ನೇ ಬಳಸಬೇಕು ಮತ್ತು ಆಗಿಂದಾಗ್ಯೆ ಪ್ರಸಾದದ ಗುಣಮಟ್ಟವನ್ನು ತಿಳಿಯಲು ಪ್ರಯೋಗಾಲಯಕ್ಕೆ ತಪಾಸಣೆಗೆ ಕಳುಹಿಸಬೇಕು.

ವಾರ್ಷಿಕ 25 ಲಕ್ಷ ರೂ.ಗಿಂತ ಹೆಚ್ಚು ಆದಾಯ ಬರುವ ದೇವಾಲಯಗಳಲ್ಲಿ ದೊಡ್ಡ ಪ್ರಮಾಣದಲ್ಲೇ ಪ್ರಸಾದ ವಿನಿಯೋಗ ಮತ್ತು ಮಾರಾಟವಾಗುತ್ತಿದೆ. ಇಂತಹ ದೇವಾಲಯಗಳಲ್ಲಿ ಯಾವುದೇ ಲೋಪ ಬರದಂತೆ ಸಂಬಂಧಪಟ್ಟ ಆಡಳಿತಾಧಿಕಾರಿಗಳು ಮುಂಜಾಗ್ರತೆ ವಹಿಸುವಂತೆಯೂ ಆದೇಶಿಸಿದ್ದಾರೆ.

# ಮುಸ್ಲಿಂ ಪ್ರಾಬಲ್ಯ ಪ್ರದೇಶ ಪಾಕಿಸ್ತಾನಕ್ಕೆ ಹೋಲಿಕೆ: ಹೈಕೋರ್ಟ್ ನ್ಯಾಯಧೀಶರ ವಿರುದ್ಧ ಸುಪ್ರೀಂ ಸ್ವಯಂಪ್ರೇರಿತ ಪ್ರಕರಣ ದಾಖಲು

**ನವದೆಹಲಿ, ಸೆ.20:** ವಿಚಾರಣೆ ವೇಳೆ ಬೆಂಗಳೂರಿನ ನಗರವೊಂದನ್ನು ಪಾಕಿಸ್ತಾನಕ್ಕೆ ಹೋಲಿಸಿ ವಿವಾದಾತ್ಮಕ ಹೇಳಿಕೆ ನೀಡಿದ ಕರ್ನಾಟಕ ಹೈಕೋರ್ಟ್ ನ್ಯಾಯಮೂರ್ತಿ ವಿ ಶ್ರೀಶಾನಂದ ವಿರುದ್ಧ ಸುಪ್ರೀಂ ಕೋರ್ಟ್ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡಿದೆ.



ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್ ನೇತೃತ್ವದ ಸಾಂವಿಧಾನಿಕ ಪೀಠವು ಕರ್ನಾಟಕ ಹೈಕೋರ್ಟ್ ರಿಜಿಸ್ಟ್ರಾರ್ ಜನರಲ್ ಅವರಿಂದ ವರದಿಯನ್ನು ಕೋರಿದೆ. ನ್ಯಾಯಲಯದ ವಿಚಾರಣೆಯ ಸಂದರ್ಭದಲ್ಲಿ ಕರ್ನಾಟಕ ಹೈಕೋರ್ಟ್ ನ್ಯಾಯಾಧೀಶ ವಿ ಶ್ರೀಶಾನಂದ ಅವರು ಮಾಡಿದ ಕೆಲವು ಕಾಮೆಂಟ್‌ಗಳ ಬಗ್ಗೆ ನಮ್ಮ ಗಮನ ಸೆಳೆಯಲಾಗಿದೆ.

ನಮಗೆ ಸಹಾಯ ಮಾಡಲು ನಾವು ಈ ವಿಚಾರದಲ್ಲಿ ಅಟಾರ್ನಿ ಜನರಲ್ ಆರ್ ವೆಂಕಟರಮಣಿ ಮತ್ತು ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರ ಸಹಾಯವನ್ನೂ ಕೋರಿದ್ದೇವೆ ಎಂದು ಸಿಜೆಐ ಹೇಳಿದರು.

ನ್ಯಾಯಾಲಯಕ್ಕೆ ವರದಿ ಸಲ್ಲಿಸಲು ನಾವು ಹೈಕೋರ್ಟ್ನ ರಿಜಿಸ್ಟ್ರಾರ್ ಜನರಲ್ ಅವರನ್ನು ಕೇಳುತ್ತೇವೆ. ಕರ್ನಾಟಕ ಹೈಕೋರ್ಟಿನ ಮುಖ್ಯ ನ್ಯಾಯಾಧೀಶರಿಂದ ಆಡಳಿತಾತ್ಮಕ ನಿರ್ದೇಶನಗಳನ್ನು ಕೋರಿದ ನಂತರ ಈ ವ್ಯಾಯಾಮವನ್ನು 2 ವಾರಗಳಲ್ಲಿ ಕೈಗೊಳ್ಳಬಹುದು.

ಇಂತಹ ಸಂದರ್ಭದಲ್ಲಿ ಕೆಲವು ಮೂಲಭೂತ ಮಾರ್ಗಸೂಚಿಗಳನ್ನು ಹಾಕಬಹುದು ಎಂದು ಸುಪ್ರೀಂಕೋರ್ಟ್ ವಿಚಾರಣೆ ಸಂದರ್ಭದಲ್ಲಿ ಹೇಳಿದೆ. ಕರ್ನಾಟಕ ಹೈಕೋರ್ಟ್ ನ್ಯಾಯಮೂರ್ತಿ ಶ್ರೀಶಾನಂದ ಅವರ ಎರಡು ವಿಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿವೆ, ಒಂದು ವೀಡಿಯೊದಲ್ಲಿ, ಅವರು ಪಶ್ಚಿಮ ಬೆಂಗಳೂರಿನಲ್ಲಿ ಮುಸ್ಲಿಂ ಪ್ರಾಬಲ್ಯದ ಉಪ-ಪ್ರದೇಶವನ್ನು 'ಪಾಕಿಸ್ತಾನ' ಎಂದು ಉಲ್ಲೇಖಿಸಿದ್ದಾರೆ. ಇನ್ನೊಂದು ವೀಡಿಯೊದಲ್ಲಿ, ಮಹಿಳಾ ವಕೀಲರನ್ನು ಛೀಮಾರಿ ಹಾಕಿ, ಬಳಿಕ ವ್ಯಂಗ್ಯ ಮಾಡಿರುವುದು ಕಾಣಬಹುದು.

# ನಾಗಮಂಗಲ ಗಲಭೆ ತನಿಖೆ ಎನ್ಐಎಗೆ ವಹಿಸಲು ಆಗ್ರಹ

**ಮಂಡ್ಯ, ಸೆ.20:** ಮಂಡ್ಯದ ನಾಗಮಂಗಲದಲ್ಲಿ ನಡೆದ ಗಲಭೆಗೆ ಸಂಬಂಧಪಟ್ಟಂತೆ ಮಾಜಿ ಡಿಸಿಎಂ ಅಶ್ವಥ್ ನಾರಾಯಣ್ ನೇತೃತ್ವದ ಬಿಜೆಪಿಯ ಸತ್ಯಶೋಧನಾ ಸಮಿತಿ ಇಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರರಿಗೆ ವರದಿಯನ್ನು ಸಲ್ಲಿಕೆ ಮಾಡಿದ್ದು ಇದೇ ವೇಳೆ, ಕೃತ್ಯದ ಹಿಂದೆ ನಿಷೇಧಿತ ಪಿಎಫ್ಐ ಸಂಘಟನೆಯ ಕೈವಾಡವಿದ್ದು, ತನಿಖೆಯನ್ನು ಎನ್ಐಎಗೆ ವಹಿಸಬೇಕೆಂದು ಆಗ್ರಹಿಸಿದ್ದಾರೆ.



ಈ ಬಗ್ಗೆ ಮಾತನಾಡಿದ ಮಾಜಿ ಡಿಸಿಎಂ ಅಶ್ವತ್ ನಾರಾಯಣ ಈ ಗಲಭೆಗೆ ಪೊಲೀಸರ ವೈಫಲ್ಯವೇ ಕಾರಣ ಎಂಬ ಆರೋಪ ಮಾಡಿದ್ದಾರೆ ಸರ್ಕಾರ ಬಂದು ಕೋಮುವಿನ ಓಲೈಕೆ ತುಷ್ಟೀಕರಣದ ಸಲುವಾಗಿ ಪೊಲೀಸರ ಕೈಗಳನ್ನು ಕಟ್ಟಿ ಹಾಕಿದೆ ಹೀಗಾಗಿ ನಾಗಮಂಗಲದಲ್ಲಿ ಇಷ್ಟು ದೊಡ್ಡ ಗಲಭೆ ನಡೆದಿದೆ ಎಂದು ಹೇಳಿದ್ದಾರೆ.

ರಾಜ್ಯದಲ್ಲಿ ಬಿಜೆಪಿ ಸರ್ಕಾರ ಆಡಳಿತದಲ್ಲಿದ್ದಾಗ ಒಂದೇ ಒಂದು ಕಡೆ ಕೂಡ ಈ ರೀತಿಯ ಘಟನೆಗಳು ನಡೆದಿರಲಿಲ್ಲ. ಆದರೆ ಈಗ ಕಾಂಗ್ರೆಸ್ ಆಡಳಿತದಲ್ಲಿ ಮತೀಯ ಶಕ್ತಿಗಳ ಕೈ ಮೇಲಾಗಿದ್ದು ಪಿ.ಎಫ್.ಐ ನಂತಹ ನಿಷೇಧಿತ ಸಂಘಟನೆಗಳ ಕೈವಾಡ ಈ ಘಟನೆಗಳ ಹಿಂದಿದೆ ಎಂದು ಆರೋಪಿಸಿದ್ದಾರೆ.

# ಭವಾನಿ ರೇವಣ್ಣ ಪ್ರಕರಣ ಎರಡು ವಾರ ಮುಂದೂಡಿಕೆ

**ನವದೆಹಲಿ, ಸೆ.20:** ಭವಾನಿ ರೇವಣ್ಣ ಅವರಿಗೆ ಹೈಕೋರ್ಟ್ ನೀಡಿರುವ ಮಧ್ಯಂತರ ಜಾಮೀನು ಪ್ರಶ್ನಿಸಿ ಎಸ್ಐಟಿ ಸಲ್ಲಿಸಿರುವ ಮೇಲ್ಮನವಿ ಅರ್ಜಿ ವಿಚಾರಣೆಯನ್ನು ಸುಪ್ರೀಂಕೋರ್ಟ್ ಎರಡು ವಾರಗಳಿಗೆ ಮುಂದೂಡಿದೆ. ನ್ಯಾ.ಸೂರ್ಯಕಾಂತ್ ನೇತೃತ್ವದ ದ್ವಿ ಸದಸ್ಯ ಪೀಠ ವಿಚಾರಣೆ ಮುಂದೂಡಿದೆ.



ಭವಾನಿ ರೇವಣ್ಣ ಪರ ವಾದ ಮಂಡಿಸಿದ ವಕೀಲ ಬಾಲಾಜಿ ಶ್ರೀನಿವಾಸನ್ ಅವರಿಗೆ ಪ್ರಕರಣದ ಅಫಿಡೆವಿಟ್ ಸಲ್ಲಿಸಲು ಸಮಯ ನೀಡುವಂತೆ ಮನವಿ ಮಾಡಿದರು ಅಲ್ಲದೇ, ಪ್ರಕರಣದಲ್ಲಿ ಚಾರ್ಜ್ ಶೀಟ್ ಸಲ್ಲಿಕೆಯಾಗಿದೆ, ಇತರ ಆರೋಪಿಗಳಿಗೆ ಜಾಮೀನು ಮಂಜೂರಾಗಿದೆ. ಭವಾನಿ ರೇವಣ್ಣ ತನಿಖೆಗೆ ಸಹಕರಿಸಿದ್ದಾರೆ ಹೀಗಾಗೀ ಜಾಮೀನು ರದ್ದು ಮಾಡಬಾರದು ಎಂದು ಮನವಿ ಮಾಡಿದರು.

ಸದ್ಯ ಪ್ರಕರಣದ ಮೆರಿಟ್ಗೆ ಹೋಗುವುದಿಲ್ಲ ಎಂದು ಹೇಳಿದ ಪೀಠ, ಶ್ರೀನಿವಾಸನ್ ಅವರಿಗೆ ಎರಡು ವಾರದಲ್ಲಿ ಅಫಿಡವಿಟ್ ಸಲ್ಲಿಸುವಂತೆ ವಿಚಾರಣೆ ಮುಂದೂಡಿತು. ಜುಲೈ 10 ರಂದು, ಪ್ರಕರಣದಲ್ಲಿ ಭವಾನಿ ರೇವಣ್ಣ ಅವರಿಗೆ ನೀಡಲಾದ ನಿರೀಕ್ಷಣಾ ಜಾಮೀನನ್ನು ರದ್ದುಗೊಳಿಸಲು ಸುಪ್ರೀಂಕೋರ್ಟ್ ನಿರಾಕರಿಸಿತು ಮತ್ತು ಕರ್ನಾಟಕ ಸರ್ಕಾರವು ಕರ್ನಾಟಕ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಸಲ್ಲಿಸಿದ ಮೇಲ್ಮನವಿಯ ಬಗ್ಗೆ ಅವರ ಪ್ರತಿಕ್ರಿಯೆಯನ್ನು ಕೇಳಿತ್ತು.

# ಜಮೀನು ಮರು ವಶಕ್ಕೆ ಪ್ರಕ್ರಿಯೆ ಆರಂಭಿಸಲು ಸೂಚನೆ

**ಬೆಂಗಳೂರು, ಸೆ.20:** ರಾಜಧಾನಿ ಬೆಂಗಳೂರು, ಪೂರ್ವ ತಾಲೂಕು, ಕೆ.ಆರ್.ಪುರ ಹೋಬಳಿ ಕೊತ್ತನೂರಿನ ಸರ್ವೆ ನಂ.48ರಲ್ಲಿ ಅರಣ್ಯ ಇಲಾಖೆಗೆ ವಹಿಸಲಾದ 22. ಎಕರೆ 8 ಗುಂಟೆ ಜಮೀನಿನ ಮರು ವಶಕ್ಕೆ ಪ್ರಕ್ರಿಯೆ ಆರಂಭಿಸಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ.



ಬೆಂಗಳೂರು ನಗರದಲ್ಲಿ ಹಸಿರು ಹೊದಿಕೆ ಹೆಚ್ಚಿಸಲು 1999-2000 ಸಾಲಿನಲ್ಲಿ ಕೊತ್ತನೂರು ಗ್ರಾಮದ ಸರ್ವೆ ನಂ.48ರಲ್ಲಿ 22.08 ಎಕರೆ ಜಮೀನಿನಲ್ಲಿ ನೆಡುತೋಪು ಅಭಿವೃದ್ಧಿಪಡಿಸುವ ಸಲುವಾಗಿ ಈ ಭೂಮಿಯನ್ನು ಅರಣ್ಯ ಇಲಾಖೆಗೆ ವಹಿಸಲಾಗಿದೆ.

ಆದರೆ ಈ ಜಮೀನು ವಶಕ್ಕೆ ಪಡೆದು ಅರಣ್ಯ ಬೆಳೆಸುವಲ್ಲಿ ವಿಫಲವಾಗಿರುವ ಇಲಾಖೆಯ ಹಿಂದಿನ ಅಧಿಕಾರಿಗಳ ಬಗ್ಗೆ ಸಚಿವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಅರಣ್ಯ ಇಲಾಖೆಗೆ ಮಂಜೂರಾದ 22.08 ಎಕರೆ ಭೂಮಿಯ ಪೈಕಿ 13 ಎಕರೆ ಜಮೀನನ್ನು ಅರಣ್ಯ ಇಲಾಖೆಗೆ ವಹಿಸಲಾಗಿದೆ ಎಂದು ಅಂದಿನ ಬೆಂಗಳೂರು ನಗರ ಜಿಲ್ಲಾಧಿಕಾರಿಗಳು ಆದೇಶ ಸಂಖ್ಯೆ ಆರ್.ಎಚ್.ಎಸ್.(2) 44/82-83 ಡಿ.ಟಿ. 25.01.2000ರ ಆದೇಶದಂತೆ ಪಹಣಿ (ಆರ್.ಟಿ.ಸಿ.)ಯಲ್ಲಿ ನಮೂದಾಗಿದೆ. ಈ ಜಮೀನಿನ ನಕ್ಷೆ ಪಡೆದು ಉಳಿದ 9 ಎಕರೆಯ ದಾಖಲೆಗಳನ್ನೂ ಮಾಡಿಸಿ, ಸುಮಾರು 700 ಕೋಟಿ ರೂ. ಬೆಲೆ ಬಾಳುವ ಜಮೀನು ಒತ್ತುವರಿಯಾಗಿದ್ದರೆ ಅದನ್ನು ಅರಣ್ಯ ಇಲಾಖೆಯ ವಶಕ್ಕೆ ಪಡೆಯಲು 64(ಎ) ಪ್ರಕ್ರಿಯೆ ಆರಂಭಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿ ಈಶ್ವರ ಖಂಡ್ರೆ ಟಿಪ್ಪಣಿಯನ್ನೂ ನೀಡಿದ್ದಾರೆ.

ಈಶ್ವರ ಖಂಡ್ರೆ ಅವರು ಅರಣ್ಯ ಸಚಿವರಾದ ಬಳಿಕ ಇದೇ ಕೊತ್ತನೂರು ಗ್ರಾಮದ ಸರ್ವೆ ನಂಬರ್ 47ರಲ್ಲಿ 2006ರಲ್ಲಿ ಅರಣ್ಯ ಇಲಾಖೆಗೆ ಮಂಜೂರಾಗಿ ಒತ್ತುವರಿಯಾಗಿದ್ದ 17 ಎಕರೆ 34 ಗುಂಟೆ ಜಮೀನನ್ನು ಮರು ವಶಪಡಿಸಿಕೊಂಡು ಇಲ್ಲಿ ಸಸ್ಯೋದ್ಯಾನ ಮತ್ತು ಪಕ್ಷಿಲೋಕ ನಿರ್ಮಿಸಲು ಶಂಕುಸ್ಥಾಪನೆಯನ್ನೂ ನೆರವೇರಿಸಿದ್ದರು.

ಅರಣ್ಯ ಇಲಾಖೆಗೆ ಮಂಜೂರಾಗಿದ್ದ ಈ ಭೂಮಿಯನ್ನು 17 ವರ್ಷಗಳ ತರುವಾಯ 2023ರ ಜನವರಿಯಲ್ಲಿ ಅಂದಿನ ಉಪ ವಿಭಾಗಾಧಿಕಾರಿಯಾಗಿದ್ದ ಎಂ.ಜಿ. ಶಿವಣ್ಣ ಮತ್ತು ತಹಶೀಲ್ದಾರ್ ಅಜಿತ್ ರೈ ಏಕಪಕ್ಷೀಯವಾಗಿ 'ಸರ್ಕಾರಿ ಭೂಮಿ' ಎಂದು ಬದಲಾಯಿಸಿ.

ಅರಣ್ಯ ಭೂಮಿ ಒತ್ತುವರಿ ಮಾಡಿದ್ದವರಿಗೆ ಅನುಕೂಲ ಮಾಡಿಕೊಡುವ ಪ್ರಯತ್ನ ಮಾಡಿದ್ದರು. ಕಾನೂನು ಬಾಹಿರವಾಗಿ ಅರಣ್ಯ ಭೂಮಿಯನ್ನು ಕಂದಾಯ ಎಂದು ಮಾರ್ಪಾಡು ಮಾಡಿದ್ದ ಅಂದಿನ ಅಸಿಸ್ಟೆಂಟ್ ಕಮಿಷನರ್ ಮತ್ತು ತಹಶೀಲ್ದಾರ್ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸುವಂತೆ ಆದೇಶ ನೀಡಿದ್ದರು. ಇಬ್ಬರು ಹಿರಿಯ ಕೆಎಎಸ್ ಅಧಿಕಾರಿಗಳ ವಿರುದ್ಧ ಅರಣ್ಯ ಸಂರಕ್ಷಣಾ ಕಾಯ್ದೆ 1980ರ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರಿನಲ್ಲಿ ನಡೆದ ಪಿ.ಆರ್.ತಿಪ್ಪೇಸ್ವಾಮಿ ಜನ್ಮಶತಮಾನೋತ್ಸವ ಸಮಾರೋಪ ಸಮಾರಂಭ ಉದ್ಘಾಟಿಸಿ ಪ್ರಶಸ್ತಿ ವಿತರಿಸಿದರು. ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹದೇವಪ್ಪ, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎಚ್.ಎಂ.ರೇವಣ್ಣ, ಕೊಪ್ಪಳ ವಿವಿ ಕುಲಪತಿ ಬಿ.ಕೆ.ರವಿ, ಪ್ರತಿಷ್ಠಾನದ ಕಾರ್ಯದರ್ಶಿ ಪತ್ರಕರ್ತ ರುದ್ರಣ್ಣ ಹರ್ತಿಕೋಟೆ ಸೇರಿ ಹಲವು ಪ್ರಮುಖರು ಉಪಸ್ಥಿತರಿದ್ದರು. ಪಿ.ಆರ್.ತಿಪ್ಪೇಸ್ವಾಮಿ ಪ್ರತಿಷ್ಠಾನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

# ಬಿಜೆಪಿ ನಾಯಕರೆಲ್ಲ ಎಚ್ಐವಿ ಟೆಸ್ಟ್ ಮಾಡಿಸಿಕೊಳ್ಳಿ

**ಬೆಂಗಳೂರು, ಸೆ.20:** ಅತ್ಯಾಚಾರ ಪ್ರಕರಣದಲ್ಲಿ ಮತ್ತೆ ಜೈಲುಪಾಲಾಗಿರುವ ಬಿಜೆಪಿ ಶಾಸಕ ಮುನಿರತ್ನ ಅಕ್ರಮಗಳಿಗೆ ಸಂಬಂಧಿಸಿದ ಒಂದೊಂದೇ ವಿಚಾರಗಳು ಈಗ ಬಯಲಾಗುತ್ತಿವೆ. ಅತ್ಯಾಚಾರ ಪ್ರಕರಣದಲ್ಲಿ ಶಾಸಕ ಮುನಿರತ್ನ ಅವರನ್ನ ಪೊಲೀಸರು ಮತ್ತೆ ಅರೆಸ್ಟ್ ಮಾಡಿದ್ದು, ಸದ್ಯ ರಾಜ್ಯ ರಾಜಕೀಯದಲ್ಲಿ ಏಡ್ಸ್ ಹನಿಟ್ರ್ಯಾಪ್ ಸಾಕಷ್ಟು ಸದ್ದು ಮಾಡುತ್ತಿದೆ.




ಈ ಕುರಿತು ಶಾಸಕ ಕುಣಿಗಲ್ ರಂಗನಾಥ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಭೇಟಿ ಬಳಿಕ ಮಾಧ್ಯಮಗಳ ಜೊತೆಗೆ ಮಾತನಾಡಿ, ಹೆಚ್ಐವಿ ಹರಡಿಸುವ ಮುನಿರತ್ನ ಪ್ರಯತ್ನ ನಿಜಕ್ಕೂ ಆಘಾತ ಕಾರಿ. ಇದರಲ್ಲಿ ಮುನಿರತ್ನ ಒಬ್ಬರೇ ಇಲ್ಲ. ರಾಜರಾಜೇಶ್ವರಿ ನಗರ ಸೇರಿ ಹಲವು ಕಡೆ ಸೋಂಕಿತರು ಇದ್ದಾರೆ. ಹೀಗಾಗಿ ಇದರ ಬಗ್ಗೆ ಸಮಗ್ರ ತನಿಖೆ ಮಾಡಬೇಕು.

ಕೂಡಲೇ ಒಕ್ಕಲಿಗ ಹಾಗೂ ದಲಿತ ಶಾಸಕರಿಂದ ಗವರ್ನರ್ ಭೇಟಿ ಮಾಡುತ್ತೇವೆ. ಬಹಳಷ್ಟು ಬಿಜೆಪಿ ನಾಯಕರಿಗೆ ಹೆಚ್ಐವಿ ಇನ್ಫೆಕ್ಷನ್ ಆಗಿರಬಹುದು, ಮುನಿರತ್ನ ಜೊತೆ ಯಾರು ಯಾರು ಓಡಾಡಿದ್ರೋ ಅವರ ಎಲ್ಲರು ಎಚ್ಐವಿ ಟೆಸ್ಟ್ ಮಾಡಿಸಿಕೊಳ್ಳಬೇಕು.

ಮುಖ್ಯಮಂತ್ರಿ ಶೀಘ್ರದಲ್ಲೇ ಗೃಹ ಸಚಿವರಾದ ಪರಮೇಶ್ವರ್ ಅವರ ಜೊತೆ ಚರ್ಚೆ ಮಾಡಿ ತೀರ್ಮಾನ ಮಾಡುತ್ತೇವೆ ಎಂದಿದ್ದಾರೆ ಎಂದರು. ಜಾತಿ ನಿಂದನೆ ಕುರಿತು ಮುನಿರತ್ನ ಮಾತಾಡಿದ ಹೇಳಿಕೆಗಳ ಬಗ್ಗೆ ಸಿಎಂ ಗಮನಕ್ಕೆ ತಂದಿದ್ದೇವೆ. ನಿನ್ನೆ ಸಮುದಾಯದ ಸಭೆ ಮಾಡಿ, ಇಂದು ಸಿಎಂ ಭೇಟಿ ಮಾಡಿದ್ದೇವೆ. ಎಸ್ಐಟಿ ತನಿಖೆ ಮಾಡುವಂತೆ ಸಿಎಂಗೆ ಒತ್ತಡ ಹಾಕಿದ್ದೇವೆ ಎಂದು ಶಾಸಕ ಕುಣಿಗಲ್ ರಂಗನಾಥ್ ಹೇಳಿದರು.

### ಬಿಜೆಪಿ ನಾಯಕರು ಎಚ್ಐವಿ ಪರೀಕ್ಷೆ ಮಾಡಿಸಿಕೊಂಡು ಸಹಕರಿಸಿ: ಕಾಂಗ್ರೆಸ್

ಮುನಿರತ್ನರ ದ್ವೇಷದ ರಾಜಕೀಯಕ್ಕೆ, ಭ್ರಷ್ಟಾಚಾರಕ್ಕೆ ಗುರಿಯಾದವರಲ್ಲಿ ಬಿಜೆಪಿ ನಾಯಕರೂ ಹೊರತಾಗಿಲ್ಲ.

ಮಾಧ್ಯಮ ವರದಿಗಳ ಪ್ರಕಾರ ಸ್ವತಃ ಬಿಜೆಪಿ ನಾಯಕ ಅಶೋಕ್ ಅವರಿಗೆ ಏಡ್ಸ್ ಸೋಂಕು ತಗುಲಿಸಲು ಪ್ರಯತ್ನಿಸಿದ್ದ ಅಘಾತಕಾರಿ ಸಂಗತಿ ಹೊರಬಂದಿದೆ. ಇಂತಹ ವಿಕೃತರತ್ನನನ್ನು ತಲೆ ಮೇಲೆ ಹೊತ್ತು ಮೆರೆಸುವ ಬಿಜೆಪಿ ಪಕ್ಷದ ನಾಯಕರು ಊಖಗಿ ಪರೀಕ್ಷೆ ಮಾಡಿಸಿಕೊಂಡು ಏಡ್ಸ್ ನಿಯಂತ್ರಣದ ಅಭಿಯಾನಕ್ಕೆ ಸಹಕರಿಸಬೇಕು ಎಂದು ಕಾಂಗ್ರೆಸ್ ವ್ಯಂಗ್ಯವಾಗಿ ಟ್ವೀಟ್ ಮಾಡಿದೆ.

### ಮುನಿರತ್ನ ನೇತೃತ್ವದಲ್ಲಿ ಏಡ್ಸ್ ಸೋಂಕು ಹರಡುವ ಜಾಲ; ಸಮಗ್ರ ತನಿಖೆಗೆ ಮಾಜಿ ಸಂಸದ ಡಿ.ಕೆ.ಸುರೇಶ್ ಒತ್ತಾಯ

**ಮಾಜಿ ಸಚಿವ, ಬಿಜೆಪಿ ಮುನಿರತ್ನ ಅವರ ನೇತೃತ್ವದಲ್ಲಿ ಏಡ್ಸ್ ಸೋಂಕನ್ನು ಅವರ ವಿರೋಧಿಗಳಿಗೆ ಹರಡಿಸುವ ಯತ್ನ ನಡೆದಿದೆ. ಅವರ ನೇತೃತ್ವದಲ್ಲಿ ಸೋಂಕನ್ನು ಹರಡಿಸುವ ಜಾಲವೇ ಸಕ್ರಿಯವಾಗಿದೆ. ಇದರ ವಿರುದ್ಧ ಸರ್ಕಾರ ವಿಶೇಷ ತನಿಖೆ ನಡೆಸಬೇಕು ಎಂದು ಮಾಜಿ ಸಂಸದ ಡಿ.ಕೆ.ಸುರೇಶ್ ಆಗ್ರಹಿಸಿದರು.**




ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಶುಕ್ರವಾರ ನವದೆಹಲಿಯಲ್ಲಿ ಪರಮವೀರ ಚಕ್ರ ಪ್ರಶಸ್ತಿ ಪುರಸ್ಕೃತರ ಹೆಸರಿನ ಅಂಡಮಾನ್ ಮತ್ತು ನಿಕೋಬಾರ್ ದ್ವೀಪಸಮೂಹದ 21 ದ್ವೀಪಗಳಿಗೆ ಮೊದಲ-ರೀತಿಯ ತೆರೆದ ನೀರಿನ ಈಜು ದಂಡಯಾತ್ರೆಯನ್ನು ಫ್ಲ್ಯಾಗ್ ಮಾಡಿದರು.

### ಪ್ರವಾಸೋದ್ಯಮ ರಾಯಭಾರಿ ಮೈಲಿಗಲ್ಲು ಶ್ರೀಮತಿ ಗ್ಲೋಬಲ್ ಇಂಟರ್‌ನ್ಯಾಷನಲ್

# ಕಿರೀಟ ಮುಡಿಗೇರಿಸಿಕೊಂಡ ಮುಂಬಯಿ ಗೃಹಿಣಿ ಪ್ರಭಾ ಎನ್.ಪಿ ಸುವರ್ಣ




**ಮುಂಬಯಿ, ಸೆ.20–** ಮೈಲ್‌ಸ್ಟೋನ್ ಮಿಸ್ ಮತ್ತು ಮಿಸೆಸ್ ಗ್ಲೋಬಲ್ ಇಂಟರ್‌ನ್ಯಾಷನಲ್, ವರ್ಲ್ಡ್ ಪೇಜೆಂಟ್-2024 ಸ್ಪರ್ಧೆಯು ಇತ್ತೀಚೆಗೆ (ಸೆ.11 ರಿಂದ ಸೆ.14 ) ಗಲ್ಫ್ ರಾಷ್ಟ್ರದ ದುಬಾಯಿ ಯುಎಇ ಅಲ್ಲಿನ ಹೊಟೇಲ್ ಅಜ್‌ಮಾನ್ ಪ್ಯಾಲೇಸ್ ಸಭಾಗೃಹದಲ್ಲಿ ನೇರವೇರಿದ್ದು, ಭಾರತದ ಪ್ರತಿನಿಧಿಯಾಗಿ ಮುಂಬಯಿ ಇಲ್ಲಿನ ಶ್ರೀಮತಿ ಪ್ರಭಾ ಎನ್.ಪಿ ಸುವರ್ಣ ಸ್ಪರ್ಧಿಸಿದ್ದು ಅವರು 'ದಿ ಮೈಲ್‌ಸ್ಟೋನ್ ಮಿಸೆಸ್ ಗ್ಲೋಬಲ್ ಇಂಟರ್‌ನ್ಯಾಶನಲ್, ವರ್ಲ್ಡ್ ಪೇಜೆಂಟ್ 2024-ಪ್ರವಾಸೋದ್ಯಮ ರಾಯಭಾರಿ ಮೈಲಿಗಲ್ಲು ಶ್ರೀಮತಿ ಗ್ಲೋಬಲ್ ಇಂಟರ್‌ನ್ಯಾಷನಲ್ ಕಿರೀಟ' ಮುಡಿಗೇರಿಸಿ ಕೊಂಡಿದ್ದಾರೆ.

ಪ್ರತಿಷ್ಠಿತ ಈ ಸ್ಪರ್ಧೆಯಲ್ಲಿ ಯುಎಸ್‌ಎ, ಭಾರತ, ಬ್ರೆಜಿಲ್, ಫ್ರಾನ್ಸ್, ಇಟಲಿ, ಆಸ್ಟ್ರೇಲಿಯಾ, ಜಪಾನ್, ದಕ್ಷಿಣ ಆಫ್ರಿಕಾ, ಕೆನಡಾ, ಜರ್ಮನಿ, ಚೀನಾ, ಸೌದಿ ಅರೇಬಿಯಾ, ಅಜರ್‌ಬೈಜಾನ್, ಯುನೈಟೆಡ್ ಕಿಂಗ್‌ಡಮ್ ಸೇರಿದಂತೆ ಸುಮಾರು 40 ದೇಶಗಳಿಂದ ಸ್ಪರ್ಧಿಗಳು ಭಾಗವಹಿಸಿದ್ದರು. ಯುಎಸ್‌ಎ, ಯುಎಇ, ಮಲೇಷ್ಯಾ ಜರ್ಮನಿಯು ವಿವಿಧ ವಿಭಾಗಗಳಲ್ಲಿ ಸ್ಪರ್ಧಿಸಿ ತಮ್ಮ ಪ್ರತಿಭೆ, ಸೌಂದರ್ಯ ಮತ್ತು ಅನುಗ್ರಹವನ್ನು ಪ್ರದರ್ಶಿಸಿ ಪಾರಿ ತೋಷಕಗಳನ್ನು ತನ್ನದಾಗಿಸಿದ್ದಾರೆ. ಉಪಸ್ಥಿತ ಗಣ್ಯರು ವಿಜೇತ ಸ್ಪರ್ಧಿಗಳುಗೆ ಕಿರೀಟ ಧಾರಣೆಗೈದು ಗೌರವಿಸಿದರು.

ಈ ವರ್ಷದ ಸ್ಪರ್ಧೆಯು ಮೈಲ್‌ಸ್ಟೋನ್ ಸಮೂಹದ 19ನೇ ಆವೃತ್ತಿಯಾಗಿದ್ದು, ಈ ಮೊದಲು ಮೈಲ್‌ಸ್ಟೋನ್ ಸಂಸ್ಥೆಯು ಪ್ರಪಂಚದಾದ್ಯಂತ 19 ದೇಶಗಳಲ್ಲಿ ಸ್ಪರ್ಧೆಗಳನ್ನು ಆಯೋಜಿಸಿದೆ. ಇದು ಜೀವನದ ಎಲ್ಲಾ ಹಂತಗಳ ಮಹಿಳೆಯರಿಗೆ ಸಬಲೀಕರಣಗೊಳಿಸಲು ಮತ್ತು ಅವರ ಅನನ್ಯ ಪ್ರಯಾಣ, ಅಪ್ರತಿಮ ಪ್ರತಿಭೆಗಳನ್ನು ಹಂಚಿಕೊಳ್ಳಲು ಪ್ರಬಲ ವೇದಿಕೆಯನ್ನು ಒದಗಿಸುತ್ತಿದೆ.

ರಿಯಲ್ ಎಸ್ಟೇಟ್, ಕಾನೂನು ಸೇವೆಗಳು ಮತ್ತು ವ್ಯಾಪಾರ ವ್ಯವಹಾರ ಸಲಹಾ ಸೇವೆಯಲ್ಲಿ ಪರಿಣತಿ ಹೊಂದಿರುವ ಬು ಅಬ್ದುಲ್ಲಾ ಸಮೂಹದ ಸಹಯೋಗದ ಮೂಲಕ 270ಕ್ಕೂ ಹೆಚ್ಚು ಕಂಪನಿಗಳನ್ನು ಹೊಂದಿರುವ ಖ್ಯಾತ ಎಮಿರಾಟಿ ಉದ್ಯಮಿ ಮತ್ತು ಕಾನೂನುತಜ್ಞ ಡಾ| ಬು ಅಬ್ದುಲ್ಲಾ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿದ್ದು ಆಯೋಜಕರು ಅವರನ್ನು ಗೌರವಿಸಿದರು.

ಆಯೋಜಕರಾದ ಡಾ| ಮಾಕ್ ಮಲಿಕ್ ಮಾತನಾಡಿ, ಮೈಲಿಗಲ್ಲು ಸ್ಪರ್ಧೆಗಳು ಮಹಿಳಾ ಸಬಲೀಕರಣಕ್ಕೆ ವೇದಿಕೆಯಾಗಿದ್ದು, ಜಾಗತಿಕ ವೇದಿಕೆಯಲ್ಲಿ ಮನ್ನಣೆ ಮತ್ತು ಯಶಸ್ಸನ್ನು ಸಾಧಿಸಲು ಸಹಾಯ ಮಾಡುತ್ತವೆ ಎಂದರು.

# ಹೈಕೋರ್ಟ್ ನ್ಯಾಯಮೂರ್ತಿಗಳ ಕುರಿತು ಟೀಕೆ ಬಿಜೆಪಿ ಸಂಸದರ ವಿರುದ್ಧ ಸುಮೋಟೋ ಕೇಸ್



**ಹೈದರಾಬಾದ್, ಸೆ.20–** ಪತ್ರಿಕಾಗೋಷ್ಠಿಯಲ್ಲಿ ನ್ಯಾಯಾಂಗದ ವಿರುದ್ಧ ಹೇಳಿಕೆ ನೀಡಿದ ಬಿಜೆಪಿ ಸಂಸದ ಎಂ ರಘುನಂದನ್ ರಾವ್ ವಿರುದ್ಧ ತೆಲಂಗಾಣ ಹೈಕೋರ್ಟ್ ಸ್ವಯಂ ಪ್ರೇರಿತವಾಗಿ ಕ್ರಿಮಿನಲ್ ನಿಂದನೆ ಮೊಕದ್ದಮೆ ಹೂಡಿದೆ. ನ್ಯಾಯಾಧೀಶರ ಪತ್ರವನ್ನು ಆಧರಿಸಿ ಮುಖ್ಯ ನ್ಯಾಯಮೂರ್ತಿ ಅಲೋಕ್ ಆರಾಧೆ ಮತ್ತು ನ್ಯಾಯಮೂರ್ತಿ ಜೆ.ಶ್ರೀನಿವಾಸ್ ರಾವ್ ಅವರನ್ನೊಳಗೊಂಡ ಪೀಠವು ನ್ಯಾಯಾಂಗ ನಿಂದನೆ ಪ್ರಕರಣವನ್ನು ಕೈಗೆತ್ತಿ ಕೊಂಡಿದೆ.

ಆ.24 ರಂದು ಪತ್ರಿಕಾಗೋಷ್ಠಿಯಲ್ಲಿ, ಎನ್-ಕನ್ವೆನ್ಷನ್‌ನಲ್ಲಿ ಧ್ವಂಸಕ್ಕೆ ತಡೆಯಾಜ್ಞೆ ನೀಡಿದ ನ್ಯಾಯಾಲಯದ ನಿರ್ಧಾರವನ್ನು ಸಂಸದರು ಪ್ರಶ್ನಿಸಿದರು. ಅದೇ ಆಸ್ತಿಯನ್ನು ನೆಲಸಮ ಮಾಡಲು ಆದೇಶಿಸಿದ ಮತ್ತೊಂದು ಹೈಕೋರ್ಟ್ ನ್ಯಾಯಾ ಧೀಶರು 2014 ರ ತೀರ್ಪನ್ನು ಅವರು ಉಲ್ಲೇಖಿಸಿದ್ದರು. ಈ ಹಿಂದೆ ಧ್ವಂಸಗೊಳಿಸುವ ನಿರ್ದೇಶನ ವನ್ನು ಕೂಲಂಕುಷವಾಗಿ ಪರಿಶೀಲಿ ಸದೆ ನ್ಯಾಯಾಂಗವು ವಿಷಯಕ್ಕೆ ಧಾವಿಸಿ ತಡೆಯಾಜ್ಞೆ ನೀಡಿದೆ ಎಂದು ಸಂಸದರು ಟೀಕಿಸಿದರು.

ಪತ್ರಿಕಾಗೋಷ್ಠಿಯಲ್ಲಿ , ರಘುನಂದನ್ ರಾವ್ ಅವರು 'ನ್ಯಾಯಾಧೀಶರು ತಮ್ಮ ಕಣ್ಣುಗಳಿಂದ ಕುರುಡು ಪಟ್ಟಿಯನ್ನು ತೆಗೆದು ಹಾಕಬೇಕು' ಮತ್ತು ತಮ್ಮ ಸುತ್ತಲೂ ಏನು ನಡೆಯುತ್ತಿದೆ ಎಂಬುದರ ಬಗ್ಗೆ ಹೆಚ್ಚು ಜಾಗೃತರಾಗಿರಬೇಕು ಎಂದು ಹೇಳಿದರು. ಅವರ ಟೀಕೆಗಳ ಬಗ್ಗೆ ವರದಿಗಾರರೊಬ್ಬರು ಕಳವಳ ವ್ಯಕ್ತಪಡಿಸಿದಾಗ, ಸಂಸದರು ಮಾತನಾಡುವ ಹಕ್ಕಿದೆ ಮತ್ತು ಅವರು ನ್ಯಾಯಾಂಗದ ಘನತೆಯ ಮೇಲೆ ದಾಳಿ ಮಾಡುತ್ತಿಲ್ಲ. ಆದರೆ, 'ಕಾನೂನನ್ನು ತಿಳಿದುಕೊಳ್ಳಿ ಮತ್ತು ಕಲಿಯಿರಿ' ಎಂದು ನ್ಯಾಯಾಧೀಶರನ್ನು ಒತ್ತಾಯಿಸಿದರು.

ಈ ವಿಷಯವನ್ನು ಹೈಕೋರ್ಟ್ನ ಗಮನಕ್ಕೆ ತಂದ ಏಕಪೀಠದ ನ್ಯಾಯಾಧೀಶರು, ಈ ಹೇಳಿಕೆಗಳು ನ್ಯಾಯಾಂಗವನ್ನು ದೂಷಿಸುವಂತಿವೆ, ನ್ಯಾಯಾಲಯಗಳ ಮೇಲಿನ ಸಾರ್ವಜನಿಕ ವಿಶ್ವಾಸವನ್ನು ದುರ್ಬಲ ಗೊಳಿಸುವ ಉದ್ದೇಶವನ್ನು ಹೊಂದಿವೆ ಎಂದು ಗಮನಿಸಿದರು.

ಅಂತಹ ಹೇಳಿಕೆಗಳನ್ನು ನಿರ್ಲಕ್ಷಿಸಿದರೆ, ನ್ಯಾಯಾಲಯದ ಅಧಿಕಾರವನ್ನು ಹಾನಿಗೊಳಿಸುತ್ತದೆ ಮತ್ತು ಕಾನೂನು ಸುವ್ಯವಸ್ಥೆಯನ್ನು ಜಾರಿಗೊಳಿಸಲು ಅಡ್ಡಿಯಾಗುತ್ತದೆ ಎಂದು ನ್ಯಾಯಾ ಧೀಶರು ಕಳವಳ ವ್ಯಕ್ತಪಡಿಸಿದರು.

# ಬಿಜೆಪಿ ನಾಯಕನ ಅಜಾಗರೂಕ ಕಾರು ಚಾಲನೆ: ಬೈಕ್ ಸವಾರ ಸಾವು



**ಗುರುಗ್ರಾಮ, ಸೆ.20–** ಬಿಜೆಪಿ ನಾಯಕನ ಅಜಾಗರೂಕತೆ ಕಾರು ಚಾಲನೆಯಿಂದ ಸಂಭವಿಸಿದ ಅಪಘಾತದಲ್ಲಿ ಬೈಕ್ ಸವಾರ ಸಾವನ್ನಪ್ಪಿರುವ ಘಟನೆ ಗುರುಗ್ರಾಮದಲ್ಲಿ ನಡೆದಿದೆ. ಗಾಲ್ಫ್ ಕೋರ್ಸ್ ರಸ್ತೆಯ ಬೆಲ್ವೆಡೆರೆ ಪಾರ್ಕ್ ಬಳಿಯ ಹೈಸ್ಪೀಡ್ ಲೇನ್‌ನಲ್ಲಿ ಘಟನೆ ಸಂಭವಿಸಿದೆ.

ಬಿಜೆಪಿ ನಾಯಕ ಕುಲದೀಪ್ ಠಾಕೂರ್ ಒನ್ ವೇಯಲ್ಲಿ ಚಲಿಸುತ್ತಿದ್ದ. ಮಹೇಂದ್ರಾ 3XO ಕಾರಿನಲ್ಲಿ ಚಲಿಸುತ್ತಿದ್ದ. ಈ ವೇಳೆ ಎದುರಿಗೆ ಬಂದ ಬೈಕ್‌ಗೆ ಕಾರು ಡಿಕ್ಕಿ ಹೊಡೆದಿದೆ. ಘಟನೆಯಲ್ಲಿ ಬೈಕ್ ಸವಾರ ಅಕ್ಷತ್ ಗಾರ್ಗ್ ಸಾವನ್ನಪ್ಪಿದ್ದಾನೆ.ಅಪಘಾತದ ದೃಶ್ಯ ಬೈಕರ್ ಸ್ನೇಹಿತನ ಗೊಪ್ರೋ ಕ್ಯಾಮೆರಾದಲ್ಲಿ ಸೆರೆಯಾಗಿದೆ.

ಈ ಬಗ್ಗೆ ಮೃತನ ಸ್ನೇಹಿತ ಪ್ರದ್ಯುಮನ್ ದೂರು ನೀಡಿದ್ದಾನೆ. ದೂರಿನ ಬಳಿಕ ಆರೋಪಿಯನ್ನು ಪೊಲೀಸರು ಬಂಧಿಸಿ ಬಿಡುಗಡೆ ಮಾಡಿದ್ದಾರೆ. ಮದ್ಯ ಅಥವಾ ಡ್ರಗ್ಸ್ ಸೇವನೆ ಪರೀಕ್ಷೆ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಜಾಮೀನು ನೀಡಿ ಪೊಲೀಸರು ಬಿಟ್ಟು ಕಳುಹಿಸಿದ್ದಾರೆ.

ಎಸ್‌ಯುವಿಯನ್ನು ವಶಪಡಿಸಿಕೊಳ್ಳಲಾಗಿದೆ. ಸೆಕ್ಷನ್ 106 (ನಿರ್ಲಕ್ಷ್ಯದಿಂದ ಸಾವಿಗೆ ಕಾರಣ), ಸೆಕ್ಷನ್ 281 (ಅತಿವೇಗದ ಚಾಲನೆ), ಸೆಕ್ಷನ್ 324(4) (20,000 ರೂ.ಗಿಂತ ಹೆಚ್ಚಿನ ಹಾನಿ ಉಂಟುಮಾಡುವ ದುಷ್ಕೃತ್ಯ) ಸೇರಿದಂತೆ ಮೋಟಾರು ವಾಹನ ಕಾಯ್ದೆಯ ಅನೇಕ ಸೆಕ್ಷನ್‌ಗಳ ಅಡಿಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ.

### ಲಡ್ಡು ಪ್ರಸಾದದಲ್ಲಿ ಮಾಂಸದ ಕೊಬ್ಬು ಮಿಶ್ರಣ ಆರೋಪ

# ರಾಜಕೀಯ ಆರೋಪ-ಪ್ರತ್ಯಾರೋಪದ ಬಳಿಕ ಕಾನೂನು ಹೋರಾಟ

**ಅಮರಾವತಿ, ಸೆ.20–** ಹಿಂದಿನ ಸರ್ಕಾರದ ಅವಧಿಯಲ್ಲಿ ತಿರುಪತಿ ಲಡ್ಡು ಪ್ರಸಾದದಲ್ಲಿ ಮಾಂಸದ ಕೊಬ್ಬು ಬಳಸಲಾಗುತ್ತಿತ್ತು ಎಂದು ಮುಖ್ಯಮಂತ್ರಿ ಚಂದ್ರಬಾಬು ಹೊತ್ತಿಸಿದ ಕಿಡಿ ಈಗ ಜ್ವಾಲೆಯಾಗಿದೆ. ಚಂದ್ರಬಾಬು ನಾಯ್ಡು ಹೇಳಿಕೆ ಈಗ ದೇಶದ್ಯಾಂತ ಚರ್ಚೆಯಾಗುತ್ತಿದೆ. ಇದಕ್ಕೆ ಪೂರಕ ಎನ್ನುವಂತೆ ಕೆಲವು ವರದಿ ಬಿಡುಗಡೆಯಾಗಿದ್ದು ಅದರಲ್ಲಿ ಮೀನಿನ ಎಣ್ಣೆ ಮತ್ತು ಮಾಂಸದ ಕೊಬ್ಬು ಬಳಸಿರುವುದು ಧೃಡವಾಗಿದೆ.



ಪ್ರಕರಣ ಗಂಭೀರ ಸ್ವರೂಪ ಪಡೆದುಕೊಳ್ಳುತ್ತಿದ್ದಂತೆ ಮಾಜಿ ಸಿಎಂ ಜಗನ್ ಮೋಹನ್ ರೆಡ್ಡಿ ನೇತೃತ್ವದ ವೈಎಸ್‌ಆರ್‌ಸಿಪಿ ಪಕ್ಷ ಹೈಕೋರ್ಟ್ ಮೆಟ್ಟಿಲೇರಿದೆ. ಆಡಳಿತ ಪಕ್ಷದ ಹೇಳಿಕೆಯನ್ನು ಗಂಭೀರವಾಗಿ ಪರಿಗಣಿಸಬೇಕು, ಹಾಲಿ ಹೈಕೋರ್ಟ್ ನ್ಯಾಯಧೀಶರ ನೇತೃತ್ವದಲ್ಲಿ ತನಿಖೆಗೆ ನೀಡಬೇಕು ಎಂದು ಒತ್ತಾಯಿಸಿದೆ. ಪ್ರಕರಣವನ್ನು ಬುಧವಾರ ವಿಚಾರಣೆಗೆ ತೆಗೆದುಕೊಳ್ಳುವುದಾಗಿ ಆಂಧ್ರಪ್ರದೇಶ ಹೈಕೋರ್ಟ್ ಹೇಳಿದೆ.

ಲಡ್ಡು ವಿಷಯ ಹೊರ ಬರುತ್ತಿದ್ದಂತೆ ಡಿಸಿಎಂ ಪವನ್ ಕಲ್ಯಾಣ್ ಕೇಂದ್ರ ಸರ್ಕಾರದ ಮುಂದೆ ಹೊಸ ಬೇಡಿಕೆ ಇಟ್ಟಿದ್ದಾರೆ. ಸನಾತನ ಧರ್ಮ ರಕ್ಷಣಾ ಮಂಡಳಿ ಸ್ಥಾಪಿಸಲು ಆಗ್ರಹಿಸಿದ್ದಾರೆ. ಎಕ್ಸ್‌ನಲ್ಲಿ ಈ ಸಂಬಂಧ ಪೋಸ್ಟ್ ಮಾಡಿರುವ ಪವನ್ ಕಲ್ಯಾಣ್, ದೇವಸ್ಥಾನಗಳ ಎಲ್ಲ ಸಮಸ್ಯೆಗಳನ್ನು ಪರಿಶೀಲಿಸಲು ರಾಷ್ಟ್ರ ಮಟ್ಟದಲ್ಲಿ ಮಂಡಳಿ ಸ್ಥಾಪನೆ ಮಾಡಬೇಕು ಎಂದು ಹೇಳಿದ್ದಾರೆ.

ಇದಲ್ಲದೇ ಬಾಲಾಜಿ ದೇವಸ್ಥಾನದ ಪ್ರಸಾದದಲ್ಲಿ ಮೀನಿನ ಎಣ್ಣೆಯ ಅಂಶ ಪತ್ತೆಯಾಗಿದೆ ಇದನ್ನು ಕಂಡು ನಾವು ವಿಚಲಿತರಾಗಿದ್ದೇವೆ ಹಿಂದಿನ ಸರ್ಕಾರ ರಚಿಸಿದ ಟಿಟಿಡಿ ಆಡಳಿತ ಮಂಡಳಿ ಹಲವು ಪ್ರಶ್ನೆಗಳಿಗೆ ಉತ್ತರಿಸಬೇಕಿದೆ. ಇಂತಹ ಘಟನೆ ತಡೆಯಲು ಧಾರ್ಮಿಕ ಮುಖಂಡರು ಒಳಗೊಂಡಂತೆ ಸಮಾಜದ ಮುಖ್ಯ ವ್ಯಕ್ತಿಗಳ ಒಳಗೊಂಡ ಮಂಡಳಿ ರಚಿಸಬೇಕಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

**ರಾಮಜನ್ಮಭೂಮಿಯ ಪ್ರಧಾನ ಅರ್ಚಕರಿಂದಲೂ ಆಕ್ಷೇಪ:** ತಿರುಪತಿ ಲಡ್ಡು ಪ್ರಸಾದದಲ್ಲಿ ಮಾಂಸದ ಕೊಬ್ಬು ಮಿಶ್ರಣ ಆರೋಪಕ್ಕೆ ರಾಮಜನ್ಮಭೂಮಿಯ ಪ್ರಧಾನ ಅರ್ಚಕ ಆಚಾರ್ಯ ಸತ್ಯೇಂದ್ರ ದಾಸ್ ಪ್ರತಿಕ್ರಿಯಿಸಿದ್ದಾರೆ. ಲಡ್ಡುವಿನಲ್ಲಿ ಮೀನಿನ ಎಣ್ಣೆಯನ್ನು ಬೆರೆಸಿರುವುದು ತಪಾಸಣೆಯಿಂದ ಸ್ಪಷ್ಟವಾಗಿದೆ, ಇದೆಲ್ಲ ಯಾವಾಗ ನಡೆದುದೆ ಎಂಬುದು ಇನ್ನೂ ತಿಳಿದಿಲ್ಲ, ಇದು ಪಿತೂರಿಯಾಗಿದೆ ಮತ್ತು ಸನಾತನ ಧರ್ಮದ ಮೇಲಿನ ದಾಳಿಯಾಗಿದೆ ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಬೇಕು ಮತ್ತು ತಪ್ಪಿತಸ್ಥರನ್ನು ಶಿಕ್ಷಿಸಬೇಕು ಎಂದು ಒತ್ತಾಯಿಸಿದ್ದಾರೆ. ಘಟನೆಗೆ ಸಂಬಂಧಿಸಿದ್ದಂತೆ ಟಿಡಿಪಿ ನಾಯಕ, ಎಂಎಲ್‌ಸಿ ಜಿ.ದೀಪಕ್ ರೆಡ್ಡಿ ಕೂಡಾ ಹೇಳೊಕೆ ನೀಡಿದ್ದಾರೆ. ಕೆಲವು ಸಂಗತಿಗಳನ್ನು ಜನರ ಮುಂದಿಡಬೇಕಿದೆ, ಸುಮಾರು 4–5 ವರ್ಷಗಳ ಹಿಂದೆ ನಂದಿನಿ ಮತ್ತು ಕರ್ನಾಟಕ ಹಾಲು ಒಕ್ಕೂಟದ ಮುಖ್ಯಸ್ಥರು ಮಾಧ್ಯಮ ಹೇಳಿಕೆ ನೀಡಿದ್ದರು. ತಿರುಪತಿಗೆ ಅತಿ ಕಡಿಮೆ ಬೆಲೆಗೆ ತುಪ್ಪ ಕೊಡುವುದು ಇದಕ್ಕಿಂತ ಕಡಿಮೆ ಬೆಲೆ ಕೊಟ್ಟರೆ ನಷ್ಟವಾಗಲಿದೆ ಎಂದು ಹೇಳಿತ್ತು. ಆದರೂ ಹಿಂದಿನ ಜಗನ್ ಸರ್ಕಾರ ತಲೆಕೆಡಿಸಿಕೊಳ್ಳದೆ ಮಧ್ಯವರ್ತಿಗಳಿಂದ ದಿನಕ್ಕೆ 15,000 ಕೆ.ಜಿ ತುಪ್ಪ ಖರೀದಿಸಿದೆ, ಮಧ್ಯವರ್ತಿಯೊಬ್ಬರು ಉತ್ಪಾದನೆಗೆ ಡೈರಿ ಹೊಂದಿಲ್ಲ ಅದಕ್ಕಾಗಿ ಅವರು ಅದನ್ನು ಮಾರುಕಟ್ಟೆಯಿಂದ ಖರೀದಿಸಿ ದೇವಸ್ಥಾನಕ್ಕೆ ನೀಡಿದ್ದಾರೆ. ಎಲ್ಲವೂ ಗೊತ್ತಿದ್ದರೈ ವೈಸಿಪಿ ಸರ್ಕಾರವು ಸಂಪೂರ್ಣ ಅಸಡ್ಡೆ ಮಾಡಿದೆ, ದೇವಾಲಯದ ಪಾವಿತ್ರ್ಯತೆಯು ಸಂಪೂರ್ಣವಾಗಿ ಹಾಳು ಮಾಡಿದೆ, ಶೀಘ್ರದಲ್ಲೇ ವರದಿ ಬರಲಿದೆ ಎಂದು ನಾವು ನಿರೀಕ್ಷಿಸುತ್ತೇವೆ ಈ ತಪ್ಪುಗಳಿಗೆ ಕಾರಣವಾದ ಎಲ್ಲ ವ್ಯಕ್ತಿಗಳಿಗೆ ಕಠಿಣ ಶಿಕ್ಷೆಯಾಗುತ್ತದೆ ಎಂದು ಭರವಸೆ ನೀಡಿದ್ದಾರೆ.

ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಮಾತನಾಡಿ, ಆಂಧ್ರಪ್ರದೇಶ ಸಿಎಂ ಹೇಳಿರುವುದು ಅತ್ಯಂತ ಗಂಭೀರ ವಿಷಯವಾಗಿದ್ದು, ಜನರ ನಂಬಿಕೆಗೆ ಆಳವಾದ ಸಂಬಂಧವಿದೆ. ವಿಸ್ತೃತ ತನಿಖೆ ನಡೆಸಬೇಕು ಮತ್ತು ತಪ್ಪಿತಸ್ಥರಿಗೆ ತಕ್ಕ ಶಿಕ್ಷೆಯಾಗಬೇಕು ಎಂದು ಒತ್ತಾಯಿಸಿದರು. ಲಡ್ಡು ಪ್ರಸಾದ ವಿಷಯ ಚರ್ಚೆ ತಾರಕಕೇರಿದ್ದರೆ ದೇವಸ್ಥಾನಕ್ಕೆ ಬರುವ ಭಕ್ತರು ಪ್ರಸಾದದಲ್ಲಿ ಯಾವುದೇ ವ್ಯತಾಸ ಕಂಡು ಬಂದಿಲ್ಲ ಎಂದು ಹೇಳಿದ್ದಾರೆ.

### ಬಂಟ್ಸ್ ಸಂಘ ಮುಂಬಯಿ ಇದರ ಕೇಂದ್ರ ಶಿಕ್ಷಣ ಸಮಿತಿ ಉದ್ಘಾಟನೆ

# ಉಪಸಮಿತಿಗಳು ಸಮನ್ವಯತೆಗೆ ಅಡಿಪಾಯವಾಗಿವೆ: ಪ್ರವೀಣ್ ಭೋಜಶೆಟ್ಟಿ



**ಮುಂಬಯಿ (ಆರ್‌ಬಿಐ), ಸೆ.18–** ಬಂಟ್ಸ್ ಸಂಘ ಮುಂಬಯಿ ಇದರ ಕೇಂದ್ರ ಶಿಕ್ಷಣ ಸಮಿತಿಯನ್ನು ಉದ್ಘಾಟಿಸಲಾಯಿತು. ಕಳೆದ ಸೋಮವಾರ (ಸೆ.16) ಕುರ್ಲಾ ಪೂರ್ವದ ಚುನ್ನಾಭಟ್ಟಿ ಇಲ್ಲಿನ ಬಂಟರ ಭವನದ ಉನ್ನತ ಶಿಕ್ಷಣ ಸಂಕೀರ್ಣದ ಸಮ್ಮೇಳನ ಕೊಠಡಿಯಲ್ಲಿ ಸರಳ ಉದ್ಘಾಟನಾ ಕಾರ್ಯಕ್ರಮ ನಡೆಸಲಾಗಿದ್ದು ಕೇಂದ್ರ ಶಿಕ್ಷಣ ಸಮಿತಿ ಸದಸ್ಯರನ್ನೊಳಗೊಂಡು ಬಂಟ್ಸ್ ಸಂಘ ಮುಂಬಯಿ ಇದರ ಅಧ್ಯಕ್ಷ ಪ್ರವೀಣ್ ಭೋಜ ಶೆಟ್ಟಿ ದೀಪ ಬೆಳಗಿಸಿ ಕೇಂದ್ರ ಶಿಕ್ಷಣ ಸಮಿತಿಗೆ ಚಾಲನೆಯನ್ನಿತ್ತು ಶುಭಾರೈಸಿದರು.

ಪ್ರವೀಣ್ ಬಿ.ಶೆಟ್ಟಿ ಮಾತನಾಡಿ ಸಂಘದ ಬೈಲಾಸ್‌ಗಳ ಪ್ರಕಾರ 4 ವರ್ಷಗಳ ಅವಧಿಯ ಈ ಹೊಸ ಕೇಂದ್ರ ಶಿಕ್ಷಣ ಸಮಿತಿಯನ್ನು ರಚಿಸುವ ಮಹತ್ವವನ್ನು ಒತ್ತಿ ಹೇಳಿದರು. ಬಂಟ್ಸ್ ಸಂಘದ ಎಲ್ಲಾ ಶಿಕ್ಷಣ ಸಂಸ್ಥೆಗಳ ನಡುವೆ ಸಮನ್ವಯವನ್ನು ತರಲು ಉಪ ಸಮಿತಿಗಳು ಅಡಿಪಾಯವಾಗಿವೆ ಮತ್ತು ಕಾರ್ಯನಿರ್ವಹಣಾ ಅಂತರವನ್ನು ಕಡಿಮೆ ಮಾಡಲು ಇಂತಹ ಸಮಿತಿಗಳು ಪೂರಕವಾಗಿವೆ. ಈ ಮೂಲಕ ಸಂಸ್ಥೆಗಳು ಆಧುನಿಕ ಕಾಲಘಟ್ಟದ ಸನ್ನಿವೇಶಗಳಿಗೆ ಸ್ಪಂದಿಸುತ್ತಾ ನಾವೀನ್ಯತೆಯನ್ನು ಬೆಳೆಸಲು ಸಹಕಾರಿ ಆಗುತ್ತವೆ. ಸಮಿತಿಯ ಎಲ್ಲರ ಒಳಗೊಳ್ಳುವಿಕೆಯನ್ನು ಉತ್ತೇಜಿಸಲು ನಿರೀಕ್ಷಿಸಲಾಗಿದೆ ಎಂದರು.

ಬಂಟ್ಸ್ ಸಂಘ ಮುಂಬಯಿ ಉಪಾಧ್ಯಕ್ಷ ಮಹೇಶ್ ಎಸ್.ಶೆಟ್ಟಿ, ಗೌರವ ಪ್ರಧಾನ ಕಾರ್ಯದರ್ಶಿ ಡಾ| ಆರ್.ಕೆ ಶೆಟ್ಟಿ, ಕೇಂದ್ರ ಶಿಕ್ಷಣ ಸಮಿತಿ ಕಾರ್ಯಾಧ್ಯಕ್ಷ ಬಿ.ಆರ್ ಶೆಟ್ಟಿ, ಕಾರ್ಯದರ್ಶಿ ಭಾಸ್ಕರ ಶೆಟ್ಟಿ ಕಾರ್ನಾಡ್, ಪೊವಾಯಿ ಶಿಕ್ಷಣ ಸಮಿತಿ ಕಾರ್ಯಾಧ್ಯಕ್ಷ ರತ್ನಾಕರ ಶೆಟ್ಟಿ ಮುಂಡ್ಕೂರು, ಉನ್ನತ ಶಿಕ್ಷಣ ಸಮಿತಿ ಕಾರ್ಯಾಧ್ಯಕ್ಷ ಆದರ್ಶ್ ಬಾಲಕೃಷ್ಣ ಶೆಟ್ಟಿ, ಬೊರಿವಲಿ ಶಿಕ್ಷಣ ಸಮಿತಿ ಕಾರ್ಯಾಧ್ಯಕ್ಷ ರವೀಂದ್ರ ಎಸ್.ಶೆಟ್ಟಿ, ಪೊವಾಯಿ ಶಿಕ್ಷಣ ಸಮಿತಿ ಕಾರ್ಯದರ್ಶಿ ಗೌತಮ್ ಎಸ್.ಶೆಟ್ಟಿ, ಉನ್ನತ ಶಿಕ್ಷಣ ಸಮಿತಿ ಕಾರ್ಯದರ್ಶಿ ಸಾಗರ್ ಡಿ.ಶೆಟ್ಟಿ, ಬೊರಿವಲಿ ಶಿಕ್ಷಣ ಸಮಿತಿ ಕಾರ್ಯದರ್ಶಿ ಸಿಎ| ಜಗದೀಶ್ ಬಿ.ಶೆಟ್ಟಿ, ಚಾರ್ಟರ್ಡ್ ಅಕೌಂಟೆಂಟ್ ಸಿಎ| ಹರೀಶ್ ಡಿ.ಶೆಟ್ಟಿ, ಶಿಕ್ಷಣ ತಜ್ಞ ಡಾ| ದಿನೇಶ್ ಎಸ್. ಹೆಗ್ಡೆ, ಶಿಕ್ಷಣ ತಜ್ಞೆ ಡಾ| ರೇಷ್ಮಾ ಎ.ಹೆಗ್ಡೆ ಉಪಸ್ಥಿತರಿದ್ದರು.

ಬಿ.ಆರ್ ಶೆಟ್ಟಿ ಪ್ರಸ್ತಾವನೆಗೈದು ಸಮಿತಿಯ ಉದ್ದೇಶಗಳು, ಉದ್ದೇಶ ಮತ್ತು ದೂರದೃಷ್ಟಿ ಕುರಿತು ಸಂಕ್ಷಿಪ್ತವಾಗಿ ವಿವರಿಸಿದರು. ಪೊವಾಯಿ ಶಿಕ್ಷಣ ಸಮಿತಿ, ಉನ್ನತ ಶಿಕ್ಷಣ ಸಮಿತಿ ಮತ್ತು ಬೊರಿವಲಿ ಶಿಕ್ಷಣ ಸಮಿತಿಯ ಕಾರ್ಯಾಧ್ಯಕ್ಷರು ತಮ್ಮತಮ್ಮ ಸಂಸ್ಥೆಗಳ ಚಟುವಟಿಕೆಗಳ ಬಗ್ಗೆ ಮಾಹಿತಿ ನೀಡಿದರು.

ಬಿ.ಆರ್ ಶೆಟ್ಟಿ ಸ್ವಾಗತಿಸಿ ಕೇಂದ್ರ ಶಿಕ್ಷಣ ಸಮಿತಿಯ ಉತ್ತಮ ಕೆಲಸಕ್ಕಾಗಿ ಎಲ್ಲಾ ಸದಸ್ಯರು ತಮ್ಮ ಒಳಹರಿವು ಮತ್ತು ಒಳನೋಟಗಳನ್ನು ನೀಡಿದ್ದಾರೆ ಎಂದರು. ಭಾಸ್ಕರ ಶೆಟ್ಟಿ ಕಾರ್ನಾಡ್ ವಂದಿಸಿದರು.

# ಲಾಲು ಪ್ರಸಾದ್ ವಿರುದ್ಧ ಕಾನೂನು ಕ್ರಮಕ್ಕೆ ಗೃಹ ಸಚಿವಾಲಯ ಅನುಮತಿ



**ನವದೆಹಲಿ, ಸೆ.20–** ಬಿಹಾರದ ಮಾಜಿ ಮುಖ್ಯಮಂತ್ರಿ ಲಾಲು ಪ್ರಸಾದ್ ಯಾದವ್ ಅವರಿಗೆ ಸಂಬಂಧಿಸಿದ ಉದ್ಯೋಗ ಹಗರಣದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಕಾನೂನು ಕ್ರಮ ಜರುಗಿಸಲು ಗೃಹ ಸಚಿವಾಲಯ ಶುಕ್ರವಾರ ಅನುಮತಿ ನೀಡಿದೆ.

ಪ್ರಕರಣದಲ್ಲಿ ಕೇಂದ್ರೀಯ ತನಿಖಾ ದಳದ (ಸಿಬಿಐ) ಅಂತಿಮ ಚಾರ್ಜ್ ಶೀಟ್‌ನಲ್ಲಿ ಲಾಲು ಯಾದವ್ ಅವರನ್ನು ವಿಚಾರಣೆಗೆ ಒಳಪಡಿಸಲು ಗೃಹ ಸಚಿವಾಲಯ ಅನುಮೋದನೆ ನೀಡಿದೆ. ಲಾಲು ಪ್ರಸಾದ್ ಯಾದವ್, ತೇಜಸ್ವಿ, ತೇಜ್ ಪ್ರತಾಪ್ ಯಾದವ್ ಸೇರಿದಂತೆ ಇತರರಿಗೆ ನ್ಯಾಯಾಲಯ ಸಮನ್ಸ್ ನೀಡಿದೆ. ಉದ್ಯೋಗಕ್ಕಾಗಿ ಭೂಮಿ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ, ಸೆ.18ರಂದು ದೆಹಲಿಯ ರೌಸ್ ಅವೆನ್ಯೂ ನ್ಯಾಯಾಲಯವು ಲಾಲು ಪ್ರಸಾದ್ ಯಾದವ್, ಅವರ ಪುತ್ರರಾದ ತೇಜಸ್ವಿ ಯಾದವ್ ಮತ್ತು ತೇಜ್ ಪ್ರತಾಪ್ ಯಾದವ್ ಸೇರಿದಂತೆ ಹಲವು ಪ್ರಮುಖ ವ್ಯಕ್ತಿಗಳಿಗೆ ಸಮನ್ಸ್ ಜಾರಿ ಮಾಡಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ತೇಜ್ ಪ್ರತಾಪ್ ಯಾದವ್ ಅವರಿಗೆ ಇದೇ ಮೊದಲ ಬಾರಿಗೆ ನೋಟಿಸ್ ನೀಡಲಾಗಿದೆ.

ತೇಜ್ ಪ್ರತಾಪ್ ಯಾದವ್ ಶಾಮೀಲಾಗಿರುವುದನ್ನು ತಳ್ಳಿಹಾಕುವಂತಿಲ್ಲ ಎಂದು ಕೋರ್ಟ್ ಹೇಳಿದೆ. ಅವರು ಆರಂಭದಲ್ಲಿ ಚಾರ್ಜ್ ಶೀಟ್ ಮಾಡದಿದ್ದರೂ, ಅವರು 'ಎಕೆ ಇನ್ಫೋಸಿಸ್ ಲಿಮಿಟೆಡ್'ನಲ್ಲಿ ನಿರ್ದೇಶಕರಾಗಿದ್ದರು ಮತ್ತು ಈಗ ಅವರಿಗೆ ಸಮನ್ಸ್ ನೀಡಲಾಗಿದೆ ಎಂದು ಹೇಳಿದೆ.

ವಿಶೇಷ ಸಿಬಿಐ ನ್ಯಾಯಾಧೀಶ ವಿಶಾಲ್ ಗೋಗ್ನೆ ಅವರು ಲಾಲು ಪ್ರಸಾದ್ ಯಾದವ್, ಅವರ ಇಬ್ಬರು ಪುತ್ರರು ಮತ್ತು ಇತರ ಆರು ಆರೋಪಿಗಳಿಗೆ ಸಮನ್ಸ್ ಜಾರಿ ಮಾಡಿದ್ದಾರೆ. ಅ.7ರಂದು ಹಾಜರಾಗುವಂತೆ ಅವರಿಗೆ ಸೂಚಿಸಲಾಗಿದೆ. ಇತರ ಆರೋಪಪಟ್ಟಿ ವ್ಯಕ್ತಿಗಳಿಗೂ ಸಮನ್ಸ್ ನೀಡಲಾಗಿದೆ. ನ್ಯಾಯಾಲಯವು ತನ್ನ ಸಮನ್ಸ್‌ನಲ್ಲಿ ಅಖಿಲೇಶ್ವರ್ ಸಿಂಗ್ ಮತ್ತು ಅವರ ಪತ್ನಿ ಕಿರಣ್ ದೇವಿ ಅವರನ್ನು ಸೇರಿಸಿದೆ. ಜಾರಿ ನಿರ್ದೇಶನಾಲಯ (ಇಡಿ) ಆ.6ರಂದು 11 ಆರೋಪಿಗಳನ್ನು ಪಟ್ಟಿ ಮಾಡಿ ಪೂರಕ ಚಾರ್ಜ್ ಶೀಟ್ ಸಲ್ಲಿಸಿದೆ. ಈ ಪೈಕಿ ನಾಲ್ವರು ವ್ಯಕ್ತಿಗಳು ಸಾವನ್ನಪ್ಪಿದ್ದಾರೆ.

ಲಾಲು ಪ್ರಸಾದ್ ಯಾದವ್, ತೇಜಸ್ವಿ ಯಾದವ್, ತೇಜ್ ಪ್ರತಾಪ್ ಯಾದವ್, ಅಖಿಲೇಶ್ವರ್ ಸಿಂಗ್, ಹಜಾರಿ ಪ್ರಸಾದ್ ರಾಯ್, ಸಂಜಯ್ ರಾಯ್, ಧರ್ಮೇಂದ್ರ ಸಿಂಗ್ ಮತ್ತು ಕಿರಣ್ ದೇವಿ ಅವರಿಗೆ ನ್ಯಾಯಾಲಯ ನಿರ್ದೇಶನ ನೀಡಿದೆ. ಅಖಿಲೇಶ್ವರ್ ಸಿಂಗ್ ಅವರನ್ನು ಇಡಿ ಆರೋಪಿಯನ್ನಾಗಿ ಮಾಡಿದ್ದರೆ, ಅವರ ಪತ್ನಿ ಕಿರಣ್ ದೇವಿ ಅವರನ್ನು ಆರಂಭದಲ್ಲಿ ಆರೋಪಿಯನ್ನಾಗಿ ಮಾಡಿರಲಿಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ.


ಆದಾಗ್ಯೂ, ತನ್ನ ಮಗ ಅಭಿಷೇಕ್‌ಗೆ ಉದ್ಯೋಗಕ್ಕಾಗಿ

# ಸೇನಾಧಿಕಾರಿ ಸ್ನೇಹಿತೆ ಮೇಲೆ ದೌರ್ಜನ್ಯ ಆರೋಪ: ಐವರು ಪೊಲೀಸರ ಅಮಾನತು

**ಭುವನೇಶ್ವರ, ಸೆ.20–** ಒಡಿಶಾದ ಭುವನೇಶ್ವರದಲ್ಲಿ ಪೊಲೀಸರ ಮೇಲೆ ಹಲ್ಲೆ ನಡೆಸಿ ಠಾಣೆಯ ಪೀಠೋಪಕರಣಗಳನ್ನು ಹಾನಿಗೊಳಿಸಿದ ಆರೋಪದ ಮೇಲೆ ಕಳೆದ ವಾರ ಬಂಧಕ್ಕೊಳಗಾಗಿ ಬುಧವಾರ ಜಾಮೀನಿನ ಮೇಲೆ ಬಿಡುಗಡೆಯಾಗಿರುವ ಸೇನಾಧಿಕಾರಿಯ ಸ್ನೇಹಿತೆ, ಇದೀಗ ತನಗೆ ಲೈಂಗಿಕ ಕಿರುಕುಳ ನೀಡಲಾಗಿದೆ. ತನ್ನ ಗೆಳೆಯನನ್ನು ಅಕ್ರಮವಾಗಿ ಜೈಲಿಗಟ್ಟಲಾಗಿದೆ ಎಂದು ಆರೋಪಿಸಿದ್ದಾರೆ. ಪ್ರಕರಣ ಸಂಬಂಧ ಇನ್ಸ್ಪೆಕ್ಟರ್ ಶ್ರೇಣಿಯ ಅಧಿಕಾರಿ ಸೇರಿದಂತೆ ಐವರು ಪೊಲೀಸರನ್ನು ಶಿಸ್ತಿನ ಪ್ರಕ್ರಿಯೆಯ ಭಾಗವಾಗಿ ಅಮಾನತುಗೊಳಿಸ ಲಾಗಿದೆ ಎಂದು ಒಡಿಶಾ ಪೊಲೀಸರ ಉನ್ನತ ಮೂಲಗಳು ತಿಳಿಸಿದೆ.

ಕಳೆದ ಭಾನುವಾರ ರಾತ್ರಿ 1 ಗಂಟೆಗೆ ನನ್ನ ರೆಸ್ಟೋರೆಂಟ್ ಮುಚ್ಚಿ ನಾನು ನನ್ನ ಗೆಳೆಯನ ಜೊತೆ ಮನೆ ಕಡೆಗೆ ಹೋಗುತ್ತಿದ್ದಾಗ ಸಾರ್ವಜನಿಕ ಸ್ಥಳದಲ್ಲಿ ಪುರುಷರ ತಂಡವೊಂದು ನಮ್ಮ ಮೇಲೆ ದಾಳಿ ಮಾಡಿತ್ತು. ಅವರಿಂದ ತಪ್ಪಿಸಿಕೊಂಡು, ಈ ಕುರಿತು ದೂರು ದಾಖಲಿಸಲು ಭರತ್ಪುರ ಪೊಲೀಸ್ ಠಾಣೆಗೆ ನಾವು ತೆರಳಿದ್ದೆವು. ನಾವು ಠಾಣೆಗೆ ತಲುಪಿದಾಗ, ಅಲ್ಲಿ ಸಿವಿಲ್ ಡ್ರೆಸ್ನಲ್ಲಿ ಒಬ್ಬರು ಮಹಿಳಾ ಪೇದೆ ಮಾತ್ರ ಇದ್ದರು. ಅವರು ನಮಗೆ ಸಹಾಯ ಮಾಡಲು ನಿರಾಕರಿಸಿದರು ಎಂದು ಸೇನಾಧಿಕಾರಿಯ ಸ್ನೇಹಿತೆ ಹೇಳಿದ್ದಾರೆ.

ಮಹಿಳಾ ಪೇದೆ ದೂರು ಸ್ವೀಕರಿಸುವ ಬದಲು ನಮಗೆ ಅಸಭ್ಯವಾಗಿ ನಿಂದಿಸಲು ಶುರು ಮಾಡಿದರು. ಈ ವೇಳೆ ಅಲ್ಲಿಗೆ ಬಂದ ಕೆಲ ಪುರುಷ ಸಿಬ್ಬಂದಿ ನನ್ನ ಗೆಳೆಯನ ಬಳಿ ಲಿಖಿತ ಹೇಳಿಕೆ ನೀಡುವಂತೆ




ಸೂಚಿಸಿದರು. ಬಳಿಕ ಅವರು, ನನ್ನ ಗೆಳೆಯನನ್ನು ಸೆಲ್ಗೆ ಹಾಕಿದರು. ಆಗ ನಾನು ಸೇನಾಧಿಕಾರಿಯನ್ನು ಈ ರೀತಿ ಸೆಲ್ಗೆ ಹಾಕುವಂತಿಲ್ಲ ಎಂದು ಜೋರಾದ ಧ್ವನಿಯಲ್ಲಿ ಹೇಳಿದೆ. ಆಗ ಇಬ್ಬರು ಮಹಿಳಾ ಸಿಬ್ಬಂದಿ ನನ್ನ ಮೇಲೆ ಹಲ್ಲೆ ನಡೆಸಿದರು. ನಾನು ಅವರಿಂದ ಬಿಡಿಸಿಕೊಳ್ಳಲು ಒಬ್ಬರ ಕೈಗೆ ಕಚ್ಚಿದೆ. ಆಗ ಅವರು ಜಾಕೆಟ್ನಿಂದ ನನ್ನನ್ನು ಕಟ್ಟಿದಂತೆ ಮಾಡಿ ಕೋಣೆಯೊಂದರಲ್ಲಿ ಹಾಕಿದರು ಎಂದು ಮಹಿಳೆ ಆರೋಪಿಸಿದ್ದಾರೆ.

ಸ್ವಲ್ಪ ಸಮಯದ ನಂತರ, ಪುರುಷ ಅಧಿಕಾರಿಯೊಬ್ಬರು ಕೋಣೆಯ ಬಾಗಿಲು ತೆರೆದರು. ನನ್ನ ಸ್ತನಗಳ ಮೇಲೆ ಹಲವಾರು ಬಾರಿ ಒದ್ದರು. ಅವರು ತನ್ನ ಪ್ಯಾಂಟ್ ಬಿಚ್ಚಿದರು. ನನ್ನ ಪ್ಯಾಂಟ್ ಅನ್ನೂ ಬಲವಂತವಾಗಿ ಬಿಚ್ಚಿಸಿದರು ಎಂದು ತಿಳಿಸಿದ್ದಾರೆ. ಅಲ್ಲದೆ, ಪೊಲೀಸ್ ಠಾಣೆಯ ಇನ್ಸ್ಪೆಕ್ಟರ್ ಅಶ್ಲೀಲ ಸನ್ನೆ ಮಾಡಿದ್ದಾರೆ ಎಂದು ಆಕೆ ಹೇಳಿದ್ದಾರೆ. ಮಹಿಳೆಯ ಆರೋಪಗಳನ್ನು ನಿರಾಕರಿಸಿರುವ ಪೊಲೀಸರು, 'ಕೋಲ್ಕತ್ತಾದ 22ನೇ ಸಿಖ್ ರೆಜಿಮೆಂಟ್ಗೆ ನಿಯೋಜಿಸಲಾಗಿರುವ ಸೇನಾಧಿಕಾರಿ ಮತ್ತು ಅವರ ಸ್ನೇಹಿತೆ ಕುಡಿದು ಕರ್ತವ್ಯದಲ್ಲಿದ್ದ ಪೊಲೀಸ್ ಸಿಬ್ಬಂದಿಯ ಮೇಲೆ ಹಲ್ಲೆ ನಡೆಸಿದ್ದಾರೆ. ಅಲ್ಲದೆ, ಪೊಲೀಸ್ ಠಾಣೆಯೊಳಗಿನ ಕಂಪ್ಯೂಟರ್ ಮತ್ತು ಪೀಠೋಪಕರಣಗಳನ್ನು ಧ್ವಂಸಗೊಳಿಸಿದ್ದಾರೆ ಎಂದು ಆರೋಪಿಸಿದ್ದಾರೆ. ಸೇನಾ ಅಧಿಕಾರಿಯ ಕಾರಿನಲ್ಲಿ ಮದ್ಯದ ಬಾಟಲಿ ಪತ್ತೆಯಾಗಿದೆ ಎಂದು ಸ್ಥಳೀಯ ಮಾಧ್ಯಮಗಳು ತಿಳಿಸಿವೆ.

ಆರೋಪ-ಪ್ರತ್ಯಾರೋಪಗಳ ನಡುವೆ, ಪೊಲೀಸ್ ಮಹಾನಿರ್ದೇಶಕ ವೈ.ಬಿ. ಖುರಾನಿಯಾ ಅವರ ನಿರ್ದೇಶನದ ಮೇರೆಗೆ ಚಂಡಕಾ ಪೊಲೀಸ್ ಠಾಣೆಯಲ್ಲಿ ಗುರುವಾರ ದೂರು ದಾಖಲಾಗಿದ್ದು, ಸೆಪ್ಟೆಂಬರ್ 15ರಂದು ತಡರಾತ್ರಿ ಮನೆಗೆ ಮರಳುತ್ತಿದ್ದಾಗ ದಾರಿ ಮಧ್ಯೆ ಪುರುಷರ ಗುಂಪು ದಾಳಿ ನಡೆಸಿದೆ ಎಂಬ ಮಹಿಳೆಯ ಆರೋಪದ ಕುರಿತು ತನಿಖೆ ನಡೆಸಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.

# ಬಿಜೆಪಿಯವರು ಕೋಮುವಾದಿಗಳು: ಮುಖ್ಯಮಂತ್ರಿ

ಮೈಸೂರು: ಬಿಜೆಪಿಯವರ ಕುಮ್ಮಕ್ಕಿನಿಂದಲೇ ಗಲಾಟೆಗಳು ನಡೆಯುತ್ತಿದೆ. ಬಿಜೆಪಿಯವರು ಕೋಮುವಾದಿಗಳು. ಅವರು ನೀಡುವ ಹೇಳಿಕೆಯಿಂದ ಗಲಾಟೆಗಳು ನಡೆಯುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಿಜೆಪಿ ವಿರುದ್ಧ ಗಂಭೀರ ಆರೋಪ ಮಾಡಿದರು. ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ರಾಜ್ಯದಲ್ಲಿ ಗಣೇಶ ಮೂರ್ತಿ ಗಲಾಟೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿ, ಪ್ರತಿನಿತ್ಯ ಗಲಾಟೆ ನಡೆಯುತ್ತಿಲ್ಲ.ಇದುವರೆಗೆ ಎರಡು ಪ್ರಕರಣ ನಡೆದಿವೆ. ಘಟನೆಯ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ತಿಳಿಸಿದ್ದೇನೆ. ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ತಿಳಿಸಿದ್ದೇನೆ. ನಾಗಮಂಗಲ ಪ್ರಕರಣದಲ್ಲಿ ಡಿವೈಎಸ್ಪಿ, ಇನ್ಸ್ಪೆಕ್ಟರ್ ಅಮಾನತು ಮಾಡಿದ್ದೇವೆ ಎಂದರು.ಹೆಚ್.ಡಿ ಕುಮಾರಸ್ವಾಮಿ ವಿರುದ್ಧ ಡಿನೋಟಿಫಿಕೇಷನ್ ಆರೋಪ ವಿಚಾರಕ್ಕೆ ಮಾತನಾಡಿ, ದಾಖಲೆಗಳನ್ನು ಗುರುವಾರ ಸಚಿವರು ಬಿಡುಗಡೆ ಮಾಡಿದ್ದಾರೆ. ನಾನು ಆ ದಾಖಲೆಗಳನ್ನು ನೋಡುತ್ತೇನೆ. ಆ ಭೂಮಿಯನ್ನು ಕುಮಾರಸ್ವಾಮಿ ಬಾಮೈದನ ಹೆಸರಿನಲ್ಲಿ ರಿಜಿಸ್ಟರ್ ಆಗಿದೆ.

ಅತ್ತೆಗೆ ಹಲವರು ಜಿಪಿಎ ಮಾಡಿಕೊಟ್ಟಿದ್ದಾರೆ. ಇದು ಬಹಳ ಗಂಭೀರವಾದ ಪ್ರಕರಣ. ದಾಖಲೆ ತರಿಸಿ ಪರಿಶೀಲನೆ ಮಾಡುತ್ತೇನೆ ಎಂದು ಹೇಳಿದರು.ಕುಮಾರಸ್ವಾಮಿ ಯಾವಗಲೂ ಹಿಟ್ ಅಂಡ್ ರನ್ ಕೇಸ್. ತಮ್ಮ ಮೇಲಿನ ಎಲ್ಲಾ ಆರೋಪಕ್ಕೆ ಕೂಡ ಹಿಟ್ ಅಂಡ್ ರನ್ ರೀತಿ ಮಾತನಾಡಿ ಹೋಗುತ್ತಾರೆ ಎಂದು ಸಿಎಂ ಟೀಕೆ ಮಾಡಿದರು.ಶಾಸಕ ಮುನಿರತ್ನ ವಿರುದ್ಧ ಎಸ್ಐಟಿ ತನಿಖೆ ಮಾಡಲು ಸಚಿವರು, ಶಾಸಕರು ಪತ್ರ ಕೊಟ್ಟಿದ್ದಾರೆ. ಪತ್ರದ ಮೇಲೆ ಮುಂದಿನ ಕ್ರಮ ಕೈಗೊಳ್ಳಿ ಎಂದು ಗೃಹ ಸಚಿವರಿಗೆ ಸೂಚನೆ ನೀಡಿದ್ದೇನೆ. ಅವರ ಮೇಲೆ ಬಹಳಷ್ಟು ಗಂಭೀರ ಪ್ರಕರಣಗಳಿದೆ. ಹೀಗಾಗಿ ವಿಶೇಷ ತನಿಖಾ ತಂಡದ ಅಗತ್ಯವಿದೆ ಎಂದು ಕೇಳಿದ್ದಾರೆ. ಈ ಬಗ್ಗೆ



ಗೃಹ ಸಚಿವರು ಪರಿಶೀಲಿಸಿ ಕ್ರಮ ಕೈಗೊಳ್ಳುತ್ತಾರೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.



ಬಿಜೆಪಿ ಶಾಸಕ ಮುನಿರತ್ನ ರಾಜೀನಾಮೆಗೆ ಒತ್ತಾಯಿಸಿ ಯುವ ಕಾಂಗ್ರೆಸ್ ಕಾರ್ಯಕರ್ತರು ಶುಕ್ರವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿದರು

# ಮಹಿಳಾ ಉದ್ಯೋಗಿಗಳಿಗೆ ವಾರ್ಷಿಕ 6 ದಿನಗಳ ವೇತನ ಸಹಿತ ಮುಟ್ಟಿನರಜೆ
## ಸೂಕ್ತ ನೀತಿ ರಚನೆಗೆ ಕರ್ನಾಟಕ ಸರ್ಕಾರ ಕ್ರಮ

**ಬೆಂಗಳೂರು,ಸೆ.20–** ಖಾಸಗಿ ಮತ್ತು ಸಾರ್ವಜನಿಕ ವಲಯದ ಸಂಸ್ಥೆಗಳಲ್ಲಿ ಮಹಿಳಾ ಉದ್ಯೋಗಿಗಳಿಗೆ ವಾರ್ಷಿಕವಾಗಿ 6 ದಿನಗಳ ವೇತನ ಸಹಿತ ಮುಟ್ಟಿನ ರಜೆ ನೀಡಲು ನೀತಿ ರಚನೆಗೆ ಕರ್ನಾಟಕ ಸರ್ಕಾರ ಮುಂದಾಗಿದೆ. ಮುಟ್ಟಿನ ರಜೆ ಸಾಧ್ಯಾಸಾಧ್ಯತೆ ಪರಿಶೀಲಿಸಲು ರಚಿಸಲಾದ ಸಮಿತಿಯು ಸರ್ಕಾರಕ್ಕೆ ಸಲ್ಲಿಸಿದ ವರದಿಯ ಆಧಾರದಲ್ಲಿ ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದು ವರದಿಯಾಗಿದೆ.ವರದಿ ಸಿದ್ಧಪಡಿಸಲು ಡಾ.ಸಪ್ನಾ ಮುಖರ್ಜಿ ನೇತೃತ್ವದ ತಂಡವನ್ನು ರಚಿಸಲಾಗಿತ್ತು. ಅದು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದೆ. ಸಂಬಂಧಪಟ್ಟ ಎಲ್ಲ ಇಲಾಖೆಗಳೊಂದಿಗೆ ಚರ್ಚೆ ನಡೆಸುತ್ತೇವೆ. ಅನುಮೋದನೆಗಾಗಿ ಶಾಸಕಾಂಗದ ಮುಂದೆ ಪ್ರಸ್ತಾಪಿಸಲಾಗುವುದು ಎಂದು ಕಾರ್ಮಿಕ ಇಲಾಖೆ ಕಾರ್ಯದರ್ಶಿ ಮೊಹಮದ್ ಮೊಹ್ಸಿನ್ ತಿಳಿಸಿರುವುದಾಗಿ ವರದಿ ಮಾಡಿದೆ. ಖಾಸಗಿ ಕಂಪನಿಗಳಲ್ಲೇ ಮೊದಲು ಜಾರಿ :ಆರಂಭದಲ್ಲಿ ಖಾಸಗಿ ವಲಯಕ್ಕೆ ಮುಟ್ಟಿನ ರಜೆ ನೀತಿ ಪರಿಚಯಿಸಲು ಕರ್ನಾಟಕ ಸರ್ಕಾರ ಚಿಂತನೆ ನಡೆಸಿದೆ. ಪೂರ್ಣ ಪ್ರಮಾಣದಲ್ಲಿ ನೀತಿ ರೂಪಿಸಿದ ನಂತರ ಸರ್ಕಾರಿ ಇಲಾಖೆಗಳಲ್ಲಿ ಕಡ್ಡಾಯಗೊಳಿಸಲು ಚಿಂತನೆ ನಡೆಸಲಾಗಿದೆ ಎಂದು ಮೊಹ್ಸಿನ್ ಹೇಳಿದ್ದಾರೆ. ಮುಟ್ಟಿನ ರಜೆ ವಿಚಾರವಾಗಿ ಒಂದು ನೀತಿಯನ್ನು ಹೊಂದುವ ಅಗತ್ಯತೆಯ ಬಗ್ಗೆ ಸುಪ್ರೀಂ ಕೋರ್ಟ್ ಆದೇಶದಲ್ಲಿ ವ್ಯಕ್ತಪಡಿಸಿದ್ದ ಅಭಿಪ್ರಾಯಕ್ಕೆ ಅನುಗುಣವಾಗಿ ಈ ಕ್ರಮಕ್ಕೆ ಮುಂದಾಗಿದ್ದೇವೆ ಎಂದು ಅವರು ಹೇಳಿದ್ದಾರೆ.ಮಹಿಳಾ ಸಿಬ್ಬಂದಿಗೆ ಮುಟ್ಟಿನ ರಜೆ ನೀಡುವುದರ ಸಾಧ್ಯಾಸಾಧ್ಯತೆ ಬಗ್ಗೆ ಗಮನಹರಿಸುವಂತೆ ಕೇಂದ್ರ ಸರ್ಕಾರಕ್ಕೆ ಸುಪ್ರೀಂ ಕೋರ್ಟ್ ಈ ವರ್ಷದ ಜುಲೈನಲ್ಲಿ ನಿರ್ದೇಶನ ನೀಡಿತ್ತು. ಉದ್ಯೋಗದಾತರು ಮುಟ್ಟಿನ ರಜೆ ನೀಡುವುದನ್ನು ಕಡ್ಡಾಯಗೊಳಿಸುವುದರಿಂದ ಮಹಿಳೆಯರಿಗೆ ಅನುಕೂಲವಾಗಬೇಕು.ಅದರ ಬದಲಿಗೆ ಮುಟ್ಟಿನ ರಜೆ ನೀಡುವುದರಿಂದ ಉದ್ಯೋಗಗಳಲ್ಲಿ ಅವರ ಭಾಗವಹಿಸುವಿಕೆಗೆ ಪ್ರತಿಕೂಲವಾಗದಂತೆ ಗಮನ ಹರಿಸಬೇಕು ಎಂದು ಕೋರ್ಟ್ ಹೇಳಿತ್ತು. ಮುಟ್ಟಿನ ರಜೆಯಿಂದ ಮಹಿಳೆಯರಿಗೆ ಉದ್ಯೋಗಾವಕಾಶ ಕಡಿಮೆ ಆಗಿಬಿಟ್ಟರೆ ಎಂಬ ಆತಂಕವನ್ನೂ ಕೋರ್ಟ್ ವ್ಯಕ್ತಪಡಿಸಿತ್ತು.ಕರ್ನಾಟಕದಲ್ಲಿ ಮುಟ್ಟಿನ ರಜೆ ನೀತಿ ರೂಪಿಸುವ ಬಗ್ಗೆ ಕಾರ್ಮಿಕ ಸಚಿವ ಸಂತೋಷ್ ಲಾಡ್ ಕೂಡ ಸುಳಿವು ನೀಡಿದ್ದರು ಎನ್ನ ಲಾಗಿದೆ.ಮುಟ್ಟಿನ ರಜೆ ಪ್ರಸ್ತಾವನೆ ಚರ್ಚೆ ಹಂತದಲ್ಲಿದೆ. ಸಚಿವರು ಆ ಬಗ್ಗೆ ನೀತಿ ರೂಪಿಸಲು ಚಿಂತನೆ ನಡೆಸಿದ್ದರು. ಕಾರ್ಮಿಕ ಇಲಾಖೆಯು



ಕೆಲವೇ ದಿನಗಳಲ್ಲಿ ಪ್ರಸ್ತಾವನೆಯನ್ನು ಪರಿಶೀಲಿಸಲಿದೆ. ಆ ನಂತರ ಅದು ಇಲಾಖೆ ಮತ್ತು ಸರ್ಕಾರಿ ಹಂತಗಳಲ್ಲಿ ಮುಂದುವರಿಯಲಿದೆ ಎಂದು ಕಾರ್ಮಿಕ ಆಯುಕ್ತ ಡಾ. ಎಚ್ಎನ್ ಗೋಪಾಲಕೃಷ್ಣ ತಿಳಿಸಿದ್ದಾರೆ.ಬಿಹಾರವು 1992ರಲ್ಲಿ ಮಹಿಳೆಯರಿಗೆ ಮುಟ್ಟಿನ ರಜೆಯನ್ನು ಘೋಷಿಸಿತ್ತು. ಆ ಮೂಲಕ ಮುಟ್ಟಿನ ರಜೆ ಪರಿಚಯಿಸಿದ ದೇಶದ ಮೊದಲ ರಾಜ್ಯವಾಗಿ ಹೊರಹೊಮಿತ್ತು. ಅಲ್ಲಿ ಪ್ರತಿ ತಿಂಗಳು ಎರಡು ದಿನಗಳ ಮುಟ್ಟಿನ ರಜೆಯನ್ನು ಒದಗಿಸಲಾಗಿದೆ. ಉತ್ತರಪ್ರದೇಶ, ಮಹಾರಾಷ್ಟ್ರ ಮತ್ತು ಕೇರಳ ರಾಜ್ಯಗಳಲ್ಲಿ ಕೂಡ ಮಹಿಳೆಯರಿಗೆ ಕೆಲವು ನಿಬಂಧನೆಗಳೊಂದಿಗೆ ಮುಟ್ಟಿನ ರಜೆ ನೀಡಲಾಗುತ್ತಿದೆ.ಜಾಗತಿಕವಾಗಿ ಸ್ವೀಡನ್, ಇಟಲಿ, ದಕ್ಷಿಣ ಕೊರಿಯಾ, ತೈವಾನ್ ಮತ್ತು ಜಪಾನ್ ಮಹಿಳೆಯರಿಗೆ ಮುಟ್ಟಿನ ರಜೆಗಳನ್ನು ನೀಡುತ್ತವೆ.

# ಸಿದ್ದರಾಮಯ್ಯ ಕುರ್ಚಿ ಗಟ್ಟಿಯಾಗಿದೆ
## ಈಗ ಅಲುಗಾಡುತ್ತಿರುವುದು ವಿಜಯೇಂದ್ರ ಕುರ್ಚಿ

**ಬೆಂಗಳೂರು, ಸೆ. 20 :** ಸಿಎಂ ಸಿದ್ದರಾಮಯ್ಯನವರ ಕುರ್ಚಿ ಅಲುಗಾಡುತ್ತಿದ್ದು ಆ ಕಾರಣದಿಂದ ಕಲ್ಯಾಣ ಕರ್ನಾಟಕ ಭಾಗದಲ್ಲಿ ಸಂಪುಟ ಸಭೆ ನಡೆಸಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜೇಂದ್ರ ಹೇಳಿಕೆ ನೀಡಿದ್ದರು. ಇವರ ಒಂದು ಹೇಳಿಕೆಗೆ ಬೃಹತ್ ಕೈಗಾರಿಕಾ ಸಚಿವ ಎಂಬಿ ಪಾಟೀಲ್ ತಿರುಗೇಟು ನೀಡಿದ್ದು, ಸಿಎಂ ಸಿದ್ದರಾಮಯ್ಯನವರು ಕಟ್ಟಿದ್ದಾರೆ ಅವರ ಕುರ್ಚಿಯು ಕಟ್ಟಿ ಇದೆ ಈಗ ಅಲಗಾಡುತ್ತಿರುವುದು ಬಿವೈ ವಿಜಯೇಂದ್ರ ಕುರ್ಚಿ ಎಂದು ತಿರುಗೇಟು ನೀಡಿದರು. ವಿಜಯಪುರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಸಚಿವ ಎಂಬಿ ಪಾಟೀಲ್, ಸಿಎಂ ಸಿದ್ದರಾಮಯ್ಯ ಗಟ್ಟಿಯಾಗಿದ್ದಾರೆ. ಅವರ ಕುರ್ಚಿಯು ಕೂಡ ಗಟ್ಟಿ ಇದೆ. ಆದರೆ ಈಗ ಅಲುಗಾಡುತ್ತಿರುವುದು ಬಿ ವೈ ವಿಜಯೇಂದ್ರ ಕುರ್ಚಿ ಎಂದು ಬಿ ವೈ ವಿಜಯೇಂದ್ರ ಹೇಳಿಕೆಗೆ ತಿರುಗೇಟು ಕೊಟ್ಟರು. ಈಗ ಬಿವೈ ವಿಜಯೇಂದ್ರ ಕುರ್ಚಿ ಅಲುಗಾಡುತ್ತಿದೆ. ಬಸನಗೌಡ ಪಾಟೀಲ್ ಯತ್ನಾಳ, ರಮೇಶ್ ಜಾರಕಿಹೊಳಿ ಸೇರಿದಂತೆ ಅನೇಕರಿಂದ ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಕುರ್ಚಿ ಅಲಗಾಡುತ್ತಿದೆ ಹೀಗಾಗಿ ವಿಜಯೇಂದ್ರ ಮೊದಲು ತಮ್ಮ ಕುರ್ಚಿ ಕಟ್ಟಿ ಮಾಡಿಕೊಳ್ಳಲಿ ಎಂದು ವಿಜಯಪುರದಲ್ಲಿ ಕೈಗಾರಿಕೆ ಇಲಾಖೆಯ ಸಚಿವ ಎಂ ಬಿ ಪಾಟೀಲ್ ಹೇಳಿಕೆ ನೀಡಿದರು.



# ಬಿಬಿಎಂಪಿ ಆಸ್ತಿಗೆ ಇ–ಖಾತಾ ರಚನೆ; ಜಿಪಿಎಸ್ ನಿರ್ದೇಶಾಂಕ ಕಡ್ಡಾಯ

**ಬೆಂಗಳೂರು, ಸೆ. 20 :** ಮುಂದಿನ ಮೂರು ವಾರಗಳಲ್ಲಿ ಬೆಂಗಳೂರಿನ ಎಲ್ಲಾ 20 ಲಕ್ಷ ಆಸ್ತಿ ಮಾಲೀಕರಿಗೆ ಬಿಬಿಎಂಪಿಯಿಂದ ಹೊಸ ಇ–ಖಾತಾ ವಿತರಣಾ ವ್ಯವಸ್ಥೆಯ ಭಾಗವಾಗಿ ಎಸ್ಎಂಎಸ್ ಸಿಗಲಿದೆ. ಅದಕ್ಕೂ ಮುನ್ನವೇ ಬಿಬಿಎಂಪಿಯಿಂದ 21 ಲಕ್ಷ ಆಸ್ತಿಗಳನ್ನು ಜಿಪಿಎಸ್ ತಂತ್ರಾಂಶದಲ್ಲಿ ಬಿಬಿಎಂಪಿ ಅಳವಡಿಸಿದೆ.ಇಲ್ಲಿಯವರೆಗೆ, ಅಧಿಕಾರಿಗಳು ಸುಮಾರು ಮೂರು ಲಕ್ಷ ಆಸ್ತಿಗಳಿಗೆ ಪ್ರಸಾರ ಸಂದೇಶಗಳನ್ನು ಕಳುಹಿಸಿದ್ದಾರೆ. ಇ–ಖಾತಾ ಪಡೆಯಲು ಅಗತ್ಯವಿರುವ ಜಿಪಿಎಸ್ ನಿರ್ದೇಶಾಂಕಗಳನ್ನು ಸೆರೆಹಿಡಿಯಲು ಬಿಬಿಎಂಪಿ ಸಿಬ್ಬಂದಿ ತಮ್ಮ ಆಸ್ತಿಗೆ ಭೇಟಿ ನೀಡುತ್ತಾರೆ ಎಂದು ಎಸ್ಎಂಎಸ್ ಸ್ವೀಕರಿಸುವವರಿಗೆ ತಿಳಿಸುತ್ತದೆ.

**ಎಸ್ಎಂಎಸ್‌ನಲ್ಲಿ ಹೀಗೆ ಬರೆಯಲಾಗಿದೆ:** "ಬಿಬಿಎಂಪಿ ಪ್ರತಿ ಆಸ್ತಿಗೆ ಇ–ಖಾತಾ ರಚಿಸುತ್ತಿದೆ. ಇ–ಖಾತಾ ಪಡೆಯಲು ಜಿಪಿಎಸ್ ನಿರ್ದೇಶಾಂಕಗಳು ಕಡ್ಡಾಯ. ಜಿಪಿಎಸ್ ವಿವರಗಳನ್ನು ಸೆರೆಹಿಡಿಯಲು ಬಿಬಿಎಂಪಿ ಸಿಬ್ಬಂದಿ ಕೆಲವೇ ದಿನಗಳಲ್ಲಿ ನಿಮ್ಮ ಆಸ್ತಿಗೆ ಭೇಟಿ ನೀಡುತ್ತಾರೆ. ದಯವಿಟ್ಟು ನಿಮ್ಮ ಆಸ್ತಿ ತೆರಿಗೆ ರಸೀದಿಯನ್ನು ಸಿದ್ಧವಾಗಿರಿಸಿಕೊಳ್ಳಿ ಮತ್ತು ನಿಖರವಾದ ಜಿಪಿಎಸ್ ಟ್ಯಾಗಿಂಗ್ ಖಚಿತಪಡಿಸಿಕೊಳ್ಳಲು ಬಿಬಿಎಂಪಿ ಸಿಬ್ಬಂದಿಯೊಂದಿಗೆ ಸಹಕರಿಸಿ. ಆಸ್ತಿ ಜಿಪಿಎಸ್ ಬಿಎಚ್‌ಯು ಆಧಾರ್ ಆಗಿ ಕಾರ್ಯನಿರ್ವಹಿಸುತ್ತದೆ, ಆಸ್ತಿಯ ವಿಶಿಷ್ಟ ಗುರುತಿಸುವಿಕೆಯಾಗಿ ಕಾರ್ಯನಿರ್ವಹಿಸುತ್ತದೆ. ಕಳೆದ ಮೂರ್ನಾಲ್ಕು ದಿನಗಳಲ್ಲಿ ಅನೇಕ ನಿವಾಸಿಗಳು ಈ ಸಂದೇಶವನ್ನು ಸ್ವೀಕರಿಸಿದ್ದಾರೆ ಎಂದು ವರದಿಯಾಗಿದೆ. ಬಿಬಿಎಂಪಿ ವಿಶೇಷ ಆಯುಕ್ತ (ಕಂದಾಯ) ಮುನೀಶ್ ಮೌದ್ಗಿಲ್ ಮಾತನಾಡಿ, ಬಿಬಿಎಂಪಿಯು ದಿನಕ್ಕೆ ಒಂದು ಲಕ್ಷ ಎಸ್ಎಂಎಸ್ ಸಂದೇಶಗಳನ್ನು ಕಳುಹಿಸುತ್ತಿದೆ. "ಈ ಉಪಕ್ರಮವು ಜಾಗೃತಿ ಮೂಡಿಸುವ ಗುರಿಯನ್ನು ಹೊಂದಿದೆ, ಆದ್ದರಿಂದ ನಮ್ಮ ಸಿಬ್ಬಂದಿ ಕೆಲಸವನ್ನು ಹೆಚ್ಚು ಪರಿಣಾಮಕಾರಿಯಾಗಿ ಪೂರ್ಣಗೊಳಿ ಸಬಹುದು. ಮುಂದಿನ ಆರು ತಿಂಗಳಲ್ಲಿ ಪ್ರತಿ ಆಸ್ತಿಯ ಅಕ್ಷಾಂಶ ಮತ್ತು ರೇಖಾಂಶ ನಿರ್ದೇಶಾಂಕಗಳನ್ನು ಸೆರೆಹಿಡಿಯಲು ನಾವು ಯೋಜಿಸಿದ್ದೇವೆ" ಎಂದು ಅವರು ಹೇಳಿದರು.ಖಾಲಿ ನಿವೇಶನಗಳಿಗೆ ಹೋಲಿಸಿದರೆ ಅಪಾರ್ಟ್‌ಮೆಂಟ್‌ಗಳು ಮತ್ತು ಸ್ವತಂತ್ರ ಮನೆಗಳಿಗೆ ಜಿಪಿಎಸ್



ನಿರ್ದೇಶಾಂಕಗಳನ್ನು ಸೆರೆಹಿಡಿಯುವುದು ಸುಲಭ ಎಂದು ಮೌದ್ಗಿಲ್ ಹೇಳಿದರು. "ನಾವು ಪ್ರತಿ ಫ್ಲ್ಯಾಟ್ ಮಾಲೀಕರಿಂದ ತೆರಿಗೆ ರಸೀದಿಯನ್ನು ವಿನಂತಿಸುತ್ತೇವೆ ಮತ್ತು ಅದೇ ಜಿಪಿಎಸ್ ಡೇಟಾವನ್ನು ಬಳಸುತ್ತೇವೆ. ಹೆಚ್ಚುವರಿಯಾಗಿ, ನಾವು ಮೊಬೈಲ್ ಅಪ್ಲಿಕೇಶನ್ ಅನ್ನು ಪ್ರಾರಂಭಿಸುತ್ತಿದ್ದೇವೆ, ಅದು ನಾಗರಿಕರಿಗೆ ತಮ್ಮ ನಿರ್ದೇಶಾಂಕಗಳನ್ನು ನೇರವಾಗಿ ಇನ್ಪುಟ್ ಮಾಡಲು ಅನುವು ಮಾಡಿಕೊಡುತ್ತದೆ" ಎಂದು ಅವರು ಹೇಳಿದರು.ಕೇಂದ್ರ ಸರ್ಕಾರದ ಉಪಕ್ರಮವಾದ ಬಿಎಚ್‌ಯು ಆಧಾರ್, ಬೆರಳಚ್ಚುಗಳಂತೆಯೇ ಗುಣಲಕ್ಷಣಗಳನ್ನು ವಿಶಿಷ್ಟವಾಗಿ ಗುರುತಿಸಲು ಜಿಪಿಎಸ್ ನಿರ್ದೇಶಾಂಕಗಳನ್ನು ಬಳಸುತ್ತದೆ. ಉಪ ಮುಖ್ಯಮಂತ್ರಿ ಮತ್ತು ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿ.ಕೆ ಶಿವಕುಮಾರ್ ನೇತೃತ್ವ ಮತ್ತು ನಿರ್ದೇಶನದಲ್ಲಿ ಬಿಬಿಎಂಪಿಯು ಫೇಸ್ಲೆಸ್, ಸಂಪರ್ಕರಹಿತ ಪ್ರಾರಂಭಿಸುತ್ತಿದೆ. ಮತ್ತು ಆನ್‌ಲೈನ್ ಡಿಜಿಟಲ್ – ವ್ಯವಸ್ಥೆಯನ್ನು ಪ್ರಾರಂಭಿಸುತ್ತಿದೆ.

ಬಿಬಿಎಂಪಿಯು ರಿಜಿಸ್ಟರ್‌ಗಳಲ್ಲಿನ ಎಲ್ಲಾ 21 ಲಕ್ಷ ಖಾತಾಗಳನ್ನು ಡಿಜಿಟಲೀ ಕರಣಗೊಳಿಸಲಾಗಿದೆ ಮತ್ತು ರೋಲ್–ಔಟ್ ಶೀಘ್ರದಲ್ಲೇ ಪ್ರಾರಂಭವಾಗುತ್ತದೆ.ಇದರ ಭಾಗವಾಗಿ, ಮುಂದಿನ ದಿನಗಳಲ್ಲಿ ಬಿಬಿಎಂಪಿಯ ಸಿಬ್ಬಂದಿಯು ನಿಮ್ಮ ಮನೆಗಳಿಗೆ ಭೇಟಿ ನೀಡಿ ನಿಮ್ಮ ಆಸ್ತಿಯ ಜಿ.ಪಿ.ಎಸ್. ಮಾಹಿತಿಯನ್ನು ಸೆರೆಹಿಡಿಯುತ್ತಾರೆ. ಪಾಲಿಕೆಯ eKhata ಪಡೆಯಲು ಪ್ರತಿ ಆಸ್ತಿಯ ಜಿ.ಪಿ.ಎಸ್ ಕಡ್ಡಾಯವಾಗಿದೆ. ಸದರಿ ಪ್ರಾಪರ್ಟಿ ಉಕಖ ನಿಮ್ಮ ಆಸ್ತಿಯ ವಿಶಿಷ್ಟ ಗುರುತು ಆಗಿರುತ್ತದೆ ಮತ್ತು ಎಲ್ಲಾ ಬಿಬಿಎಂಪಿಯ ಇ–ಖಾತಾ ಸೇವೆಗಳ ಫೇಸ್ಲೆಸ್, ಸಂಪರ್ಕರಹಿತ ಮತ್ತು ಆನ್‌ಲೈನ್ ವಿತರಣೆಗೆ ಇದು ಬಹಳ ಮುಖ್ಯವಾಗಿದೆ.

ಆದ್ದರಿಂದ, ನಿಮಗೆ ಉತ್ತಮ ಸೇವೆ ನೀಡಲು ಬಿಬಿಎಂಪಿಯನ್ನು ಬಲಪಡಿಸಲು ನಿಮ್ಮ ಸಂಪೂರ್ಣ ಸಹಕಾರವನ್ನು ನೀಡುವಂತೆ ವಿನಂತಿಸುತ್ತೇನೆ. ಬಿಬಿಎಂಪಿಯು ಸದಾ ನಿಮ್ಮ ಸೇವೆಯಲ್ಲಿ ಹಾಗೂ ನಾವೆಲ್ಲ ಇಷ್ಟಪಡುವ ನಗರವನ್ನು ರಚಿಸಲು ಸಹಕರಿಸಿ ಎಂದು ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅವರು ತಿಳಿಸಿದ್ದಾರೆ.

### ಮೋದಿ, ಅಮಿತ್ ಶಾರಿಂದ ಕನ್ನಡಿಗರ ಅಪಮಾನ
# ನಾಗಮಂಗಲ ಸಂಘರ್ಷ ವಿಚಾರಕ್ಕೆ ಪ್ರಿಯಾಂಕ್ ಖರ್ಗೆ ತಿರುಗೇಟು

**ನವದೆಹಲಿ, ಸೆ.20:** ಗಣೇಶ ಮೂರ್ತಿಯನ್ನು ಇಡಲು ಪೊಲೀಸರು ಬಳಿ ಬೆನ್ಜ್ ಕಾರ್ ಇದೆಯೋ ಅಥಾವ ಹೆಲಿಕಾಪ್ಟರ್ ಇದೆಯೋ ಅವರ ಬಳಿ ಯಾವ ವಾಹನ ಇದೆ ಅದರಲ್ಲಿ ಗಣೇಶ ಕೂರಿಸಿದ್ದಾರೆ, ಇಂತಹ ಕ್ಷುಲಕ ವಿಚಾರ ಇಟ್ಟುಕೊಂಡು ಪ್ರಧಾನಿ ನರೇಂದ್ರ ಮೋದಿ ಅವರು ಕರ್ನಾಟಕ ಮತ್ತು ಕನ್ನಡಿಗರನ್ನು ಅವಮಾನಿಸುತ್ತಿದ್ದಾರೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಹರಿಯಾಣ ಚುನಾವಣೆಯಲ್ಲಿ ನಾಗಮಂಗಲ ವಿಚಾರ ಪ್ರಸ್ತಾಪಿಸಿದ ಪ್ರಧಾನಿ ಮೋದಿ ಹೇಳಿಕೆಗೆ ತಿರುಗೇಟು ನೀಡಿದ ಅವರು, ಮೋದಿ ಮತ್ತು ಅಮಿತ್ ಶಾ ಪದೇ ಪದೇ ಕನ್ನಡಿಗರನ್ನು ಅವಮಾನ ಮಾಡುತ್ತಿದ್ದಾರೆ. ಮಂಡ್ಯ ಗಲಭೆ ಆದ ಬಳಿಕ ಟೌನ್‌ಹಾಲ್ ಬಳಿ ಗಣೇಶ ಕೂರಿಸಿ ಪ್ರತಿಭಟನೆ ನಡೆಸಿದರು, ಪೊಲೀಸ್ ವ್ಯಾನ್‌ನಲ್ಲಿ ಗಣೇಶ ಮೂರ್ತಿಯನ್ನು ಪೊಲೀಸರು ಕೂರಿಸಿದ್ದಾರೆ ಇದರಲ್ಲಿ ತಪ್ಪೇನಿದೆ ಎಂದು ಪ್ರಶ್ನಿಸಿದರು. ಮಹದಾಯಿ ವಿಚಾರವಾಗಿ ಮೋದಿ ಮಾತನಾಡುವುದಿಲ್ಲ, ತಮ್ಮ ಕ್ಯಾಬಿನೆಟ್ ಸಚಿವರ ಅಣ್ಣನ ಮಗನ ಬಗ್ಗೆ ಮೋದಿ ಮಾತನಾಡಿಲ್ಲ, ಮೋದಿಯವರೆ ಇದು ನಿಮಗೆ ಗೊತ್ತಾಗಲ್ವಾ.,

ನೀವು ಬರಿ ಹುಳಿ ಹಿಂಡಿಯುವ ಕೆಲಸ ಮಾಡುತ್ತಿರಾ.? ಯಡಿಯೂರಪ್ಪ ವಿರುದ್ಧ ಪೋಕ್ಸೊ ಕೇಸ್ ಬಗ್ಗೆ ಯಾಕೆ ಮಾತಾಡುತ್ತಿಲ್ಲ, ಹೊಸ ರತ್ನ ಮುನಿರತ್ನ ಬಗ್ಗೆ ಮೋದಿ ಯಾಕೆ ಮಾತನಾಡುತ್ತಿಲ್ಲ ಎಂದು ಕೇಳಿದರು. ಬಿಜೆಪಿಯವರು ಹೆಣದ ಮೇಲೂ ಹಣ ಮಾಡುತ್ತಾರೆ, ಕಸದ ಮೇಲೂ ಹಣ ಮಾಡುತ್ತಾರೆ ಎನ್ನುವುದು ಮುನಿರತ್ನ ವಿಚಾರದಲ್ಲಿ ಗೊತಾಗಿದೆ, ಮುನಿರತ್ನ ವಿಚಾರದಲ್ಲಿ ಕೇಂದ್ರ ಸಚಿವ ಜೋಷಿ ಸಮರ್ಥನೆ ಮಾಡುತ್ತಾರೆ, ಮುನಿರತ್ನ ಅರೆಸ್ಟ್ ಮಾಡಿದ್ದು ತಪ್ಪು ಎಂದು ಜೋಷಿ ಹೇಳಿದ್ದಾರೆ ಮೋದಿ ಕೇಳಿ ಮುನಿರತ್ನ ಅರೆಸ್ಟ್ ಮಾಡಬೇಕಿತ್ತಾ..? ಬಿಜೆಪಿ ಸರಕಾರದಲ್ಲಿ 15 ಸಚಿವರು ಕೋರ್ಟ್‌ನಿಂದ ತಡೆ ತಂದಿದ್ದರು, ಇತ್ತೀಚೆಗೆ ಮಾಜಿ ಸಿಎಂ ತಡೆ ತಂದಿದ್ದಾರೆ ಇದರ ಬಗ್ಗೆ ಮೋದಿ ಯಾಕೆ ಮಾತನಾಡುವುದಿಲ್ಲ?

ಹೊಲೆಯರನ್ನು ಯಾಕೆ ಬೆಳೆಸ್ತಿರಾ ಅಂತಾ ಮುನಿರತ್ನ ಹೇಳಿದ್ದಾರೆ, ಸ್ವಾಭಿಮಾನ ಇದ್ದರೆ ಬಿಜೆಪಿಯಲ್ಲಿ ದಲಿತರು ಇರಬಾರದು, ಛಲವಾದಿ ನಾರಾಯಣಸ್ವಾಮಿ ಚಡ್ಡಿ ಹೊತ್ತು ಸಾಗಿದರು, ಬೇರೆಯವರು ಯಾರಾದರು ಚಡ್ಡಿ ಹೊತ್ತಿದ್ರಾ ಸ್ವಾಭಿಮಾನ ಇದ್ರೆ ಬಿಜೆಪಿ ಬಿಟ್ಟು ಬರಬೇಕು. ಅಶೋಕಣ್ಣ, ಶೋಭಾ, ಸಿ.ಟಿ ರವಿ, ವಿಜಯೇಂದ್ರ ಎಲ್ಲರೂ ಮುನಿರತ್ನ ಸಮರ್ಥನೆ ಮಾಡಿಕೊಳ್ಳುತ್ತಿದ್ದಾರೆ, ಈ ವಿಚಾರದ ಬಗ್ಗೆ ಯಾಕೆ ಮಾತನಾಡುತ್ತಿಲ್ಲ. ಮಾಜಿ ಸಿಎಂಗಳಾದ ಬಿಎಸ್ ಯಡಿಯೂರಪ್ಪ, ಹೆಚ್ಡಿ ಕುಮಾರಸ್ವಾಮಿ ಭ್ರಷ್ಟಾಚಾರದ ಅಕ್ಷಯ ಪಾತ್ರೆಗಳು, ಬಿಜೆಪಿ, ಜೆಡಿಎಸ್ ಭ್ರಷ್ಟಾಚಾರದ ಡಬಲ್ ಇಂಜಿನ್ ಗಳು. ಸಿಎಂ ವಿರುದ್ಧ ಮೈಸೂರಿಗೆ ಪಾದಯಾತ್ರೆ ಮಾಡಿದ ನಾಯಕರು, ಮುನಿರತ್ನ ವಿಚಾರದಲ್ಲಿ ಯಾವಾಗ ಪಾದಯಾತ್ರೆ ಮಾಡುತ್ತೀರಾ? ಎಂದು ಪ್ರಶ್ನಿಸಿದರು.

ಬೆಂಗಳೂರಿನಲ್ಲಿ ಅಮೆರಿಕನ್ ಕಾನ್ಸುಲೇಟ್ ತೆರೆಯುವ ಬಗ್ಗೆ ಮಾತನಾಡಿದ ಪ್ರಿಯಾಂಕ್ ಖರ್ಗೆ, ದೆಹಲಿಯಲ್ಲಿರುವ ಅಮೆರಿಕ ಕಾನ್ಸುಲೇಟ್ ಭೇಟಿ ಮಾಡಿದ್ದೇನೆ, ಬೆಂಗಳೂರು, ಸ್ಯಾನ್ ಫ್ರಾನ್ಸಿಸ್ಕೊ ಎರಡು ನಗರಗಳಿಗೆ ಹೋಲಿಕೆ ಇದೆ, ನವೋದ್ಯಮ, ಆವಿಷ್ಕಾರ ಹಂಚಿಕೆ ಕುರಿತು ಚರ್ಚೆ ನಡೆಸಿದ್ದೇವೆ ಅಮೆರಿಕ ಚುನಾವಣೆ ಬಳಿಕ ವಿಷಯ ಪ್ರಸ್ತಾಪ ಮಾಡಲಿದ್ದೇವೆ, ವ್ಯಾಪಾರ ವಹಿವಾಟು ಸಂಸ್ಥೆಗಳ ಜೊತೆ ಮಾತುಕತೆ ಮಾಡುತ್ತಿದ್ದೇವೆ ಎಂದರು.



# ಭಾರತದ ಜಿಡಿಪಿ ಬೆಳವಣಿಗೆಯಲ್ಲಿ ರೇಷ್ಮೆ ಕೃಷಿ ಪ್ರಮುಖ ಪಾತ್ರ- ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಪ್ರಶಂಸೆ

ಬೆಂಗಳೂರು, ಸೆ. 20: ದೇಶದ 27 ರಾಜ್ಯಗಳಲ್ಲಿ ರೇಷ್ಮೆ ಕೃಷಿ ಮಾಡಲಾಗುತ್ತಿದ್ದು, ರೇಷ್ಮೆ ಉದ್ಯಮವು ಬೃಹತ್ ಉದ್ಯಮವಾಗಿ ಬೆಳೆದಿದ್ದು, ದೇಶದ ಜಿ ಡಿ ಪಿ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ವಹಿಸಿದೆ ಎಂದು ಕೇಂದ್ರ ಸರ್ಕಾರದ ಮಾನ್ಯ ಭಾರಿ ಕೈಗಾರಿಕೆ ಮತ್ತು ಉಕ್ಕು ಸಚಿವರಾದ ಎಚ್ . ಡಿ. ಕುಮಾರಸ್ವಾಮಿ ಅವರು ತಿಳಿಸಿದರು. ಇಂದು ಕೇಂದ್ರ ರೇಷ್ಮೆ ಮಂಡಳಿಯ ವತಿಯಿಂದ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ ಆಯೋಜಿಸಲಾಗಿದ್ದ "ಕೇಂದ್ರ ರೇಷ್ಮೆ ಮಂಡಳಿಯ ಪ್ಲಾಟಿನಮ್ ಜುಬಿಲಿ" ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ದೇಶದ 27 ರಾಜ್ಯಗಳ ರೈತರು ತಮ್ಮನ್ನು ರೇಷ್ಮೆ ಕೃಷಿಯಲ್ಲಿ ತೊಡಗಿಸಿಕೊಂಡು ತಮ್ಮ ಜೀವನವನ್ನು ರೂಪಿಸಿಕೊಂಡಿದ್ದಾರೆ. ಕರ್ನಾಟಕದಲ್ಲಿಯೂ ರೇಷ್ಮೆ ಬೆಳೆಯನ್ನು ಹೆಚ್ಚಾಗಿ ಬೆಳೆಯಲಾಗುತ್ತಿದೆ. ಮೈಸೂರು ಭಾಗದಲ್ಲಿ ಅಭಿವೃದ್ಧಿ ಹೊಂದಲು ಮೈಸೂರು ಅರಸರ ಕೊಡುಗೆ ಹೆಚ್ಚು ಎಂದರು. ಕರ್ನಾಟಕದಲ್ಲಿ ರೇಷ್ಮೆ ಬೆಳೆಯನ್ನು ಹೆಚ್ಚಾಗಿ ಬೆಳೆಯಲಾಗುತ್ತಿದೆ. ಚೀನಾದಲ್ಲಿ ಹೆಚ್ಚಿನ ರೇಷ್ಮೆ ಬೆಳೆಯುತ್ತಿದ್ದು, ಮುಂದಿನ ದಿನಗಳಲ್ಲಿ ಭಾರತವು ರೇಷ್ಮೆ ಬೆಲೆಯಲ್ಲಿ ಪ್ರಥಮ ಸ್ಥಾನ ಪಡೆಯುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ರೇಷ್ಮೆ ಬೆಳೆಯು ಕಳೆದ ಎರಡು ಮೂರು ವರ್ಷಗಳಿಂದ ಉತ್ತಮವಾದ ಬೆಲೆ ಸಿಗುತ್ತಿದ್ದು, ರೇಷ್ಮೆ ಬೆಳೆಗಾರರು ಅಭಿವೃದ್ಧಿ ಹೊಂದಲು ಸಾಧ್ಯವಾಗಿದೆ. ಕೇಂದ್ರ ಸರ್ಕಾರವು 1.52 ಲಕ್ಷ ಕೋಟಿ ಹಣವನ್ನು ಕೃಷಿ ಕ್ಷೇತ್ರಕ್ಕೆ ನೀಡಲಾಗಿದೆ. ಪ್ರತಿ ಕ್ಯಾಬಿನೆಟ್ ಸಭೆಯಲ್ಲಿ ರೈತರ ಅಭಿವೃದ್ಧಿಗೆ ಸಂಬಂಧಿಸಿದ ಚರ್ಚೆಗಳು ನಡೆಯುತ್ತವೆ. ರೈತರ ಕಲ್ಯಾಣಕ್ಕೆ ಕೇಂದ್ರ ಸರ್ಕಾರ ಬದ್ಧವಾಗಿದ್ದು, ಈ ನಿಟ್ಟಿನಲ್ಲಿ ಯೋಜನೆಗಳನ್ನು ರೂಪಿಸಲಾಗುತ್ತಿದೆ. ರೈತರು ಆತ್ಮ ವಿಶ್ವಾಸದಿಂದ ಜೀವನ ನಡೆಸಬೇಕು ಈ ನಿಟ್ಟಿನಲ್ಲಿ ನಾವು ಕಾರ್ಯ ನಿರ್ವಹಿಸುತ್ತೇವೆ ಎಂದು ತಿಳಿಸಿದರು. ಶ್ಯಾಮ್ ಪ್ರಕಾಶ್ ಮುಖರ್ಜಿ ಅವರ ದೂರ ದೃಷ್ಟಿಯಿಂದ ಕೇಂದ್ರೀಯ ರೇಷ್ಮೆ ಮಂಡಳಿ ಪ್ರಾರಂಭವಾಯಿತು. ಈ ಮಂಡಳಿಯ ಪ್ರಾರಂಭದಿಂದ ರೇಷ್ಮೆ ಬೆಳೆಯಲ್ಲಿ ಹಲವು ಆವಿಷ್ಕಾರ ಆಗಿದೆ ಎಂದರು. ಜವಳಿ ಖಾತೆ ಕೇಂದ್ರ ಸಚಿವರಾದ ಗಿರಿರಾಜ್ ಸಿಂಗ್ ಅವರು ಮಾತನಾಡಿ ಶ್ಯಾಮ್ ಪ್ರಕಾಶ್ ಮುಖರ್ಜಿ ಅವರು ನಮ್ಮ ಮುಖಂಡರು ಇವರು 1949 ರಲ್ಲಿ ಕೇಂದ್ರ ರೇಷ್ಮೆ ಮಂಡಳಿಯನ್ನು ಪ್ರಾರಂಭಿಸಿದರು. ಮೈಸೂರಿನ ರಾಜರಾದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಮೈಸೂರಿಗೆ ರೇಷ್ಮೆಯನ್ನು ಪರಿಚಯಿಸಿದರು. ಮೈಸೂರು ರೇಷ್ಮೆ ಸೀರೆಗಳು ಇಂದು ವಿಶ್ವ ಪ್ರಸಿದ್ಧಿಯನ್ನು ಪಡೆದಿವೆ. ದೊಡ್ಡ ದೊಡ್ಡ ಕೈಗಾರಿಕೋದ್ಯಮಿಗಳು ರೇಷ್ಮೆ ಉದ್ಯಮದಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ ಎಂದರು. ಮಾನ್ಯ ಪ್ರದಾನ ಮಂತ್ರಿ ನರೇಂದ್ರ ಮೋದಿ ಅವರು ದೇಶದ ರೈತರ ಆದಾಯವನ್ನು ಹೆಚ್ಚಿಸುವ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಕರ್ನಾಟಕದಲ್ಲಿ ತೆಂಗು ಬೆಳೆಯು ತುಮಕೂರು ಹಾಗೂ ರಾಮನಗರ ಜಿಲ್ಲೆಯಲ್ಲಿ ಹೆಚ್ಚಾಗಿ ಬೆಳೆಯುತ್ತಾರೆ ಆದರೆ ರೇಷ್ಮೆಯನ್ನು ಕರ್ನಾಟಕದ ಹೆಚ್ಚು ಜಿಲ್ಲೆಗಳಲ್ಲಿ ಬೆಳೆಯುತ್ತಾರೆ. ಚೈನಾದ ರೇಷ್ಮೆ ಯಿಂದ ಭಾರತದ ರೇಷ್ಮೆ ಗೆ ಬೆಲೆ ಕಡಿಮೆ ಇದೆ.



ಆದರೆ ಮುಂದಿನ ದಿನಗಳಲ್ಲಿ ಚೈನಾದ ರೇಷ್ಮೆ ಕಡಿಮೆ ಆಗುತ್ತದೆ ಅಲ್ಲಿ ಕೆಲಸಗಾರರ ಕೊರತೆ ಉಂಟಾಗುತ್ತಿದೆ. ಇದರಿಂದ ಭಾರತದ ರೇಷ್ಮೆ ಗೆ ಉತ್ತಮ ಬೆಲೆ ಬರುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ದೇಶದ 27 ರಾಜ್ಯಗಳಲ್ಲಿ ರೇಷ್ಮೆ ಬೆಳೆಯನ್ನು ಬೆಳೆಯಲಾಗುತ್ತದೆ. ರೇಷ್ಮೆ ಬೆಳೆಯನ್ನು ಬೆಳೆಯುವುದರಿಂದ ರೈತರು ಉತ್ತಮ ಆದಾಯ ಗಳಿಸಬಹುದಾಗಿದೆ. ದೇಶದ ರೇಷ್ಮೆ ಬೆಳೆಗಾರರ ಹಿತ ಕಾಪಾಡಲು ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದರು. ಕೇಂದ್ರ ಜವಳಿ ರಾಜ್ಯ ಸಚಿವರಾದ ಪವಿತ್ರ ಮಾರ್ಗರೇಟ್ ಕನ್ನಡ ಭಾಷೆಯ ಹೆಚ್ಚು ಶ್ರೀಮಂತವಾದ ಭಾಷೆಯಾಗಿದೆ. ರೇಷ್ಮೆ ಬೆಳೆಯು ಅಬಿವೃದ್ದಿ ಹೊಂದಲು 1949 ರಿಂದ ರೇಷ್ಮೆ ಮಂಡಳಿಯ ತನ್ನದೇ ಆದ ಕೊಡುಗೆಯನ್ನು ನೀಡುತ್ತಾ ಬಂದಿದೆ. ರೇಷ್ಮೆ ಯು ಒಂದು ಉತ್ತಮ ಉದ್ದಿಮೆಯಾಗಿದೆ. ದೇಶದ ರಾಷ್ಟ್ರೀಯ ಆದಾಯದಲ್ಲಿ ತನ್ನದೇ ಆದ ಕೊಡುಗೆಯನ್ನು ನೀಡುತ್ತಿದೆ. ಇದು ಗ್ರಾಮೀಣ ಜನರ ಹಾಗೂ ಮಹಿಳೆಯರ ನೆಚ್ಚಿನ ಬೆಳೆಯಾಗಿದೆ. ಇದರಿಂದ ಗ್ರಾಮೀಣ ಜನರ ಆದಾಯವನ್ನು ಹೆಚ್ಚಿಸುತ್ತಿದೆ ಎಂದು ತಿಳಿಸಿದರು. ಜವಳಿ ಉದ್ಯಮವು ಅಗಾಧವಾಗಿ ಬೆಳೆದಿದೆ. ಕೋಟ್ಯಾಂತರ ಜನರಿಗೆ ಜವಳಿ ಉದ್ಯಮವು ಉದ್ಯೋಗವನ್ನು ನೀಡಿದೆ. ದೇಶದ ಜಿಡಿಪಿಗೆ ಜವಳಿ ಉದ್ಯಮವು ಉತ್ತಮವಾದ ಕೊಡುಗೆ ನೀಡುತ್ತಿದೆ ಎಂದು ಮಾಹಿತಿ ನೀಡಿದರು. ಪಶು ಸಂಗೋಪನೆ ಹಾಗೂ ರೇಷ್ಮೆ ಇಲಾಖೆಯ ಸಚಿವರಾದ ಕೆ ವೆಂಕಟೇಶ್ ಅವರು ಮಾತನಾಡಿ ರೇಷ್ಮೆ ಕರ್ನಾಟಕ ರಾಜ್ಯದಲ್ಲಿ ಪ್ರತಿಷ್ಠಿತ ಬೆಳೆಯಾಗಿದೆ. ಕೇಂದ್ರ ಸರಕಾರದಿಂದ ರೇಷ್ಮೆ ಬೆಳೆಗೆ ಹೆಚ್ಚಿನ ಪ್ರೊ?ರೀತ್ಸಾಹ ನೀಡಬೇಕು. ಇಡೀ ವಿಶ್ವದಲ್ಲಿ ಮೈಸೂರು ರೇಷ್ಮೆ ಸೀರೆಗಳು ಹೆಚ್ಚು ಪ್ರಸಿದ್ಧಿ ಆಗಿವೆ. ರೇಷ್ಮೆ ಬೆಳೆಗಾರರಿಗೆ ಅನುಕೂಲಕರವಾದ ಯೋಜನೆಗಳನ್ನು ಕೇಂದ್ರ ಸರ್ಕಾರ ಜಾರಿಗೆ ತರಬೇಕು ಎಂದು ಮನವಿ ಮಾಡಿದರು. ಮೈಸೂರು ಕೊಡಗು ಲೋಕಸಭಾ ಸದಸ್ಯರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಮಾತನಾಡಿ ಮೈಸೂರಿಗೂ ರೇಷ್ಮೆ ಗೂ ಅವಿನಾಭಾವ ಸಂಬಂಧ ಇದೆ. ವಿಜಯನಗರ ಅರಸರ ಕಾಲದಿಂದ ರೇಷ್ಮೆ ಇಲ್ಲಿ ಪ್ರಚಲಿತದಲ್ಲಿ ಇದೆ. ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ರೇಷ್ಮೆ ಬೆಳೆಯ ಅಭಿವೃದ್ಧಿಗೆ ಕೊಡುಗೆ ನೀಡಿದ್ದಾರೆ. ರೇಷ್ಮೆ ಬೆಳೆಗೆ ಪ್ರೊ?ರೀತ್ಸಾಹ ನೀಡಲು ಎಲ್ಲಾ ರೀತಿಯ ಕಾರ್ಯನಿರ್ವಹಿಸಲಾಗುವುದು ಎಂದು ತಿಳಿಸಿದರು. ಚಿಕ್ಕಬಳ್ಳಾಪುರ ಲೋಕಸಭಾ ಸದಸ್ಯರಾದ ಹಾಗೂ ಕೇಂದ್ರ ರೇಷ್ಮೆ ಮಂಡಳಿಯ ಸದಸ್ಯರಾದ ಡಾ. ಕೆ ಸುಧಾಕರ್ ಅವರು ಮಾತನಾಡಿ ದೇಶದ 26 ರಾಜ್ಯಗಳಲ್ಲಿ ರೇಷ್ಮೆಯನ್ನು ಬೆಳೆಯುತ್ತಿದ್ದಾರೆ. ಆಧುನಿಕ ತಂತ್ರಜ್ಞಾನ ಅಭಿವೃದ್ಧಿ ಹೊಂದಿರುವುದರಿಂದ ಇಳುವರಿಯೂ ಹೆಚ್ಚಾಗಿದೆ. ಅದೇ ರೀತಿ ಬೆಲೆಯೂ ಹೆಚ್ಚಾಗಿದೆ.

ಮೈಸೂರಿಗೆ ಜರ್ಮನಿಯಿಂದ ರೇಷ್ಮೆ ಬೆಳೆಯನ್ನು ತಂದವರು ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು. ಶಿಡ್ಲಘಟ್ಟದಲ್ಲಿ ಹೈಟೆಕ್ ಮಾರುಕಟ್ಟೆಯನ್ನು ಸ್ಥಾಪಿಸಲಾಗುತ್ತಿದೆ ಎಂದರು. ಮಧ್ಯವರ್ತಿಗಳ ಹಾವಳಿಯಿಂದ ರೈತರು ಬೆಳೆದ ಬೆಳೆಗೆ ಉತ್ತಮವಾದ ಬೆಲೆ ಇಲ್ಲ. ಇದನ್ನು ತಡೆಗಟ್ಟಲು ಕ್ರಮ ಕೈಗೊಳ್ಳಬೇಕು. ಕೇಂದ್ರ ಜವಳಿ ಇಲಾಖೆಯ ಕಾರ್ಯದರ್ಶಿಗಳಾದ ರಚನಾ ಷಾ ಅವರು ಮಾತನಾಡಿ ನಾವು ಇಂದು ಕೇಂದ್ರ ರೇಷ್ಮೆ ಮಂಡಳಿಯ 75 ವರ್ಷ ಆಚರಣೆ ಮಾಡುತ್ತಾ ಇದ್ದೇವೆ.1949 ರಲ್ಲಿ ಕೇಂದ್ರ ರೇಷ್ಮೆ ಮಂಡಳಿ ಪ್ರಾರಂಭವಾಯಿತು. ಜವಳಿ ವಲಯವು ಪ್ರಮುಖವಾದ ವಲಯವಾಗಿದೆ. 4.5 ಕೋಟಿ ಜನರು ಜವಳಿ ವಲಯದಲ್ಲಿ ಉದ್ಯೋಗವನ್ನು ಮಾಡುತ್ತಿದ್ದಾರೆ. ರೇಷ್ಮೆ ಬೆಳೆಯು ರೈತರಿಗೆ ಉತ್ತಮ ಆದಾಯ ತರುವ ಬೆಳೆಯಾಗಿದೆ. ಗ್ರಾಮಿಣ ಭಾಗದ ಮಹಿಳೆಯರು ರೇಷ್ಮೆ ಕೃಷಿ ಯಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ. ರೇಷ್ಮೆ ಉತ್ಪಾದನೆಯು ಇಂದು ಬೃಹತ್ ಉದ್ಯಮವಾಗಿ ಬೆಳೆದಿದೆ. ರೇಷ್ಮೆ ಬಟ್ಟೆಗಳು ಇಂದು ವಿಶ್ವ ಮಾರುಕಟ್ಟೆಯಲ್ಲಿ ಉತ್ತಮ ಬೆಲೆಯನ್ನು ಹೊಂದಿವೆ. ಪ್ರಪಂಚದಲ್ಲಿ ಅತಿ ಹೆಚ್ಚು ರೇಷ್ಮೆ ಉತ್ಪಾದನೆ ಮಾಡುವ ರಾಷ್ಟ್ರ ಭಾರತ ಎಂದು ತಿಳಿಸಿದರು. ರಾಜ್ಯಸಭಾ ಸದಸ್ಯರಾದ ನಾರಾಯಣ್ ಕೊರಗಪ್ಪ ಅವರು ಮಾತನಾಡಿ ಡಾ. ಶ್ಯಾಮ್ ಪ್ರಕಾಶ್ ಮುಖರ್ಜಿ ಅವರು ಕೇಂದ್ರ ರೇಷ್ಮೆ ಮಂಡಳಿಯನ್ನು 1949 ರಲ್ಲಿ ಸ್ಥಾಪನೆ ಮಾಡಿದರು. ರೈತರು ಬೆಳೆದ ರೇಷ್ಮೆಯನ್ನು ನೇಕಕಾರರು ನೇಯ್ಗೆ ಮಾಡಬೇಕಾಗಿತ್ತು. ಆದರೆ ಇಂದು ಶೇಕಡಾ 70 ರಷ್ಟು ಜನರು ತಮ್ಮ ಕೈ ಮಗ್ಗಗಳನ್ನು ಸ್ಥಗಿತ ಮಾಡಿದ್ದಾರೆ ಕಾರಣ ನೇಕಾರರ ನೇಯ್ದ ಬಟ್ಟೆಗಳಿಗೆ ಉತ್ತಮ ಬೆಲೆ ಸಿಗುತ್ತಿಲ್ಲ. ನೇಕಾರರಿಗೆ ಪ್ರೋರೀತ್ಸಾಹ ನೀಡಬೇಕು ಎಂದು ಮನವಿ ಮಾಡಿದರು. ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ ಟಿ ದೇವೇಗೌಡ ಅವರು ಮಾತನಾಡಿ ನಾನು ಸಹ 1975 ರಲ್ಲಿ ರೇಷ್ಮೆ ಬೆಳೆಯನ್ನು ಬೆಳೆದಿದ್ದೇನೆ. ನನಗೆ ಪ್ರಗತಿ ಪರ ರೈತ ಎಂಬ ಬಿರುದು ಪಡೆದಿದ್ದೇನೆ. ಕಡಿಮೆ ನೀರು ಇರುವ ಕಡೆಯು ಸಹ ರೇಷ್ಮೆ ಬೆಳೆಯನ್ನು ಬೆಳೆಯಬಹುದಾಗಿದೆ. ರೇಷ್ಮೆ ಕೃಷಿ ಉಳಿಯಲು ಸರ್ಕಾರದಿಂದ ಪ್ರೋರೀತ್ಸಾಹ ದೊರೆಯಬೇಕು. ಪ್ರತಿ ಜಿಲ್ಲೆಯಲ್ಲಿಯೂ ಮಾರುಕಟ್ಟೆ ತೆರೆಯಬೇಕು. ಮಧ್ಯವರ್ತಿಗಳ ಹಾವಳಿಯನ್ನು ತಡೆಯಬೇಕು ಎಂದು ಮನವಿ ಮಾಡಿದರು. ಕೇಂದ್ರ ರೇಷ್ಮೆ ಮಂಡಳಿಯ ವತಿಯಿಂದ 75 ರೂ ಗಳ ನಾಣ್ಯವನ್ನು ಬಿಡುಗಡೆಗೊಳಿಸಲಾಯಿತು. ನಂತರ ಕೇಂದ್ರ ರೇಷ್ಮೆ ಮಂಡಳಿಯ ಕಾಫಿ ಟೇಬಲ್ ಬುಕ್ ಅನ್ನು ಬಿಡುಗಡೆ ಮಾಡಲಾಯಿತು. ಕೇಂದ್ರ ರೇಷ್ಮೆ ಮಂಡಳಿಯ ಹೆಸರಿನ ಪೋಸ್ಟಲ್ ಕವರ್ ಅನ್ನು ಬಿಡುಗಡೆ ಮಾಡಲಾಯಿತು. ಕೇಂದ್ರ ರೇಷ್ಮೆ ಮಂಡಳಿಯ ವತಿಯಿಂದ ಉತ್ತಮ ಹೈಬ್ರಿಡ್ ತಳಿಯ ರೇಷ್ಮೆ ತಳಿಗಳನ್ನು ಬಿಡುಗಡೆ ಮಾಡಲಾಯಿತು.

ರೇಷ್ಮೆ ಕೃಷಿ ಹಾಗೂ ರೇಷ್ಮೆ ನೇಯ್ಗೆಯಲ್ಲಿ ಸಾಧನೆ ಮಾಡಿರುವ ವಿವಿಧ ರಾಜ್ಯಗಳ ರೈತರಿಗೆ ಸನ್ಮಾನ ಮಾಡಲಾಯಿತು. ಕಾರ್ಯಕ್ರಮದಲ್ಲಿ ರೇಷ್ಮೆ ಇಲಾಖೆಯ ಆಯುಕ್ತರಾದ ರಾಜೇಶ್ ಗೌಡ, ಕೇಂದ್ರ ಜವಳಿ ಇಲಾಖೆಯ ಜಂಟಿ ಕಾರ್ಯದರ್ಶಿಗಳಾದ ಪ್ರಜಕ್ತ ಎಲ್ ವರ್ಮ ಅವರು ಸೇರಿದಂತೆ ರೇಷ್ಮೆ ಇಲಾಖೆಯು. ಅಧಿಕಾರಿಗಳು ಹಾಗೂ ರೈತರು ಉಪಸ್ಥಿತರಿದ್ದರು

# ನೆರೆ ಹಾನಿ: ಬೆಳೆ ಪರಿಹಾರ ವಿತರಣೆಗೆ ವಿಳಂಬ ಬೇಡ; ರಸ್ತೆ, ಸೇತುವೆ ದುರಸ್ತಿಗೆ ಕ್ರಮವಹಿಸಿ: ಸಂಸದ ಜಗದೀಶ ಶೆಟ್ಟರ್

**ಬೆಳಗಾವಿ, ಸೆ.20:** ಬೆಳಗಾವಿ ಜಿಲ್ಲೆಯುಲ್ಲಿ ಅತಿವೃಷ್ಟಿಯಿಂದ ಹಾನಿಗೊಳಗಾದ ಪ್ರತಿಯೊಬ್ಬ ರೈತರಿಗೂ ಬೆಳೆ ಪರಿಹಾರ ಒದಗಿಸಬೇಕು. ಜಂಟಿ ಸಮೀಕ್ಷೆಯಲ್ಲಿ ದಾಖಲಾಗದೇ ಇರುವಂತಹ ರೈತರನ್ನು ಗುರುತಿಸಿ ಅವರಿಗೂ ಸಹ ಪರಿಹಾರ ಒದಗಿಸಲು ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಬೆಳಗಾವಿ ಲೋಕಸಭಾ ಕ್ಷೇತ್ರದ ಸದಸ್ಯ ಜಗದೀಶ ಶೆಟ್ಟರ್ ತಿಳಿಸಿದ್ದಾರೆ. ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಇಂದು ಜರುಗಿದ ತ್ರೈಮಾಸಿಕ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಮೇಲುಸ್ತವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪ್ರಧಾನ ಮಂತ್ರಿ ಆವಾಸ ಯೋಜನೆಯಡಿ ನಿರ್ಮಿಸಲಾಗುತ್ತಿರುವ ಜಿ+3 ಮಾದರಿ ಮನೆಗಳ ನಿರ್ಮಾಣ ಕಾಮಗಾರಿಯನ್ನು ಶೀಘ್ರದಲ್ಲಿಯೇ ಪ್ರಾರಂಭಿಸಬೇಕು. ಸರಕಾರದಿಂದ ಜಾರಿಯಲ್ಲಿರುವ ವಿವಿಧ ವಸತಿ ಯೋಜನೆಯಡಿ ಕೈಗೆತ್ತಿಕೊಳ್ಳಲಾದಂತಹ ಕಾಮಗಾರಿಗಳನ್ನು ತ್ವರಿತವಾಗಿ ಪ್ರಾರಂಭಿಸಿ ಬಡ ಜನರಿಗೆ ಅನುಕೂಲ ಮಾಡಿಕೊಡಬೇಕು. ಬೆಳಗಾವಿಯ ತರಕಾರಿ ಹಾಗೂ ಹಣ್ಣುಗಳಿಗೆ ತುಂಬಾ ಬೇಡಿಕೆ ಇರುವ ಹಿನ್ನೆಲೆಯಲ್ಲಿ ಜಿಲ್ಲೆಯ ರೈತರು ಹಾಗೂ ವರ್ತಕರೊಂದಿಗೆ ಸಭೆ ಜರುಗಿಸಿ ಬೆಳಗಾವಿಯ ತರಕಾರಿ ಹಾಗೂ ಹಣ್ಣುಗಳ ಮಾರುಕಟ್ಟೆಯನ್ನು ವಿಸ್ತರಿಸಲು ಗಮನ ಹರಿಸಬೇಕು. ಇದರ ಜೊತೆಗೆ ಶೀಥಿಲ ಕೇಂದ್ರಗಳ ಸ್ಥಾಪನೆಗೆ ಒತ್ತು ನೀಡುವದರ ಜೊತೆಗೆ ಜಿಲ್ಲೆಯಲ್ಲಿ ಕೃಷಿ ಹಾಗೂ ತೋಟಗಾರಿಕೆ ಇಲಾಖೆಯಿಂದ ಜಂಟಿ ಸಮೀಕ್ಷೆ ಜರುಗಿಸಿ ಜಿಲ್ಲೆಯ



ಪ್ರಮುಖ ಕೃಷಿ, ತೋಟಗಾರಿಕೆ ಬೆಳೆ, ಹೂವು ಹಾಗೂ ಹಣ್ಣುಗಳ ಉತ್ಪಾದನೆಯ ಅಂಕಿ ಅಂಶಗಳನ್ನು ನೀಡಲು ತಿಳಿಸಿದರು.

# ಅನಂತಕುಮಾರ್ ಹೆಗ್ಡೆಗೆ ಟಿಕೆಟ್ ತಪ್ಪಿಸಿದ್ದು ನಾನೇ ಛಲವಾದಿ ನಾರಾಯಣಸ್ವಾಮಿ ಹೇಳಿಕೆ

ರಾಯಚೂರು, ಸೆ. 20 : **ಈ ಬಾರಿ** ಲೋಕಸಭಾ ಚುನಾವಣೆಗೆ ಅನಂತ್ ಕುಮಾರ್ ಅವರಿಗೆ ಟಿಕೆಟ್ ಕೊಡಬೇಡಿ ಎಂದು ನಾನೇ ಹೇಳಿ ಅವರ ಟಿಕೆಟ್ ತಪ್ಪಿಸಿದ್ದೆ ಎಂದು ವಿಧಾನ ಪರಿಷತ್ ವಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿದರು. ಅಮೇರಿಕಾದಲ್ಲಿ ಮೀಸಲಾತಿ ಕುರಿತು ಸಂಸತ್ ವಿಪಕ್ಷ ನಾಯಕ ರಾಹುಲ್ ಗಾಂಧಿ ನೀಡಿರುವ ಹೇಳಿಕೆ ಖಂಡಿಸಿ ರಾಹುಲ್ ಗಾಂಧಿ ರಾಜೀನಾಮೆಗೆ ಆಗ್ರಹಿಸಿ ರಾಯಚೂರಿನಲ್ಲಿ ನಡೆದ ಪ್ರತಿಭಟನೆ ಉದ್ದೇಶಿಸಿ ಮಾತನಾಡಿದ ಛಲವಾದಿ ನಾರಾಯಣಸ್ವಾಮಿ ಅವರು, ಅನಂತ ಕುಮಾರ್ ಹೆಗಡೆಗೆ ಕಳೆದ ಲೋಕಸಭಾ ಚುನಾವಣೆಯಲ್ಲಿ ಟಿಕೆಟ್ ಕೈತಪ್ಪಿದ ವಿಚಾರವನ್ನು ಪ್ರಸ್ತಾಪಿಸಿದರು. ಹೌದು ಈ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕೇಂದ್ರ ಮಂತ್ರಿ ಇದ್ದಾಗಲೇ ಮೋದಿಜಿಯವರು ಅನಂತ್ ಕುಮಾರ್ ಅವರನ್ನು ಪಾರ್ಲಿಮೆಂಟಿಗೆ ಕರೆಸಿ ದೇಶದ ಜನರ ಕ್ಷಮೆ ಕೇಳಿಸಿದ್ದರು. ಆದ್ರೆ, ಅವರು ಪುನಃ ಸಂವಿಧಾನ ಬದಲಾವಣೆ ಬಗ್ಗೆ ಮಾತನಾಡಿದರು.

ಹಾಗಾಗಿ ನಾನೇ ನಮ್ಮ ಮುಖಂಡರಿಗೆ ಖಡಕ್ ಆಗಿ ಹೇಳಿದ್ದೆ. ಯಾವುದೇ ಕಾರಣಕ್ಕೂ ಅನಂತ್ ಕುಮಾರ್ ಅವರಿಗೆ ಟಿಕೆಟ್ ಕೊಡಬೇಡಿ ಎಂದಿದ್ದೆ ಎಂದರು. ಅಂದು ನಾವು ಸಂವಿಧಾನದ ಕುರಿತು ಹೇಳಿಕೆ ನೀಡಿದವರಿಗೆ ಟಿಕೆಟ್ ನೀಡದೆ ನಮ್ಮ ಬದ್ಧತೆ ಏನೆಂಬುದನ್ನು ಸಾಭೀತು ಮಾಡಿದ್ದೆವು. ಈಗ ನಿಮ್ಮ ಸರದಿ, ನಿಮ್ಮ ತಾಕತ್ತು ತೋರಿಸಿ ವಿದೇಶದಲ್ಲಿ ಕುಳಿತು ಮೀಸಲಾತಿ ತೆಗೆದು ಹಾಕುವ ಮಾತನಾಡಿರುವ



ರಾಹುಲ್ ಗಾಂಧಿಯನ್ನು ಪಕ್ಷದಿಂದ ತೆಗೆದು ಹಾಕಿ ಎಂದು ರಾಯಚೂರಿನಲ್ಲಿ ನಡೆದ ಪ್ರತಿಭಟನೆಯಲ್ಲಿ ಛಲವಾದಿ ನಾರಾಯಣಸ್ವಾಮಿ ಅವರು ಆಗ್ರಹಿಸಿದರು.

# ಬಿಜೆಪಿಯವರು ಮೈಮೇಲೆ ಬಂದಂತೆ ಆಡುತ್ತಿದ್ದಾರೆ: ಸಚಿವ ಎನ್.ಎಸ್. ಬೋಸರಾಜು

**ರಾಯಚೂರು, ಸೆ. 20:** ಬಿಜೆಪಿಯವರು ಮೈಮೇಲೆ ಬಂದಂತೆ ಆಡುತ್ತಿದ್ದಾರೆ. ರಾಜ್ಯ ಸರ್ಕಾರದಿಂದ ಕೆಲಸ ಆಗುತ್ತಿಲ್ಲ ಎಂದು ಜನರಿಗೆ ಬಿಂಬಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಸಣ್ಣ ನೀರಾವರಿ ಸಚಿವ ಎನ್.ಎಸ್.ಭೋಸರಾಜು ಹೇಳಿದರು. ನಗರದಲ್ಲಿ ಸುದ್ದಿಗಾರರ ಜತೆ ಮಾತನಾಡಿ, ಬಿಜೆಪಿಯವರಿಗೆ ಸಾಮಾನ್ಯ ಜ್ಞಾನ ಇಲ್ಲದಂತಾಗಿದೆ. ಪ್ರಹ್ಲಾದ ಜೋಶಿ, ಎಚ್.ಡಿ.ಕುಮಾರಸ್ವಾಮಿ ಕೇಂದ್ರ ಸಚಿವರಾದರೂ ರಾಜ್ಯದಲ್ಲಿ ನಡೆಯುವ ಸಣ್ಣ ಘಟನೆಗಳಿಗೂ ಪ್ರತಿಕ್ರಿಯೆ ನೀಡುವ ಮೂಲಕ ತಮ್ಮ ಅಸ್ತಿತ್ವ ಸಾಬೀತು ಮಾಡಿಕೊಳ್ಳುತ್ತಿದ್ದಾರೆ. ಆರ್.ಅಶೋಕ ಬಾಯಿಗೆ ಬದ್ಧತೆ ಇಲ್ಲ. ಸಂಬಂಧ ಇಲ್ಲದ ಹೇಳಿಕೆಗಳನ್ನು ಕೊಡುತ್ತಿದ್ದಾರೆ. ಅವರಿಗೆ ಏನಾದರೂ ಕೆಲಸ ಇದೆಯಾ, ಎಂದು ವಾಗ್ದಾಳಿ ನಡೆಸಿದರು. ತಾಲೂಕು ಮಟ್ಟದಲ್ಲಿ ಆಗಿರುವ ವಿಷಯವನ್ನು ರಾಷ್ಟ್ರಮಟ್ಟದಲ್ಲಿ ಮಾತನಾಡ್ತಾರೆ ಎಂದರೆ ಬಿಜೆಪಿಯವರಿಗೆ ಏನಾದರೂ ನೈತಿಕತೆ ಇದೆಯಾ? ನಾಗಮಂಗಲ ಗಲಾಟೆಯನ್ನು ರಾಷ್ಟ್ರಮಟ್ಟದ ವಿಷಯ ಮಾಡಿದ್ದಾರೆ.

ದೇಶದ ಪ್ರಧಾನಿಯೊಬ್ಬರು ಗಣೇಶ ಪೂಜೆಗೆ ಮುಖ್ಯ ನ್ಯಾಯಾಧೀಶರ ಮನೆಗೆ ಹೋಗುತ್ತಾರೆಂದರೆ ಏನು ಹೇಳಬೇಕು. ಪ್ರಧಾನಿಯವರಿಗೆ ತಮ್ಮದೇ ಆದ ಶಿಷ್ಟಾಚಾರ ಇರುತ್ತದೆ. ಅದೆಲ್ಲ ಮೀರಿ ನಡೆದುಕೊಳ್ಳುವ ಮೂಲಕ ಯಾವ ಸಂದೇಶ ಕೊಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ವಾಲ್ಮೀಕಿ ಹಗರಣ ವಿಚಾರದಲ್ಲಿ ಕೇಂದ್ರ ಸರ್ಕಾರ ಸಿಬಿಐ, ಇಡಿಯನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂಬುದು ಇಡೀ ರಾಜ್ಯಕ್ಕೆ ಗೊತ್ತಾಗಿದೆ. ಇಲ್ಲಿ ದಾಖಲಾದ ಆರೋಪಗಳೆಲ್ಲ ನಿರಾಧಾರ. ಈ ವಿಚಾರದಲ್ಲಿ ನ್ಯಾಯಾಲಯದ ತೀರ್ಪು



ಅಂತಿಮವಾಗುತ್ತದೆ. ಆದರೆ, ಇಡಿ, ಸಿಬಿಐ ಬಳಸಿಕೊಂಡು ರಾಜಕೀಯಕ್ಕೆ ತಳಕು ಹಾಕುವುದು ಮೋದಿ , ಶಾ ನೀತಿಯಾಗಿದೆ. ಕಳೆದ 10 ವರ್ಷದಲ್ಲಿ ಕೇಂದ್ರ ಸರ್ಕಾರ ತನಿಖಾ ಸಂಸ್ಥೆಗಳನ್ನು ಕುಲಗೆಡಿಸಿದೆ ಎಂದು ಟೀಕಿಸಿದರು.

# ಕೃಷಿ ಇಲಾಖೆಯ 945 ಗ್ರೂಪ್ ಬಿ ಹುದ್ದೆಗಳ ಭರ್ತಿಗೆ ಕೆ.ಪಿ.ಎಸ್.ಸಿ ಅಧಿಸೂಚನೆ

**ಬೆಂಗಳೂರು ಸೆ 20 :** ಕೃಷಿ ಇಲಾಖೆಯಲ್ಲಿ 945 ಕೃಷಿ ಅಧಿಕಾರಿಗಳು ಹಾಗೂ ಸಹಾಯಕ ಕೃಷಿ ಅಧಿಕಾರಿಗಳನ್ನೊಳಗೊಂಡ ಗ್ರೂಪ್ ಬಿ ಹುದ್ದೆಗಳ ಭರ್ತಿಗೆ ಕರ್ನಾಟಕ ಲೋಕಸೇವಾ ಆಯೋಗ ಅಧಿಸೂಚನೆ ಹೊರಡಿಸಿದೆ. ಇಲಾಖೆ ಇತಿಹಾಸದಲ್ಲಿ ಇಷ್ಟು ದೊಡ್ಡಪ್ರಮಾಣದಲ್ಲಿ ಅಧಿಕಾರಿಗಳ ನೇಮಕಾತಿ ಪ್ರಕ್ರಿಯೆ ನಡೆಯುತ್ತಿರಿವುದು ಇದೇ ಮೊದಲು. ಎನ್ ಚಲುವರಾಯಸ್ವಾಮಿ ಕೃಷಿ ಸಚಿವರಾಗಿ ಅಧಿಕಾರ ಸ್ವೀಕರಿಸಿದ ದಿನದಿಂದಲೇ ಇಲಾಖಾ ಸುಧಾರಣೆಗೂ ಹೆಚ್ಚಿನ ಆದ್ಯತೆ ನೀಡಿದ್ದಾರೆ.ಇಲಾಖೆಯಲ್ಲಿ ಶೇ 60 ಕ್ಕೂ ಅಧಿಕ ಹುದ್ದೆ ಗಳು ಖಾಲಿ ಇರುವುದನ್ನು ಮನಗಂಡ ಅವರು ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರ ಮನವೊಲಿಸಿ ಆರ್ಥಿಕ ಇಲಾಖೆ ಅನುಮತಿಯನ್ನು ಪಡೆದು ಇಲಾಖೆ ಮೂಲಕ ಕೆ.ಪಿ.ಎಸ್.ಸಿಗೆ ಪ್ರಸ್ತಾವನೆ ಕಳಿಸಲು ಕಾರಣರಾಗಿದ್ದಾರೆ. ಈ ನೇಮಕಾತಿಯಿಂದ. ರಾಜ್ಯ 31 ಜಿಲ್ಲೆಗಳ ಎಲ್ಲಾ ತಾಲ್ಲೂಕುಗಳಲ್ಲಿ ತಳ ಮಟ್ಟದಲ್ಲಿ ಕೆಲಸ ಮಾಡಲು ಅಧಿಕಾರಿಗಳನ್ನು ನೇಮಿಸಲು ಸಾಧ್ಯವಾಗಲಿದೆ. 2008 ರಲ್ಲಿ ಕೆ.ಪಿ ಎಸ್.ಸಿ ಮೂಲಕ 410 ಅಧಿಕಾರಿಗಳನ್ನು ನೇಮಕ ಮಾಡಲಾಗಿತ್ತು .

ಇದೀಗ ಒಂದೇ ಬಾರಿಗೆ ದೊಡ್ಡ ಪ್ರಮಾಣದಲ್ಲಿ ಕೃಷಿ ಅಧಿಕಾರಿ , ಸಹಾಯಕ ಕೃಷಿ ಅಧಿಕಾರಿಗಳ ನೇಮಕಾತಿ ಮಾಡಲು ಕ್ರಮ ವಹಿಸಲಾಗಿದ್ದು ಮೂರು ತಿಂಗಳೊಳಗೆ ನೇಮಕಾತಿ ಪ್ರಕ್ರಿಯೆ ಪೂರ್ಣ ಗೊಳಿಸಲು ಸೂಚಿಸಲಾಗಿದೆ. ಇದರಿಂದ ಎಲ್ಲಾ ರೈತ ಸಂಪರ್ಕ ಕೇಂದ್ರದಲ್ಲಿ ಕಾರ್ಯನಿರ್ವಹಿಸಲು ಅಧಿಕಾರಿಗಳು ಲಭ್ಯವಾಗಲಿದ್ದು ಕೃಷಿಕ ಸಮುದಾಯದ ಮಾರ್ಗದರ್ಶನ ಹಾಗೂ ಸೇವೆಗೆ ದೊಡ್ಡ ಶಕ್ತಿ ದ'ೊರ'ತ'ಂತಾಗ'ಲಿದ'. ಮುಖ್ಯಮಂತ್ರಿಯವರಿಗೆ ಧನ್ಯವಾದ ಕೃಷಿ ಇಲಾಖೆಯಲ್ಲಿ ಏಕಕಾಲದಲ್ಲಿ ಇಷ್ಟು ದೊಡ್ಡ ಮಟ್ಟದ ನೇಮಕಾತಿಗೆ ಅನುಮತಿ ಒದಗಿಸಿಕೊಟ್ಟ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕೃಷಿ ಸಚಿವರು ವಿಶೇಷ ಧನ್ಯವಾದಗಳನ್ನು ಅರ್ಪಿಸಿದ್ದಾರೆ. ಈ ನೇಮಕಾತಿಯಿಂದ ಇಲಾಖೆಯಲ್ಲಿ




ಖಾಲಿ ಇದ್ದ ಮೂರನೇ ಒಂದರಷ್ಟು ಅಧಿಕಾರಿಗಳ ಹುದ್ದೆ ಭರ್ತಿಯಾದಂತಾಗಲಿದೆ . ಇದರಿಂದ ರೈತರಿಗೆ ಸೇವಾ ಸೌಲಭ್ಯ ಒದಗಿಸುವ ಪ್ರಕ್ರಿಯೆ ಸುಗಮವಾಗಲಿದೆ . ಬಾಕಿ ಉಳಿವ ಖಾಲಿ ಹುದ್ದೆಗಳ ಭರ್ತಿಗೂ ಪ್ರಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಕೃಷಿ ಸಚಿವರು ತಿಳಿಸಿದ್ದಾರೆ.

# ಗುತ್ತಿಗೆದಾರರ ವಿರುದ್ಧ ಕ್ರಿಮಿನಲ್ ಮೊಕದ್ದಮೆಗೆ ಒತ್ತಾಯ ಜೆಜೆಎಂ ಕಾಮಗಾರಿ ಕಳಪೆ: ಲೋಪ ಸರಿಪಡಿಸಲು ಮನವಿ

**ಬೀದರ್, ಸೆ.20:** ಜಿಲ್ಲೆಯ ಔರಾದ ವಿಧಾನಸಭಾ ಕ್ಷೇತ್ರದಲ್ಲಿ ಜೆಜೆಎಂ ಯೋಜನೆಯಡಿ ಆಗಿರುವ ಕಾಮಗಾರಿಗಳು ಕಳಪೆಯಾಗಿದ್ದು, ಲೋಪಗಳನ್ನು ಸರಿಪಡಿಸಲು ಕ್ರಮ ವಹಿಸುವಂತೆ ಶಾಸಕ ಪ್ರಭು ಚವ್ಹಾಣ್ ಜಿಲ್ಲಾ ಉಸ್ತುವಾರಿ ಮಂತ್ರಿ ಈಶ್ವರ ಖಂಡ್ರೆ ಅವರಿಗೆ ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿದರು. ಕ್ಷೇತ್ರದಲ್ಲಿ ಪ್ರತಿ ವರ್ಷ ನೀರಿನ ಸಮಸ್ಯೆ ಎದುರಾಗುತ್ತದೆ. ಬೇಸಿಗೆ ಸಂದರ್ಭದಲ್ಲಿ ಹೆಚ್ಚಿನ ಸಮಸ್ಯೆಯುಂಟಾಗಿ ಜನತೆ ನೀರಿಗಾಗಿ ಪರದಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗುತ್ತದೆ. ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ಸರ್ಕಾರದ ಮೇಲೆ ಒತ್ತಡ ತಂದು ಜಲ ಜೀವನ್ ಮಿಷನ್ ಯೋಜನೆಗೆ ಅನುದಾನ ತಂದು ಕ್ಷೇತ್ರದಲ್ಲಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಯೋಜನೆಯಡಿ ಔರಾದ ಹಾಗೂ ಕಮಲನಗರ ತಾಲ್ಲೂಕುಗಳಲ್ಲಿ ಒಟ್ಟು 276 ಕಾಮಗಾರಿಗಳು ಮಂಜೂರಾಗಿದ್ದು, ಈ ಪೈಕಿ ಫೇಸ್–1 ರಲ್ಲಿ 35, ಫೇಸ್–2 ರಲ್ಲಿ 28, ಫೇಸ್–3 ರಲ್ಲಿ 131 ಹಾಗೂ ಫೇಸ್–4 ರಲ್ಲಿ 82 ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಕೆಲವೆಡೆ ಕೆಲಸ ಪೂರ್ಣಗೊಂಡಿದ್ದು ಇನ್ನೂ ಕೆಲವೆಡೆ ಕೆಲಸ ನಡೆಯುತ್ತಿದೆ. ಆರಂಭದಿಂದಲೂ ಕಾಮಗಾರಿಯ ಬಗ್ಗೆ ದೂರುಗಳು ಬರುತ್ತಿದೆ. ಬಹುತೇಕ ಕಡೆ ಕಾಮಗಾರಿ ಪೂರ್ಣಗೊಂಡರೂ ಸಮರ್ಪಕವಾಗಿ ನೀರು ಸರಬರಾಜು ಆಗುತ್ತಿಲ್ಲ. ಪೈಪ್‌ಲೈನ್‌ಗಾಗಿ ಅಗೆದ ರಸ್ತೆಗಳನ್ನು ಸರಿಪಡಿಸದೇ ಬಿಡಲಾಗಿದೆ ಎಂದಿದ್ದಾರೆ.

ಗುಂಡಿಗಳನ್ನು ಸರಿಯಾಗಿ ಮುಚ್ಚಿಲ್ಲ : ನೀರು ಸೋರಿಕೆಯಾಗುತ್ತಿದೆ. ಎಲ್ಲ ಮನೆಗಳಿಗೆ ಸಂಪರ್ಕ ಕಲ್ಪಿಸಿಲ್ಲ, ಕೆಲವು ಗ್ರಾಮಗಲ್ಲಿ ನೀರಿನ ಟ್ಯಾಂಕ್ ನಿರ್ಮಿಸಿಲ್ಲ, ಬಾವಿ ನಿರ್ಮಿಸಿಲ್ಲ ಅಂದಾಜುಪಟ್ಟಿಯಂತೆ ಕೆಲಸ ಮಾಡಿಲ್ಲ ಹೀಗೆ ಹತ್ತು ಹಲವು ಸಮಸ್ಯೆಗಳೊಂದಿಗೆ ಜನತೆ ನನ್ನ ಬಳಿಗೆ ಬರುತ್ತಿದ್ದಾರೆ. ಗ್ರಾಮ ಸಂಚಾರದ ಸಂದರ್ಭದಲ್ಲಿ ಯಾವ ಊರಿಗೆ ಭೇಟಿ ನೀಡಿದರೂ ಜನರಿಂದ ಹೆಚ್ಚಾಗಿ ಜೆಜೆಎಂ ಲೋಪಗಳ ಕುರಿತ ದೂರುಗಳೇ ಕೇಳಿಬರುತ್ತಿವೆ. ಎಲ್ಲ ಗ್ರಾಮಗಳಿಗೂ ಶುದ್ಧ ಕುಡಿಯುವ ನೀರು ಪೂರೈಸಬೇಕೆಂಬ ಉದ್ದೇಶದಿಂದ ಪ್ರಧಾನಮಂತ್ರಿಯವರು ಈ ಮಹಾತ್ವಾಕಾಂಕ್ಷಿ ಯೋಜನೆ ಆರಂಭಿಸಿದ್ದಾರೆ. ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಭಾಗಿತ್ವದಲ್ಲಿ ನಡೆಯುತ್ತಿರುವ ಈ ಯೋಜನೆಯು ಅಧಿಕಾರಿಗಳು ಮತ್ತು ಗುತ್ತಿಗೆದಾರರ ಕಾರಣದಿಂದಾಗಿ ಸಂಪೂರ್ಣ ವಿಫಲಗೊಂಡಿದೆ. ಎಲ್ಲಾ ಗ್ರಾಮಗಳಲ್ಲಿ ಕಾಮಗಾರಿಗಳು ಅವೈಜ್ಞಾನಿಕವಾಗಿ ನಡೆದಿವೆ ಎಂದಿದ್ದಾರೆ.

ಓವರ್‌ಹೆಡ್ ಟ್ಯಾಂಕ್ (ಓಎಚ್‌ಟಿ) ಕಳಪೆ ಮಟ್ಟದಲ್ಲಿದ್ದು, ಸೋರಿಕೆಯಾಗುತ್ತಿವೆ. ಕೆಲವು ಗ್ರಾಮಗಳಲ್ಲಿ ತೆರೆದ ಬಾವಿ ನಿರ್ಮಾಣ ಕಾರ್ಯ ಖಾಸಗಿಯವರ ಜಮೀನಿನಲ್ಲಿ ಮಾಡಿದ್ದು, ಆ ಜಮೀನು ಇಲಾಖೆ ಅಧಿನಕ್ಕೆ ಪಡೆದಿರುವುದಿಲ್ಲ. ಕಾಮಗಾರಿ ಯಲ್ಲಿ ಕಳಪೆ ಸಾಮಗ್ರಿಗಳನ್ನು ಬಳಕೆ ಮಾಡಿದ್ದಾರೆ. ಹಲವು ಗ್ರಾಮಗಳಲ್ಲಿ ಕೆಲಸವನ್ನು ಸರಿಯಾಗಿ



ಪರಿಶೀಲಿಸದೇ ಕಾಮಗಾರಿ ಪಂಚಾಯತ್ ಅಧೀನಕ್ಕೆ (ಹ್ಯಾಂಡೋವರ್) ಪಡೆಯಲಾಗಿದೆ ಎನ್ನುವ ದೂರುಗಳಿವೆ. ಅಧಿಕಾರಿಗಳ ನಿರ್ಲಕ್ಷತನ ಮತ್ತು ಗುತ್ತಿಗೆದಾರರ ನಿಷ್ಕಾಳಜಿಯಿಂದಾಗಿ ಗ್ರಾಮೀಣ ಭಾಗದಲ್ಲಿನ ಎಲ್ಲ ಮನೆಗಳಿಗೆ ನೀರು ಪೂರೈಸುವ ಯೋಜನೆ ವಿಫಲವಾಗುತ್ತಿದೆ. ಕೆಲಸ ವಹಿಸಿಕೊಳ್ಳುವ ಕೆಲವು ಗುತ್ತಿಗೆದಾರರು ಬೇರೆಯವರಿಗೆ ಉಪಗುತ್ತಿಗೆ ನೀಡಿ ಸಾರ್ವಜನಿಕರ ಹಿತಾಸಕ್ತಿಯ ಬದಲು ವೈಯಕ್ತಿಕ ಲಾಭ ಮಾಡಿಕೊಳ್ಳಲು ಪ್ರಯತ್ನಿಸುತ್ತಿದ್ದಾರೆ. ಇದು ಕೆಲಸ ಕಳಪೆಯಾಗಲು ಪ್ರಮುಖ ಕಾರಣವಾಗಿದೆ ಎಂದು ಜನತೆ ಹೇಳುತ್ತಿದ್ದಾರೆ. ಹಾಗಾಗಿ ಔರಾದ ಹಾಗೂ ಕಮಲನಗರ ತಾಲ್ಲೂಕುಗಳಲ್ಲಿ ನಡೆದ ಜೆಜೆಎಂ ಕಾಮಗಾರಿಗಳ ಬಗ್ಗೆ ಪ್ರತ್ಯೇಕ ಅಧಿಕಾರಿಗಳ ತಂಡದಿಂದ ತನಿಖೆ ಮಾಡಿಸಬೇಕು. ಕಾಮಗಾರಿ ಕಳಪೆಯಾದ ಕಡೆಗಳಲ್ಲಿ ಅಂದಾಜು ಪಟ್ಟಿಯಲ್ಲಿ ಇರುವಂತೆ ಕಾಮಗಾರಿ ಪುನಃ ಮಾಡಿಸಬೇಕು. ಇಲ್ಲವೇ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಗುತ್ತಿಗೆದಾರರ ಮೇಲೆ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು. ನಷ್ಟವಾದ ಹಣ ವಸೂಲಿ ಮಾಡಿ ಅರ್ಧಕ್ಕೆ ಬಿಟ್ಟ ಕೆಲಸವನ್ನು ಪೂರ್ಣ ಗೊಳಿಸಬೇಕು. ಕಾರ್ಯಾದೇಶ ಪಡೆದ ನಂತರವೂ ಇಂದಿಗೂ ಕೆಲಸ ಪ್ರಾರಂಭಿಸದ ಕಾಮಗಾರಿಗಳನ್ನು ಪುನಃ ಟೆಂಡರ್ ಕರೆದು ಬೇಗ ಕೆಲಸ ಪೂರ್ಣಗೊಳಿಸಲು ಕ್ರಮ ವಹಿಸಬೇಕೆಂದು ಮನವಿ ಮಾಡಿದರು.



ಶುಕ್ರವಾರ ರಾಯಚೂರು ಸಮೀಪದ ಬೈಪಾಸ್ ರಸ್ತೆಯಲ್ಲಿ ಖಾಸಗಿ ಬಸ್ 150 ಕುರಿಗಳನ್ನು ಬಲಿ ತೆಗೆದುಕೊಂಡರೆ, ತೆಲಂಗಾಣದ ಕುರುಬರು 500 ಕುರಿಗಳೊಂದಿಗೆ ಬೆಳ್ಳಂಬೆಳಗ್ಗೆ ರಸ್ತೆಯಲ್ಲಿ ಸಾಗಿದರು.

# ಎಂಇಐ ಟ್ರಾನ್ಸ್‌ಫಾರ್ಮರ್ ದುರಸ್ತಿ ಕೇಂದ್ರಗಳಿಗೆ ಜಮೀನು ಲಭ್ಯ: ಎಂ ಬಿ ಪಾಟೀಲ

**ಬೆಂಗಳೂರು ಸೆ 20 :** ಸರಕಾರಿ ಸ್ವಾಮ್ಯದ ಮೈಸೂರು ಎಲೆಕ್ಟ್ರಿಕಲ್ ಇಂಡಸ್ಟ್ರೀಸ್ ಲಿಮಿಟೆಡ್ (ಎಂಇಐ) ಸಂಸ್ಥೆಯು ರಾಜ್ಯದ ಹಲವು ಭಾಗಗಳಲ್ಲಿ ವಿದ್ಯುತ್ ಟ್ರಾನ್ಸ್‌ಫಾರ್ಮರ್ ದುರಸ್ತಿ ಕೇಂದ್ರಗಳನ್ನು ತೆರೆಯಲು ತಲಾ ಒಂದು ಎಕರೆ ಜಮೀನು ಒದಗಿಸುವಂತೆ ಕೋರಿದ್ದು, ಅದನ್ನು ಈಡೇರಿಸಲಾಗುವುದು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಶುಕ್ರವಾರ ತಿಳಿಸಿದ್ದಾರೆ. ಎಂಇಐ ಅಧ್ಯಕ್ಷ ಎಸ್. ಮನೋಹರ್ ಈ ಸಂಬಂಧ ನೀಡಿದ ಮನವಿ ಸ್ವೀಕರಿಸಿ ಮಾತನಾಡಿದ ಸಚಿವರು, ವಿಜಯಪುರ, ಮೈಸೂರು, ಚಿತ್ರದುರ್ಗ, ಮಂಗಳೂರು, ರಾಯಚೂರು, ಬಳ್ಳಾರಿ ಮತ್ತು ಇತರ ಮುಖ್ಯ ಸ್ಥಳಗಳಲ್ಲಿ ಇರುವ ಕೈಗಾರಿಕಾ ಪ್ರದೇಶಗಳಲ್ಲಿ ಲಭ್ಯತೆ ನೋಡಿಕೊಂಡು ಜಮೀನು ನೀಡಲಾಗುವುದು. ಇದರಿಂದ ಅಡೆತಡೆ ಇಲ್ಲದ ಮತ್ತು ಗುಣಮಟ್ಟದ ವಿದ್ಯುತ್ ವಿತರಣೆಗೆ ಸಹಾಯವಾಗಲಿದೆ ಎಂದಿದ್ದಾರೆ. ಸರಕಾರಿ ಸ್ವಾಮ್ಯದ ಕರ್ನಾಟಕ ವಿದ್ಯುತ್ ಕಾರ್ಖಾನೆ ಈಗಾಗಲೇ ಗುಣಮಟ್ಟದ ಟ್ರಾನ್ಸ್‌ಫಾರ್ಮರ್‌ಗಳನ್ನು ತಯಾರಿಸುತ್ತಿದೆ. ಹಾಗೆಯೇ, ಎಂಇಐ ಉತ್ಕೃಷ್ಟ ದರ್ಜೆಯ 11 ಕೆ.ವಿ. ಸ್ವಿಚ್‌ಗೇರುಗಳ ತಯಾರಿಕೆಗೆ ಹೆಸರುವಾಸಿಯಾಗಿದೆ. ಆದರೆ, ನಮ್ಮಲ್ಲಿ ಟ್ರಾನ್ಸ್‌ಫಾರ್ಮರ್‌ಗಳ ದುರಸ್ತಿಗೆ ವ್ಯವಸ್ಥಿತವಾದ ಜಾಲವಿಲ್ಲ. ಸರಕಾರವು ತನ್ನ ಅಧೀನದ ಉದ್ಯಮ ಸಂಸ್ಥೆಗಳನ್ನು ಉತ್ತೇಜಿಸುವ ಗುರಿ ಹೊಂದಿದೆ. ಇದರಂತೆ ಎಂಇಐಗೆ



ಅಗತ್ಯ ಸೌಕರ್ಯ ಒದಗಿಸಲಾಗುವುದು ಎಂದು ಅವರು ಹೇಳಿದ್ದಾರೆ. ಎಂಇಐ ವ್ಯವಸ್ಥಾಪಕ ನಿರ್ದೇಶಕ ಶ್ರೀಧರ ಈ ಸಂದರ್ಭದಲ್ಲಿ ಇದ್ದರು.

# ಬಿಜೆಪಿ ಆಂತರಿಕ ಕಲಹಕ್ಕೆ ಮುನ್ನುಡಿ: ತೆರೆಮರೆಯಲ್ಲಿ ಉನ್ನತ ನಾಯಕರೊಬ್ಬರು ಭಿನ್ನಮತ ಸೃಷ್ಟಿಗೆ ಕಾರಣ?

**ಬೆಂಗಳೂರು, ಸೆ, 20;** ಬಿಜೆಪಿ ಹಿರಿಯ ಧುರೀಣರಾಗಿದ್ದ ಅನಂತ್ ಕುಮಾರ್ ಅವಧಿ ನಿಜಕ್ಕೂ ಸುವರ್ಣ ಯುಗ ಎಂಬ ಮಾಜಿ ಸಚಿವ ರಮೇಶ್ ಜಾರಕಿಹೊಳಿ ಹೇಳಿಕೆ ಬಿಜೆಪಿಯಲ್ಲಿ ಮತ್ತೊಂದು ಕಂಪನ ಸೃಷ್ಟಿಸಿದೆ. ಹಾಲಿ ಬಿಜೆಪಿ ರಾಜ್ಯ ಅಧ್ಯಕ್ಷರ ವಿರುದ್ಧ ತಿರುಗಿ ಬಿದ್ದಿರುವ ರಮೇಶ್ ಜಾರಕಿಹೊಳಿ ದಿನಕ್ಕೊಂದು ಪ್ರಹಾರ ನೀಡುತ್ತಿದ್ದಾರೆ. ಬಸನಗೌಡ ಪಾಟೀಲ್ ಯತ್ನಾಳ್ ಇತ್ತೀಚೆಗೆ ಮೌನಕ್ಕೆ ಶರಣಾಗಿರುವ ಹಿನ್ನೆಲೆಯಲ್ಲಿ ರಮೇಶ್ ಜಾರಕಿಹೊಳಿ ಇದೀಗ ಬ್ಯಾಟ್ ಬೀಸಲು ಆರಂಭಿಸಿದ್ದಾರೆ. ವಿಜಯೇಂದ್ರ ಪಕ್ಷದ ಚುಕ್ಕಾಣಿ ಹಿಡಿದ ನಂತರ ಯಡಿಯೂರಪ್ಪ ವಿರೋಧಿ ಬಣ ಸಕ್ರಿಯವಾಗಿದೆ. ವಿಶೇಷವಾಗಿ ರಮೇಶ್ ಜಾರಕಿಹೊಳಿ ಅವರಿಗೆ ರಾಷ್ಟ್ರಮಟ್ಟದಲ್ಲಿ ಸಂಘಟನೆಯಲ್ಲಿ ತೊಡಗಿಕೊಂಡಿರುವ ಬಿಜೆಪಿಯ ಹಿರಿಯ ಮತ್ತು ಉನ್ನತ ನಾಯಕರೊಬ್ಬರು ಬೆಂಬಲ ನೀಡುತ್ತಿದ್ದು, ಇದು ಬಿಜೆಪಿ ಆಂತರಿಕ ಕಲಹಕ್ಕೆ ಪುಷ್ಟಿ ನೀಡಿದೆ ಎನ್ನಲಾಗಿದೆ.

ತೆರೆಮರೆಯಲ್ಲಿ ಉನ್ನತ ನಾಯಕರೊಬ್ಬರು ಭಿನ್ನಮತ ಸೃಷ್ಟಿಗೆ ಕಾರಣರಾಗಿದ್ದಾರೆ ಎನ್ನಲಾಗಿದೆ.



ಈ ಸಂಬಂಧ ಬಿಜೆಪಿ ಕಚೇರಿಯಲ್ಲಿ ಗುಸು ಗುಸು ಜೋರಾಗಿವೆ. ಜಾರಕಿಹೊಳಿ ಮತ್ತು ಬಸನಗೌಡ ಯತ್ನಾಳ್ ಮತ್ತು ಇತರರು ಏಕಾಂಗಿಯಾಗಿ ಕಾರ್ಯ ನಿರ್ವಹಿಸುತ್ತಿಲ್ಲ. ಸಾರ್ವಜನಿಕ ಹೇಳಿಕೆಗಳ ಮೂಲಕ ವಿಜಯೇಂದ್ರ ನಾಯಕತ್ವದ ಬಗ್ಗೆ ಆಗಾಗ್ಗೆ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.ದೆಹಲಿಯಲ್ಲಿರುವ ಪಕ್ಷದ ನಿಗೂಢ ಹಿರಿಯ ನಾಯಕ ರೊಬ್ಬರು ಇವರಿಗೆ ಬೆಂಬಲ ನೀಡುತ್ತಿದ್ದಾರೆ ಎಂಬ ಮಾತುಗಳು ಬಿಜೆಪಿಯ ಪಡಸಾಲೆಯಲ್ಲಿ ಕೇಳಿ ಬರುತ್ತಿವೆ. ಈ ಮಹಾನಾಯಕ ಅವರಿಗೆ ರಕ್ಷಣೆ ನೀಡುತ್ತಿದ್ದಾರೆ, ತಮ್ಮ ಹೇಳಿಕೆಗಳ ಮೂಲಕ ಭಿನ್ನಮತ ಪ್ರದರ್ಶಿಸುತ್ತಿರುವ ರಾಜ್ಯ ಬಿಜೆಪಿ ನಾಯಕರ ಮೇಲೆ ಕೇಂದ್ರದ ಹಿರಿಯ ನಾಯಕರು ಯಾವುದೇ ರೀತಿಯ ಕ್ರಮ ಕೈಗೊಳ್ಳದಂತೆ ರಕ್ಷಣೆ ನೀಡುತ್ತಿದ್ದಾರೆ. ಹೀಗಾಗಿ ಈ ಭಿನ್ನಮತೀಯ ನಾಯಕರು ಯಾವುದೇ ಭಯವಿಲ್ಲದೆ ತಮ್ಮ ಟೀಕಾ ಪ್ರಹಾರ ಮುಂದುವರಿಸುತ್ತಿದ್ದಾರೆ

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನೀಡುತ್ತಿರುವ ಕ್ಷಿಪ್ರ ಪ್ರತಿಕ್ರಿಯೆ ಇನ್ನಷ್ಟು ಕುತೂಹಲ ಹೆಚ್ಚಿಸಿದೆ. ಜಾರಕಿಹೊಳಿ ಅವರಂತಹ ನಾಯಕರು ಪಕ್ಷ ಮತ್ತು ಸಿದ್ಧಾಂತದೊಂದಿಗೆ ತೊಡಗಿಸಿಕೊಂಡಿರುವುದು ಒಳ್ಳೆಯ ಬೆಳವಣಿಗೆ ಎಂದು ಅವರು ಎಚ್ಚರಿಕೆಯಿಂದ ಪ್ರತಿಕ್ರಿಯಿಸಿದ್ದಾರೆ. ಆದರೆ ಮುಚ್ಚಿದ ಬಾಗಿಲುಗಳ ಹಿಂದೆ, ಬಿಜೆಪಿಯೊಳಗಿನವರು ಕರಾಳ ಮತ್ತು ಕೆಟ್ಟ ನಿರೂಪಣೆಯನ್ನು ಬಹಿರಂಗಪಡಿಸುತ್ತಾರೆ. ಬಿಜೆಪಿ ಒಂದು ಶಿಸ್ತಿನ ಪಕ್ಷ, ಮತ್ತು ಯಾರಾದರೂ ಈ ರೀತಿ ಪದೇ ಪದೇ ಪಕ್ಷದ– ನಾಯಕತ್ವದ ವಿರುದ್ಧ ತಿರುಗಿ ಬೀಳುತ್ತಿರುವುದನ್ನು ನೋಡಿದರೇ ಹೈಕಮಾಂಡ್ ಮಟ್ಟದಲ್ಲಿ ಇವರುಗಳಿಗೆ ಯಾರು ಶ್ರೀರಕ್ಷೆಯಾಗಿ ನಿಂತಿ ದ್ದಾರೆ ಎಂಬುದು ದೊಡ್ಡ ಪ್ರಶ್ನೆ ಯಾಗಿದೆ.

ದೆಹಲಿಯಲ್ಲಿ ಮಹತ್ವದ ಪಾತ್ರ ವಹಿಸಿದ್ದರೂ, ಸ್ಥಳೀಯ ಚುನಾವಣೆ ಯಲ್ಲಿ ಸ್ವಂತ ಬಲದಿಂದ ಗೆಲ್ಲಲು ಹರಸಾಹಸ ಪಡುತ್ತಿರುವ ಹಿರಿಯ ವ್ಯಕ್ತಿಯೊಬ್ಬರು ಭಿನ್ನಮತೀಯರ ಬೆಂಬಲಕ್ಕೆ ನಿಂತಿದ್ದಾರೆ ಎಂದ ಕೆಲವು ಬಿಜೆಪಿ ನಾಯಕರು ಹೇಳುತ್ತಾರೆ. ಈ ನಾಯಕ, ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರೊಂದಿಗೆ ನಿಕಟ ಸಂಬಂಧ ಹೊಂದಿದ್ದರು. ಈಗ ಕರ್ನಾಟಕದಲ್ಲಿ ಬಿಜೆಪಿಯ ಅನಿರೀಕ್ಷಿತ ಯಶಸ್ಸಿನಿಂದ ಹತಾಶರಾಗಿ ಅಶಾಂತಿ ಹುಟ್ಟುಹಾಕಲುಪ್ರಭಾವ ಬಳಸುತ್ತಿದ್ದಾರೆ ಎನ್ನಲಾಗಿದೆ.

ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ವಿರುದ್ಧ ಯತ್ನಾಳ್ ತೆರೆಮರೆಯಲ್ಲಿ ಕೆಲಸ ಮಾಡುತ್ತಿದ್ದಾರೆ. ವೈಯಕ್ತಿಕವಾಗಿ ವಿಜಯೇಂದ್ರ ಜೊತೆ ಯತ್ನಾಳ್ ಅವರಿಗೆ ಯಾವುದೇ ಸಮಸ್ಯೆ ಇಲ್ಲ ಆದರೆ ಅವರು ಯಡಿಯೂರಪ್ಪನವರ ಮಗ ಎಂಬ ಕಾರಣಕ್ಕೆ ವೈರತ್ವ ಮುಂದುವರಿಸಿದ್ದಾರೆ ಎಂದು ಪಕ್ಷದ ಒಳಗಿನವರು ಹೇಳಿದ್ದಾರೆ.

ದೆಹಲಿಯಲ್ಲಿರುವ ಈ ನಾಯಕ ಎಂಎಲ್ಸಿ ಸಿ.ಟಿ.ರವಿ ಅವರನ್ನು ಪಕ್ಷದ ಅಧ್ಯಕ್ಷರನ್ನಾಗಿ ಮಾಡಲು ಮತ್ತು ಬಸನಗೌಡ ಯತ್ನಾಳ್ ಅವರನ್ನು ವಿರೋಧ ಪಕ್ಷದ ನಾಯಕರನ್ನಾಗಿ ಮಾಡಲು ಬಯಸಿದ್ದರು. ಆದರೆ ಅಂದುಕೊಂಡದ್ದು ನಡೆಯದ ಕಾರಣ ಪಕ್ಷದಲ್ಲಿ ಅಶಾಂತಿ ಮೂಡಿಸಲು ಎಲ್ಲಾ ತಂತ್ರ ನಡೆಸುತ್ತಿದ್ದಾರೆ ಎಂದು ಪಕ್ಷದ ಪ್ರಮುಖರೊಬ್ಬರು ತಿಳಿಸಿದ್ದಾರೆ.

ವಿಜಯೇಂದ್ರ ಬಿಟ್ಟು ಬೇರೆ ಯಾರೇ ಪಕ್ಷದ ರಾಜ್ಯಾಧ್ಯಕ್ಷರಾಗಿದ್ದರೂ ದೆಹಲಿಯ ಈ ಉನ್ನತ ನಾಯಕನನ್ನು ನಿಯಂತ್ರಿಸಲು ಅವರಿಂದ ಸಾಧ್ಯವಾಗುತ್ತಿರಲಿಲ್ಲ. ಈ ಉನ್ನತ ನಾಯಕನಿಗೆ ಎಲ್ಲಾ ಹಂತಗಳಲ್ಲಿ ಅಸಮರ್ಥ ಅಥವಾ ನಿಷ್ಪರಿಣಾಮಕಾರಿ ಜನರು ಇರಬೇಕೆಂಬ



ಬಯಕೆಯಿತ್ತು. ಎಲ್ಲಾ ಕೆಲಸಗಳಿಗೂ ತನ್ನನ್ನು ಸಂಪರ್ಕಿಸಿ ಅನುಮತಿ ಪಡೆಯುವ ರಾಜ್ಯಾಧ್ಯಕ್ಷ ಇದ್ದರೆ ಪಕ್ಷದ ಮೇಲಿನ ನಿಯಂತ್ರಣ ಸುಲಭ ಎಂಬುದು ಅವರ ಇಚ್ಛೆಯಾಗಿತ್ತು. ಆದರೆ ನಡೆದದ್ದು ಬೇರೆ. ಹೀಗಾಗಿ ಅಸಮಾಧಾನಿತ ನಾಯಕರಿಗೆ ಬೆಂಬಲ ನೀಡುವ ಮೂಲಕ ಪಕ್ಷದಲ್ಲಿ ಮತ್ತಷ್ಟು ಭಿನ್ನಮತ ಸೃಷ್ಟಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ. ಈ ಮಹಾ ನಾಯಕ ಯಾರು ಎಂಬುದು ಪಕ್ಷದ ಎಲ್ಲರಿಗೂ ತಿಳಿದಿದೆ. ಎಲ್ಲರೂ ಮಾತನಾಡುತ್ತಿದ್ದಾರೆ, ಆದರೆ ಯಾರೂ ಅವರ ಹೆಸರು ಹೇಳಲು ಧೈರ್ಯ ಮಾಡುವುದಿಲ್ಲ.

# ಬಿಜೆಪಿ ಶಾಸಕನ ವಿರುದ್ಧ ನಾಲಿಗೆ ಹರಿಬಿಟ್ಟವರನ್ನು ರಸ್ತೆ ಮೇಲೆ ಓಡಾಡಲು ಬಿಡಬೇಡಿ: ಬಿ.ವೈ.ವಿಜಯೇಂದ್ರ

**ಬೀದರ್, ಸೆ.20–** ಬಿಜೆಪಿ ಶಾಸಕನ ವಿರುದ್ಧ ನಾಲಿಗೆ ಹರಿಬಿಟ್ಟವನನ್ನು ರಸ್ತೆ ಮೇಲೆ ಓಡಾಡೋಕೆ ಬಿಡಬೇಡಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಪ್ರಚೋದನಕಾರಿ ಹೇಳಿಕೆ ನೀಡುವ ಮೂಲಕ ಕಿಡಿ ಹೊತ್ತಿಸಿದರು.

ಬೀದರ ಜಿಲ್ಲೆಯ ಹುಮ್ನಾಬಾದ್ ತಾಲೂಕಿನ ಹುಡಗಿ ಗ್ರಾಮದಲ್ಲಿ ನಡೆದ ಬಿಜೆಪಿ ಸದಸ್ಯತ್ವ ಅಭಿಯಾನದಲ್ಲಿ ಮಾತನಾಡಿದ ಅವರು, ಶಾಸಕರ ಹೆಸರು ಪ್ರಸ್ತಾಪಿಸದೆ ಮಾಜಿ ಸಚಿವ ರಾಜಶೇಖರ್ ಪಾಟೀಲರ ಸಹೋದರ ಹಾಗೂ ಕಾಂಗ್ರೆಸ್ ಎಮ್ಎಲ್‌ಸಿ ಚಂದ್ರಶೇಖರ್ ಪಾಟೀಲ್ ವಿರುದ್ಧ ಏಕವಚನದಲ್ಲೆ ಹರಿಹಾಯ್ದರು.



ಬೀದರ್ ಜಿಲ್ಲೆಯ ಹುಮನಾಬಾದ್ ತಾಲ್ಲೂಕಿನ ಹುಡಗಿ ಗ್ರಾಮದಲ್ಲಿ ನಡೆದ ಬಿಜೆಪಿ ಸದಸ್ಯತ್ವ ಅಭಿಯಾನದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮಾತನಾಡಿದರು.

ಆತ ಅಧಿಕಾರ ಶಾಶ್ವತ ಎನ್ನುವ ದುರಹಂಕಾರದಲ್ಲಿ ಮಾತನಾಡಿದ್ದಾನೆ. ಅಧಿಕಾರ ಶಾಶ್ವತ ಎನ್ನುವ ಭ್ರಮೆಯಲ್ಲಿದ್ದಂತೆ ಕಾಣಿಸುತ್ತದೆ. ಈ ಬಗ್ಗೆ ಕಾನೂನು ಕ್ರಮ ಕೈಗೊಳ್ಳುವ ಬಗ್ಗೆ ಚರ್ಚಿಸುತ್ತೇನೆ. ನಮ್ಮ ಕಾರ್ಯಕರ್ತರೇನು ಬಳೆ ತೊಟ್ಟುಕೊಂಡು ನಿಂತಿಲ್ಲ. ಅಧಿಕಾರ ಶಾಶ್ವತ ಅಲ್ಲ ಎನ್ನುವುದನ್ನು ನೆನಪು ಮಾಡಿಕೊಡಬೇಕು. ದುರಹಂಕಾರದಲ್ಲಿ ಮಾತನಾಡಿದವನಿಗೆ ಮುಂದಿನ ದಿನಗಳಲ್ಲಿ ಉತ್ತರ ಕೊಡೋಣ ಎಂದರು.

ಅಷ್ಟೇ ಅಲ್ಲ, ಬಿಜೆಪಿ ಕಾರ್ಯಕರ್ತರು ಅಧಿಕಾರ ಇಲ್ಲದೇ ಇರುವಾಗಲೇ ಹೆದರಿಲ್ಲ. ಮುಂದಿನ ದಿನಗಳಲ್ಲಿ ಬಿಜೆಪಿ ಮತ್ತೆ ಅಧಿಕಾರಕ್ಕೆ ಬರುತ್ತದೆ. ಇಂತಹ ಪುಡಾರಿಗಳಿಗೆಲ್ಲ ನಾವು ಹೆದರಲ್ಲ. ಹೆಸರು ಹೇಳದೆ ಕಾಂಗ್ರೆಸ್ ಎಮ್ಎಲ್‌ಸಿ ಚಂದ್ರಶೇಖರ್ ಪಾಟೀಲ್ ವಿರುದ್ಧ ಕಿಡಿಕಾರಿದರು. ಕಳೆದ ಸೆ.7ರಂದು ನೂತನ ಸಂಸದರ ಸದಸ್ಯರ ಅಭಿನಂದನಾ ಸಮಾರಂಭದಲ್ಲಿ ಹುಮನಾಬಾದ್ ಶಾಸಕ ಸಿದ್ದು ಪಾಟೀಲ್ ವಿರುದ್ಧ ವಿಧಾನ ಪರಿಷತ್ ಸದಸ್ಯ ಚಂದ್ರಶೇಖರ ಪಾಟೀಲ್ ನಾಲಿಗೆ ಹರಿಬಿಟ್ಟಿದ್ದರು. ಅವನು ಏನಾದರೂ ಮಾತಾಡಿದರೆ ನಾಲಿಗೆ ಕತ್ತರಿತ್ತೇನೆ, ಸ್ವಲ್ಪ ಸಮಯ ಕೊಡ್ರಿ. ಅವನಿಗೆ ಗಣೇಶನ ಸೊಂಡಿಲಿನಿಂದ ಬೀಸಾಕುತ್ತೇನೆಂದು ಸಿದ್ದು ಪಾಟೀಲ್ ವಿರುದ್ಧ ವಾಗ್ದಾಳಿ ನಡೆಸಿದ್ದರು. ಇದೀಗ ಹೆಸರು ಹೇಳದೆ ಕಾಂಗ್ರೆಸ್ ಎಂಎಲ್‌ಸಿ ಚಂದ್ರಶೇಖರ್ ಪಾಟೀಲ್ ವಿರುದ್ಧ ವಿಜಯೇಂದ್ರ ಕಿಡಿಕಾರಿದ್ದಾರೆ.




ಧಾರವಾಡದ ಕೃಷಿ ವಿಶ್ವವಿದ್ಯಾಲಯದಲ್ಲಿ ಶನಿವಾರದಿಂದ ನಾಲ್ಕು ದಿನಗಳ ಕಾಲ ಕೃಚಿ ಮೆಳ ನಡೆಯಲಿದೆ. ಇದಕ್ಕಾಗಿ ವ್ಯವಸ್ಥೆ ಭರದಿಂದ ಸಾಗಿದೆ.

### ಹಾನಗಲ್ ಕುಮಾರ ಶಿವಯೋಗಿಗಳ 157 ಜಯಂತ್ಯೋತ್ಸವ

## ಜಗದ್ಗುರು ಡಾ.ಸಂಗನಬಸವ ಮಹಾಸ್ವಾಮಿಗಳ 86ನೇ ಜಯಂತೋತ್ಸವ



**ಬಳ್ಳಾರಿ,ಸೆ.20–**ಬಳ್ಳಾರಿ ನಗರದ ಕೊಟ್ಟೂರು ಸ್ವಾಮಿ ಮಠದಲ್ಲಿ 10 ದಿನಗಳ ಕಾಲ ಹಮ್ಮಿಕೊಂಡಿರುವ ಹಾನಗಲ್ಲಿನ ಕುಮಾರ ಶಿವಯೋಗಿಗಳ ಜೀವನ ದರ್ಶನದ ಪ್ರವಚನವನ್ನು ಹಮ್ಮಿಕೊಂಡಿದೆ.

ಮಠದ ಶ್ರೀಗಳಾದ ಬಸವಲಿಂಗ ಶ್ರೀಗಳ ಸಾನಿಧ್ಯದಲ್ಲಿಪ್ರತಿದಿನ ಸಂಜೆ 7 ರಿಂದ 8.30 ರವರೆಗೆ ಹಾನಗಲ್ ಕುಮಾರ ಶಿವಯೋಗಿಗಳ 157 ಜಯಂತ್ಯೋತ್ಸವ ಹಾಗೂ ಜಗದ್ಗುರು ಡಾ.ಸಂಗನಬಸವ ಮಹಾಸ್ವಾಮಿಗಳ 86ನೇ ಜಯಂತೋತ್ಸವದ ಅಂಗವಾಗಿ ಈ ಪ್ರವಚನ(ಪುರಾಣ) ನಡೆಯುತ್ತಿದೆ.

ಹತ್ತು ದಿನಗಳ ಕಾರ್ಯಕ್ರಮಕ್ಕೆ ಮಠದಶ್ರೀಗಳು ದೀಪ ಬೆಳಗಿಸಿ ಚಾಲನೆ ನೀಡಿದರು.ಕುರುಗೋಡಿನ ನಿರಂಜನ ಪ್ರಭುಶ್ರೀಗಳು, ಬೂದುಗುಂಪದ ಶ್ರೀಗಳು, ಸೋಮಸಮುದ್ರ ಸಿದ್ದಲಿಂಗ ಶ್ರೀಗಳು, ಮಸೀದಿಪುರದ ಸಿದ್ದರಾಮನಗೌಡ, ಪತ್ರಕರ್ತ ಎನ್.ವೀರಭದ್ರಗೌಡ ಭಾಗವಹಿಸಿದ್ದರು. ಡೋಣಿಯ ಶಶಿಧರ ಶಾಸ್ತ್ರಿಗಳು ಪ್ರವಚನ ನೀಡುತ್ತಿದ್ದು. ಸಂಗೀತಗಾರರಾಗಿ ಡಿ.ಕಗ್ಗಲ್ಲಿನ ದೊಡ್ಡ ಬಸವ ಗವಾಯಿ, ತಬಲ ವಾದಕರಾಗಿ ತೋಟೇಂದ್ರ ಕರಡಕಲ್ ಅವರು ಪುರಾಣ ಕಾರ್ಯ ನಿರ್ವಹಿಸುತ್ತಿದ್ದಾರೆ. ಪ್ರವಚನ ನೀಡಿದ ಶಶಿಧರ ಶ್ರೀಗಳು ಭಕ್ತಿ, ಕಾಯಕದ ಮಹತ್ವ ತಿಳಿಸಿದರು.

ನಂತರ ಮಠದ ಶ್ರೀಗಳಾದ ಬಸವಲಿಂಗ ಶ್ರೀಗಳು, ಇಂದಿನ ಯಾಂತ್ರಿಕ ಬದುಕಿನಲ್ಲಿ ಜನತೆ ನೆಮ್ಮದಿಯನ್ನು ಕಳೆದುಕೊಳ್ಳುತ್ತಿದ್ದಾರೆ. ಇಂತಹ ಸಮಯದಲ್ಲಿ ಜನತೆ, ಭಕ್ತ ಸಮೂಹ ಪುರಾಣ ಪ್ರವಚನಗಳಲ್ಲಿ ಭಾಗವಹಿಸಿ ಯಾಂತ್ರಿಕ ಬದುಕಿನಿಂದ ದೂರವಾಗಿ ಶಾಂತಿ ನೆಮ್ಮದಿ ಪಡೆಯಲು ಮುಂದಾಗಿ. ಜೊತೆಗೆ ಬದುಕಿನಲ್ಲಿ ಮತ್ತೊಬ್ಬರಿಗೆ ಸಹಾಯ ಮಾಡುವ ಗುಣ ಬೆಳಸಿಕೊಳ್ಳಬೇಕು. ದುಡಿಮೆಯಲ್ಲಿ ಹಂಚಿಕೊಂಡು ತಿನ್ನುವ ಕೆಲಸ ನಮ್ಮದಾಗಬೇಕು ಎಂದು ಹೇಳಿದರು.

ಪುರಾಣಕ್ಕೆ ಆಗಮಿಸುವ ಭಕ್ತರಿಗೆ ಇಲ್ಲಿನ ಬಸವೇಶ್ವರನಗರ, ತಾಲೂಕಿನ ಶ್ರೀಧರಗಡ್ಡೆ ಮತ್ತು ಸೋಮಸಮುದ್ರ ಗ್ರಾಮದಿಂದ ಬಸ್ ವ್ಯವಸ್ಥೆ ಕಲ್ಪಿಸಿದೆ ಜೊತೆಗೆ ಪುರಾಣದ ನಂತರ ಪ್ರಸಾದದ ವ್ಯವಸ್ಥೆ ಸಹ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

## ಪ್ರತಿಷ್ಠಿತ ವಿಜ್ಞಾನಿಗಳ ಪಟ್ಟಿ ವಿ.ಶ್ರೀಕೃ.ವಿ.ವಿ.ಯ ಮೂವರಿಗೆ ಸ್ಥಾನ



ಪ್ರೊ.ಹನುಮೇಶ್ ವೈದ್ಯ



ಪ್ರೊ ಕೆ.ವಿ.ಪ್ರಸಾದ್



ಡಾ. ಅಶ್ವಿನ್ ಪಿ.

**ಬಳ್ಳಾರಿ,ಸೆ.20–**ವಿಶ್ವದ ಪ್ರತಿಷ್ಠಿತ ಅಮೆರಿಕದ ಸ್ಟಾಯನ್‌ಫೋರ್ಡ್ ವಿಶ್ವವಿದ್ಯಾಲಯ ವಾರ್ಷಿಕವಾಗಿ ಪ್ರಕಟಿಸುವ ಜಗತ್ತಿನ ಖ್ಯಾತ ವಿಜ್ಞಾನಿಗಳ ಪಟ್ಟಿಯಲ್ಲಿ ಬಳ್ಳಾರಿ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಮೂವರು ಪ್ರಾಧ್ಯಾಪಕರು ಸ್ಥಾನ ಪಡೆದಿದ್ದಾರೆ.

ವಿವಿಯ ಗಣಿತಶಾಸ್ತ್ರ ವಿಭಾಗದ ಹಿರಿಯ ಪ್ರಾಧ್ಯಾಪಕ ಮತ್ತು ಕೊಪ್ಪಳ ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವರಾದ ಪ್ರೊ.ಕೆ.ವಿ.ಪ್ರಸಾದ್ ಮತ್ತು ಗಣಿತಶಾಸ್ತ್ರ ಮತ್ತು ಗಣಕ ವಿಜ್ಞಾನ ವಿಭಾಗದ ಮುಖ್ಯಸ್ಥರಾದ ಪ್ರೊ. ಹನುಮೇಶ್ ವೈದ್ಯ ಅವರು ಸತತ ಎರಡನೇ ಬಾರಿ ಈ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ. ಗಣಿತಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಅಶ್ವಿನ್ ಪಿ. ಇದೇ ಮೊದಲ ಬಾರಿ ಸ್ಥಾನ ಪಡೆದಿದ್ದಾರೆ. ಒಟ್ಟಾರೆ ವಿವಿಯ ಮೂವರು ಈ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ.

ವಿಶ್ವದರ್ಜೆಯ ಗುಣಮಟ್ಟದ ಸಂಶೋಧನಾ ಲೇಖನಗಳನ್ನು ವೆಬ್ ಆಫ್ ಸೈನ್ಸ್, ಸ್ಕೋಪಸ್, ಗೂಗಲ್ ಸ್ಕಾಲರ್, ಹೆಚ್ ಇಂಡೆಕ್ಸ್, ಇಂಪ್ಯಾಕ್ಟ್ ಫ್ಯಾಕ್ಟರ್, ಸೈಟೇಷನ್ ಹೀಗೆ ಹಲವಾರು ಸಂಯೋಜಿತ ಮಾನದಂಡಗಳನ್ನು ಆಧರಿಸಿ ವಿಶ್ವದ ಉತ್ತಮ ಸಂಶೋಧಕರನ್ನು ಗುರುತಿಸಿ ವಾರ್ಷಿಕವಾಗಿ ಸ್ಟಾನ್‌ಫೋರ್ಡ್ ವಿಶ್ವವಿದ್ಯಾಲಯವು ಪಟ್ಟಿ ಬಿಡುಗಡೆ ಮಾಡುತ್ತದೆ.

ಗುಣಮಟ್ಟದ ಸಂಶೋಧನಾ ಲೇಖನಗಳನ್ನು ಪ್ರಕಟಿಸಲು ಹೆಸರುವಾಸಿಯಾಗಿರುವ ಎಲ್ಸೀಯರ್ ಸಂಸ್ಥೆ ಸಹಭಾಗಿತ್ವದಲ್ಲಿ ಸ್ಟಾಯನ್ ಫೋರ್ಡ್ ವಿಶ್ವವಿದ್ಯಾಲಯವು ಕಳೆದ ವಾರ ಪಟ್ಟಿ ಬಿಡುಗಡೆ ಮಾಡಿದೆ. ಪ್ರಪಂಚದ ಒಟ್ಟು ಸಂಶೋಧನಕಾರರಲ್ಲಿ ಶೇ.2ರಷ್ಟು ಖ್ಯಾತನಾಮ ವಿಜ್ಞಾನಿಗಳನ್ನು ಸಂಶೋಧನೆಗೆ ಸಂಬಂಧಿಸಿದ ವಿವಿಧ ವರ್ಗಗಳಲ್ಲಿ ವಿಂಗಡಿಸಿ ಪಟ್ಟಿ ಅಂತಿಮಗೊಳಿಸಿದೆ.

ಮೂವರು ಪ್ರಾಧ್ಯಾಪಕರ ಸಾಧನೆಗೆ ಬಳ್ಳಾರಿ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಎಂ.ಮುನಿರಾಜು, ಕೊಪ್ಪಳ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಬಿ.ಕೆ.ರವಿ, ವಿಶ್ರೀಕೃವಿವಿ ಕುಲಸಚಿವ ರುದ್ರೇಶ್.ಎಸ್.ಎನ್., ಪ್ರಾಧ್ಯಾಪಕರುಗಳು, ಸಿಬ್ಬಂದಿ, ಕುಟುಂಬ ವರ್ಗ ಅಭಿನಂದಿಸಿದ್ದಾರೆ.

## ನಿಗಮ-ಮಂಡಳಿಗಳಲ್ಲಿ ಪಕ್ಷದ ಕಾರ್ಯಕರ್ತರಿಗೆ ಆದ್ಯತೆ ಕಲ್ಲುಕಂಬ ಪಂಪಾಪತಿ ಒತ್ತಾಯ

**ಬಳ್ಳಾರಿ, ಸೆ.20–** ರಾಜ್ಯ ಸರ್ಕಾರ ನಿಗಮ ಮಂಡಳಿಗಳಿಗೆ ಸದಸ್ಯರ ನೇಮಕಾತಿಯಲ್ಲಿ ಹಲವಾರು ವರ್ಷಗಳಿಂದ ಪಕ್ಷಕ್ಕಾಗಿ ದುಡಿದ ಹಿರಿಯ ಮತ್ತು ಕಿರಿಯ ಕಾರ್ಯಕರ್ತರಿಗೆ ಅವಕಾಶ ಕಲ್ಪಿಸಬೇಕೆಂದು ಕಾಂಗ್ರೆಸ್ ಹಿರಿಯ ಮುಖಂಡ ಕಲ್ಲುಕಂಬ ಪಂಪಾಪತಿ ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು.

ಅವರು ಮುಂಡ್ಲೂರು ರಾಮಪ್ಪ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ, ಕರ್ನಾಟಕ ರಾಜ್ಯ ಸರ್ಕಾರ ನಿಗಮ ಮಂಡಳಿಗಳಿಗೆ ಸದಸ್ಯರ ನೇಮಕಾತಿಯಲ್ಲಿ ಪಕ್ಷದ ಸಂಘಟನೆ ಮತ್ತು ಅಭಿವೃದ್ಧಿಗೆ ಶ್ರಮಿಸಿದ ಹಿರಿಯ ಮತ್ತು ಕಿರಿಯ ಕಾರ್ಯಕರ್ತರಿಗೆ ಆದ್ಯತೆ ನೀಡುವುದರ ಜೊತೆಗೆ ಸಾಮಾಜಿಕ ನ್ಯಾಯ ಪಾಲಿಸಬೇಕು, ಇದಕ್ಕೆ ಸಂಬಂಧಿಸಿದ ಈಗಾಗಲೇ ಮುಖ್ಯಮಂತ್ರಿ ಸಿದ್ದ ರಾಮಯ್ಯ ಅವರಿಗೆ ಮನವಿ ಪತ್ರ ಮತ್ತು ವಿವರಗಳನ್ನು ಸಲ್ಲಿಸಲಾಗಿದೆ ಎಂದು ತಿಳಿಸಿದರು.

ಸದಸ್ಯರ ನೇಮಕಾತಿಯಲ್ಲಿ ಒಂದು ಎಸ್ ಸಿ ಒಂದು ಎಸ್ ಟಿ, ಓಬಿಸಿ, ಮೈನಾರಿಟಿ ಒಂದು ಜನರಲ್ ಸದಸ್ಯರಿಗೆ ಪ್ರಾತಿನಿಧ್ಯ ನೀಡಬೇಕು ಜೊತೆಗೆ ಒಬ್ಬ ಮಹಿಳಾ, ಒಬ್ಬ ವಕೀಲ ಅಥವಾ ಒಬ್ಬ ಪದವೀಧರ ಕಡ್ಡಾಯವಾಗಿರುವಂತೆ ನಿಗಾ ವಹಿಸಬೇಕೆಂದು ವಿನಂತಿಸಿದ್ದಾರೆ.

### ರೇಷ್ಮೆ ಇಲಾಖೆ ವಿಭಾಗ ಮಟ್ಟದ ಪರಿಶೀಲನಾ ಸಭೆ

## ಕಲ್ಯಾಣ ಕರ್ನಾಟಕದಲ್ಲಿ ರೇಷ್ಮೆ ಬೆಳೆ ಕುರಿತು ಹೆಚ್ಚಿನ ಪ್ರಚಾರ ಅಗತ್ಯ

**ಕಲಬುರಗಿ, ಸೆ.20–** ರೇಷ್ಮೆ ಹುಳುಗಳು ಸಾಯದಂತೆ ಹಿಪ್ಪು ನೇರಳೆ ತೋಟಕ್ಕೆ ಲೈವ್ ಫೈನ್ಸಿಂಗ್ ಮಾಡಿಕೊಂಡು ಸಮಸ್ಯೆ ಎದುರಿಸಲು ರೇಷ್ಮೆ ಬೆಳೆಗಾರರಿಗೆ ವ್ಯಾಪಕ ಪ್ರಚಾರ ಮಾಡಬೇಕು ಎಂದು ಪಶುಸಂಗೋಪನೆ ಮತ್ತು ರೇಷ್ಮೆ ಇಲಾಖೆ ಸಚಿವ ಕೆ.ವೆಂಕಟೇಶ ಸೂಚಿಸಿದರು.



ಕಲಬುರಗಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಪಶುಸಂಗೋಪನೆ ಮತ್ತು ರೇಷ್ಮೆ ಇಲಾಖೆ ಸಚಿವ ಕೆ.ವೆಂಕಟೇಶ ಅವರು ಕಲಬುರಗಿ ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ವಿಭಾಗದ ರೇಷ್ಮೆ ಇಲಾಖೆ ವಿಭಾಗ ಮಟ್ಟದ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಇತ್ತೀಚಗೆ ರೈತರು ಕೃಷಿ ಮತ್ತು ತೋಟಗಾರಿಕೆ ಬೆಳೆಗಳಿಗೆ ವಿಪರೀತ ಕೀಟನಾಶಕ ಸಿಂಪರಣೆ ಮಾಡುತ್ತಿರುವುದರಿಂದ ರೇಷ್ಮೆ ಹುಳುಗಳುಗಳ ಮೇಲೆ ಅಡ್ಡ ಪರಿಣಾಮ ಬೀರಿ ಹುಳುಗಳು ಗೂಡುಗಳನ್ನು ಕಟ್ಟದೆ ಸಾಯುತ್ತಿರುವ ಬಗ್ಗೆ ಚರ್ಚಿಸಲಾಗಿ, ವಿಜ್ಞಾನಿಗಳು ತಿಳಿಸಿರುವಂತೆ ಹಿಪ್ಪು ನೇರಳೆ ತೋಟಕ್ಕೆ ಲೈವ್ ಫೆನ್ಸಿಂಗ್ ಮಾಡಿಕೊಂಡು ಸಮಸ್ಯೆ ಬಗೆಹರಿಸ ಬಹುದಾಗಿದೆ ಎಂದರು.

ರೇಷ್ಮೆ ಜಂಟಿ ನಿರ್ದೇಶಕ ಮಾತನಾಡಿ, ಈಗಾಗಲೇ ಗುಂಪು ಚರ್ಚೆಗಳ ಮೂಲಕ ಹಾಗೂ ಪ್ರತ್ಯಕ್ಷತೆ ಮೂಲಕ, ಉತ್ಕೃಷ್ಟ ಗುಣಮಟ್ಟದ ಹಿಪ್ಪು ನೇರಳೆ ಮಾಟಿ, ರೇಷ್ಮೆ ಗೂಡುಗಳನ್ನು ಉತ್ಪಾದಿಸುವ ಬಗ್ಗೆ ರೇಷ್ಮೆ ಇಲಾಖೆಯ ಎಲ್ಲಾ ಭಾಗಿದಾರರಿಗೆ ತಾಂತ್ರಿಕ ಮಾಹಿತಿ ಕ್ಷೇತ್ರ ಮಟ್ಟದಲ್ಲಿ ನೀಡಲಾಗುತ್ತಿದೆ. ಎಲ್ಲಾ ಅಧಿಕಾರಿಗಳಿಗೆ ತಾಂತ್ರಿಕ ಮಾಹಿತಿ ಕ್ಷೇತ್ರ ಮಟ್ಟದಲ್ಲಿ ನೀಡಲಾಗುತ್ತದೆ ಎಂದು ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ ಹೈಟೆಕ್ ರೇಷ್ಮೆ ಗೂಡು ಮಾರುಕಟ್ಟೆ ಆಗುತ್ತಿರುವುದರಿಂದ ಹಾಗೂ ವಿಭಾಗದ ರೇಷ್ಮೆ ಬೆಳೆಗಾರರು ಸರಕಾರಿ ರೇಷ್ಮೆ ಗೂಡಿನ ಮಾರುಕಟ್ಟೆ ರಾಮನಗರದಲ್ಲಿ ರೇಷ್ಮೆ ಗೂಡು ವಹಿವಾಟು ಮಾಡುತ್ತಿದ್ದಾರೆ. ರೇಷ್ಮೆ ಬೆಳೆಗಾರರು ಕಲಬುರಗಿಯಲ್ಲೇ ಗೂಡು ವಹಿವಾಟು ಮಾಡಬೇಕಾದರೆ ಕನಿಷ್ಠ 50 ರೇಷ್ಮೆ ನೂಲು ಬಿಚ್ಚಾಣಿಕೆದಾರರನ್ನು ತಯ್ಯಾರು ಮಾಡಬೇಕಾಗಿರುತ್ತದೆ.

ಆದ ಕಾರಣ ಕಲ್ಯಾಣ ಕರ್ನಾಟಕ ಭಾಗದ ಆಸಕ್ತ ರೀಲರುಗಳಿಗೆ ಸಾಂಪ್ರದಾಯಿಕ ಪ್ರದೇಶಗಳಾದ ಕೋಲಾರ, ಶಿಡ್ಲಘಟ್ಟ, ರಾಮನಗರ, ಕೊಳ್ಳೆಗಾಲ, ಈ ಭಾಗದ ನೂಲು ಬಿಚ್ಚಾಣಿಕೆದಾರರಿಂದ ತರಬೇತಿ ಭತ್ಯೆ ನೀಡುವ ಮೂಲಕ ಕನಿಷ್ಠ 3 ತಿಳಗಳ ಅವಧಿಗೆ ತರಬೇತಿ ನೀಡುವ ಬಗ್ಗೆ ಕ್ರಿಯಾ ಯೋಜನೆ ತಯಾರಿಸಲಾಗಿದೆ ಎಂದು ರೇಷ್ಮೆ ಜಂಟಿ ನಿರ್ದೇಶಕ ತಿಳಿಸಿದರು.

ಜಾಫರಾಬಾದ್‌ನಲ್ಲಿ ನಿರ್ಮಿಸುತ್ತಿರುವ ಹೈಟೆಕ ರೇಷ್ಮೆ ಗೂಡು ಮಾರುಕಟ್ಟೆಯ ಕಟ್ಟಡ ಕಾಮಗಾರಿಯನ್ನು ಸಚಿವರು ಹಾಗೂ ಸರ್ಕಾರದ ರೇಷ್ಮೆ ಇಲಾಖೆ ಕಾರ್ಯದರ್ಶಿಗಳು ಸ್ಥಳ ಪರಿಶೀಲನೆ ಮಾಡಿ, ನಿರ್ಮಾಣ ಮಾಡುತ್ತಿರುವ ಕಟ್ಟಡದಲ್ಲಿ ಮೊದಲು ರೇಷ್ಮೆ ಗೂಡು ಮಾರುಕಟ್ಟೆ ಕಟ್ಟಡವನ್ನು ನಿರ್ಮಿಸಲು ಪ್ರಾರಂಭಿಸಬೇಕೆಂದು ಸ್ಥಳದಲ್ಲಿ ಹಾಜರಿದ್ದ ಲೋಕೋಪಯೋಗಿ ಅಭಿಯಂತರರಿಗೆ ಸೂಚಿಸಿದರು.

### ಅಥ್ಲೆಟಿಕ್ಸ್ ಸ್ಪರ್ಧೆಯಲ್ಲಿ ಜಿಲ್ಲಾ ಮಟ್ಟಕ್ಕೆ ಶಶಿಧರ್ ಆಯ್ಕೆ

## ಶಾಲಾ ಆಡಳಿತ ಮಂಡಳಿ ಅಭಿನಂದನೆ



**ಬಳ್ಳಾರಿ, ಸೆ.20:** ಬಳ್ಳಾರಿ ನಗರದ ಹೀರದ ಸೂಗಮ್ಮ ಹಿರಿಯ ಪ್ರಾಥಮಿಕ ಶಾಲೆಯ 7ನೇ ತರಗತಿ ವಿದ್ಯಾರ್ಥಿ ಶಶಿಧರ 2024-25ನೇ ಸಾಲಿನ ಬಳ್ಳಾರಿ ಪೂರ್ವ ವಲಯದ ತಾಲ್ಲೂಕು ಮಟ್ಟದ ಅಥ್ಲೆಟಿಕ್ಸ್ ಸ್ಪರ್ಧೆಯಲ್ಲಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಶಶಿಧರ 100 ಮೀಟರ್ ಓಟದಲ್ಲಿ ಪ್ರಥಮ, 200 ಮೀಟರ್ ಓಟ ಮತ್ತು 80 ಮೀಟರ್ ಹರ್ಡಲ್ಸ್‌ನಲ್ಲಿ ದ್ವಿತೀಯ ಸ್ಥಾನ ಗಳಿಸಿ ಜಿಲ್ಲಾ ಮಟ್ಟಕ್ಕೆ ಆಯ್ಕೆ ಆಗಿರುತ್ತಾನೆ. ಅಲ್ಲದೆ 4x100 ಮೀಟರ್ ರಿಲೇ ಓಟದಲ್ಲಿ. ರಾಹುಲ್, ಕೇಶವ, ಮಹ್ಮದ್ ಅಜೀರ್ ಮತ್ತು ಶಶಿಧರ ಇವರು ದ್ವಿತೀಯ ಸ್ಥಾನ ಪಡೆದಿರುತ್ತಾರೆ. ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಶಾಲೆಯ ಆಡಳಿತ ಮಂಡಳಿ ಅಧ್ಯಕ್ಷ ಬೈಲುವದ್ದಿಗೇರಿ ಎರ್ರಿಸ್ವಾಮಿ, ಶಾಲೆಯ ಮುಖ್ಯ ಗುರುಗಳು ಮತ್ತು ಶಿಕ್ಷಕರು ಅಭಿನಂದಿಸಿ ಶುಭ ಹಾರೈಸಿದ್ದಾರೆ.

## ರೈಲ್ವೆ ಬಳಕೆದಾರರ ಸಮಿತಿ ಸದಸ್ಯರಾಗಿ ಸೊಂತ ಗಿರಿಧರ್ ನೇಮಕ

**ಬಳ್ಳಾರಿ, ಸೆ. 20–** ನೈರುತ್ಯ(ಸೌತ್ ವೆಸ್ಟನ್) ರೈಲ್ವೇ ವಿಭಾಗದ ರೈಲ್ವೇ ಬಳಕೆದಾರರ ಸಲಹಾ ಸಮಿತಿ ಸದಸ್ಯರನ್ನಾಗಿ ಬಳ್ಳಾರಿಯ ಸೊಂತ ಗಿರಿಧರ್ ಅವರನ್ನು ನೇಮಕ ಮಾಡಲಾಗಿದೆ. ರೈಲ್ವೇ ವಿಭಾಗದ ವಾಣಿಜ್ಯ ವಿಭಾಗದ ವ್ಯವಸ್ಥಾಪಕರು ಈ ನೇಮಕ ಆದೇಶ ನೀಡಿದ್ದು. 16-8 2024 ರಿಂದ ಎರಡು ವರ್ಷಗಳ ಅವಧಿಗೆ ಇದು ಜಾರಿಯಲ್ಲಿರುತ್ತದೆಂದು ಹೇಳಿದ್ದಾರೆ.

ಇವರ ನೇಮಕಕ್ಕೆ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಶಿಪಾರಸ್ಸು ಮಾಡಿತ್ತು.



ತಮ್ಮ ನೇಮಕದ ಬಗ್ಗೆ ಸಂತಸ ವ್ಯಕ್ತಪಡಿಸಿರುವ ಶ್ರೀ ಸೊಂತ ಗಿರಿಧರ್ ಅವರು. ಪ್ರಧಾನಿ ಮೋದಿ ಅವರ ಆಡಳಿತ ಅವಧಿಯಲ್ಲಿ ದೇಶದಲ್ಲಿ ರೈಲ್ವೇ ವ್ಯವಸ್ಥೆ ಉತ್ತಮವಾಗಿ ಅಭಿವೃದ್ಧಿ ಯಾಗುತ್ತಿದ್ದು ಈ ಭಾಗದ ರೈಲ್ವೇ ಸೌಕರ್ಯ ಮತ್ತು ಗ್ರಾಹಕರ ಸೌಲಭ್ಯಗಳಿಗಾಗಿ ಪ್ರಯತ್ನಿಸಲಿದೆಂದು ಹೇಳಿದ್ದಾರೆ. ಇವರ ನೇಮಕಕ್ಕೆ ಜಿಲ್ಲಾ ವಾಣಿಜ್ಯೋದ್ಯಮ ಸಂಘದ ಪದಾಧಿಕಾರಿಗಳು ಮತ್ತು ಬಳ್ಳಾರಿ ನಗರ ಪ್ರಜೆಗಳು ಹರ್ಷ ವ್ಯಕ್ತಪಡಿಸಿದ್ದಾರೆ.

## ಇಂದು ವಿದ್ಯುತ್ ಗ್ರಾಹಕರ ಕುಂದುಕೊರತೆ ಸಭೆ- ಇ.ಟಿ.ಲಕ್ಷ್ಮಿ

**ಬಳ್ಳಾರಿ, ಸೆ.20–**ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ-1 ಮತ್ತು ಉಪ-ವಿಭಾಗ-2 ರ ವ್ಯಾಪ್ತಿಯ ವಿದ್ಯುತ್ ಗ್ರಾಹಕರ ಕುಂದು ಕೊರತೆ ಸಭೆಯನ್ನು ಸೆ.21 ರಂದು ಬೆಳಿಗ್ಗೆ 11 ಗಂಟೆಗೆ ನಗರ ಉಪವಿಭಾಗದ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರ ಇ.ಟಿ.ಲಕ್ಷ್ಮಿ ಅವರು ತಿಳಿಸಿದ್ದಾರೆ.

ವಿದ್ಯುತ್ ಗ್ರಾಹಕರಿಗಿರುವ ಕುಂದು ಕೊರತೆಗಳನ್ನು ಬಗೆಹರಿಸಿಕೊಳ್ಳಲು ಸಭೆಗೆ ಹಾಜರಾಗಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಚಿವ ಸಂಪುಟದ ನಿರ್ಣಯಗಳಿಗೆ ಕಾಲಮಿತಿಯಿರಲಿ

## ಸಚಿವ ಸಂಪುಟದ ನಿರ್ಧಾರಗಳಿಗೆ ಹಣದ ಮೂಲ ಯಾವುದು

**ಕಲಬುರಗಿ, ಸೆ.20–** ನಗರದಲ್ಲಿ ಇತ್ತೀಚೆಗೆ ನಡೆದ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಕೈಗೊಂಡ ನಿರ್ಣಯಗಳನ್ನು ಸ್ವಾಗತಿಸಿದ ಕಲ್ಯಾಣ ಕರ್ನಾಟಕ ಹೋರಾಟ ಸಮಿತಿ, ಕಾಲಮಿತಿ ಅನುಷ್ಠಾನಕ್ಕೆ ಆಗ್ರಹಿಸಿ, ಈ ನಿರ್ಧಾರಗಳ ಅನುಷ್ಠಾನಕ್ಕೆ ಮಂಜೂರಾದ ಹಣದ ಮೂಲದ ಬಗ್ಗೆ ಸ್ಪಷ್ಟನೆ ಕೇಳಿದೆ.

ಸಮಿತಿಯಿಂದ ನಿರಂತರ ಹೋರಾಟವನ್ನು ಪ್ರಾರಂಭಿಸುತ್ತೇವೆ ಎಂದು ಎಚ್ಚರಿಸಿದರು.

ರಾಜ್ಯ ಸರ್ಕಾರವು ಈ ಯೋಜನೆಗಳಿಗೆ ಹಣವನ್ನು ನಿಯಮಿತ ಹಣದಿಂದ ನೀಡುವಂತೆ ನೋಡಿಕೊಳ್ಳಬೇಕು ಮತ್ತು ಕೆಕೆಆರ್‌ಡಿಬಿಗೆ ಮೀಸಲಿಟ್ಟ ಯಾವುದೇ ಹಣವನ್ನು ರಾಜ್ಯ ಸಚಿವ ಸಂಪುಟದಲ್ಲಿ ಮಂಜೂರಾದ ಹೊಸ ಯೋಜನೆಗಳಿಗೆ ತಿರುಗಿಸಬಾರದು ಎಂದು ಅವರು ಹೇಳಿದರು.

> **ಈ ಭಾಗದ ಸಮಸ್ಯೆಗಳನ್ನು ನಿವಾರಿಸಲು ಹಲವು ಕೋಟಿ ರೂಪಾಯಿಗಳನ್ನು ಒಳಗೊಂಡ ಅನೇಕ ನಿರ್ಧಾರಗಳನ್ನು ತೆಗೆದುಕೊಳ್ಳಲಾಗಿದ್ದರೂ, ಈ ನಿರ್ಧಾರಗಳನ್ನು ಅನುಷ್ಠಾನಗೊಳಿಸಲು ಹಣದ ಹಂಚಿಕೆಯ ಬಗ್ಗೆ ಯಾವುದೇ ಸ್ಪಷ್ಟತೆ ಸಿಕ್ಕಿಲ್ಲ. ಸಭೆಯಲ್ಲಿ ಒಪ್ಪಿಕೊಂಡಂತಹ ಯೋಜನೆಗಳನ್ನು ನಿಯಮಿತ ನಿಧಿಯಿಂದ ಮಂಜೂರು ಮಾಡಲಾಗುತ್ತಿದೆಯೇ ಅಥವಾ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ (ಕೆಕೆಆರ್‌ಡಿಬಿ) ನಿಗದಿಪಡಿಸಿದ ಹಣದಿಂದ ಈ ಯೋಜನೆಗಳಿಗೆ ಹಣವನ್ನು ನೀಡಲಾಗುತ್ತಿದೆಯೇ ಎಂಬುದು ತಿಳಿಸಲಿ.**
>
> **–ಡಾ.ಲಕ್ಷ್ಮಣ ದಸ್ತಿ, ಹಿರಿಯ ಹೋರಾಟಗಾರ.**

ಜಂಟಿ ಸುದ್ದಿಗೋಷ್ಠಿಯಲ್ಲಿ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಹಾಗೂ ಸಮಿತಿಯ ಗೌರವಾಧ್ಯಕ್ಷ ಬಸವರಾಜ ದೇಶಮುಖ, ಸಮಿತಿ ಅಧ್ಯಕ್ಷ ಡಾ. ಲಕ್ಷ್ಮಣ ದಸ್ತಿ ಮಾತನಾಡಿ, 371 (ಜೆ) ಕಲಂ ಜಾರಿಗಾಗಿ ಪ್ರತ್ಯೇಕ ಸಚಿವಾಲಯವನ್ನು ಸ್ಥಾಪಿಸಲು ಒಪ್ಪಿಕೊಳ್ಳಲಾಗಿದೆ.

ವಿಳಂಬವಿಲ್ಲದೆ ಪ್ರತ್ಯೇಕ ಸಚಿವಾಲಯವನ್ನು ಸವಾರದೊಳಗೆ ರಚಿಸಬೇಕು. ವಾರದ ನಂತರ ಮಂಜೂರಾದ ಹೊಸ ಯೋಜನೆಗಳಿಗೆ ತಿರುಗಿಸಬಾರದು ಎಂದು ಅವರು ಹೇಳಿದರು.

ಈ ಭಾಗದ ಹಿಂದುಳಿದಿರುವಿಕೆ ಹೋಗಲಾಡಿಸುವ ವಿಶೇಷ ಉದ್ದೇಶಕ್ಕಾಗಿ ಕೆಕೆಆರ್‌ಡಿಬಿ ಹಣವನ್ನು ಮಂಜೂರು ಮಾಡಲಾಗಿದ್ದು, ಅದನ್ನು ಆ ಉದ್ದೇಶಕ್ಕಾಗಿ ಮಾತ್ರ ಬಳಸಬೇಕು ಎಂದು ಡಾ. ದಸ್ತಿ ಆಗ್ರಹಿಸಿದರು.

ಕಲಬುರಗಿ ನಗರದಿಂದ ವಿಶ್ವವಿದ್ಯಾಲಯದಲ್ಲಿ ಬಹು ಕೌಶಲ್ಯಾಭಿವೃದ್ಧಿ ಕೇಂದ್ರ ಮತ್ತು ಕೊಪ್ಪಳ ಜಿಲ್ಲೆಯ ತಳಕಲ್‌ನಲ್ಲಿ ಮತ್ತೊಂದು ಬಹು ಕೌಶಲ್ಯಾಭಿವೃದ್ಧಿ ಕೇಂದ್ರ ಸ್ಥಾಪನೆಗೆ ಕೆಕೆಆರ್‌ಡಿಬಿ ಹಣವನ್ನು ಬಳಸಬಾರದೆಂದು ಹೇಳಿದ ಅವರು, ತಮ್ಮ ವಿವೇಚನಾ ಕೋಟಾದಡಿಯಲ್ಲಿ 350 ಕೋಟಿ ರೂ.ಗಳನ್ನು ಖರ್ಚು ಮಾಡುವ ಅಧಿಕಾರ ಹೊಂದಿರುವ ರಾಜ್ಯಪಾಲರು ಈ ಹಣವನ್ನು ಕಡ್ಡಾಯವಾಗಿ ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿ ಯೋಜನೆಗಳಿಗೆ ಮಾತ್ರ ಬಳಸಬೇಕು ಮತ್ತು ಕಲ್ಯಾಣ ಕರ್ನಾಟಕದಿಂದ ಹೊರಗೆ ತಮ್ಮ ಆಯ್ಕೆಯ ಯೋಜನೆಗಳಿಗೆ ಯಾವುದೇ ಹಣವನ್ನು ಮಂಜೂರು ಮಾಡಬಾರದು ಎಂದು ಅವರು ತಿಳಿಸಿದರು.

ಸಮಿತಿಯು ಒಂದು ತಿಂಗಳೊಳಗೆ ರಾಯಚೂರು ಜಿಲ್ಲೆಯಿಂದ 371 (ಜೆ) ಕಲಂ ಮತ್ತು ಹಿಂದುಳಿದ ಪ್ರದೇಶದ ತಾಲ್ಲೂಕುವಾರು ಜಾಗೃತಿ ಕಾರ್ಯಕ್ರಮವನ್ನು ಕೈಗೊಳ್ಳಲು ನಿರ್ಧರಿಸಿದೆ. ನಂತರ ಜನರಿಗೆ ಅವರ ಹಕ್ಕುಗಳ ಬಗ್ಗೆ ಅರಿವು ಮೂಡಿಸಲು ಎಲ್ಲಾ ಗ್ರಾಮಗಳಿಗೆ ವ್ಯಾಪಕವಾಗಿ ವಿಸ್ತರಿಸಲಿದೆ ಎಂದು ಹೇಳಿದರು.



ಕಲ್ಯಾಣ ಕರ್ನಾಟಕ ಹೋರಾಟಡ ಸಮಿತಿ ಅಧ್ಯಕ್ಷ ಡಾ.ಲಕ್ಷ್ಮಣ ದಸ್ತಿ, ಗೌರವಾಧ್ಯಕ್ಷ ಬಸವರಾಜ ನಿಷ್ಠಿ ದೇಶಮುಖ ಅವರು ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

# ಭಾರತೀಯ ಸಾಂಸ್ಕೃತಿಕ ಕೇಂದ್ರದ ಉಪಾಧ್ಯಕ್ಷ ಸುಬ್ರಹ್ಮಣ್ಯ ಹೆಬ್ಬಾಗಿಲುಗೆ ಕರ್ನಾಟಕ ಸಂಘ ಕತಾರ್ ವತಿಯಿಂದ ಅಭಿಯಂತರಶ್ರೀ ಪ್ರಶಸ್ತಿ



**ಕತಾರ್,ಸೆ.20:** ಸುಬ್ರಮಣ್ಯ ಹೆಬ್ಬಾಗಿಲು ಅವರು ಮೂಲತಃ ಕರ್ನಾಟಕದ ಬೈಂದೂರಿನವರು. ಅವರು ಕತಾರಿನ ಗಲ್ಫಾರ್ ಅಲ್ ಮಿಸ್ ನಾದ್ ಇಂಜಿನಿಯರಿಂಗ್ ಹಾಗೂ ಕಾಂಟ್ರಾಕ್ಟ್ ಸಂಸ್ಥೆಯನ್ನು 2007ನೇ ಇಸವಿಯಲ್ಲಿ ಕೆಲಸಕ್ಕೆ ಸೇರಿದರು. ಈಗ ಪ್ರಸ್ತುತ ಗುಣಮಟ್ಟ ಕಾಯ್ದಿರಿಸುವ ವಿಭಾಗದಲ್ಲಿ ಅಭಿಯಂತರರಾಗಿ ಹಾಗೂ ಕಾಮಗಾರಿಗಳ ಸಹಯೋಗದ ಕಾರ್ಯನಿರ್ವಹಿಸುತ್ತಿದ್ದಾರೆ.

ಕತಾರಿನಲ್ಲಿ ಯಶಸ್ವಿಯಾಗಿ ಸಂಪೂರ್ಣಗೊಂಡಿರುವ ಹಲವು ಉನ್ನತಮಟ್ಟದ ಕಾಮಗಾರಿಗಳಲ್ಲಿ ಇವರ ಪಾಲು ಉಂಟು. ಪ್ರತ್ಯೇಕವಾಗಿ ಕತಾರಿನಲ್ಲಿನ ಪರಿಸರಸ್ನೇಹಿ, ಬೆಳವಣಿಗೆ ಹಾಗೂ ಸಮರ್ಥನೀಯತೆಗೆ ಸಂಬಂಧಿಸಿದ ಕಾಮಗಾರಿಗಳಲ್ಲಿ ಶ್ರೀಯುತರು ಕಾರ್ಯನಿರ್ವಹಿಸಿದ್ದಾರೆ.

ಇವರು ಸಕ್ರಿಯವಾಗಿ ಸಮುದಾಯ ಹಾಗೂ ಸಮಾಜಸೇವಾ ಕೈಂಕರ್ಯಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಪೂರ್ವದಲ್ಲಿ ಕರ್ನಾಟಕ ಸಂಘ ಕತಾರಿನ ಉಪಾಧ್ಯಕ್ಷರಾಗಿ, ಹಾಗೂ ಭಾರತೀಯ ಸಮುದಾಯ ಹಿತೈಷಿ ವೇದಿಕೆಯ ಜಂಟಿ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿರುವರು.

ಹಲವಾರು ಸಂಘ ಸಂಸ್ಥೆಗಳ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವುದಲ್ಲದೆ ಬಹಳಷ್ಟು ಪ್ರಶಸ್ತಿಗಳನ್ನು ಇವರ ಅವಿರತ ಸೇವೆಯನ್ನು ಗುರುತಿಸಿ ಇವರಿಗೆ ನೀಡಲಾಗಿದೆ. ಪ್ರಸ್ತುತ ಇವರು ಎರಡನೇ ಬಾರಿಗೆ ಭಾರತೀಯ ದೂತಾವಾಸದ ಆಶ್ರಯದಲ್ಲಿ ಕೆಲಸ ನಿರ್ವಹಿಸುತ್ತಿರುವ ಭಾರತೀಯ ಸಾಂಸ್ಕೃತಿಕ ಕೇಂದ್ರದ ಉಪಾಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಮತ್ತು ಗಲ್ಫಾರ್ ಟೋಸ್ಟ್ ಮಾಸ್ಟರ್ ಸಂಘದ ಅಧ್ಯಕ್ಷರಾಗಿ ಮೂರನೇ ಬಾರಿ ಆಯ್ಕೆಗೊಂಡು ಸೇವೆ ಸಲ್ಲಿಸುತ್ತಿದ್ದಾರೆ.

ಕರೋನಾ ಮಹಾಮಾರಿಯ ಸಮಯದಲ್ಲಿ ಇವರು ಹಲವಾರು ಸಂತಸ್ತರಿಗೆ ಸಂತ್ರಸ್ತರಿಗೆ ಅನ್ನ ಆಹಾರಗಳನ್ನು ನೀಡುವುದಲ್ಲದೆ ನೂರಾರು ಜನರಿಗೆ ಕತಾರಿನಿಂದ ಭಾರತಕ್ಕೆ ಹಿಂದಿರುಗಲು ವಿಮಾನ ಸೇವೆಯನ್ನು ಕಲ್ಪಿಸಿಕೊಡುವ ಕಾರ್ಯದಲ್ಲಿ ಸಹಾಯ ನೀಡಿರುವರು.

ದಿನಾಂಕ 15 ಸೆಪ್ಟೆಂಬರ್ 2024ರಂದು ಭಾರತೀಯ ಸಮುದಾಯ ಕೇಂದ್ರದ ಅಶೋಕ ಸಭಾಂಗಣದಲ್ಲಿ ನಡೆದ ಅಭಿಯಂತರ ದಿನಾಚರಣೆ ಕಾರ್ಯಕ್ರಮದಲ್ಲಿ ಕತಾರ್ ದೇಶಕ್ಕೆ ಭಾರತೀಯ ರಾಯಭಾರಿಗಳಾದ ಘನವೆತ್ತ ಶ್ರೀ ವಿಪುಲ್ ಅವರು ಮತ್ತು ಭಾರತೀಯ ಸಾಂಸ್ಕೃತಿಕ ಕೇಂದ್ರ ಹಾಗೂ ಕರ್ನಾಟಕ ಸಂಘ ಕತಾರ್ ಆಡಳಿತ ಸಮಿತಿಯ ಸದಸ್ಯರು ಸೇರಿ ಸುಬ್ರಹ್ಮಣ್ಯ ಹೆಬ್ಬಾಗಿಲು ಅವರಿಗೆ ಅಭಿಯಂತರ ಶ್ರೀ ಪ್ರಶಸ್ತಿಯನ್ನು ಪ್ರದಾನ ಮಾಡಿದರು. ಪ್ರಶಸ್ತಿ ಸ್ವೀಕರಿಸಿದ ನಂತರ, ಸುಬ್ರಮಣ್ಯ ಹೆಬ್ಬಾಗಿಲು ಅವರು ತಮ್ಮ ಭಾಷಣದಲ್ಲಿ ಪ್ರಶಸ್ತಿ ಪ್ರಧಾನ ಮಾಡಿದ ಕರ್ನಾಟಕ ಸಂಘ ಕತಾರ್ ಅಧ್ಯಕ್ಷರು ಹಾಗೂ ಆಡಳಿತ ಸಮಿತಿ ಸದಸ್ಯರಿಗೆ ವಂದನೆಗಳನ್ನು ಸಲ್ಲಿಸುತ್ತ ತಾವು ನಡೆದು ಬಂದ ಹಾದಿಯಲ್ಲಿ ನೆನಪುಗಳನ್ನುಹಂಚಿಕೊಂಡರು.

17 ವರ್ಷಗಳ ಹಿಂದೆ ಜೀವನಾಂಶವನ್ನು ಅರಸಿ ಕತಾರಿಗೆ ಬಂದಾಗ, ಹೆಚ್ಚು ಜನರ ಪರಿಚಯವಿರಲಿಲ್ಲ. ಮನೆ. ಬಿಟ್ಟರೆ ಕೆಲಸ ಇಷ್ಟೇ ಅವರ ಓಡಾಟ. ಈಗ ಸಮಾಜದಲ್ಲಿ ತಮ್ಮ ಸಂಪರ್ಕದ. ವಿಸ್ತಾರವನ್ನು ಹೆಚ್ಚಿಸುತ್ತ, ಸ್ನೇಹಿತರು, ಸಹೋದ್ಯೋಗಿಗಳು ಹಾಗು ಸಮುದಾಯದ ಮುಖಂಡರೊಂದಿಗೆ ತಮ್ಮ ಸ್ನೇಹಪೂರ್ವಕ ಒಡನಾಟದೊಂದಿಗೆ ಈಗ ಬಹುತೇಕ ಎಲ್ಲರ ಪರಿಚಯವನ್ನು ಮಾಡಿಕೊಂಡು ಸ್ನೇಹಿತರ ವೃತ್ತವನ್ನು ವಿಶಾಲವಾಗಿಸಿರುವುದಕ್ಕೆ ಎಲ್ಲರನ್ನು ವಿನಮ್ರತೆಯಿಂದ ನಮಿಸಿದರು.

ಪ್ರತಿದಿನವು ಮುಂಜಾನೆ ಪ್ರಾರಂಭಿಸುವ ಮುನ್ನ ಇಂದು ಅತಿ ಹೆಚ್ಚು ಜನರಿಗೆ ತಮ್ಮ ಸಹಾಯವನ್ನು ಮಾಡುವ ಸಂಕಲ್ಪವನ್ನು ಮಾಡಿದ ನಂತರ ದಿನವನ್ನು ಪ್ರಾರಂಭಿಸುತ್ತಾರೆ.

ಮೊದಲು ತಮ್ಮ ಸಂಸ್ಥೆಯ ಕಾರ್ಯವನ್ನು ನಿರ್ವಹಿಸುತ್ತಾ ವಿವಿಧ ಕಾಮಗಾರಿಗಳಲ್ಲಿ ಯಶಸ್ವಿಯಾಗಿ ಚಟುವಟಿಕೆಗಳನ್ನು ಸಂಪೂರ್ಣಗೊಳಿಸಿದ ನಂತರ ಈ ಸಮಾಜ ಸೇವಾ ಕೈಂಕರ್ಯಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳುವರು. ಇವರ ಅಸ್ತಿತ್ವದ ಪ್ರೇರಣೆಯೇ ಸಮುದಾಯ ಸೇವೆ. ಹಾಗೂ ಸಾಮಾಜಿಕ ಅಭಿವೃದ್ಧಿ. ಶ್ರೀಯುತರ ಅವಿರತ, ನಿಸ್ವಾರ್ಥ ಸೇವೆ, ಕತಾರಿನಲ್ಲಿರುವ ಭಾರತೀಯ ಸಮುದಾಯಕ್ಕೆ ನಿರಂತರವಾಗಿ ನೆರವೇರುತ್ತಿರಲಿ ಎಂದು ಆಶಿಸುತ್ತಾ ಶ್ರೀ ಸುಬ್ರಹ್ಮಣ್ಯ ಹೆಬ್ಬಾಗಿಲು ಹಾಗೂ ಅವರ ಕುಟುಂಬಕ್ಕೆ ಶುಭಾಶಯಗಳು ಕೋರಲಾಗಿದೆ.

# ಪಾಕ್ ಸೇನೆ ಮೇಲೆ ಉಗ್ರರ ಭೀಕರ ದಾಳಿ: 6 ಸೈನಿಕರು ಸಾವು



**ಇಸ್ಲಾಂಬಾದ್,ಸೆ.20:** ದಕ್ಷಿಣ ವಜೀರಿಸ್ತಾನದಲ್ಲಿ ಪಾಕಿಸ್ತಾನಿ ಸೇನೆಯ ಮೇಲೆ ನಡೆದ ಭೀಕರ ದಾಳಿಯಲ್ಲಿ ಆರು ಯೋಧರು ಮೃತಪಟ್ಟಿದ್ದು, ಹಲವರು ಗಾಯಗೊಂಡಿದ್ದಾರೆ.

ಕಳೆದ ಜೂನ್ ತಿಂಗಳಿನಿಂದ ಪ್ರತಿ ತಿಂಗಳು ಪಾಕಿಸ್ತಾನದ ಭದ್ರತಾ ಪಡೆಗಳ ಮೇಲೆ ಭಯೋತ್ಪಾದಕರು ದಾಳಿ ನಡೆಸುತ್ತಿದ್ದಾರೆ. ಪ್ರತಿ ದಾಳಿಯಲ್ಲಿ ಅನೇಕ ಸೈನಿಕರು ಪ್ರಾಣ ಕಳೆದುಕೊಳ್ಳುತ್ತಿದ್ದು ಹಲವರು ಗಾಯಗೊಂಡಿದ್ದಾರೆ.

ಇದೀಗ ಮತ್ತೊಮ್ಮೆ ದಾಳಿ ನಡೆಸಿದ್ದಾರೆ.

ಇದಕ್ಕೂ ಮುನ್ನ ಆಗಸ್ಟ್ 22ರಂದು ಪಾಕಿಸ್ತಾನದ ಪಂಜಾಬ್ ಪ್ರಾಂತ್ಯದಲ್ಲಿ ಭಯೋತ್ಪಾದಕರು ಪೊಲೀಸರ ಮೇಲೆ ರಾಕೆಟ್ ದಾಳಿ ನಡೆಸಿದ್ದರು. ಇದರಲ್ಲಿ ಕನಿಷ್ಠ 11 ಸೈನಿಕರು ಸಾವನ್ನಪ್ಪಿದರು. ಲಾಹೋರ್ನಿಂದ ಸುಮಾರು 400 ಕಿಲೋಮೀಟರ್ ದೂರದಲ್ಲಿರುವ ರಹೀಮ್ ಯಾರ್ ಖಾನ್ ಜಿಲ್ಲೆಯಲ್ಲಿ ಹಲವಾರು ಯೋಧರನ್ನು ಒತ್ತೆಯಾಳಾಗಿ ಇರಿಸಲಾಗಿತ್ತು. ಉಗ್ರರು ರಾಕೆಟ್ಗಳ ಮೂಲಕ ದಾಳಿ ನಡೆಸಿದ್ದಾರೆ ಎಂದು ಪಂಜಾಬ್ ಪೊಲೀಸ್ ವಕ್ತಾರರು ತಿಳಿಸಿದ್ದಾರೆ.

ಪಾಕಿಸ್ತಾನದ ಖೈಬರ್ ಪಖ್ತುಂಖ್ವಾದಲ್ಲಿ ನಡೆದ ಭಯೋತ್ಪಾದಕರ ದಾಳಿಯಲ್ಲಿ ಏಳು ಸೈನಿಕರು ಮೃತಪಟ್ಟಿದ್ದಾರೆ. ಸೈನಿಕರ ಸಾವಿನ ಸುದ್ದಿಯಿಂದ ಆಘಾತಕ್ಕೊಳಗಾದ ಪ್ರಧಾನಿ ಶಹಬಾಜ್ ಷರೀಫ್ ಅವರು ಭಯೋತ್ಪಾದನೆಯನ್ನು ಕೊನೆಗೊಳಿಸುವುದಾಗಿ ಪಣ ತೊಟ್ಟರು. ಭಾನುವಾರ ಲಕ್ಕಿ ಮಾರ್ವತ್ ಜಿಲ್ಲೆಯ ಸರಬಂದ್ ಪೋಸ್ಟ್ ಕಚ್ಚಿ ಕಮರ್ ಕಡೆಗೆ ಹೋಗುತ್ತಿದ್ದ ಭದ್ರತಾ ಸಿಬ್ಬಂದಿಯ ಬೆಂಗಾವಲು ಪಡೆಯ ಮೇಲೆ ಭಯೋತ್ಪಾದಕರು ದಾಳಿ ನಡೆಸಿದ್ದರು. ಇದರಲ್ಲಿ ಒಬ್ಬ

# ಶ್ರೀಲಂಕಾ ಮತದಾನ: ಆರ್ಥಿಕ ಬಿಕ್ಕಟ್ಟಿನ ಬಳಿಕ ದ್ವೀಪರಾಷ್ಟ್ರದಲ್ಲಿ ಮೊದಲ ಚುನಾವಣೆ

**ಕೊಲಂಬೊ, ಸೆ.20:** 2022ರಲ್ಲಿ ಆರ್ಥಿಕ ಬಿಕ್ಕಟ್ಟಿನ ಬಳಿಕ ಮೊದಲ ಬಾರಿಗೆ ಅಧ್ಯಕ್ಷೀಯ ಚುನಾವಣೆ ಎದುರಿಸುತ್ತಿರುವ ಶ್ರೀಲಂಕಾದಲ್ಲಿ ಶನಿವಾರ ಮತದಾನ ನಡೆಯಲಿದೆ.

ಹಾಲಿ ಅಧ್ಯಕ್ಷ ರಾನಿಲ್ ವಿಕ್ರಮಸಿಂಘೆ ಅವರು ಚುನಾವಣಾ ಕಣದಲ್ಲಿದ್ದಾರೆ. ಇವರಿಗೆ ಎದುರಾಳಿಗಳಾಗಿ ನ್ಯಾಷನಲ್ ಪೀಪಲ್ಸ್ ಪವರ್ ಪಕ್ಷದ ಅಧ್ಯಕ್ಷ ಅನುರಕುಮಾರ ದಿಸನಾಯಕೆ ಮತ್ತು ವಿರೋಧ ಪಕ್ಷದ ಪ್ರಮುಖ ನಾಯಕ, ಸಮಾಗಿ ಜನ ಬಲವೇಗಯ ಪಕ್ಷದ ಸಜಿತ್ ಪ್ರೇಮದಾಸ ಅವರು ಸ್ಪರ್ಧಿಸಲಿದ್ದಾರೆ.

'1982ರ ಬಳಿಕ ಶ್ರೀಲಂಕಾದಲ್ಲಿ ನಡೆದ ಅಧ್ಯಕ್ಷೀಯ ಚುನಾವಣೆಗಳಲ್ಲಿ ಮೂವರು ಅಭ್ಯರ್ಥಿಗಳು ಸ್ಪರ್ಧಿಸುತ್ತಿರುವುದು ಇದೇ ಮೊದಲು' ಎಂದು ತಜ್ಞರು ತಿಳಿಸಿದ್ದಾರೆ.

'ಕಣದಲ್ಲಿರುವ ಮೂರು ಅಭ್ಯರ್ಥಿಗಳು 2020ರ ಸಂಸದೀಯ ಚುನಾವಣೆಯಲ್ಲಿ ಹಿನ್ನಡೆ ಅನುಭವಿಸಿದ್ದರು. ಹಾಗಾಗಿ ಈ ಹಿಂದಿನ ಎಲ್ಲ ಚುನಾವಣೆಗಳಿಗಿಂತಲೂ ಈ ಬಾರಿಯು ಚುನಾವಣೆ ಭಿನ್ನವಾಗಿರಲಿದೆ' ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

13,400 ಮತಗಟ್ಟೆಗಳಲ್ಲಿ ಮತದಾನ ನಡೆಯಲಿದ್ದು, ಸುಮಾರು 1.70 ಲಕ್ಷ ಜನರು ಮತ ಚಲಾಯಿಸುವ ಹಕ್ಕನ್ನು ಹೊಂದಿದ್ದಾರೆ. ಶೇ 80ರಷ್ಟು ಮತದಾನವಾಗುವ ನಿರೀಕ್ಷೆಯಿದೆ. ಭಾನುವಾರ ಚುನಾವಣಾ ಫಲಿತಾಂಶ ಹೊರಬೀಳಲಿದೆ.

# ಚೀನಾದ ವುಹಾನ್ ಮಾರುಕಟ್ಟೆಯೇ ಕೋವಿಡ್ ವೈರಸ್ ಜನ್ಮಸ್ಥಳ: ಬಹಿರಂಗ



**ಚೀನಾ, ಸೆ.20:** ಎರಡು–ಮೂರು ವರ್ಷದ ಹಿಂದೆ ಜಗತ್ತನ್ನು ಬೆಚ್ಚಿ ಬೀಳಿಸಿದ್ದ ಮಹಾಮಾರಿ ಕೋವಿಡ್ ನಿಜವಾಗಿ ಹುಟ್ಟಿದ್ದೆಲ್ಲಿ ಎಂಬ ಪ್ರಶ್ನೆ ಸಾಕಷ್ಟು ಕಾಡುತ್ತಿದ್ದು, ಇದೀಗ ಹೊಸ ಅಧ್ಯಯನದಲ್ಲಿ ಚೀನಾದ ವುಹಾನ್‌ನಲ್ಲಿನ ಮಾರುಕಟ್ಟೆಯಿಂದಲೇ ಸೋಂಕು ಜನರಿಗೆ ಹರಡಿದೆ ಎಂದು ತಿಳಿದುಬಂದಿದೆ.

ಚೀನಾದ ವಿಜ್ಞಾನಿಗಳು ವುಹಾನ್ ಮಾರುಕಟ್ಟೆಯಿಂದ ಮಾದರಿಗಳನ್ನು ತೆಗೆದುಕೊಂಡು, ಜೆನೆಟಿಕ್ ಕೋಡ್ ಅನ್ನು ವಿಶ್ಲೇಷಿಸಿದ್ದಾರೆ ಮತ್ತು ವೈರಸ್ ಪ್ರಾಣಿಗಳಿಂದ ಮನುಷ್ಯರಿಗೆ ಹರಡಿದೆ ಎಂದು ವರದಿಯಾಗಿದೆ.


ಗುರುವಾರ ಪ್ರಕಟವಾದ ಅಧ್ಯಯನವು ಮಾರುಕಟ್ಟೆಯಿಂದ ತೆಗೆದ ಸ್ವ್ಯಾಬ್ ಮಾದರಿಗಳನ್ನು ಒಳಗೊಂಡಿತ್ತು, ರಕೂನ್ ನಾಯಿಗಳು ಮತ್ತು ಇತರ ದುರ್ಬಲ ಪ್ರಾಣಿಗಳು ವೈರಸ್ ಸಾಂದ್ರತೆಯು ಹೆಚ್ಚಿರುವ ಪ್ರದೇಶಗಳಲ್ಲಿವೆ ಎಂದು ಹೇಳಿದರು.

ಹೀಗಾಗಿ ಪ್ರಾಣಿಗಳಿಂದ ಉದ್ಯೋಗಿಗಳಿಗೆ ಮೊದಲು ಸೋಂಕು ತಗುಲಿ, ಅನಂತರ ಎಲ್ಲರನ್ನೂ ವ್ಯಾಪಿಸಿಕೊಂಡಿದೆ. ಅಲ್ಲದೇ ವುಹಾನ್ ಮಾರುಕಟ್ಟೆಯಲ್ಲಿ ಜೀವಂತ ಪ್ರಾಣಿಗಳು ಹಾಗೂ ವನ್ಯಪ್ರಾಣಿಗಳನ್ನು ಕೂಡ ಇರಿಸಲಾಗಿತ್ತು ಅವುಗಳಿಂದಲೇ ಸೋಂಕು ತಗುಲಿರಬಹುದು ಎಂದು ಹೇಳಲಾಗುತ್ತಿದೆ.

ವುಹಾನ್‌ನಲ್ಲಿರುವ ಹುವಾನಾನ್ ಸೀಫುಡ್ ಸಗಟು ಮಾರುಕಟ್ಟೆಯೊಳಗಿನ ಗೋಡೆಗಳು, ಮಹಡಿಗಳು, ಯಂತ್ರಗಳು ಮತ್ತು ಚರಂಡಿಗಳಿಂದ ತೆಗೆದ ನೂರಾರು ಸ್ವ್ಯಾಬ್‌ಗಳಿಂದ ಆನುವಂಶಿಕ ವಸ್ತುಗಳನ್ನು ಸಂಶೋಧನೆಗೆ ಒಳಪಡಿಸಿದಾಗ ಮಾರುಕಟ್ಟೆಯಿಂದಲೇ ಸೋಂಕು ಜನರಿಗೆ ಹರಡಿದೆ ಎಂದು ತಿಳಿದುಬಂದಿದೆ.

# ವಿಮಾನಗಳಲ್ಲಿ ಪೇಜರ್ ಬಳಕೆ ನಿಷೇಧಿಸಿದ ಲೆಬನಾನ್

**ಬೈರೂತ್, ಸೆ.20:** ಲೆಬನಾನ್ ನಾಗರಿಕ ವಿಮಾನಯಾನ ಪ್ರಾಧಿಕಾರ ವಿಮಾನಗಳಲ್ಲಿ ಪೇಜರ್ ಹಾಗೂ ವಾಕಿಟಾಕಿಗಳ ಬಳಕೆಯನ್ನು ನಿಷೇಧಿಸಿ ಆದೇಶಿಸಿದೆ.



ಲೆಬನಾನ್ ಹಾಗೂ ಸಿರಿಯಾದಲ್ಲಿ ಪೇಜರ್ ಹಾಗೂ ವಾಕಿಟಾಕಿಗಳು ಸ್ಫೋಟಗೊಂಡು 12 ಕ್ಕೂ ಹೆಚ್ಚು ಜನ ಮೃತಪಟ್ಟಿದ್ದಾರೆ. 3,000ಕ್ಕೂ ಅಧಿಕ ಜನ ಗಾಯಗೊಂಡಿದ್ದಾರೆ.

ಈ ಘಟನೆಯ ಬೆನ್ನಲ್ಲೇ ಲೆಬನಾನ್ ಪೇಜರ್‌ಗಳ ಬಳಕೆಯನ್ನು ನಿಷೇಧಿಸಿದೆ.

ಬೈರೂತ್ನ ಹರಿರಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಹೊರಡುವ ವಿಮಾನಗಳಲ್ಲಿ ಪೇಜರ್, ವಾಕಿಟಾಕಿಗಳನ್ನು ಕೊಂಡೊಯ್ಯುವಂತಿಲ್ಲ ಎಂದು ಆದೇಶಿಸಿದೆ. ಲೆಬನಾನ್‌ನಲ್ಲಿ ಪೇಜರ್‌ಗಳ ಸ್ಫೋಟದ ಬೆನ್ನಲ್ಲೇ ಹಿಜ್ಬುಲ್ಲಾ ಸಂಘಟನೆ ಇಸ್ರೇಲ್ ಮೇಲೆ ವ್ಯಗ್ರವಾಗಿದ್ದು, ಪ್ರತಿ ದಾಳಿ ಆರಂಭಿಸಲು ಗುರುವಾರ ಸಿದ್ಧತೆ ನಡೆಸಿತ್ತು.

ಲೆಬನಾನ್‌ನಲ್ಲಿ ಮಂಗಳವಾರ ಮತ್ತು ಬುಧವಾರ ಪೇಜರ್ಗಳು, ವಾಕಿ–ಟಾಕಿಗಳು ಮತ್ತು ಇತರ ಸಾಧನಗಳು ಸ್ಫೋಟಗೊಂಡು ಕನಿಷ್ಠ 20 ಮಂದಿ ಮೃತಪಟ್ಟಿದ್ದಾರೆ. ಸಹಸ್ರಾರು ಜನರು ಗಾಯಗೊಂಡು ಆಸ್ಪತ್ರೆ ಸೇರಿದ್ದಾರೆ. ಈ ಸ್ಫೋಟಗಳಿಗೆ ಇಸ್ರೇಲ್ ಕಾರಣ ಎಂಬುದು ಹಿಜ್ಬುಲ್ಲಾದ ಆರೋಪವಾಗಿದೆ. ಅಲ್ಲದೆ ಇದಕ್ಕೆ ಪ್ರತೀಕಾರ ತೀರಿಸಿಕೊಳ್ಳುವುದಾಗಿ ಹಿಜ್ಬುಲ್ಲಾ ಶಪಥ ಕೂಡ ಮಾಡಿದೆ.

# ಮೊಬೈಲ್ ಮುಟ್ಟಲು ಭಯ



ಮೊಬೈಲ್ ಅಂದ್ರೆ ಯಾರಿಗೆ ಇಷ್ಟವಿಲ್ಲ ಹೇಳಿ ಈಗ ತಾನೆ ಹುಟ್ಟಿದ ಮಗುವಿನಿಂದ ಹಿಡಿದು, ಹಣ್ಣು ಹಣ್ಣು ಮುದುಕರ ತನಕ ಎಲ್ಲರಿಗೂ ಮೊಬೈಲ್ ಸೆಳೆಯುತ್ತದೆ. ಊಟ ಮಾಡುವ ತನಕ ಹಿಡಿದು, ನಿದ್ದೆ ಮಾಡುವ ತನಕ ಕೈಯಲ್ಲಿ ಮೊಬೈಲ್ ಇಟ್ಟುಕೊಂಡೇ ಬಾಳುತ್ತಿದ್ದಾರೆ ಮನುಷ್ಯರು.

ಆದರೆ ಇಲ್ಲೊಂದು ದೇಶದಲ್ಲಿ ಮಾತ್ರ ಮೊಬೈಲ್ ಕಂಡರೆ ಜನರು ಹೆದರುತ್ತಾ, ಓಡಿ ಹೋಗುವ ಪರಿಸ್ಥಿತಿ ನಿರ್ಮಾಣ ಆಗಿದೆ. ಹಾಗಾದ್ರೆ ಮೊಬೈಲ್ ಮುಟ್ಟಲು ಭಯಪಡುವ ದೇಶ ಯಾವುದು? ಬನ್ನಿ ತಿಳಿಯೋಣ.

ಭಾರತ ಅದೆಷ್ಟು ಶಾಂತಿಯುತ ಜೀವನ ನಡೆಸುತ್ತಿದೆ ಎಂದರೆ, ನಮ್ಮ ವಿರುದ್ಧ ಯಾವುದೇ ದೇಶ ಕೂಡ ಯುದ್ಧಕ್ಕೆ ಸಿದ್ಧವಾಗಲು ಇಷ್ಟಪಡಲ್ಲ. ಯಾಕಂದ್ರೆ ಭಾರತ ಎಲ್ಲರ ಜೊತೆಗೂ ಉತ್ತಮ ಸಂಬಂಧ ಇಟ್ಟುಕೊಂಡಿದೆ. ಆದರೆ ಮಧ್ಯಪ್ರಾಚ್ಯ ಭಾಗದ ಪರಿಸ್ಥಿತಿ ಮಾತ್ರ ಭಾರತ ದೇಶಕ್ಕಿಂತ ವಿಭಿನ್ನ. ಯಾಕಂದ್ರೆ ಮಧ್ಯಪ್ರಾಚ್ಯ ಭಾಗದಲ್ಲಿ ಪ್ರತಿಯೊಂದು ದೇಶವು ಮತ್ತೊಂದು ದೇಶದ ಜೊತೆಗೆ ಯುದ್ಧಕ್ಕೆ ಸಿದ್ಧ ಎನ್ನುವಂತೆ ನಿಂತಿರುತ್ತದೆ.

ಹೀಗಿದ್ದಾಗ ಮತ್ತೊಮ್ಮೆ ಇದೇ ಮಧ್ಯಪ್ರಾಚ್ಯ ಭಾಗದಲ್ಲಿ ಬೆಂಕಿ ಹೊತ್ತಿಕೊಂಡಿದ್ದು, ಜನರು ಕೂಡ ನಲುಗಿ ಹೋಗಿದ್ದಾರೆ. ಯಾವ ಕ್ಷಣದಲ್ಲಿ ಏನಾಗುತ್ತೆ ಎಂಬ ಭಯ ಆವರಿಸಿದ ಸಮಯದಲ್ಲೇ, ಮೊಬೈಲ್ ಮುಟ್ಟಲು ಭಯ ಪಡುವ ಸ್ಥಿತಿ ನಿರ್ಮಾಣ ಆಗಿದೆ!

**ಮೊಬೈಲ್ ಕಂಡರೆ ಓಡುತ್ತಿದ್ದಾರೆ ಜನ!**

ಇಸ್ರೇಲ್ ಹಾವಳಿ ಕಂಡು ರೊಚ್ಚಿಗೆದ್ದಿರುವ ಇರಾನ್ ದೇಶಕ್ಕೆ ಇದೀಗ ಯುದ್ಧ ಮಾಡೋದಕ್ಕೆ ಮತ್ತಷ್ಟು ಕಾರಣ ಸಿಕ್ಕಂತಾಗಿದೆ. ಈಗಾಗಲೇ ಲೆಬನಾನ್ ದೇಶದಲ್ಲಿ ಪೇಜರ್ ಮತ್ತು ವಾಕಿ ಟಾಕಿ ಸ್ಫೋಟಗೊಳ್ಳುತ್ತಿದ್ದು, ಇದೀಗ ಮೊಬೈಲ್ ಕಂಡರು ಕೂಡ ಜನರು ಭಯಪಡುವ ಪರಿಸ್ಥಿತಿ ಅಲ್ಲಿ ನಿರ್ಮಾಣ ಆಗಿದೆ. ಯಾಕಂದ್ರೆ ಮೊದಲಿಗೆ ಪೇಜರ್ಸ್ ಸ್ಫೋಟದ ಪರಿಣಾಮ ಸಾವಿರ ಸಾವಿರ ಜನರು ಕೈ ಮತ್ತು ಕಾಲು ಕಳೆದುಕೊಂಡು ಹಲವರು ಜೀವ ಕಳೆದುಕೊಂಡು ಪರಿಸ್ಥಿತಿ ತುಂಬಾನೇ ಸೂಕ್ಷ್ಮವಾಗಿದೆ. ಹೀಗಿದ್ದಾಗ ಮತ್ತೊಮ್ಮೆ ವಾಕಿ ಟಾಕಿ ಸ್ಫೋಟಗೊಂಡ ಪರಿಣಾಮ ಪರಿಸ್ಥಿತಿಗೆ ಕಿಚ್ಚು ಹಚ್ಚಿದಂತೆ ಆಗಿದ್ದು, ಜನರು ಮೊಬೈಲ್ ದೂರ ಇಟ್ಟಿದ್ದಾರೆ!

# ಇಸ್ರೇಲ್ ದಾಳಿಯಲ್ಲಿ 14 ಮಂದಿ ಸಾವು



**ಗಾಝಾ, ಸೆ.20:** ಗಾಝಾ ಪಟ್ಟಿಯ ಉತ್ತರ ಮತ್ತು ಮಧ್ಯ ಪ್ರಾಂತಗಳನ್ನು ಗುರಿಯಾಗಿಸಿ ಇಸ್ರೇಲ್‌ನ ಟ್ಯಾಂಕ್ ಹಾಗೂ ವೈಮಾನಿಕ ದಾಳಿಯಲ್ಲಿ ಕನಿಷ್ಠ 14 ಪ್ಯಾಲೆಸ್ತೀನಿಯರು ಸಾವನ್ನಪ್ಪಿದ್ದಾರೆ. ಇಸ್ರೇಲ್‌ನ ಟ್ಯಾಂಕ್‌ಗಳು ಈಜಿಪ್ಟ್ ಗಡಿಯ ಬಳಿ ವಾಯವ್ಯ ರಫಾದತ್ತ ಮತ್ತಷ್ಟು ಮುಂದುವರಿದಿರುವುದಾಗಿ ಗಾಝಾದ ಆರೋಗ್ಯಾಧಿಕಾರಿಗಳು ಶುಕ್ರವಾರ ಹೇಳಿದ್ದಾರೆ.

ಗಾಝಾದ ನುಸೀರಾತ್ ನಿರಾಶ್ರಿತರ ಶಿಬಿರದಲ್ಲಿ ಇಸ್ರೇಲ್ ಟ್ಯಾಂಕ್‌ಗಳ ಶೆಲ್ ದಾಳಿಯಲ್ಲಿ 8 ಮಂದಿ ಸಾವನ್ನಪ್ಪಿದ್ದು ಇತರ 7 ಮಂದಿ ಗಾಯಗೊಂಡಿದ್ದಾರೆ. ಗಾಝಾ ನಗರದ ಮನೆಯೊಂದರ ಮೇಲೆ ನಡೆದ ವೈಮಾನಿಕ ದಾಳಿಯಲ್ಲಿ ಇತರ 6 ಮಂದಿ ಹತರಾಗಿದ್ದಾರೆ. ಉತ್ತರದ ಬೀತ್ ಹನೌನ್ ಪಟ್ಟಣದಲ್ಲಿ ಕಾರಿನ ಮೇಲೆ ನಡೆದ ದಾಳಿಯಲ್ಲಿ ಹಲವು ಸಾವು–ನೋವು ಸಂಭವಿಸಿದೆ.

ದಕ್ಷಿಣದ ರಫಾ ನಗರದಲ್ಲಿ ಯುದ್ಧವಿಮಾನಗಳ ಬೆಂಬಲದಿಂದ ಇಸ್ರೇಲ್ ಟ್ಯಾಂಕ್‌ಗಳು ಮುನ್ನಡೆ ಸಾಧಿಸಿವೆ. ರಫಾದ ಪೂರ್ವ ಪ್ರಾಂತದಲ್ಲಿ ಭಾರಿ ಸ್ಫೋಟ ಮತ್ತು ಗುಂಡಿನ ಶಬ್ದ ಕೇಳಿಬಂದಿದ್ದು ಇಸ್ರೇಲ್ ಸೇನೆ ಹಲವು ಮನೆಗಳನ್ನು ಸ್ಫೋಟಿಸಿದೆ ಎಂದು ವರದಿಯಾಗಿದೆ. ಆಕ್ರಮಿತ ಪಶ್ಚಿಮದಂಡೆಯ ಖಬಾಟಿಯಾ ನಗರದಲ್ಲಿ ಇಸ್ರೇಲ್ ಪಡೆಗಳ ಕಾರ್ಯಾಚರಣೆಯಲ್ಲಿ 6 ಪ್ಯಾಲೆಸ್ತೀನಿಯರು ಹತರಾಗಿದ್ದು ಇತರ 18 ಮಂದಿ ಗಾಯಗೊಂಡಿರುವುದಾಗಿ ಮೂಲಗಳನ್ನು ಉಲ್ಲೇಖಿಸಿ ರಾಯ್ಟರ್ಸ್ ವರದಿ ಮಾಡಿದೆ.

ಖಬಾತಿಯಾ ನಗರದಲ್ಲಿ ಶೋಧ ಕಾರ್ಯಾಚರಣೆ ನಡೆಸಿದ ಇಸ್ರೇಲ್ ಪಡೆ ಈ ಪ್ರದೇಶದಲ್ಲಿನ ಮೂಲಸೌಕರ್ಯಗಳನ್ನು ನಾಶಗೊಳಿಸಿದ ಬಳಿಕ ಹಿಂದಕ್ಕೆ ಸರಿದಿದೆ. ಗಾಯಗೊಂಡವರಲ್ಲಿ 8 ಮಂದಿಯ ಸ್ಥಿತಿ ಗಂಭೀರವಾಗಿದೆ ಎಂದು ಸ್ಥಳೀಯ ಗವರ್ನರ್ ರನ್ನು ಉಲ್ಲೇಖಿಸಿದ ವರದಿ ಹೇಳಿದೆ.

# ಚೀನಾ ಓಪನ್: ಮಾಳವಿಕಾ ಯಶಸ್ಸಿನ ಓಟಕ್ಕೆ ತೆರೆ




**ಚಾಂಗ್ಝೌ, ಸೆ.20:** ಭಾರತದ ಯುವ ಆಟಗಾರ್ತಿ ಮಾಳವಿಕಾ ಬನ್ಸೋಡ್ ಅವರು ಎರಡು ಬಾರಿಯ ವಿಶ್ವ ಚಾಂಪಿಯನ್ ಅಕಾನೆ ಯಮಗುಚಿ ಅವರಿಗೆ ಸಾಟಿಯಾಗಲಿಲ್ಲ. ನಾಲ್ಕನ ಶ್ರೇಯಾಂಕದ ಜಪಾನ್ನ ಆಟಗಾರ್ತಿ ಶುಕ್ರವಾರ ನೇರ ಗೇಮ್‌ಗಳಿಂದ ಮಾಳವಿಕಾ ಅವರನ್ನು ಸೋಲಿಸಿ ಚೀನಾ ಓಪನ್ ಬ್ಯಾಡ್ಮಿಂಟನ್ ಟೂರ್ನಿಯ ಸೆಮಿಫೈನಲ್ ತಲುಪಿದರು.

43ನೇ ಕ್ರಮಾಂಕದ ಮಾಳವಿಕಾ 10–21, 21–16 ರಿಂದ ವಿಶ್ವ ಐದನೇ ಕ್ರಮಾಂಕದ ಆಟಗಾರ್ತಿಯೆದುರು ಸೋಲನುಭವಿಸಿದರು. ಈ ಪಂದ್ಯ 35 ನಿಮಿಷಗಳಲ್ಲಿ ಮುಕ್ತಾಯಗೊಂಡಿತು.

22 ವರ್ಷ ವಯಸ್ಸಿನ ಮಾಳವಿಕಾ ಅವರಿಗೆ ಇದು ಯಮಗುಚಿ ಎದುರು ಮೂರನೇ ಸೋಲೆನಿಸಿತು.

ನಾಗ್ಪುರದ ಆಟಗಾರ್ತಿ, ಪ್ರಿಕ್ವಾರ್ಟರ್‌ಫೈನಲ್‌ನಲ್ಲಿ 25ನೇ ಕ್ರಮಾಂಕದ ಕ್ರಿಸ್ಟಿ ಗಿಲ್ಮೋರ್ ಅವರನ್ನು ಮಣಿಸಿದ್ದರು. ಗಿಲ್ಮೋರ್, ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಕಂಚಿನ ಪದಕ ಗೆದ್ದಿದ್ದರು.

# ಚೆಸ್ ಒಲಿಂಪಿಯಾಡ್: ಭಾರತಕ್ಕೆ ಸುಲಭ ತುತ್ತಾದ ಇರಾನ್



**ಬುಡಾಪೆಸ್ಟ್, ಸೆ.20:** ಭಾರತದ ಪುರುಷರ ತಂಡ 45ನೇ ಚೆಸ್ ಒಲಿಂಪಿಯಾಡ್‌ನಲ್ಲಿ ಮೊದಲ ಬಾರಿ ಚಿನ್ನದ ಪದಕ ಗೆಲ್ಲುವ ಹಾದಿಯಲ್ಲಿ ದಿಟ್ಟ ಹೆಜ್ಜೆಯಿಟ್ಟಿದೆ. ಗುರುವಾರ ಎಂಟನೇ ಸುತ್ತಿನಲ್ಲಿ ಇರಾನ್ ತಂಡವನ್ನು 3.5–0.5 ರಿಂದ ಸುಲಭವಾಗಿ ಸೋಲಿಸಿ ಓಪನ್ ವಿಭಾಗದಲ್ಲಿ ಅಗ್ರಸ್ಥಾನ ಉಳಿಸಿಕೊಂಡಿದೆ.

ಆದರೆ, ಮಹಿಳೆಯರ ವಿಭಾಗದ ಎಂಟನೇ ಸುತ್ತಿನಲ್ಲಿ ಅಗ್ರ ಶ್ರೇಯಾಂಕದ ಭಾರತ, ಪೋಲೆಂಡ್ ಎದುರು 1.5–2.5 ಅಂತರದಲ್ಲಿ ಆಘಾತ ಅನುಭವಿಸಿತು. ಇದು ಭಾರತ ವನಿತೆಯರಿಗೆ ಎದುರಾದ ಮೊದಲ ಸೋಲು.

ಪುರುಷರ ವಿಭಾಗದಲ್ಲಿ ಭಾರತ ಸಂಭವನೀಯ 16 ಪಾಯಿಂಟ್ಸ್ ಕಲೆಹಾಕಿದ್ದು, ಎರಡನೇ ಸ್ಥಾನದಲ್ಲಿರುವ ಹಂಗರಿ ಮತ್ತು ಉಜ್ಬೇಕಿಸ್ತಾನ ತಂಡಗಳಿಗಿಂತ ಎರಡು ಪಾಯಿಂಟ್ ಮುನ್ನಡೆ ಹೊಂದಿದೆ. ಇನ್ನು ಕೇವಲ ಮೂರು ಸುತ್ತಿನ ಪಂದ್ಯಗಳಷ್ಟೇ ಉಳಿದಿವೆ.

ಕಪ್ಪು ಕಾಯಿಗಳಲ್ಲಿ ಆಡಿದ ಅರ್ಜುನ್ ಇರಿಗೇಶಿ ಅವರಿಗೆ ಬರ್ದಿಯಾ ದಾನೇಶ್ವರ್ ಅವರು ಸಾಟಿಯಾಗಲಿಲ್ಲ. ಎದುರಾಳಿಯ ರಕ್ಷಣೆಯನ್ನು ಛಿದ್ರಗೊಳಿಸುವ ಮೂಲಕ ಅರ್ಜುನ್ ಭಾರತಕ್ಕೆ ಮುನ್ನಡೆ ಒದಗಿಸಿದರು.

ವಿಶ್ವ ಚಾಂಪಿಯನ್‌ಶಿಪ್ ಚಾಲೆಂಜರ್ ಡಿ.ಗುಕೇಶ್ ಮೊದಲ ಬೋರ್ಡ್‌ನಲ್ಲಿ ಇರಾನ್ನ ಅಗ್ರ ಆಟಗಾರ ಪರ್ಹಾಮ್ ಮಘಸೂಡ್ಲು ಅವರನ್ನು ಮಣಿಸಿದರು.

ಆರ್.ಪ್ರಜ್ಞಾನಂದ, ಮೊಹಮದ್ ಅಮೀನ್ ತಬಾತಬೇಯಿ ಜೊತೆ ಡ್ರಾ ಮಾಡಿಕೊಳ್ಳುವ ಮೂಲಕ ಭಾರತದ ಗೆಲುವು ಖಚಿತಪಡಿಸಿಕೊಂಡರು. ವಿದಿತ್ ಗುಜರಾತಿ ನಾಲ್ಕನೇ ಬೋರ್ಡ್‌ನಲ್ಲಿ ಇದಾನಿ ಪೌಯಾ ಅವರನ್ನು ಸೋಲಿಸಿ ವಿಜಯದ ಅಂತರ ಉಬ್ಬಿಸಿದರು.

**ಭಾರತೀಯರ ದಾಪುಗಾಲು:**

ಅರ್ಜುನ್ ಇಂದಿನ ಗೆಲುವಿನಿಂದ ಎಂಟು ಪಂದ್ಯಗಳಿಂದ 7.5 ಪಾಯಿಂಟ್ಸ್ ಸಂಗ್ರಹಿಸಿದ್ದು ಯಶಸ್ಸಿನ ಓಟದಲ್ಲಿದ್ದಾರೆ. ಅವರ ಲೈವ್ ರೇಟಿಂಗ್ 2793 ಆಗಿದೆ. ಅವರು 2,800ರ ರೇಟಿಂಗ್ ದಾಟಿದಲ್ಲಿ ಈ ಸಾಧನೆಗೆ ಪಾತ್ರರಾದ ವಿಶ್ವದ 16ನೇ ಮತ್ತು ಭಾರತದ ಎರಡನೇ ಆಟಗಾರ ಎನಿಸಲಿದ್ದಾರೆ. ಭಾರತದ ದಿಗ್ಗಜ ಆಟಗಾರ ವಿಶ್ವನಾಥನ್ ಆನಂದ್ ಮಾತ್ರ ಹಿಂದೆ ಈ ಸಾಧನೆಗೆ ಭಾಜನರಾಗಿದ್ದರು.

ಅರ್ಜುನ್ ಅವರ ಹಿಂದೆಯೇ ಇರುವ ಗುಕೇಶ್ 2785 ರೇಟಿಂಗ್ ಪಾಯಿಂಟ್ಸ್ ಹೊಂದಿದ್ದಾರೆ. ಮೊದಲ ಬಾರಿ ವಿಶ್ವದ ಅಗ್ರ ಐದು ಆಟಗಾರರಲ್ಲಿ ಭಾರತದ ಇಬ್ಬರು ಸ್ಥಾನ ಪಡೆದಿದ್ದಾರೆ.

ಹಾರಿಕಾ ಅವರ ಎಂಟನೇ ಸುತ್ತಿನಲ್ಲೂ ಉತ್ತಮ ಲಯಕ್ಕೆ ಮರಳಲಾಗಲಿಲ್ಲ. ಅವರು ಅಲಿನಾ ಕಾಶ್ಲಿನ್ಸ್ಕಯಾ ಎದುರು ಸೋಲನುಭವಿಸಿದರು. ಇದು ಅವರಿಗೆ ಮೂರನೇ ಸೋಲು. ಮೋನಿಕಾ ಸೊಕೊ, ಎರಡನೇ ಬೋರ್ಡ್‌ನಲ್ಲಿ ಆರ್.ವೈಶಾಲಿ ಎದುರು ಜಯಗಳಿಸಿದರು.

ದಿವ್ಯಾ ದೇಶಮುಖ್, ಅಲೆಕ್ಸಾಂಡ್ರಾ ಮಾಸ್ಟ್ರೊವ್ಸ್ಕಯಾ ಎದುರು ಜಯಗಳಿಸಿದ್ದರಿಂದ ಎಲ್ಲರ ಕಣ್ಣು, ಕೊನೆಯ ಬೋರ್ಡ್‌ನಲ್ಲಿದ್ದ ವಂತಿಕಾ ಅಗರವಾಲ್– ಅಲಿಸಿಯಾ ಸ್ಲಿವಿಕಾ ಪಂದ್ಯದ ಮೇಲೆ ನೆಟ್ಟಿತು. ಆದರೆ ಈ ಪಂದ್ಯ ಅಂತಿಮವಾಗಿ 'ಡ್ರಾ' ಆಯಿತು.

ಪುರುಷರ ತಂಡ 9ನೇ ಸುತ್ತಿನಲ್ಲಿ, ಹಾಲಿ ಚಾಂಪಿಯನ್ ಉಜ್ಬೇಕಿಸ್ತಾನ ತಂಡವನ್ನು, ಮಹಿಳೆಯರು ಅಮೆರಿಕ ತಂಡವನ್ನು ಎದುರಿಸಲಿದ್ದಾರೆ.